ಸಂಪುಟ: 22, ಸಂಚಿಕೆ: 17, ಪುಟಗಳು: 8, ಶನಿವಾರ, 26 ಅಕ್ಟೋಬರ್ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3



ವೇಣು ಸಾರಥ್ಯದಲ್ಲಿ...




### ಸುಭಾಷಿತ

ನಾವು ಯಾವುದೇ ಬೆಲೆ ತೆತ್ತಾದರೂ ಸರಿ ಯಾವಾಗಲೂ ಮಾತೃಭೂಮಿಯ ಘನತೆಯನ್ನು ಎತ್ತಿ ಹಿಡಿಯಬೇಕು ಮತ್ತು ಕಾಪಾಡಬೇಕು. ಇದು ನಮ್ಮ ಸಾಮೂಹಿಕ ಕರ್ತವ್ಯ.

। ಕಿತ್ತೂರು ರಾಣಿಚೆನ್ನಮ್ಮ

### ಪಂಚಾಂಗ

(ಶನಿವಾರ 26, ಅಕ್ಟೋಬರ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಶರದೃತು,
- ಆಶ್ವಯುಜ ಮಾಸ, ಕೃಷ್ಣ ಪಕ್ಷ,
- ದಶಮಿ, ಆಶ್ಲೇಷ ನಕ್ಷತ್ರ / ಮಖ ನಕ್ಷತ್ರ
- ರಾಹುಕಾಲ - 09:11 ರಿಂದ 10:39
- ಗುಳಿಕಕಾಲ - 06:15 ರಿಂದ 07:43
- ಯಮಗಂಡಕಾಲ - 01:35 ರಿಂದ 03:03

## ಸಂಕ್ಷಿಪ್ತ ಸುದ್ದಿ

### ಕುಟುಂಬದವರನ್ನ ಅಧಿಕಾರಕ್ಕೆ ತರಲು ದೇವೇಗೌಡರ ಕುಟುಂಬ ಒಂದೊಂದು ನರಬಲಿ ಪಡೆಯುತ್ತೆ



**ಮಂಡ್ಯ:** ತಮ್ಮ ಕುಟುಂಬದವರನ್ನು ಅಧಿಕಾರಕ್ಕೆ ತರಲು ದೇವೇಗೌಡರ ಕುಟುಂಬ ಒಂದೊಂದು ನರಬಲಿ ಪಡೆಯುತ್ತದೆ ಎಂದು ಮಾಜಿ ಸಂಸದ ಶಿವರಾಮೇಗೌಡ ವಾಗ್ದಾಳಿ ನಡೆಸಿದರು.

ಮಂಡ್ಯದ ನಾಗಮಂಗಲದಲ್ಲಿ ಮಾತನಾಡಿದ ಅವರು, ಡಾ.ಮಂಜುನಾಥ್ ಅಭ್ಯರ್ಥಿ ಮಾಡಲು ಯೋಗೇಶ್ವರ್ ಶ್ರಮವಹಿಸಿದರು. ಆದರೆ, ಚನ್ನಪಟ್ಟಣದಲ್ಲಿ ಯೋಗೇಶ್ವರ್‌ರನ್ನೇ ಬಲಿ ಪಡೆದಿದ್ದಾರೆ. ತಮ್ಮ ಕುಟುಂಬದವರನ್ನ ಅಧಿಕಾರಕ್ಕೆ ತರಲು ದೇವೇಗೌಡರ ಕುಟುಂಬ ಒಂದೊಂದು ನರಬಲಿ ಪಡೆಯುತ್ತಾರೆ. ಚನ್ನಪಟ್ಟಣ ಜನ ದಡ್ಡರಲ್ಲ, ಪುಟ 2

### ಕೊಲೆ ಆರೋಪಿ ದರ್ಶನ್‌ಗೆ ವಿಪರೀತ ಬೆನ್ನು ನೋವು ಪರದಾಟ!



**ಬಳ್ಳಾರಿ:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲಿನಲ್ಲಿ ಕಂಬಿ ಎಣಿಸುತ್ತಿರುವ ನಟ ದರ್ಶನ್ ವಿಪರೀತ ಬೆನ್ನು ನೋವಿನ ಸಮಸ್ಯೆಯಿಂದ ಬಳಲುತ್ತಿದ್ದಾನೆ. ಬೆನ್ನು ನೋವಿನ ಹಿನ್ನಲೆಯಲ್ಲಿ ಮೆಡಿಕಲ್ ಕಾಟ್, ಬೆಡ್, ದಿಂಬು ಕೊಟ್ರು ನೆಮ್ಮದಿಯಾಗಿ ನಿದ್ದೆ ಮಾಡಲಾಗುತ್ತಿಲ್ಲವಂತೆ.

ಹೌದು, ಕಳೆದ ಎರಡು ದಿನಗಳಿಂದ ಬೆನ್ನು ನೋವಿನಿಂದಾಗಿ ದರ್ಶನ್ ನಿದ್ದೆಯಿಲ್ಲದೆ ಒದ್ದಾಡುತ್ತಿದ್ದಾನೆ. ಫಿಜಿಯೋಥೆರಪಿ ನಿತ್ಯ ಮಾಡಲಾಗ್ತಿದೆ. ಆದರೂ ನಿರೀಕ್ಷಿತ ಮಟ್ಟದಲ್ಲಿ ನೋವು ಕಡಿಮೆಯಾಗಿಲ್ಲ. ಬೆನ್ನು ನೋವಿನ ಟ್ಯಾಬ್ಲೆಟ್, ಔಷಧಿ ಕೊಟ್ರು ಬೆನ್ನು ನೋವಿನಿಂದ ದರ್ಶನ್‌ಗೆ ನಿದ್ದೆ ಮಾಡಲಾಗ್ತಿಲ್ಲ. ಎಲ್5 ಎಸ್1 ನಲ್ಲಿ ಊತ ಕಾಣಿಸಿಕೊಂಡಿದೆ. ಬೆನ್ನು ನೋವಿನ ಸಮಸ್ಯೆ ಹೆಚ್ಚಾಗಿದೆ. ವಿಮ್ಸ್ ನ್ಯೂರೋ ವಿಭಾಗದಿಂದ ಬಂದಿರುವ ಸ್ಕ್ಯಾನಿಂಗ್ ವರದಿ ಅನ್ವಯ ಬೆನ್ನು ಮೂಳೆ ಸರ್ಜರಿ ಮಾಡಿಸುವುದು ಅನಿವಾರ್ಯವಾಗಿದೆ ಎಂದು ಪುಟ 2

### ಸಿಪಿವೈ ಸ್ಪರ್ಧೆಗೆ ಕಾಂಗ್ರೆಸ್‌ನಲ್ಲಿ ಅಸಮಾಧಾನ!

## ಸಮನ್ವಯ ಸಭೆ ಕರೆದ ಡಿಕೆಸು

**ಚನ್ನಪಟ್ಟಣ:** ಚನ್ನಪಟ್ಟಣ ಟಿಕೆಟ್ ಕೈತಪ್ಪುವುದು ಖಚಿತವಾದ ಬೆನ್ನಲ್ಲೇ ಬಿಜೆಪಿಗೆ ರಾಜೀನಾಮೆ ನೀಡಿದ ಸಿ.ಪಿ. ಯೋಗೇಶ್ವರ್ ಅವರು ಕಾಂಗ್ರೆಸ್ ಪಕ್ಷ ಸೇರ್ಪಡೆಗೊಂಡರು. ಕಾಂಗ್ರೆಸ್ ಸೇರ್ಪಡೆ ಬೆನ್ನಲ್ಲೇ ಪಕ್ಷದ ಅಭ್ಯರ್ಥಿ ಕೂಡ ಆಗಿದ್ದಾರೆ. ಇದರಿಂದ ಕ್ಷೇತ್ರದಲ್ಲಿನ ಮೂಲ ಕಾಂಗ್ರೆಸ್ಸಿಗರ ನಡುವೆ ಅಸಮಧಾನ ಉಂಟಾಗಿದೆ. ಹಾಗಾಗಿ ಇಂದು ಮಾಜಿ ಸಂಸದ ಡಿಕೆ ಸುರೇಶ್ ಅವರು ಕ್ಷೇತ್ರದಲ್ಲಿನ ಮೂಲ ಕಾಂಗ್ರೆಸ್‌ಗರು ಹಾಗೂ ಯೋಗೇಶ್ವರ್ ಬೆಂಬಲಿಗರ ಜೊತೆ ಸಮನ್ವಯ ಸಭೆ ನಡೆಸಲಿದ್ದಾರೆ.

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಸಿಪಿ ಯೋಗೇಶ್ವರ್ ಅವರು ವ್ಯಕ್ತಿಗತ ವರ್ಚಸ್ಸು ಬೆಳಿಸಿಕೊಂಡು ಬಂದಿದ್ದಾರೆ. ಹಾಗಾಗಿ ಅವರು ಸ್ವತಂತ್ರ ಅಭ್ಯರ್ಥಿಯಾಗಿಯೂ ಜಯ ಗಳಿಸಿದ್ದಾರೆ. ಈವರೆಗೂ ಸಿಪಿವೈ ಬಿಜೆಪಿಯಲ್ಲಿದ್ದು ಚುನಾವಣೆ



ಎದುರಿಸಿರುವುದರಿಂದ ಅವರ ಬೆಂಬಲಿಗರೂ ಹಾಗೂ ಕಾಂಗ್ರೆಸ್ಸಿಗರ ನಡುವೆ ವೈರತ್ವ ಇದ್ದೇ ಇರುತ್ತದೆ. ಈಗ ಸಿಪಾಯಿ ಕಾಂಗ್ರೆಸ್ ಸೇರಿದ ಬಳಿಕ ಬೆಂಬಲಿಗರು ಕಾರ್ಯಕರ್ತರ ನಡುವೆ ಗೊಂದಲ ಅಸಮಾಧಾನ ಬುಗಿಲೆದ್ದಿದೆ. ಪುಟ 2

## ಜಗನ್ ಕುಟುಂಬದ ಆಸ್ತಿಯಲ್ಲಿ ನನ್ನ ಪಾಲನ್ನು ಕೊಟ್ಟಿಲ್ಲ: ಶರ್ಮಿಳಾ ಆರೋಪ

**ಅಮರಾವತಿ:** ಆಂಧ್ರಪ್ರದೇಶದ ಮಾಜಿ ಸಿಎಂ ಹಾಗೂ ನನ್ನ ಸಹೋದರ ಜಗನ್ ಮೋಹನ್ ರೆಡ್ಡಿ ಕುಟುಂಬದ ಆಸ್ತಿಯಲ್ಲಿ ನನ್ನ ಪಾಲನ್ನು ನನಗೆ ನೀಡಿಲ್ಲ ಎಂದು ಅವರ ಸಹೋದರಿ ಹಾಗೂ ರಾಜ್ಯ ಕಾಂಗ್ರೆಸ್‌ನ ಅಧ್ಯಕ್ಷೆ ಶರ್ಮಿಳಾ ಆರೋಪಿಸಿದ್ದಾರೆ.

ಜಗನ್ ಆಸ್ತಿಗಳ ಏಕೈಕ ಉತ್ತರಾಧಿಕಾರಿಯಲ್ಲ. ಕುಟುಂಬದ ಯಾವುದೇ ಆಸ್ತಿಯು ನ್ಯಾಯಸಮ್ಮತವಾಗಿ ತನಗೆ ಸೇರಿಲ್ಲ. ತಮ್ಮ ತಂದೆ ವೈ.ಎಸ್. ರಾಜಶೇಖರ ರೆಡ್ಡಿ (ವೈಎಸ್‌ಆರ್) ಅವರ ಜೀವಿತಾವಧಿಯಲ್ಲಾಗಲಿ ಅಥವಾ ಅವರ ನಿಧನದ ನಂತರ ಯಾವುದೇ ಆಸ್ತಿ ವರ್ಗಾವಣೆ ನಡೆದಿಲ್ಲ. ನನ್ನ ಮತ್ತು ನನ್ನ ಮಕ್ಕಳ ಪಾಲಿನ ಒಂದೇ ಒಂದು ಆಸ್ತಿಯನ್ನು ನಾನು ಇನ್ನೂ ಹೊಂದಿಲ್ಲ ಎಂದು ನಾನು ಘೋಷಿಸುತ್ತೇನೆ. ಈ ವಿಚಾರವನ್ನು ವೈಎಸ್‌ಆರ್ ಅಭಿಮಾನಿಗಳಿಗೆ ಅವರು ಬರೆದ ಬಹಿರಂಗ ಪತ್ರದಲ್ಲಿ ತಿಳಿಸಿದ್ದಾರೆ.



ವೈಎಸ್‌ಆರ್ ಅವರ ಆಸ್ತಿ ಅವರ ನಾಲ್ವರು ಮೊಮ್ಮಕ್ಕಳಿಗೆ ಸಮಾನವಾಗಿ ಹಂಚಿಕೆಯಾಗಬೇಕು. ಆ ರೀತಿ ಹಂಚಿಕೆ ಮಾಡುವುದು ಜಗನ್ ಕರ್ತವ್ಯವಾಗಿದೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಜಗನ್ ಮೋಹನ್ ರೆಡ್ಡಿ ಅವರು ತಮ್ಮ ಸ್ವಂತ ಆಸ್ತಿ ಎಂದು ಹೇಳಿಕೊಳ್ಳುವ ಆಸ್ತಿಗಳು ವಾಸ್ತವವಾಗಿ ಕುಟುಂಬದ ಆಸ್ತಿಗಳಾಗಿವೆ. ತಮ್ಮ ತಾಯಿ ವೈ.ಎಸ್.ವಿಜಯಮ್ಮ ಅವರು ಆಸ್ತಿ ಹಂಚಿಕೆಗಾಗಿ ನೂರಾರು ಪತ್ರಗಳನ್ನು ಬರೆದಿದ್ದಾರೆ. ಆದರೂ ಜಗನ್ ಅವರ ಕಲ್ಲು ಹೃದಯವನ್ನು ಕರಗಿಸಲು ಸಾಧ್ಯವಾಗಿಲ್ಲ ಎಂದು ಹೇಳಿಕೊಂಡಿದ್ದಾರೆ. ಪುಟ 2

### ವಿಜಯಪುರ ರೈತರ ಜಮೀನುಗಳ ಪಹಣಿಯಲ್ಲಿ ವಕ್ಫ್ ಹೆಸರು

# ಕಂಗಾಲಾದ ಅನ್ನದಾತ

**ವಿಜಯಪುರ:** ರೈತರು ಜಮೀನುಗಳನ್ನು ವಕ್ಫ್ ಬೋರ್ಡ್‌ಗೆ ಸೇರಿಸುವ ವಿಚಾರ ವಿಜಯಪುರ ಜಿಲ್ಲೆಯಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಚರ್ಚೆ ನಡುವೆಯೇ ರೈತರ ಜಮೀನುಗಳಲ್ಲಿನ ಪಹಣಿ ಪತ್ರದಲ್ಲಿನ ಕಾಲಂ ನಂಬರ್ 11ರ ಋಣಗಳು ಕಾಲಂನಲ್ಲಿ ''ಕರ್ನಾಟಕ ವಕ್ಫ್ ಬೋರ್ಡ್ ಬೆಂಗಳೂರು ಮಸಜಿತ್ (ಸುನ್ನಿ) ವಕ್ಫ್ '' ಎಂದು ನಮೂದಿಸಲಾಗಿದೆ. ರೈತರ ಜಮೀನಿನ ಮೇಲೆ ವಕ್ಫ್ ಬೋರ್ಡ್ ಸಾಲ ಪಡೆದು ಭೋಜ ಹಾಕಿಸಿದೆ. ರೈತರ ಜಮೀನಿನ ಪಹಣಿಯಲ್ಲಿ ವಕ್ಫ್ ಬೋರ್ಡ್ ಭೋಜ ಇರುವ ಕಾರಣ ಸಾಲ ಸಿಗದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಇಂಡಿ ತಾಲೂಕಿನ ತೆನ್ನಿಹಳ್ಳಿ ಗ್ರಾಮದ ಯಮನಪ್ಪ ಕೆಂಗನಾಳ ಅವರ ಜಮೀನಿನ ಪಹಣಿಯಲ್ಲಿ ವಕ್ಫ್ ಬೋರ್ಡ್ ಹೆಸರು ಸೇರ್ಪಡೆಯಾಗಿದೆ. ರೈತ ಯಮನಪ್ಪ ಕೆಂಗನಾಳ ಅವರಿಗೆ ಯಾವುದೇ ತಿಳವಳಿಕೆ ಪತ್ರ ನೀಡದೆ, ತಹಶೀಲ್ದಾರ್ ಏಕಾಏಕಿ ಪಹಣಿ ಪತ್ರದಲ್ಲಿ ವಕ್ಫ್ ಬೋರ್ಡ್ ಎಂದು ಹೆಸರು ಸೇರಿಸಿದ್ದಾರೆ. ನೋಟಿಸ್ ನೀಡದೆ ಏಕಾಏಕಿ ತಮ್ಮ ಜಮೀನುಗಳ ಪಹಣಿಯಲ್ಲಿ ವಕ್ಫ್ ಬೋರ್ಡ್ ಹೆಸರು ಸೇರಿಸಿದ್ದಕ್ಕೆ ರೈತ ಯಮನಪ್ಪ ಕೆಂಗನಾಳ ಕಂಗಾಲಾಗಿದ್ದಾರೆ. ಕರ್ನಾಟಕ ಕಾಂಗ್ರೆಸ್ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.




**13 ತಾಲೂಕಿನ ರೈತರಿಗೆ ನೋಟೀಸ್:** 13 ತಾಲೂಕು ರೈತರಿಗೆ ''ನಿಮ್ಮ ಜಮೀನುಗಳು ವಕ್ಫ್ ಬೋರ್ಡ್ ಆಸ್ತಿಯೆಂದು'' ಆಯಾ ತಹಶೀಲ್ದಾರ್ ಕಚೇರಿಯಿಂದ ತಿಳವಳಿಕೆ ಪತ್ರ ನೀಡಲಾಗಿದೆ. ಇದಲ್ಲದೇ, ಇನ್ನೂ ನೂರಾರು ರೈತರಿಗೆ ನೋಟೀಸ್ ಜಾರಿ ಮಾಡಲು ಮಾಡಲು ತಹಶೀಲ್ದಾರರು ಸಿದ್ದತೆ ನಡೆಸಿದ್ದಾರೆ. ತಿಕೋಟಾ ತಾಲೂಕಿನ ಹೊನವಾಡ ಗ್ರಾಮದಲ್ಲಿನ 1200 ಎಕರೆ ಜಮೀನು ಶಾ ಅಮೀನುದ್ದೀನ್ ದರ್ಗಾಕ್ಕೆ ಸೇರಿದ್ದು ಎಂದು ತಹಶೀಲ್ದಾರ್ ರೈತರಿಗೆ ನೋಟೀಸ್ ನೀಡಿದ್ದಾರೆ. ಆದರೆ ನಮ್ಮ ಗ್ರಾಮದಲ್ಲಿ ಶಾ ಅಮೀನುದ್ದೀನ್ ದರ್ಗಾ ಇಲ್ಲ ಎಂದು ರೈತರು ಹೇಳುತ್ತಿದ್ದಾರೆ.

ಹಿಂದೂಗಳ ಜಮೀನುಗಳ ಮೇಲೆ ಈ ರೀತಿ ವಕ್ಫ್ ಎಂದು ನಮೂದಾಗಬಾರದು. ಹೀಗಾಗಿ ಜಮೀನುಗಳ ಮಾಲೀಕರು, ರೈತ ಮುಖಂಡ ತುಕಾರಾಮ್ ನಲವಡೆ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲು ನಿರ್ಧರಿಸಿದ್ದಾರೆ. ಜಮೀನು ಉಳಿಸಿಕೊಳ್ಳಲು ಹೋರಾಟ ಮಾಡಲು ಸಿದ್ಧ ಎಂದು ರೈತರು ಎಚ್ಚರಿಕೆ ನೀಡಿದ್ದಾರೆ.

ವಿಜಯಪುರ ಜಿಲ್ಲಾ ವಕ್ಫ್ ಬೋರ್ಡ್ ನೀಡಿರುವ ಮಾಹಿತಿ ಪ್ರಕಾರ, ಜಿಲ್ಲೆಯಲ್ಲಿ 14,201 ಎಕರೆ ಜಮೀನು ವಕ್ಫ್ ಗೆ ಸೇರಿದೆ. ಈ ಪೈಕಿ 1354 ಎಕರೆ ಒತ್ತುವರಿಯಾಗಿದೆ. ಉಳಿದ ಜಮೀನು ವಕ್ಫ್ ಇನ್ಸ್ಟಿಟ್ಯೂಶನ್ಸ್, ಇನಾಮ್ ಆಬ್ಲಿಷನ್ಸ್, ಲ್ಯಾಂಡ್ ರಿಫಾರ್ಮ್ ಹಾಗೂ ವಕ್ಫ್ ಆ ಯಕ್ಟ್ ವಶದಲ್ಲಿದೆ ಎಂದು ತಿಳಿಸಿದೆ.

**ನೋಟೀಸ್ ಗೆ ರೈತರು ಭಯ ಪಡಬಾರದು: ಡಿಸಿ ಮನವಿ:** ತಹಶೀಲ್ದಾರ್ ಕಚೇರಿಯಿಂದ ಬರುವ ನೋಟೀಸ್ ಗೆ ರೈತರು ಭಯ ಪಡಬಾರದು. ಗೆಜೆಟ್ ನೋಟೀಫಿಕೇಶನ್ ನಲ್ಲಿ ವಕ್ಫ್ ಆಸ್ತಿ ಎಂದು ಬಂದಿವೆ. ನಿಯಮಾನುಸಾರ ರೈತರಿಗೆ ನೋಟೀಸ್ ಜಾರಿ ಮಾಡಬೇಕಾಗುತ್ತದೆ. ನೋಟೀಸ್ ನೀಡಿದ ಜಮೀನು ವಕ್ಫ್ ಆಸ್ತಿನಾ ಅಥವಾ ಇಲ್ಲವಾ ಅಂತ ನಾವು ಪರಿಶೀಲನೆ ಮಾಡಬೇಕಾಗುತ್ತದೆ. ತಮ್ಮ ಜಮೀನು ಪಿತ್ರಾರ್ಜಿತ ಆಸ್ತಿನಾ ಅಥವಾ ದಾನ ಪುಟ 2

### ಮುಡಾ ಹಗರಣ

## ಸಿಎಂ ಸಿದ್ದರಾಮಯ್ಯ ಮೇಲ್ಮನವಿ ಸಲ್ಲಿಕೆ

**ಬೆಂಗಳೂರು:** ಮುಡಾ ಹಗರಣ ಸಂಬಂಧ ರಾಜ್ಯಪಾಲರ ಪ್ರಾಸಿಕ್ಯೂಷನ್ ಅನುಮತಿ ಎತ್ತಿಹಿಡಿದ ಹೈಕೋರ್ಟ್ ಏಕಸದಸ್ಯ ಪೀಠದ ಆದೇಶ ರದ್ದುಪಡಿಸುವಂತೆ ಸಿಎಂ ಸಿದ್ದರಾಮಯ್ಯ ಮೇಲ್ಮನವಿ ಸಲ್ಲಿಸಿದ್ದಾರೆ. ಹೈಕೋರ್ಟ್ ವಿಭಾಗೀಯ ಪೀಠಕ್ಕೆ ಮೇಲ್ಮನವಿ ಸಲ್ಲಿಸಲಾಗಿದೆ. ಇದೀಗ ಆ ಮೇಲ್ಮನವಿಯಲ್ಲಿ ಸಿದ್ದರಾಮಯ್ಯ ಪರ



ವಕೀಲರು ಏನೇನು ಉಲ್ಲೇಖಿಸಿದ್ದಾರೆ ಎಂಬ ಅಂಶ ತಿಳಿದುಬಂದಿದೆ. ಪುಟ 2

### ಮೊಬೈಲ್ ಕಿತ್ತುಕೊಳ್ಳಲು ಬಂದ ಯುವಕ

## ಬಟ್ಟೆಬಿಚ್ಚಿಸಿ ಥಳಿಸಿದ ಮಹಿಳೆ

**ಉತ್ತರ ಪ್ರದೇಶ:** ಮಹಿಳೆಯ ಮೊಬೈಲ್ ಕಸಿದುಕೊಳ್ಳಲು ಯತ್ನಿಸಿದ ಆರೋಪದ ಮೇಲೆ ಯುವಕನೊಬ್ಬನನ್ನು ಮಹಿಳೆ ಮತ್ತು ಸ್ಥಳೀಯರು ಸೇರಿ ಅರೆಬೆತ್ತಲೆಯಾಗಿ ವಿವಸ್ತ್ರಗೊಳಿಸಿ ಅಮಾನುಷವಾಗಿ ಥಳಿಸಿದ ಘಟನೆ ಉತ್ತರ ಪ್ರದೇಶದ ಮೀರತ್‌ನಲ್ಲಿ ನಡೆದಿದೆ. ಜನಸಂದಣಿಯಿರುವ ಮಾರ್ಕೆಟ್ ನಲ್ಲಿ ಯುವಕ ಫೋನ್ ಕಿತ್ತುಕೊಂಡು ಸ್ಥಳದಿಂದ ಪರಾರಿಯಾಗಲು ಯತ್ನಿಸಿದ್ದಾನೆ. ಆ ವೇಳೆ ಮಹಿಳೆ ಜೋರಾಗಿ ಕಿರುಚಿದ್ದು ತಕ್ಷಣ ಸ್ಥಳೀಯರು ಆತನನ್ನು ಹಿಡಿದು ಮಹಿಳೆಯ ಕೈಗೊಪ್ಪಿಸಿದ್ದಾರೆ. ಕೋಪಗೊಂಡ ಮಹಿಳೆ ನಡುರಸ್ತೆಯಲ್ಲೇ ಆತನ ಬಟ್ಟೆಬಿಚ್ಚಿಸಿ ಮನಬಂದಂತೆ ಥಳಿಸಿದ್ದಾಳೆ. ಪುಟ 2



## ಗ್ಯಾಂಗ್‌ಸ್ಟಾರ್ ಲಾರೆನ್ಸ್ ಬಿಷ್ಣೋಯ್‌ಗೆ ಬಿಗ್ ರಿಲೀಫ್

**ಪಂಜಾಬ್:** ಬಾಲಿವುಡ್ ಚಿತ್ರರಂಗಕ್ಕೆ ಗ್ಯಾಂಗ್ ಸ್ಟಾರ್ ಲಾರೆನ್ಸ್ ಬಿಷ್ಣೋಯ್ ದೊಡ್ಡ ತಲೆನೋವಾಗಿದೆ. ಬಿಷ್ಣೋಯ್ ಸಮುದಾಯಕ್ಕೆ ಬಾಲಿವುಡ್‌ನ ನಟ ಸಲ್ಮಾನ್ ಖಾನ್ ಹಾಗೂ ಮೂಲಗಳ ಪ್ರಕಾರ ಬಾಲಿವುಡ್‌ನ ಅನೇಕ ನಟರು ಹಿಂದೂ ಧರ್ಮವನ್ನು ಅವಮಾನಿಸಿದ್ದಾರೆ ಈ ರೀತಿ ಸೇಡು ತೀರುಸಿಕೊಳ್ಳುತ್ತಿದ್ದಾರೆ ಎಂದು ಹೇಳಲಾಗಿದೆ. ಈ ಕಾರಣಕ್ಕೆ ಸಲ್ಮಾನ್ ಖಾನ್ ಸೇರಿದಂತೆ ಅನೇಕರನ್ನು ಹತ್ಯೆ ಮಾಡಲು ಹಲವು ರೀತಿಯಲ್ಲಿ ಪ್ರಯತ್ನ ಮಾಡಿದ್ದಾರೆ. ಈಗಾಗಲೇ ಜೈಲಿನಲ್ಲಿರುವ ಲಾರೆನ್ಸ್ ಬಿಷ್ಣೋಯ್ ಅಲ್ಲಿಯೇ ಕೂತು ಈ ಕೆಲಸವನ್ನು ಮಾಡುತ್ತಿದ್ದಾರೆ. ಅವರ ಮೇಲೆ ಈಗಾಗಲೇ ಅನೇಕ ಪ್ರಕರಣಗಳು ಇದೆ.



ಈ ಪೈಕಿ ಅವರ ಮೇಲಿದ್ದ ಪಂಜಾಬ್‌ನ ಮೊಹಾಲಿಯಲ್ಲಿ ವಿದ್ಯಾರ್ಥಿಯೊಬ್ಬರ ಮೇಲೆ ಹಲ್ಲೆ ಪ್ರಕರಣದಲ್ಲಿ ಖುಲಾಸೆಯಾಗಿದೆ. ಪುಟ 2

## ಬೋರ್ ವೆಲ್ ನೀರು ಕುಡಿಯುವವರಿಗೆ ಈ ಕಾಯಿಲೆ ಬರುವುದು ಖಚಿತ

**ಬೆಂಗಳೂರು:** ಇತ್ತೀಚಿನ ವರ್ಷಗಳಲ್ಲಿ ಕೊಳವೆಬಾವಿಗಳ ಸಂಖ್ಯೆ ಹೆಚ್ಚಾಗಿದೆ. ಎಲ್ಲಿ ನೋಡಿದರೂ ನೀವು ಬೋರ್ ವೆಲ್‌ಗಳನ್ನು ಕಾಣಬಹುದಾಗಿದೆ. ಬೇಕೋ ಬೇಡವೋ ಮನೆಯಲ್ಲಿ ಬೋರ್ ವೆಲ್ ಕೊರೆಯುವುದು ಜನಗಳಿಗೆ ಅಭ್ಯಾಸವಾಗಿದೆ. ಆದರೆ ಈ ನೀರು ಆರೋಗ್ಯದ ಮೇಲೆ ಯಾವ ರೀತಿಯ ಪರಿಣಾಮ ಬೀರುತ್ತದೆ ಎಂಬುದು ನಿಮಗೆ ತಿಳಿದಿದೆಯೇ ಸಾಮಾನ್ಯವಾಗಿ ಮಿತಿಗಿಂತ ಹೆಚ್ಚು ಆಳವಾಗಿ ಕೊರೆದ ಕೊಳವೆ ಬಾವಿಗಳ ನೀರನ್ನು ಬಳಸುವುದು ಅನೇಕ ರೋಗಗಳಿಗೆ ಕಾರಣವಾಗಬಹುದು ಎಂದು ವರದಿಗಳು ಹೇಳುತ್ತವೆ.

ನೀರು ಇಲ್ಲದಾಗ ಜನರು ಆಳವಾದ ಕೊಳವೆ ಬಾವಿಗಳನ್ನು ಕೊರೆಸುತ್ತಾರೆ. ಈ ನೀರನ್ನು ಬಳಕೆ ಮಾಡಿದರೆ ಬೇಡದ ರೋಗಗಳು ಬರುತ್ತದೆ. ಹಾಗಾದರೆ ಬೋರ್ ವೆಲ್ ನೀರಿನ ಅಡ್ಡಪರಿಣಾಮಗಳೇನು ಈ ನೀರನ್ನು



ನಿಯಮಿತವಾಗಿ ಕುಡಿಯುವುದರಿಂದ ಯಾವ ರೀತಿಯ ಕಾಯಿಲೆಗಳು ಬರುತ್ತವೆ ಇಲ್ಲಿದೆ ತಜ್ಞರು ನೀಡಿರುವ ಸಂಪೂರ್ಣ ಮಾಹಿತಿ.

ಬಾವಿಯನ್ನು ಒಂದು ಮಿತಿಗಿಂತ ಆಳ ಮಾಡಿದರೆ ಆಗ ರಾಸಾಯನಿಕ ತ್ಯಾಜ್ಯಗಳನ್ನು ಹೊಂದಿರುವ ನೀರು ಲಭ್ಯವಾಗುತ್ತದೆ. ಈ ನೀರನ್ನು ನಿಯಮಿತವಾಗಿ ಕುಡಿಯುವುದರಿಂದ ಕ್ಯಾನ್ಸರ್ ಸೇರಿದಂತೆ ಅನೇಕ ರೋಗಗಳಿಗೆ ಕಾರಣವಾಗಬಹುದು ಎಂದು ಅಧ್ಯಯನಗಳು ತೋರಿಸಿ ಕೊಟ್ಟಿವೆ. ಬೋರ್ ವೆಲ್ ನೀರಿನಲ್ಲಿ ಫ್ಲೋರೈಡ್, ನೈಟ್ರೇಟ್ ಮತ್ತು ಪಾದರಸದ ಅಂಶ ಹೆಚ್ಚಾಗಿರುತ್ತದೆ. ಅವುಗಳನ್ನು ಎಷ್ಟೇ ಶುದ್ಧೀಕರಿಸಿದರೂ, ಅವುಗಳನ್ನು ನೀರಿನಿಂದ ಬೇರ್ಪಡಿಸಲು ಸಾಧ್ಯವಿಲ್ಲ. ಪುಟ 2

### ಬೆಂಗಳೂರು ವಾಯು ಮಾಲಿನ್ಯಕ್ಕೆ ಇದುವೇ ಮುಖ್ಯ ಕಾರಣ!

## ಸಂಶೋಧನೆಯಲ್ಲಿ ತಿಳಿದುಬಂದಿದ್ದೇನು?

**ಬೆಂಗಳೂರು:** ಬೆಂಗಳೂರಿನಲ್ಲಿ ಒಟ್ಟು ವಾಯು ಮಾಲಿನ್ಯ ಪ್ರಮಾಣದಲ್ಲಿ ಹೆಚ್ಚಿನ ಪಾಲು ಸಾರಿಗೆ ಕ್ಷೇತ್ರದ್ದೇ ಇರುವುದು ತಿಳಿದುಬಂದಿದೆ. ಟ್ರಕ್‌ಗಳು ಮತ್ತು ವಾಣಿಜ್ಯ ವಾಹನಗಳು ಬೆಂಗಳೂರಿನಲ್ಲಿ ಅತಿ ಹೆಚ್ಚು ವಾಯು ಮಾಲಿನ್ಯಕಾರಕಗಳಾಗಿವೆ. ಇವುಗಳಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ಶೇ 39 ರಷ್ಟು ಕಓ 2.5 ಕಣಗಳ ಹೊರಸೂಸುವಿಕೆ ಆಗುತ್ತಿದ್ದರೆ, ಬಿಬಿಎಂಪಿ ವ್ಯಾಪ್ತಿಯಲ್ಲಿ ಶೇ 48 ರಷ್ಟು ಮಾಲಿನ್ಯವಾಗುತ್ತಿದೆ.

ಕಡಿಮೆ ಮಾಲಿನ್ಯಕಾರಕ ಪರ್ಯಾಯ ಇಂಧನಗಳ ಲಭ್ಯತೆಯ ಹೊರತಾಗಿಯೂ ಮರ ಮತ್ತು ಕಲ್ಲಿದ್ದಲನ್ನು ಸುಡುವ ಮೂಲಕ ಕೈಗಾರಿಕೆಗಳು ಕೂಡ ವಾಯು ಮಾಲಿನ್ಯಕ್ಕೆ ಕಾರಣವಾಗುತ್ತಿವೆ ಎಂಬುದು ಅಧ್ಯಯನ ವರದಿಯೊಂದರಿಂದ ಬಹಿರಂಗವಾಗಿದೆ.

ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಅಡ್ವಾನ್ಸ್ಡ್ ಸ್ಟಡೀಸ್‌ನ ಸ್ಕೂಲ್ ಆಫ್ ನ್ಯಾಚುರಲ್ ಸೈನ್ಸಸ್ ಮತ್ತು ಇಂಜಿನಿಯರಿಂಗ್ ವಿಭಾಗದ ಪ್ರೊ. ಗುಫ್ರಾನ್ ಬೀಗ್ ನೇತೃತ್ವದಲ್ಲಿ ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿ ಅಧ್ಯಯನ ನಡೆಸಲಾಗಿತ್ತು. ಕಓ 2.5 ಕಣಗಳ ಹೊರಸೂಸುವಿಕೆ ಬಗ್ಗೆ ಸಂಶೋಧಕರು ಹಲವಾರು



ತಿಂಗಳುಗಳ ಕಾಲ ಅಧ್ಯಯನ ನಡೆಸಿ ವರದಿ ಸಿದ್ಧಪಡಿಸಿದ್ದಾರೆ.

ಮೊದಲ ಬಾರಿಗೆ, ನಾವು ಅಲ್ಟ್ರಾ ಫೈನ್ ರೆಸಲ್ಯೂಶನ್ ನ (200 ಚದರ ಮೀಟರ್ ಗ್ರಿಡ್‌ಗಳು) 80 ಮಾಲಿನ್ಯ ಹಾಟ್‌ಸ್ಪಾಟ್‌ಗಳನ್ನು ಗುರುತಿಸಿದ್ದೇವೆ. ಈ ಪ್ರದೇಶಗಳಲ್ಲಿ ಮಾಲಿನ್ಯದ ಪ್ರಮುಖ ಮೂಲಗಳ ಪತ್ತೆ ಮಾಡಲಾಗಿದೆ. ಸಾರಿಗೆ ವಲಯವು ಅತಿದೊಡ್ಡ ಮಾಲಿನ್ಯಕಾರಕವಾಗಿದೆ ಎಂಬುದನ್ನು ನಾವು ಕಂಡುಕೊಂಡಿದ್ದೇವೆ ಎಂದು ಬೀಗ್ ಹೇಳಿರುವುದಾಗಿ 'ಡೆಕ್ಕನ್ ಹೆರಾಲ್ಡ್' ತಿಳಿಸಿದೆ. ಅಧ್ಯಯನಕ್ಕೆ ಸಂಶೋಧಕರು ಹೈಬ್ರಿಡ್ ಮಾದರಿಯನ್ನು ಅಳವಡಿಸಿಕೊಂಡಿದ್ದರು. ಪುಟ 2

## ತಲ್ವಾರ್ ಹಿಡಿದು ಹೊಡೆದಾಡಿಕೊಂಡ ರೌಡಿಶೀಟರ್‌ಗಳು

**ಮಂಗಳೂರು:** ನಡುರಾತ್ರಿ ರೌಡಿಶೀಟರ್‌ಗಳು ತಲ್ವಾರ್ ಹಿಡಿದು ಗಲಾಟೆ ಮಾಡಿಕೊಂಡಿರುವ ದೃಶ್ಯ ಮೊಬೈಲ್ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಪೂರ್ವದ್ವೇಷದ ಹಿನ್ನೆಲೆಯಲ್ಲಿ ಮುಸ್ಲಿಂ ಯುವಕರ ಗುಂಪಿನ ಮಧ್ಯೆ ತಲ್ವಾರ್ ದಾಳಿ ನಡೆದಿದೆ. ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಅಮ್ಮೆಮಾರ್ ಎಂಬಲ್ಲಿ ರೌಡಿಗಳ ಗ್ಯಾಂಗ್ ನಡುಬೀದಿಯಲ್ಲಿ ಯುವಕರನ್ನ ಅಟ್ಟಾಡಿಸಿ ತಲ್ವಾರಿನಲ್ಲಿ ಕೊಚ್ಚಿದ್ದು, ಗಾಯಗೊಂಡ ತಸ್ಲೀಮ್ ಹಾಗೂ ಮಹಮ್ಮದ್ ಶಾಕೀರ್ ಎಂಬವರ ಸ್ಥಿತಿ ಗಂಭೀರವಾಗಿದೆ. ಸ್ಥಳೀಯ ನಿವಾಸಿಗಳಾದ ಮನ್ಸೂರ್, ಪಲ್ಟಿ ಇಮ್ರಾನ್, ಮುಸ್ತಾಕ ಯಾನೆ ಮಿಚ್ಚ, ಸರ್ಫುದ್ದೀನ್, ಅಶ್ರಫ್, ರಿಜ್ವಾನ್, ಸಫ್ವಾನ್, ಅದ್ನಾನ್, ನಿಸಾಕ್, ಯಾಸೀರ್, ಸುಹೈಲ್, ಜಾಹೀದ್, ಸಾದಿಕ್, ಲತೀಫ್ ಎಂಬವರು ಹಲ್ಲೆ ನಡೆಸಿದ ಆರೋಪಿಗಳು. ಗಾಯಗೊಂಡ ತಸ್ಲೀಮ್ ಹಾಗೂ ಸ್ನೇಹಿತರು ಮಾತನಾಡುತ್ತಿದ್ದ ವೇಳೆ ತಸ್ಲೀಮ್‌ಗೆ ಕರೆಯೊಂದು ಬಂದಿತ್ತು. ಈ ವೇಳೆ ಆರೋಪಿಯು ಅವಾಚ್ಯ ಶಬ್ದಗಳಿಂದ ನಿಂದಿಸಿ, ಆತ ಇರುವಲ್ಲಿಗೆ ಬರುವಂತೆ ಸವಾಲು ಹಾಕಿದ್ದ. ಈ ವೇಳೆ ತಸ್ಲೀಮ್ ಹಾಗೂ ತಂಡ ಅಮ್ಮೆಮಾರ್ ಶಾಲಾ ಬಳಿಗೆ ಹೋದಾಗ ಅಲ್ಲಿ ಆರೋಪಿಗಳು ದಾಳಿ ನಡೆಸಿದ್ದಾರೆ. ಈ ಸಂಬಂಧ ಬಂಟ್ವಾಳ ಗ್ರಾಮಾಂತರ ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನೀರಿನ ತೊಟ್ಟಿಗೆ ಬಿದ್ದು ಬಾಲಕಿ ದುರ್ಮರಣ

**ಬೀದರ್:** ಮನೆಯ ಮುಂದೆ ಇರುವ ನೀರಿನ ತೊಟ್ಟಿಯಲ್ಲಿ ಬಾಲಕಿ ಬಿದ್ದು ಸಾವನ್ನಪ್ಪಿದ ದಾರುಣ ಘಟನೆ ಬೀದರ್ ಜಿಲ್ಲೆಯ ಹುಲಸೂರು ಪಟ್ಟಣದಲ್ಲಿ ನಡೆದಿದೆ. ಶ್ರೀನಿಧಿ ವಿಜಯಕುಮಾರ್ ವಟ್ಟಿಗೆ(5) ಮೃತ ಬಾಲಕಿ. ಮನೆಯ ಮುಂದೆ ಗೆಳೆಯರೊಂದಿಗೆ ಆಟವಾಡುತ್ತಾ ಮೆಹೆಂದಿ ತೊಳೆಯಲು ಬಾಗಿದಾಗ ಕಾಲು ಜಾರಿ ತೊಟ್ಟಿಯಲ್ಲಿ ಬಿದ್ದು ಬಾಲಕಿ ಸಾವನ್ನಪ್ಪಿದ್ದಾಳೆ. ಯಾರಿಗೂ ಗೊತ್ತಾಗದ ಕಾರಣ ಬಾಲಕಿ ತೊಟ್ಟಿಯಲ್ಲೇ ಸಾವನ್ನಪ್ಪಿದ್ದು, ಈ ಕುರಿತು ಹುಲಸೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಬಸ್ ಸೀಟಿಗಾಗಿ ಚಪ್ಪಲಿಯಲ್ಲಿ ಬಡಿದಾಡಿದ ಮಹಿಳೆಯರು

**ಬೆಳಗಾವಿ:** ಸರ್ಕಾರಿ ಬಸ್ಸಿನಲ್ಲಿ ಸೀಟ್ ವಿಚಾರಕ್ಕೆ ಮಹಿಳೆಯರು ಚಪ್ಪಲಿಯಲ್ಲಿ ಹೊಡೆದಾಡಿದ ಘಟನೆ ಜಿಲ್ಲೆಯಲ್ಲಿ ನಡೆದಿದೆ. ಸವದತ್ತಿ ರೇಣುಕಾ ಯಲ್ಲಮ್ಮದೇವಿ ದರ್ಶನ ಪಡೆಯಲು ಸವದತ್ತಿಗೆ ಹೋಗುವ ಬಸ್ಸನ್ನು ಮಹಿಳೆಯರು ಹತ್ತಿದ್ದಾರೆ. ಈ ವೇಳೆ ಸೀಟ್ ನನ್ನದು ನನ್ನದು ಅಂತಾ ಮಹಿಳೆಯರ ಮಧ್ಯೆ ಜಗಳ ಆರಂಭವಾಗಿದೆ. ಮೊದಲಿಗೆ ಮಹಿಳೆಯರು ಪರಸ್ಪರ ಬೈದಾಡಿಕೊಂಡಿದ್ದಾರೆ. ನಂತರ ಕೈಕೈ ಮಿಲಾಯಿಸಿ ಚಪ್ಪಲಿಯಲ್ಲಿ ಹೊಡೆದಾಡಿದ್ದಾರೆ. ಈ ವೇಳೆ ವೇಳೆ ಅಡ್ಡ ಬಂದ ಬಾಲಕಿಗೂ ಚಪ್ಪಲಿಯಿಂದ ಮಹಿಳೆ ಹೊಡೆದಿದ್ದಾಳೆ. ಮಹಿಳೆಯರ ಜಗಳದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಈಗ ವೈರಲ್ ಆಗಿದೆ.



## ಬೀಳುವ ಹಂತದಲ್ಲಿದ್ದ 6 ಅಂತಸ್ತಿನ ಕಟ್ಟಡದ ತೆರವು ಕಾರ್ಯಾಚರಣೆ ಆರಂಭ



**ಬೆಂಗಳೂರು:** ಬಾಬುಸಪಾಳ್ಯ ಕಟ್ಟಡ ದುರಂತ ಬಳಿಕ ಬಿಬಿಎಂಪಿ ಎಚ್ಚರಗೊಂಡಿದ್ದು ಬೀಳುವ ಹಂತದಲ್ಲಿದ್ದ ಮತ್ತೊಂದು ಅನಧಿಕೃತ ಕಟ್ಟಡದ ತೆರವು ಕಾರ್ಯಾಚರಣೆ ಆರಂಭವಾಗಿದೆ.

ಮಹಾದೇವಪುರ ವಲಯದ ಹೊರಮಾವಿನ ನಂಜಪ್ಪ ಗಾರ್ಡನ್‌ನಲ್ಲಿ ಪುಟ್ಟಪ್ಪ ಎಂಬವರು 10X25 ಅಡಿಯಲ್ಲಿ ಜಾಗದಲ್ಲಿ 6 ಅಂತಸ್ತಿನ ಕಟ್ಟಡವನ್ನು ನಿರ್ಮಿಸಿದ್ದರು.

ವಾಲಿಕೊಂಡಿರುವ ಕಟ್ಟಡವನ್ನು ತೆರವುಗೊಳಿಸಲು ಬಿಬಿಎಂಪಿ ಸೂಚನೆ ನೀಡುತ್ತಿದ್ದಂತೆ ಸ್ವಯಂಪ್ರೇರಿತವಾಗಿ ಮಾಲೀಕರೇ ಈಗ ಕಟ್ಟಡ ತೆರವು ಮಾಡಲು ಮುಂದಾಗಿದ್ದಾರೆ.

ಕಟ್ಟಡ ತೆರವು ಮಾಡದಿದ್ದರೆ ಕ್ರಿಮಿನಲ್ ಕೇಸ್ ಹಾಕುವ ಎಚ್ಚರಿಕೆಯನ್ನು ಪಾಲಿಕೆ ನೀಡಿತ್ತು. ಈ ಬೆನ್ನಲ್ಲೇ ಸುಮಾರು 8 ಲಕ್ಷ ರೂ. ವೆಚ್ಚದಲ್ಲಿ ಮಾಲೀಕರೇ ಈ ಕಟ್ಟಡವನ್ನು ತೆರವು ಮಾಡಲು ಮುಂದಾಗಿದ್ದಾರೆ.

ಅಕ್ಕಪಕ್ಕದಲ್ಲಿ ಮನೆಗಳು ಇರುವ ಕಾರಣ ಈಗ ಕೆಲಸಗಾರರು ಸುತ್ತಿಗೆಯಿಂದ ಬಡಿದು ಕಟ್ಟಡವನ್ನು ಒಡೆಯುತ್ತಿದ್ದಾರೆ. ಮೇಲ್ಭಾಗ ಕಟ್ಟಡ ತೆರವು ಮುಗಿದ ಬಳಿಕ ಜೆಸಿಬಿ ಮೂಲಕ ಕಾರ್ಯಾಚರಣೆ ಮಾಡಲಾಗುತ್ತದೆ.

## ಕಾಂಗ್ರೆಸ್ ರೌಡಿಶೀಟರ್‌ಗೆ ಟಿಕೆಟ್ ನೀಡಿದೆ ಟಿಕೆಟ್ ವಂಚಿತ ಅಜ್ಜಂಫೀರ್ ಖಾದ್ರಿ ಆಕ್ರೋಶ

**ಹಾವೇರಿ:** ಕಾಂಗ್ರೆಸ್ ರೌಡಿಶೀಟರ್‌ಗೆ ಟಿಕೆಟ್ ನೀಡಿದೆ ಎಂದು ಶಿಗ್ಗಾಂವಿ ಕಾಂಗ್ರೆಸ್ ಟಿಕೆಟ್ ವಂಚಿತ ಅಜ್ಜಂಫೀರ್ ಖಾದ್ರಿ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪಕ್ಷೇತರವಾಗಿ ಸ್ಪರ್ಧೆ ಮಾಡುವ ಕುರಿತು ಖಾದ್ರಿ ಚಿಂತನೆ ನಡೆಸಿದ್ದು, ಬೆಂಬಲಿಗರ ಅಭಿಪ್ರಾಯ ಸಂಗ್ರಹಿಸಿ ನಿರ್ಧಾರ ಕೈಗೊಳ್ಳಲು ಖಾದ್ರಿ ಮುಂದಾಗಿದ್ದಾರೆ. ಶಿಗ್ಗಾವಿ ತಾಲೂಕು ಹುಲಗೂರು ಗ್ರಾಮದ ತಮ್ಮ ನಿವಾಸದಲ್ಲಿ ಇಂದು ಬೆಳಿಗ್ಗೆ ಬೆಂಬಲಿಗರ ಸಭೆ ನಡೆಸಿದರು.

ನಾನು ನಿಷ್ಠಾವಂತ ಕಾರ್ಯಕರ್ತ. ಇನ್ನೂ ಅವಕಾಶ ಇದೆ, ನನಗೆ ಟಿಕೆಟ್ ಕೊಡಲಿ. ಯಾಸೀರ್ ಖಾನ್ ಪಠಾಣ್ ಒಬ್ಬ ರೌಡಿಶೀಟರ್, ಅವನು ಬಿಜೆಪಿ ಏಜೆಂಟ್ ಎಂದು ಕಿಡಿ ಕಾರಿದ್ದಾರೆ.

ಈ ಬಗ್ಗೆ ಖಾದ್ರಿ ಗುರುವಾರ ತುಮಕೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿ, ಕಳೆದ 23 ವರ್ಷದಿಂದ ನಾನು ಕಾಂಗ್ರೆಸ್ ಕಟ್ಟಿದ್ದೇನೆ. ಒಮ್ಮೆ ಶಾಸಕನಾಗಿದ್ದೇನೆ, ಮೂರು ಬಾರಿ ಬಸವರಾಜ ಬೊಮ್ಮಾಯಿ ವಿರುದ್ಧ ಅತ್ಯಂತ ಕಡಿಮೆ ಅಂತರದಿಂದ ಸೋತಿದ್ದೇನೆ. ಬೊಮ್ಮಾಯಿ ವಿರುದ್ಧ ಆಗ ಯಾರೂ ಟಿಕೆಟ್ ಪಡೆಯಲು ತಯಾರು ಇರಲಿಲ್ಲ. ಅಂಥ ಸಂದರ್ಭದಲ್ಲಿ ನಾನು



ನಿಂತಿದ್ದೇನೆ. ನಾನು ಸ್ಪರ್ಧೆ ಮಾಡಿದಾಗ ಬೊಮ್ಮಾಯಿ ವಿರುದ್ಧ ಕಾಂಗ್ರೆಸ್‌ನ ಯಾವ ಮುಖಂಡರು ಪ್ರಚಾರಕ್ಕೆ ಬರಲಿಲ್ಲ. 'ಹೇ ಬೊಮ್ಮಾಯಿ ನಿಂತಿದ್ದಾರೆ ಹೇಗೆ ಪ್ರಚಾರ ಮಾಡಲಿ' ಅನ್ನುತ್ತಿದ್ದರು. ಆ ಸಮಯದಲ್ಲಿ ಕೈ ಮುಗಿದು ಕೇಳಿದರೂ ಯಾರೂ ಪ್ರಚಾರಕ್ಕೆ ಬರಲಿಲ್ಲ. ಲಿಂಗಾಯತ ನಾಯಕರು, ಕುರುಬ, ನಾಯಕ ಸಮುದಾಯದ ಯಾವೊಬ್ಬ ನಾಯಕರೂ ಬಂದಿರಲಿಲ್ಲ. ಅವರೆಲ್ಲರು ಬಂದು ಪ್ರಚಾರ ಮಾಡಿದರೆ ನಾನು ಗೆದ್ದು ಬೊಮ್ಮಾಯಿ ಸೋಲುತಿದ್ದರು ಎಂದರು.

ನಾನು ಒಬ್ಬ ಅಲ್ಪಸಂಖ್ಯಾತ ಅನ್ನುವ ಕಾರಣಕ್ಕೆ ಬೇರೆ ಸಮುದಾಯದ ಯಾರೂ ಬಂದು ಪ್ರಚಾರ ಮಾಡಲಿಲ್ಲ. ಹೊಂದಾಣಿಕೆಯ ರಾಜಕಾರಣ ಮಾಡಿ ಬೊಮ್ಮಾಯಿಯನ್ನು ಗೆಲ್ಲಿಸಿದ್ದಾರೆ. ಈಗ ಹಾನಗಲ್ಲಿನ ಪಠಾಣ್‌ಗೆ ಟಿಕೆಟ್ ಕೊಟ್ಟಿದ್ದಾರೆ. ಅವನೊಬ್ಬ ರೌಡಿಶೀಟರ್, ಅವನ ಮೇಲೆ 17 ಕೇಸ್ ಇದೆ. ಕ್ಷೇತ್ರದ ಜನರು ಸ್ಥಳೀಯ ಅಭ್ಯರ್ಥಿಯನ್ನು ಬಯಸುತ್ತಾರೆ. ನಾನು ಸ್ಥಳೀಯನಾಗಿದ್ದೇನೆ, ಮುಂದಿನ ದಿನದಲ್ಲಿ ಪಿತೂರಿಯ ಎಲ್ಲಾ ವಿಚಾರ ಬಹಿರಂಗವಾಗಲಿದೆ ಎಂದು ಹರಿಹಾಯ್ದರು.

ನಾನು ಸಿದ್ದರಾಮಯ್ಯರ ಅಭಿಮಾನಿಯಾಗಿದ್ದೇನೆ. ಅವರ ವಿರುದ್ಧ ಮಾತನಾಡುವಷ್ಟು ದೊಡ್ಡ ವ್ಯಕ್ತಿ ನಾನಲ್ಲ. ಟಿಕೆಟ್ ಕೈ ತಪ್ಪಿರುವ ಹಿಂದೆ ಕಾಣದ ಕೈಗಳ ಪಿತೂರಿ ನಡೆದಿದೆ, ಒಳ ಒಪ್ಪಂದ ಆಗಿದೆ ಎಂದು ಜನ ಮಾತಾಡಿಕೊಳ್ಳುತ್ತಾರೆ. ಗೂಂಡಾಗಿರಿ ಮಾಡಿದವನಿಗೆ ಟಿಕೆಟ್ ಕೊಟ್ಟಿದ್ದಾರೆ. ಸೋಲುವವರಿಗೆ ಟಿಕೆಟ್ ಕೊಟ್ಟಿದ್ದಾರೆ. ನಾನು ಪಕ್ಷೇತರವಾಗಿ ನಿಲ್ಲಲ್ಲು ಕಾರ್ಯಕರ್ತರ ಒತ್ತಡ ಹೆಚ್ಚಾಗಿದೆ. ನನ್ನ ಕಾರ್ಯಕರ್ತರು ವಿಷ ಕುಡಿಯಲು ಹೋಗಿದ್ದಾರೆ ಎಂದರು.

## ಪ್ರಿಯಕರನ ಜೊತೆ ಸೇರಿ ಪತಿಯನ್ನೇ ಕೊಲೆ ಮಾಡಿದ ಪತ್ನಿ

**ಉಡುಪಿ:** ಪ್ರಿಯಕರನ ಜೊತೆ ಸೇರಿಕೊಂಡು ಪತಿಯನ್ನು ಪತ್ನಿಯೇ ಹತ್ಯೆ ಮಾಡಿರುವ ಘಟನೆ ಉಡುಪಿ ಜಿಲ್ಲೆಯ ಕಾರ್ಕಳ ತಾಲೂಕಿನ ಅಜೆಕಾರಿನಲ್ಲಿ ನಡೆದಿದೆ.

ಬಾಲಕೃಷ್ಣ ಪೂಜಾರಿ (44) ಕೊಲೆಯಾದ ವ್ಯಕ್ತಿ. ಆತನ ಪತ್ನಿ ಪ್ರತಿಮಾ ಹಾಗೂ ಆಕೆಯ ಪ್ರಿಯಕರ ದಿಲೀಪ್ ಹೆಗ್ಡೆಯನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿದ್ದಾರೆ.

**ನಡೆದಿದ್ದೇನು?:** ಬಾಲಕೃಷ್ಣ ಪೂಜಾರಿ ಕಳೆದ 25 ದಿನಗಳಿಂದ ಜ್ವರ, ವಾಂತಿ ಆಗಿ ಅನಾರೋಗ್ಯದಿಂದ ಬಳಲುತ್ತಿದ್ದ. ಕಾಮಾಲೆ ರೋಗ ಎಂದು ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಕೊಡಿಸಲಾಗಿತ್ತು. ಕಾರ್ಕಳ ರೋಟರಿ, ಮಣಿಪಾಲ ಕೆಎಂಸಿ, ಮಂಗಳೂರಿನ ವೆನ್ಲಾಕ್, ಬೆಂಗಳೂರಿನ ನಿಮಾನ್ಸ್, ವಿಕ್ಟೋರಿಯಾ ಹಾಗೂ ಮಂಗಳೂರಿನ ಆಸ್ಪತ್ರೆಯಲ್ಲೂ ಚಿಕಿತ್ಸೆ ನೀಡಲಾಗಿತ್ತು. ಆದರೆ, ಅ.20 ರಂದು ಬಾಲಕೃಷ್ಣ ಮನೆಯಲ್ಲಿ ಸಾವನ್ನಪ್ಪಿದ್ದ.

ಸಾವಿನ ಬಗ್ಗೆ ಸಂಶಯ ವ್ಯಕ್ತಪಡಿಸಿ ಪ್ರತಿಮಾಳ ಸಹೋದರನೇ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಈ ಸಂಬಂಧ ಅಜೆಕಾರು ಠಾಣೆಯಲ್ಲಿ ಪ್ರಕರಣ ದಾಖಲಾಯಿತು. ತನಿಖೆ ವೇಳೆ ಪ್ರತಿಮಾ ಮತ್ತು ಆಕೆಯ ಪ್ರಿಯಕರನ ದಿಲೀಪ್ ಮೇಲೆ ಸಂಶಯ ವ್ಯಕ್ತವಾಗಿ ವಿಚಾರಣೆಗೆ ಒಳಪಡಿಸಲಾಯಿತು.

**ಊಟದಲ್ಲಿ ವಿಷ ಬೆರೆಸಿದ್ದ ಪತ್ನಿ ಪ್ರತಿಮಾ?:** ಬಾಲಕೃಷ್ಣ ಸಾವಿನ ಬಳಿಕ ಪತ್ನಿ ಪ್ರತಿಮಾನ ಚಲನವಲನ ಬಗ್ಗೆ ಆಕೆಯ ಸಹೋದರನೇ



ಅನುಮಾನಗೊಂಡಿದ್ದ. ಸಾವಿನ ಬಗ್ಗೆ ಆಕೆಯನ್ನು ಪ್ರಶ್ನಿಸಿದ್ದಾನೆ. ಪ್ರತಿಮಾ ತನ್ನ ಸಹೋದರನ ಬಳಿ ಎಲ್ಲವನ್ನೂ ಹೇಳಿಕೊಂಡಿದ್ದಾಳೆ. ಊಟದಲ್ಲಿ ವಿಷ ಬೆರೆಸಿ ಬಳಿಕ ಬೆಡ್‌ಶೀಟ್‌ನಿಂದ ಉಸಿರುಗಟ್ಟಿಸಿ ಕೊಲೆ ಮಾಡಿರುವುದಾಗಿ ಪ್ರತಿಮಾ ಒಪ್ಪಿಕೊಂಡಿದ್ದಾಳೆ ಎನ್ನಲಾಗಿದೆ. ಪ್ರಿಯಕರನ ಜೊತೆ ಸೇರಿಕೊಂಡು ಪತಿ ಕೊಲೆ ಮಾಡಿರುವುದಾಗಿ ಆಕೆ ಒಪ್ಪಿಕೊಂಡಿದ್ದಾಳೆಂದು ತಿಳಿದುಬಂದಿದೆ.

## ಬೆಂಬಲ ಬೆಲೆಯಲ್ಲಿ ಶೇಂಗಾ ಖರೀದಿಗೆ ಕೇಂದ್ರ ಸರ್ಕಾರ ಸಮ್ಮತಿ

**ಬೆಂಗಳೂರು:** ಬೆಂಬಲ ಬೆಲೆಯಲ್ಲಿ ಶೇಂಗಾ ಖರೀದಿಗೆ ಅನುಮತಿ ನೀಡಬೇಕು ಎಂಬ ರಾಜ್ಯ ಸರ್ಕಾರದ ಮನವಿಗೆ ಕೇಂದ್ರ ಸರ್ಕಾರ ಸಮ್ಮತಿಸಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ತಿಳಿಸಿದ್ದಾರೆ.



ಪ್ರತಿ ಕ್ವಿಂಟಾಲ್‌ಗೆ 6,783 ರೂ. ನಿಗದಿಪಡಿಸಿದ್ದು, ಬೆಂಬಲ ಬೆಲೆಯ ಮಾರ್ಗಸೂಚಿ ಅನ್ವಯ ಕೊಪ್ಪಳ, ಧಾರವಾಡ, ಹಾವೇರಿ, ಬಳ್ಳಾರಿ, ಚಿತ್ರದುರ್ಗ, ಗದಗ ಮತ್ತು ಬಾಗಲಕೋಟೆ, ದಾವಣಗೆರೆ, ರಾಯಚೂರು, ತುಮಕೂರು ಹಾಗೂ ವಿಜಯನಗರ ಜಿಲ್ಲೆಗಳ ರೈತರಿಂದ ಶೇಂಗಾ ಖರೀದಿಗೆ ಅನುಮತಿ ದೊರೆತಿದೆ ಎಂದು ಸಚಿವರು ತಿಳಿಸಿದ್ದಾರೆ.

ಈಗ ಅನುಮತಿ ದೊರೆತಿರುವ ಶೇಂಗಾ ಸೇರಿ ರಾಜ್ಯದಲ್ಲಿ ಇದೇ ಮೊದಲ ಬಾರಿಗೆ ಒಟ್ಟು ಎಂಟು ಕೃಷಿ ಉತ್ಪನ್ನಗಳನ್ನು ಬೆಂಬಲ ಬೆಲೆ ಯೋಜನೆ ಅಡಿಯಲ್ಲಿ ಖರೀದಿ ಮಾಡಲಾಗಿದೆ. ಇದುವರೆಗೆ ಉಂಡೆ ಕೊಬ್ಬರಿ, ಮಿಲ್ಲಿಂಗ್ ಕೊಬ್ಬರಿ, ಹೆಸರುಕಾಳು, ಉದ್ದಿನಕಾಳು, ಸೋಯಾಬಿನ್, ಸೂರ್ಯಕಾಂತಿ, ಹತ್ತಿಯನ್ನು ಖರೀದಿಸಲಾಗಿದೆ. ಬೆಲೆ ಕುಸಿತದ ಸಂದರ್ಭದಲ್ಲಿ ರೈತರ ನೆರವಿಗೆ ಧಾವಿಸಲು ರಾಜ್ಯ ಸರ್ಕಾರ ಬೆಂಬಲ ಬೆಲೆಯಲ್ಲಿ ಖರೀದಿಗೆ ಅನುಮತಿ ನೀಡಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿತ್ತು. ರಾಜ್ಯದ ಮನವಿಯನ್ನು ಕೇಂದ್ರ ಪುರಸ್ಕರಿಸಿದ್ದು, ಶೇಂಗಾ ಖರೀದಿಗೆ ಕೇಂದ್ರ ಸರ್ಕಾರದಿಂದ ಎರಡು, ರಾಜ್ಯ ಸರ್ಕಾರದಿಂದ ನಾಲ್ಕು ಏಜನ್ಸಿಗಳನ್ನು ಗುರುತಿಸಲಾಗಿದೆ. ಅವಶ್ಯಕತೆಗನುಗುಣವಾಗಿ ಖರೀದಿ ಕೇಂದ್ರಗಳನ್ನು ಆರಂಭಿಸಲು ನಾಫೆಡ್ ಸಂಸ್ಥೆ, ಎನ್ಸಿಸಿಎಫ್ ಸಂಸ್ಥೆ ಹಾಗೂ ಖರೀದಿ ಏಜನ್ಸಿಗಳೊಂದಿಗೆ ಸಮಾಲೋಚನೆ ನಡೆಸಿ ಖರೀದಿ ಕೇಂದ್ರಗಳನ್ನು ತೆರೆದು ನೋಂದಣಿ ಪ್ರಕ್ರಿಯೆ ಆರಂಭಿಸಬೇಕು ಎಂದು ಜಿಲ್ಲಾ ಟಾಸ್ ಫೋರ್ಸ್ ಸಮಿತಿಗಳಿಗೆ ನಿರ್ದೇಶನ ನೀಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಬೆಂಬಲ ಬೆಲೆ ಯೋಜನೆಯಡಿ ಶೇಂಗಾ ಖರೀದಿ ಪ್ರಕ್ರಿಯೆಯಲ್ಲಿ ರೈತರಿಗೆ ಯಾವುದೇ ರೀತಿ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಈ ಬಗ್ಗೆ ಜಿಲ್ಲಾಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು. ನೋಂದಣಿ ಮತ್ತು ಖರೀದಿ ಪ್ರಕ್ರಿಯೆ ಆರಂಭಿಸುವ ಪೂರ್ವದಲ್ಲಿ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ಯಾವುದೇ ಖರೀದಿ ಕೇಂದ್ರದಿಂದ ದೂರುಗಳು ಬರಬಾರದು ಎಂದು ಸಚಿವರು ಎಚ್ಚರಿಕೆ ನೀಡಿದ್ದಾರೆ.

## ಸಮನ್ವಯ ಸಭೆ ಕರೆದ ಡಿಕೆಸು

ಈ ಹಿನ್ನೆಲೆಯಲ್ಲಿ ಇಂದು ಡಿ.ಕೆ.ಸುರೇಶ್ ನೇತೃತ್ವದಲ್ಲಿ ಸಮನ್ವಯ ಸಭೆ ನಡೆಸುತ್ತಿದ್ದಾರೆ. ಈ ಸಭೆಯಲ್ಲಿ ಮೂಲ ಕಾಂಗ್ರೆಸ್ಸಿಗರು ಹಾಗೂ ಯೋಗೇಶ್ವರ್ ಬೆಂಬಲಿಗರು ಭಾಗಲಿದ್ದಾರೆ. ಹೊಂಗನೂರು – ಮಳೂರು – ಬೇವೂರು ಜಿ.ಪಂ ವ್ಯಾಪ್ತಿಯಲ್ಲಿ ಸಭೆ ನಡೆಸಲಾಗುತ್ತಿದೆ. ಈ ಸಭೆಯಲ್ಲಿ ಡಿ.ಕೆ.ಸುರೇಶ್ ಹಾಗೂ ಸಿ.ಪಿ.ಯೋಗೇಶ್ವರ್ ಭಾಗಿಯಾಗಲಿದ್ದಾರೆ. ಚುನಾವಣೆ ದೃಷ್ಟಿಯಿಂದ ಇಬ್ಬರೂ ನಾಯಕರು, ಎರಡೂ ಕಡೆಯ ಕಾರ್ಯಕರ್ತರನ್ನು ಒಗ್ಗೂಡಿಸುವ ಪ್ರಯತ್ನಕ್ಕೆ ಮುಂದಾಗಿದ್ದಾರೆ.

ಚನ್ನಪಟ್ಟಣದಲ್ಲಿ ಕಾಂಗ್ರೆಸ್ ಸಿ.ಪಿ.ಯೋಗೇಶ್ವರ್‌ಗೆ ಟಿಕೆಟ್ ನೀಡಿದ ವಿಚಾರವಾಗಿ ಮೂಲ ಕಾಂಗ್ರೆಸ್ಸಿಗರಲ್ಲಿ ಅಸಮಾಧಾನವಿರುವ ಬಗ್ಗೆ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿ ಕೆ ಶಿವಕುಮಾರ್ ಅವರು ಪ್ರತಿಕ್ರಿಯಿಸಿದ್ದಾರೆ. ಚನ್ನಪಟ್ಟಣ ಅಭ್ಯರ್ಥಿ ವಿಚಾರವಾಗಿ ಪಕ್ಷದ ಯಾವುದೇ ಕಾರ್ಯಕರ್ತರು ಹಾಗೂ ಮುಖಂಡರಲ್ಲಿ ಅಸಮಾಧಾನವಿಲ್ಲ. ಕೆಲವರು ಡಿ.ಕೆ. ಸುರೇಶ್ ಸ್ಪರ್ಧಿಸಬೇಕು ಎಂದು ಆಸೆಪಟ್ಟಿದ್ದರು. ಆದರೆ ಈಗ ಅಸಮಾಧಾನವಿಲ್ಲ, ಸುರೇಶ್ ಅವರೇ ಜವಾಬ್ದಾರಿ ವಹಿಸಿದ್ದು, ಅವರೇ ಅಭ್ಯರ್ಥಿಯನ್ನು ಮೊದಲು ಭೇಟಿ ಮಾಡಿದ್ದಾರೆ. ಪಕ್ಷದ ಹಿತದಿಂದ ನಾವು ಈ ತೀರ್ಮಾನ ಮಾಡಿದ್ದೇವೆ ಎಂದು ಹೇಳಿದ್ದಾರೆ.

ಡಿ.ಕೆ.ಶಿವಕುಮಾರ್ ಹಾಗೂ ಸುರೇಶ್ ಅವರನ್ನು ನಂಬಿ ಬಿಜೆಪಿ ಮತ್ತು ದಳದಿಂದ ಅನೇಕ ಕಾರ್ಯಕರ್ತರು ಬಂದಿದ್ದಾರೆ. ನೀವು ನಮ್ಮ ಕೈ ಬಲಪಡಿಸಿದ್ದೀರಿ, ಯಾವುದೇ ಕಾರಣಕ್ಕೂ ನಿಮ್ಮ ಹಾಗೂ ಕಾಂಗ್ರೆಸ್ ಕಾರ್ಯಕರ್ತರನ್ನು ನಡು ನೀರಿನಲ್ಲಿ ಕೈ ಬಿಡುವ ಪ್ರಶ್ನೆಯಿಲ್ಲ. ಭವಿಷ್ಯದಲ್ಲಿಯೂ ನಿಮ್ಮ ಜೊತೆ ನಾವಿರುತ್ತೇವೆ. ಯೋಗೇಶ್ವರ್ ಅವರ ಜೊತೆಯೂ ಇರುತ್ತೇವೆ.

ಚನ್ನಪಟ್ಟಣಕ್ಕೆ ಹೊಸರೂಪವನ್ನು ನೀಡುವುದಕ್ಕೆ ನಾವು ಬದ್ಧವಾಗಿದ್ದೇವೆ. ಕರ್ನಾಟಕದ ಅಭಿವೃದ್ಧಿಯೇ ನಮ್ಮ ಸಂಕಲ್ಪ. ಈ ಗುರಿಯನ್ನಿಟ್ಟುಕೊಂಡು ಕಾಂಗ್ರೆಸ್ ಸರ್ಕಾರ ಕೆಲಸ ಮಾಡುತ್ತಿದೆ. ಚನ್ನಪಟ್ಟಣದ ಅಭಿವೃದ್ಧಿಗೆ ಮುಖ್ಯಮಂತ್ರಿಗಳ ಬಳಿ ಮಾತನಾಡಿ ಸುಮಾರು 500 ಕೋಟಿ ಅನುದಾನ ನೀಡಲಾಗಿದೆ ಎಂದು ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

## ಶರ್ಮಿಳಾ ಆರೋಪ

ಜಗನ್ ಮೋಹನ್ ರೆಡ್ಡಿ ಒಡೆತನದ ದಿನಪತ್ರಿಕೆಯಲ್ಲಿ ಪ್ರಕಟವಾದ ಸುದ್ದಿಯೊಂದರ ವಿಚಾರವಾಗಿ ಅವರು ಪತ್ರ ಬಿಡುಗಡೆ ಮಾಡಿದ್ದಾರೆ. ಸತ್ಯವನ್ನು ಪ್ರಸ್ತುತಪಡಿಸುವುದು ತನ್ನ ಕರ್ತವ್ಯ ಎಂದು ಭಾವಿಸಿ ಪತ್ರ ಬರೆದಿದ್ದೇನೆ. ವೈಎಸ್‌ಆರ್ ಜೀವಿತಾಧಿಯಲ್ಲಿ ಆಸ್ತಿ ಹಂಚಿಕೆಯಾಗಿದೆ ಎಂಬುದು ಸುಳ್ಳು ಎಂದು ತಿಳಿಸಿದ್ದಾರೆ.

ನಾನು ಮತ್ತು ತನ್ನ ತಾಯಿ ಆಸ್ತಿಗಾಗಿ ದುರಾಸೆ ಹೊಂದಿದ್ದಾರೆ ಎಂದು ವೈಎಸ್‌ಆರ್ ಬೆಂಬಲಿಗರನ್ನು ದಾರಿತಪ್ಪಿಸಬೇಡಿ. ನನಗೆ ಆಸ್ತಿಯನ್ನು ನೀಡದಿದ್ದರೂ, ನಾನು ಅದನ್ನು ಎಂದಿಗೂ ಮಾಧ್ಯಮಗಳಿಗೆ ಬಹಿರಂಗಪಡಿಸಿಲ್ಲ. ಕಾನೂನಿನ ಬಾಗಿಲನ್ನೂ ತಟ್ಟಿಲ್ಲ. ಪ್ರತಿಕೂಲ ಮತ್ತು ಆರ್ಥಿಕ ತೊಂದರೆಗಳ ನಡುವೆಯೂ ನಾನು ಶ್ರಮಪಟ್ಟಿದ್ದೇನೆ. ಕುಟುಂಬದ ಗೌರವ ಮತ್ತು ವೈಎಸ್‌ಆರ್ ಅವರ ಘನತೆಯನ್ನು ಎತ್ತಿಹಿಡಿಯಿರಿ ಎಂದು ಜಗನ್‌ಗೆ ಎಚ್ಚರಿಸಿದ್ದಾರೆ.

## ಕಂಗಾಲಾದ ಅನ್ನದಾತ

ಪಡೆದಿದ್ದಾ ಅಥವಾ ಖರೀದಿ ಮಾಡಿದ್ದಾ ಎಂಬುವುದನ್ನು ತಿಳಿದುಕೊಳ್ಳಲು ರೈತರಿಗೆ ನೋಟಿಸ್ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಟಿ ಭೂಬಾಲನ್ ಹೇಳಿದರು.

ದಾಖಲೆಗಳನ್ನು ಪರಿಶೀಲನೆ ಮಾಡಿ ಮುಂದಿನ ಕ್ರಮ ತೆಗೆದುಕೊಳ್ಳಲಾಗುತ್ತದೆ. ನೊಟೀಸ್ ನೀಡಿದ್ದಕ್ಕೆ ರೈತರು ಗಾಬರಿಯಾಗಬಾರದು. ನೊಟೀಸ್ ಬಂದ ತಕ್ಷಣ ರೈತರ ಜಮೀನುಗಳು ವಕ್ಫ್ ಗೆ ಹೋಗಲ್ಲ, ರೈತರು ನೀಡುವ ಸೂಕ್ತ ದಾಖಲೆಗಳನ್ನು ಪರಿಶೀಲನೆ ಮಾಡಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

## ಕಂಗಾಲಾದ ಅನ್ನದಾತ

ಪಡೆದಿದ್ದಾ ಅಥವಾ ಖರೀದಿ ಮಾಡಿದ್ದಾ ಎಂಬುವುದನ್ನು ತಿಳಿದುಕೊಳ್ಳಲು ರೈತರಿಗೆ ನೋಟಿಸ್ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಟಿ ಭೂಬಾಲನ್ ಹೇಳಿದರು.

ದಾಖಲೆಗಳನ್ನು ಪರಿಶೀಲನೆ ಮಾಡಿ ಮುಂದಿನ ಕ್ರಮ ತೆಗೆದುಕೊಳ್ಳಲಾಗುತ್ತದೆ. ನೊಟೀಸ್ ನೀಡಿದ್ದಕ್ಕೆ ರೈತರು ಗಾಬರಿಯಾಗಬಾರದು. ನೊಟೀಸ್ ಬಂದ ತಕ್ಷಣ ರೈತರ ಜಮೀನುಗಳು ವಕ್ಫ್ ಗೆ ಹೋಗಲ್ಲ, ರೈತರು ನೀಡುವ ಸೂಕ್ತ ದಾಖಲೆಗಳನ್ನು ಪರಿಶೀಲನೆ ಮಾಡಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಮೊದಲನೇ ಪುಟದಿಂದ...

## ಮೇಲ್ಮನವಿ ಸಲ್ಲಿಕೆ

**ಸಿದ್ದರಾಮಯ್ಯ ಮೇಲ್ಮನವಿಯಲ್ಲೇನಿದೆ :** ಜುಲೈ 26 ರಂದು ಟಿಜೆ ಅಬ್ರಹಾಂ ರಾಜ್ಯಪಾಲರಿಗೆ ದೂರು ನೀಡಿದ್ದರು. ದೂರು ನೀಡಿದ ದಿನವೇ ರಾಜ್ಯಪಾಲರು ಶೋಕಾಸ್ ನೋಟಿಸ್ ನೀಡಿದ್ದಾರೆ. ರಾಜ್ಯಪಾಲರ ಶೋಕಾಸ್ ನೋಟಿಸ್ ಹಿಂಪಡೆಯುವಂತೆ ಸಿಎಂ ರಹಿತವಾದ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯವಾಗಿತ್ತು. ಆದರೂ ರಾಜ್ಯಪಾಲರು ಕ್ಯಾಬಿನೆಟ್ ಸಲಹೆ ಪಾಲಿಸದೇ ಲೋಪವೆಸಗಿದ್ದಾರೆ. 17 ಎ ಅಡಿಯಲ್ಲಿ ಪೊಲೀಸ್ ಅಧಿಕಾರಿ ರಾಜ್ಯಪಾಲರ ಅನುಮತಿ ಕೇಳಬೇಕು. ಆದರೆ ಖಾಸಗಿ ವ್ಯಕ್ತಿಯ ದೂರು ಪರಿಗಣಿಸಿ ಅನುಮತಿ ನೀಡಲಾಗಿದೆ. ರಾಜ್ಯಪಾಲರು ಅನುಮತಿ ನೀಡುವಾಗ ವಿವೇಚನೆ ಬಳಸಿಲ್ಲ. ಈ ಅಂಶಗಳನ್ನು ಹೈಕೋರ್ಟ್ ಏಕಸದಸ್ಯ ಪೀಠ ಪರಿಗಣಿಸಿಲ್ಲ. ಏಕಸದಸ್ಯ ಪೀಠ ನ್ಯಾಯಾಂಗದ ಪರಿಶೀಲನಾ ಅಧಿಕಾರವನ್ನು ಸೂಕ್ತವಾಗಿ ಬಳಸಿಲ್ಲ. ಹೀಗಾಗಿ ಹೈಕೋರ್ಟ್ ಏಕಸದಸ್ಯ ಪೀಠದ ಆದೇಶ ರದ್ದುಪಡಿಸಬೇಕು ಎಂದು ಸಿದ್ದರಾಮಯ್ಯ ಪರ ವಕೀಲರು ಸಲ್ಲಿಸಿರುವ ಮೇಲ್ಮನವಿಯಲ್ಲಿ ಉಲ್ಲೇಖಿಸಲಾಗಿದೆ.

**ಎ1 ಸಿದ್ದರಾಮಯ್ಯ ವಿಚಾರಣೆ ಮಾತ್ರ ಬಾಕಿ:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಅಕ್ರಮ ಆರೋಪ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ವಿಚಾರಣೆ ಬಗ್ಗೆ ಕುತೂಹಲ ಹೆಚ್ಚಾಗಿದೆ. ಶುಕ್ರವಾರ ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ವಿಚಾರಣೆಗೆ ಹಾಜರಾಗಿದ್ದರು. ಮುಡಾ ಪ್ರಕರಣದ ಎಫ್‌ಐಆರ್ ನಲ್ಲಿ ಪಾರ್ವತಿ 2ನೇ ಆರೋಪಿಯಾಗಿದ್ದಾರೆ.

ಈಗಾಗಲೇ ಎ3 ಮಲ್ಲಿಕಾರ್ಜುನಸ್ವಾಮಿ, ಎ4 ದೇವರಾಜು ಕರೆಸಿ ವಿಚಾರಣೆ ನಡೆಸಲಾಗಿದೆ. ಮೈಸೂರಿನಲ್ಲಿ ಕರ್ತವ್ಯ ನಿರ್ವಹಿಸಿದ್ದ ಅಧಿಕಾರಿಗಳ ವಿಚಾರಣೆ ಸಹ ಅಂತ್ಯಗೊಂಡಿದೆ. ಹಿಂದಿನ ಡಿಸಿ ಕುಮಾರ್ ನಾಯಕ್, ಮಾಜಿ ಸಚಿವ ಬಚ್ಚೇಗೌಡ ವಿಚಾರಣೆ ನಡೆಸಲಾಗಿದೆ. ಸದ್ಯ ಮುಡಾ ಪ್ರಕರಣದಲ್ಲಿ ಎ1 ಸಿಎಂ ಸಿದ್ದರಾಮಯ್ಯ ವಿಚಾರಣೆ ಮಾತ್ರ ಬಾಕಿ ಇದೆ. ಸಿಎಂ ವಿಚಾರಣೆ ಯಾವಾಗ ಎಂಬ ಕುತೂಹಲ ಮೂಡಿದೆ.

ಮತ್ತೊಂದೆಡೆ, ರಾಜ್ಯದಲ್ಲಿ ಉಪಚುನಾವಣೆ ಕಾವು ಸಹ ಜೋರಾಗಿದೆ. ಚುನಾವಣೆಯ ಭರಾಟೆ ಸಂದರ್ಭದಲ್ಲೇ ಮುಡಾ ಸಂಬಂಧ ಸಿಎಂ ಸಿದ್ದರಾಮಯ್ಯರನ್ನು ವಿಚಾರಣೆಗೆ ಲೋಕಾಯುಕ್ತ ಒಳಪಡಿಸುತ್ತಾ ಹೈಕೋರ್ಟ್ ನಲ್ಲಿ ಮೇಲ್ಮನವಿ ಅರ್ಜಿಯ ವಿಚಾರಣೆ, ತೀರ್ಪಿನ ಬಗ್ಗೆ ಕುತೂಹಲ ಇದೀಗ ಹೆಚ್ಚಾಗಿದೆ.

## ಬಿಗ್ ರಿಲೀಫ್

ಲಾರೆನ್ಸ್ ಬಿಷ್ಣೋಯ್ ಅವರಿಗೆ ಈ ಪ್ರಕರಣ ದೊಡ್ಡ ತಲೆನೋವು ಆಗಿತ್ತು. ಫೆಬ್ರವರಿ 5, 2011 ರಂದು ಲಾರೆನ್ಸ್ ಬಿಷ್ಣೋಯ್ ಅವರು ಖಾಲ್ಸಾ ಕಾಲೇಜು ವಿದ್ಯಾರ್ಥಿ ಸತ್ವಿಂದರ್ ಅವರ ನಿವಾಸಕ್ಕೆ ಬಲವಂತವಾಗಿ ನುಗ್ಗಿ ಅವರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಹೇಳಲಾಗಿತ್ತು. ಇದೀಗ ಪ್ರಕರಣದಿಂದು ಮುಕ್ತಿಯನ್ನು ಪಡೆದಿದ್ದಾರೆ.

ಬಾಲಿವುಡ್ ಸ್ಟಾರ್ ಸಲ್ಮಾನ್ ಖಾನ್ ಅವರ ಮನೆಯ ಹೊರಗೆ ನಡೆದ ಗುಂಡಿನ ದಾಳಿ ಮತ್ತು ಮಹಾರಾಷ್ಟ್ರದ ಮಾಜಿ ಸಚಿವ ಬಾಬಾ ಸಿದ್ದಿಕ್ ಅವರ ಹತ್ಯೆಗೆ ಸಂಬಂಧಿಸಿದ ಲಾರೆನ್ಸ್ ಬಿಷ್ಣೋಯ್ ಮತ್ತು ಅವರ ಗ್ಯಾಂಗ್ ಗಳ ಕೈವಾಡವಿದೆ ಎಂದು ಸಾಬೀತು ಕೂಡ ಆಗಿದೆ. ಏಳು 'ಶೂಟರ್‌ಗಳನ್ನು' ಈ ಹಿಂದೆ ಪಂಜಾಬ್, ಹರಿಯಾಣ, ರಾಜಸ್ಥಾನ ಮತ್ತು ದೆಹಲಿಯಾದ್ಯಂತ ಬಂಧಿಸಲಾಗಿದೆ.

## ಬಟ್ಟೆಬಿಚ್ಚಿಸಿ ಥಳಿಸಿದ ಮಹಿಳೆ

ಜೊತೆಗೆ ಸ್ಥಳೀಯರೂ ಕೂಡ ಸೇರಿ ಹೊಡೆದಿರುವುದು ಕ್ಯಾಮರಾದಲ್ಲಿ ಸೆರೆಯಾಗಿದ್ದು, ಘಟನೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

ಆರೋಪಿಯು ತನಗೆ ಥಳಿಸುವುದನ್ನು ನಿಲ್ಲಿಸುವಂತೆ ಮಹಿಳೆಗೆ ಮನವಿ ಮಾಡುವುದನ್ನು ವೀಡಿಯೊದಲ್ಲಿ ಕಾಣಬಹುದು. ಸ್ಥಳೀಯರು ಯುವಕನನ್ನು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ಸದರ್ ಬಜಾರ್ ಪೊಲೀಸ್ ಠಾಣೆ ವ್ಯಾಪ್ತಿಯ ಬೇಗಂಪುಲ್ ಬಳಿ ಈ ಘಟನೆ ನಡೆದಿದೆ. ಆರೋಪಿಯನ್ನು ಅರ್ಮಾನ್ ಎಂದು ಗುರುತಿಸಲಾಗಿದೆ.

ಟ್ವಿಟರ್ ಖಾತೆಯಲ್ಲಿ ಈ ವಿಡಿಯೋ ಹಂಚಿಕೊಳ್ಳಲಾಗಿದ್ದು, ಸದ್ಯ ಎಲ್ಲೆಡೆ ವೈರಲ್ ಆಗಿದೆ. ಮಹಿಳೆ ಆರೋಪಿಯ ತಲೆಗೂದಲು ಹಿಡಿದು ಆತನ ಮುಖಕ್ಕೆ ಬಾರಿಸಿದ್ದು, ಸ್ಥಳದಲ್ಲಿದ್ದ ಇತರ ಜನರು ಕೂಡ ಆತನಿಗೆ ಒದೆಯುತ್ತಿರುವುದು ಮತ್ತು ಥಳಿಸುತ್ತಿರುವುದು ವಿಡಿಯೋದಲ್ಲಿ ಸೆರೆಯಾಗಿದೆ. ಯುವಕ ತನ್ನನ್ನು ಹೊಡೆಯುವುದನ್ನು ನಿಲ್ಲಿಸುವಂತೆ ಮನವಿ ಮಾಡಿದ್ದು,''ಮೇಡಂ, ನೀವು ನನ್ನನ್ನು ಎಷ್ಟು ಹೊಡೆಯುತ್ತೀರಿ, ದಯವಿಟ್ಟು ಬಿಟ್ಟುಬಿಡಿ'' ಎಂದು ಹೇಳಿದ್ದಾನೆ. ಮಹಿಳೆ ಕರುಣೆ ತೋರದೆ ಆರೋಪಿಯನ್ನು ಹಿಂಬಾಲಿಸಿ ಮನಬಂದಂತೆ ಥಳಿಸಿದ್ದಾರೆ.

## ತಿಳಿದುಬಂದಿದ್ದೇನು?

**ವಾಯು ಮಾಲಿನ್ಯದ ಅಧ್ಯಯನ ಹೇಗೆ?:** ಮಾಲಿನ್ಯಕಾರಕ ಅಂಶಗಳ ಬಗ್ಗೆ ಸಿಸಿಟಿವಿ ಕ್ಯಾಮರಾ ದೃಶ್ಯಗಳು, ಡ್ರೋನ್‌ಗಳ ಫೋಟೋ, ವೀಡಿಯೊ ಕ್ಲಿಪ್‌ಗಳನ್ನು ಬಳಸಿಕೊಂಡು ಅವುಗಳನ್ನು ಕೃತಕ ಬುದ್ಧಿಮತ್ತೆ ಮತ್ತು ತಾಂತ್ರಿಕ ಸಾಧನಗಳೊಂದಿಗೆ ವಿಶ್ಲೇಷಿಸಲಾಗಿದೆ. ಫಲಿತಾಂಶಗಳು ಬೆಂಗಳೂರಿನ ಗಾಳಿಯ ಗುಣಮಟ್ಟದ ಬಗ್ಗೆ ಸಂಪೂರ್ಣ ಚಿತ್ರಣವನ್ನು ನೀಡಿವೆ ಎಂದು ವರದಿ ಉಲ್ಲೇಖಿಸಿದೆ.

**ಅವಧಿ ಮೀರಿದ ವಾಹನ, ಕಳಪೆ ನಿರ್ವಹಣೆ ಕಾರಣ:** ಒಟ್ಟು ವಾಯು ಮಾಲಿನ್ಯದ ಅರ್ಧದಷ್ಟು ಸಾರಿಗೆ ವಲಯದ ಕಣ 2.5 ಹೊರಸೂಸುವಿಕೆಯಿಂದಲೇ ಆಗುತ್ತಿದೆ. ಇದಕ್ಕೆ ವಾಹನಗಳ ಕಳಪೆ ನಿರ್ವಹಣೆ ಅಥವಾ ಅವಧಿ ಮೀರಿದ ವಾಹನಗಳ ಬಳಕೆಯೂ ಕಾರಣದಿಂದಾಗಿರಬಹುದು. ಕಾರುಗಳು ಮತ್ತು ಎಸ್ ಯುವಿಗಳಿಂದ ಹೆಚ್ಚು ಮಾಲಿನ್ಯ ಸಂಭವಿಸುತ್ತಿದೆ ಶೇ 22 ರಷ್ಟು ಪಾಲು ದ್ವಿಚಕ್ರ ವಾಹನಗಳದ್ದಾಗಿದೆ. ಆದರೆ, ಕಣ 2.5 ಕಣಗಳ ಸೂಸುವಿಕೆಗೆ ಅವುಗಳ ನೇರ ಕೊಡುಗೆ ಕಡಿಮೆಯಾಗಿದೆ. ಆದರೆ, ಇವುಗಳು ಸಂಚಾರ ದಟ್ಟಣೆಯನ್ನು ಉಂಟುಮಾಡುತ್ತವೆ. ಪರಿಣಾಮವಾಗಿ ಇತರ ವಾಹನಗಳಿಂದ ಹೊರಸೂಸುವಿಕೆ ಹೆಚ್ಚಾಗುತ್ತಿದೆ ಎಂದು ಬೀಗ್ ಮಾಹಿತಿ ನೀಡಿದ್ದಾರೆ.

ಬಾಯ್ಲರ್ ಗಳಲ್ಲಿನ ಇಂಧನದ ಆಯ್ಕೆಯಿಂದ ಕೈಗಾರಿಕಾ ಮಾಲಿನ್ಯ ಉಂಟಾಗುತ್ತದೆ ಎಂದು ಅಧ್ಯಯನ ಹೇಳಿದೆ. ಕೈಗಾರಿಕೆಗಳು ಒಟ್ಟಾರೆ ಕಣ 2.5 ರ ಶೇಕಡಾ 24 ರಷ್ಟು ಹೊರಸೂಸುತ್ತವೆ. ಮುಖ್ಯವಾಗಿ ಜಿಲ್ಲೆಯ 19 ಶೇಕಡಾ ಕೈಗಾರಿಕೆಗಳಿಂದ ಮರ ಮತ್ತು ಕಲ್ಲಿದ್ದಲು ಸುಡುವಿಕೆಯಿಂದಾಗಿ ಸಂಭವಿಸುತ್ತಿದೆ. ಇದು ಕಣ 10 ರ ಹೆಚ್ಚಿನ ಹೊರಸೂಸುವಿಕೆಗೆ ಕಾರಣವಾಗಿದೆ.

## ಬರುವುದು ಖಚಿತ

**ಕ್ಯಾನ್ಸರ್‌ಗೆ ಕಾರಣವಾಗಬಹುದು:** ಅದೂ ಅಲ್ಲದೆ ಬೋರ್ ವೆಲ್ ನೀರಿನಲ್ಲಿ ಯುರೇನಿಯಂ ಮಟ್ಟ ಹೆಚ್ಚಾಗಿದೆ ಎಂದು ಸಂಶೋಧನೆಗಳಿಂದ ತಿಳಿದು ಬಂದಿದೆ. ಸಾಮಾನ್ಯವಾಗಿ ಕುಡಿಯುವ ನೀರಿನಲ್ಲಿ ಯುರೇನಿಯಂ ಮಟ್ಟ ಹೆಚ್ಚಾಗಿದ್ದರೆ ಕ್ಯಾನ್ಸರ್, ಶ್ವಾಸಕೋಶ, ಮೂತ್ರಪಿಂಡ ಮತ್ತು ಚರ್ಮದ ಕಾಯಿಲೆಗಳಿಗೆ ಕಾರಣವಾಗಬಹುದು. ಹಾಗಾಗಿ ತಜ್ಞರು ಕೊಳವೆಬಾವಿಗಳ ನೀರನ್ನು ಕುಡಿಯುವುದನ್ನು ತಪ್ಪಿಸಿ ಎನ್ನುತ್ತಾರೆ. ಅದೂ ಅಲ್ಲದೆ ಈ ನೀರು ಸ್ನಾನಕ್ಕೂ ಯೋಗ್ಯವಲ್ಲ. ಕೆಲವರಿಗೆ ಇದರಿಂದ ಚರ್ಮದಲ್ಲಿ ಅಲರ್ಜಿ ಉಂಟಾಗಬಹುದು ಅಥವಾ ಕೂದಲು ಉದುರಲು ಪ್ರಾರಂಭವಾಗಬಹುದು. ಇದೆಲ್ಲಾ ಕಾರಣಗಳಿಂದ ಬೋರ್ ವೆಲ್ ನೀರು ದಿನ ಬಳಕೆಗೆ ಒಳ್ಳೆಯದಲ್ಲ ಎನ್ನಲಾಗುತ್ತದೆ. ಹಾಗಾಗಿ ಸಾಧ್ಯವಾದಷ್ಟು ಈ ನೀರನ್ನು ತ್ಯಜಿಸಿ ನಿಮ್ಮ ಅಮೂಲ್ಯವಾದ ಆರೋಗ್ಯವನ್ನು ಕಾಪಾಡಿಕೊಳ್ಳಿ.

## ಪಡೆಯುತ್ತೆ

ಯೋಗೇಶ್ವರ್ ಗೆಲುವು ನಿಶ್ಚಿತ ಎಂದು ಭವಿಷ್ಯ ನುಡಿದರು.

ನಿಖಿಲ್ ಅಲ್ಲ ಕುಮಾರಸ್ವಾಮಿ ನಿಂತರೂ ಏನು ಮಾಡಲಾಗಲ್ಲ. ಯೋಗೇಶ್ವರ್ ಆಚೆ ಕಳುಹಿಸಲು ವಿಜಯೇಂದ್ರ, ಯಡಿಯೂರಪ್ಪ ಕಾರಣ. ಬಿಜೆಪಿ ಪಕ್ಷದ ಗುಂಪುಗಾರಿಕೆಯಿಂದ ಯೋಗೇಶ್ವರ್ ಆಚೆ ಹೋದರು. ಪಾಪ ಈಗ ನಿಖಿಲ್‌ನನ್ನ ಚುನಾವಣಾ ಆಹುತಿ ಮಾಡ್ತಿದ್ದಾರೆ ಎಂದು ವ್ಯಂಗ್ಯವಾಡಿದರು.

ಕುಮಾರಸ್ವಾಮಿ 2 ಬಾರಿ ಲಾಟರಿಯಲ್ಲಿ ಸಿಎಂ ಆದವರು. ಕಳೆದ ಚುನಾವಣೆಯಲ್ಲಿ ಹೆಚ್‌ಡಿಕೆ ಗಾಡಿ ನಿಂತು ಹೋಗಿತ್ತು. ಪಾಪ ಮುಳುಗುವ ಹಡಗು ಎಂದು ಮಂಡ್ಯ ಜನರ ಕೈ ಹಿಡಿದರು. ಉನ್ನತ ಹುದ್ದೆಯಲ್ಲಿದ್ದು ಕುಮಾರಸ್ವಾಮಿ ಏನ್ ಮಾಡ್ತಿದ್ದಾರೆ. ಮಂಡ್ಯದಲ್ಲಿ 4 ದಿನ ಬೆಂಗಳೂರಲ್ಲಿ 4 ದಿನ ಇರ್ತಾರೆ. ದೇಶ–ವಿದೇಶ ಸುತ್ತಿ ಬೃಹತ್ ಕೈಗಾರಿಕಾಗಳ ಸ್ಥಾಪನೆ ಮಾಡಬೇಕಿತ್ತು. ಆದರೆ ರಾಜ್ಯಕ್ಕೆ ಬಂದಾಗಲೆಲ್ಲಾ ಮುಡಾ ಕೇಸು, ಡಿಕೆಶಿ ಮುಖ ಕೆರೆಯುವ ಕೆಲಸ ಮಾಡ್ತಿದ್ದಾರೆ. ದೊಡ್ಡ ದೊಡ್ಡ ಕೈಗಾರಿಕಾ ತಂದು ಮಂಡ್ಯ ಜನರ ಋಣ ತೀರಿಸುವ ಕೆಲಸ ಕುಮಾರಸ್ವಾಮಿ ಮಾಡಬೇಕು ಎಂದು ವಾಗ್ದಾಳಿ ನಡೆಸಿದರು.

## ಪರದಾಟ!

ತಿಳಿದು ಬಂದಿದೆ.

ಬಳ್ಳಾರಿಯಲ್ಲಿ ಸರ್ಜರಿ ಬೇಡ ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಸರ್ಜರಿ ಮಾಡಿಸಿ ಅಂತ ದರ್ಶನ್ ಪಟ್ಟು ಹಿಡಿದಿದ್ದಾನೆ. ನಿನ್ನೆ ಎರಡು ಬ್ಯಾಗ್ ಹಿಡಿದು ನಡೆದು ಹೋಗಲು ಆಗದೆ ದರ್ಶನ್ ಒದ್ದಾಡಿದ್ದಾನೆ. ದರ್ಶನ್ ಸ್ಥಿತಿ ಕಂಡು ಕುಟುಂಬಸ್ಥರು ಮರಗಿದ್ದಾರೆ. ಸರ್ಜರಿಗಾಗಿ ಬೆಂಗಳೂರಿಗೆ ಶಿಫ್ಟ್ ಬಗ್ಗೆ ದರ್ಶನ್ ಕೋರ್ಟ್ ಮೊರೆ ಹೋಗಲಿದ್ದಾನೆ ಎಂದು ತಿಳಿದು ಬಂದಿದೆ.

### ಹಾಸನಾಂಬೆ ದೇವಿ ದರ್ಶನ

## ಎರಡನೇ ದಿನವೂ ಭಕ್ತರ ದಂಡು

**ಹಾಸನ:** ಹಾಸನಾಂಬೆ ದೇವಿ ದರ್ಶನಕ್ಕೆ ಎರಡನೇ ದಿನವಾದ ಶನಿವಾರದಂದು ಭಕ್ತರ ದಂಡು ಹರಿದು ಬರುತ್ತಿದೆ.



ನಸುಕಿನ ನಾಲ್ಕು ಗಂಟೆಯಿಂದಲೇ ಹಾಸನ ದೇವಿ ದರ್ಶನ ಆರಂಭಗೊಂಡಿದೆ. ಮಧ್ಯರಾತ್ರಿಯಿಂದಲೇ ಸರತಿ ಸಾಲಿನಲ್ಲಿ ನಿಂತಿದ್ದ ಭಕ್ತರು ದೇವಿಯ ದರ್ಶನ ಪಡೆಯುತ್ತಿದ್ದಾರೆ.

ವೀಕೆಂಡ್ ಹಿನ್ನೆಲೆಯಲ್ಲಿ ಭಕ್ತರ ಸಂಖ್ಯೆ ಹೆಚ್ಚಾಗಿದೆ. ಸಾವಿರ ರೂ., ಮುನ್ನೂರು ರೂ. ಪಾವತಿಸಿದರೆ ವಿಶೇಷ ದರ್ಶನವಿರುತ್ತದೆ. ಈ ಸಾಲಿನಲ್ಲೂ ಸಾವಿರಾರು ಸಂಖ್ಯೆಯಲ್ಲಿ ಭಕ್ತರಿದ್ದಾರೆ. ಅತಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಹಾಸನಾಂಬೆ ದೇವಿ ದರ್ಶನ ಪಡೆಯುತ್ತಿದ್ದಾರೆ.

ಹೊರ ಜಿಲ್ಲೆ, ಹೊರ ರಾಜ್ಯಗಳಿಂದಲೂ ಭಕ್ತರು, ರಾಜಕೀಯ ಗಣ್ಯರು, ಸೆಲೆಬ್ರಿಟಿಗಳು ಆಗಮಿಸಿ ದೇವಿಯ ದರ್ಶನಕ್ಕೆ ಆಗಮಿಸುತ್ತಿದ್ದಾರೆ.

ವರ್ಷಕ್ಕೊಮ್ಮೆ ದರ್ಶನ ನೀಡುವ ಹಾಸನಾಂಬೆ ದೇಗುಲದ ಗರ್ಭಗುಡಿಯ ಬಾಗಿಲನ್ನು ಗುರುವಾರ ಶಾಸ್ತ್ರೋಕ್ತವಾಗಿ ತೆರೆಯಲಾಯಿತು.

## ಪತ್ನಿಯನ್ನ ಚುಡಾಯಿಸಿದ್ದಕ್ಕೆ ಹತ್ಯೆ ಮಾಡಿದ ಪತಿ!

**ಕೋಲಾರ:** ಪತ್ನಿಯನ್ನ ಚುಡಾಯಿಸಿದ್ದಕ್ಕೆ ವ್ಯಕ್ತಿಯೊಬ್ಬನನ್ನು ಬರ್ಬರವಾಗಿ ಹತ್ಯೆ ಮಾಡಿದ ಘಟನೆ ಕೋಲಾರ ನಗರದ ಜಮಾಲ್ ಷಾ ನಗರದಲ್ಲಿ ತಡರಾತ್ರಿ ನಡೆದಿದೆ.

ಅರ್ಬಾಜ್ (25) ಹತ್ಯೆಯಾದ ವ್ಯಕ್ತಿ. ಅಮ್ಜಾದ್ ಹತ್ಯೆ ಮಾಡಿದ ಆರೋಪಿ. ಆರೋಪಿಯನ್ನ ಬಂಧಿಸಿದ ಪೊಲೀಸರು. ಕಳೆದ ಕೆಲವು ದಿನಗಳಿಂದ ಅಮ್ಜಾದ್ ಪತ್ನಿ ಮೇಲೆ ಕಣ್ಣು ಹಾಕಿದ್ದ ಅರ್ಬಾಜ್. ಮೊದಮೊದಲು ಅಷ್ಟಾಗಿ ಗಮನಿಸಿರಲಿಲ್ಲ, ಪದೇಪದೆ ಪತ್ನಿಯನ್ನು ಚುಡಾಯಿಸುವುದು ಕೆಣಕುವುದು ಮಾಡಿದ್ದ ಅರ್ಬಾಜ್. ಈ ವಿಚಾರ ಗೊತ್ತಾಗಿ ಎಚ್ಚರಿಕೆ ಕೊಟ್ಟಿದ್ದ ಅಮ್ಜಾದ್. ಆದರೂ ಪತ್ನಿಯನ್ನು ಚುಡಾಯಿಸುವುದು ಮುಂದುವರಿಸಿದ್ದ ಅರ್ಬಾಜ್. ಈ ವಿಚಾರವಾಗಿ ಇಬ್ಬರ ನಡುವೆ ಎರಡು ಮೂರು ಬಾರಿ ಗಲಾಟೆ ನಡೆದಿತ್ತು. ಇದರಿಂದ ರೋಸಿ ಹೋಗಿದ್ದ ಪತಿ.

ನಿನ್ನೆ ತಡರಾತ್ರಿ ಇದೇ ವಿಚಾರಕ್ಕೆ ಮತ್ತೆ ಗಲಾಟೆ ಮಾಡಿಕೊಂಡಿದ್ದಾರೆ. ಮೊದಲೇ ಮುಗಿಸಲು ಸ್ಕೆಚ್ ಹಾಕಿದವನಂತೆ ಚಾಕು ತೆಗೆದು ಅರ್ಬಾಜ್ ಎದೆಗೆ ಇರಿದು ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಘಟನೆ ಕಂಡು ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ. ತಡರಾತ್ರಿ ಕೊಲೆ ನಡೆದಿರುವ ವಿಚಾರ ತಿಳಿಯುತ್ತಿದ್ದಂತೆ ಸ್ಥಳಕ್ಕೆ ದೌಡಾಯಿಸಿದ್ದ ಪೊಲೀಸರು. ಆರೋಪಿ ಅಮ್ಜಾದ್‌ನನ್ನ ಬಂಧಿಸಿ ವಿಚಾರಣೆ ಮುಂದುವರಿಸಿದ್ದಾರೆ. ಕೋಲಾರ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.




## ಸೈಟ್ ತೋರಿಸುವುದಾಗಿ ಹೇಳಿ ಬಿಲ್ಡರ್ ರಶೀದ್ ಲೈಂಗಿಕ ಕಿರುಕುಳ



**ಮಂಗಳೂರು:** ನಿವೇಶನ ತೋರಿಸುವುದಾಗಿ ಕಾರಿನಲ್ಲಿ ಕರೆದುಕೊಂಡು ಹೋಗಿ ಬಿಲ್ಡರ್ ತನಗೆ ಲೈಂಗಿಕ ಕಿರುಕುಳ ನೀಡಿದ್ದಾನೆ ಎಂದು ಸಂತ್ರಸ್ತೆ ಮಂಗಳೂರು ಮಹಿಳಾ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ದೂರು ಆಧರಿಸಿ ಬಿಲ್ಡರ್ ರಶೀದ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

ನಿವೇಶನ ನೋಡಲೆಂದು ಮಹಿಳೆ ಅಕ್ಟೋಬರ್ 21ರಂದು ಬಿಲ್ಡರ್ ರಶೀದ್ ಜೊತೆ ಕಾರಿನಲ್ಲಿ ಕುಶಾಲನಗರಕ್ಕೆ ತೆರಳಿದ್ದರು. ಮಹಿಳೆ ಹೋಟೇಲ್ ನಲ್ಲಿ ಇಬ್ಬರಿಗೂ ಪ್ರತ್ಯೇಕ ರೂಮ್ ಬುಕ್ ಮಾಡಿದ್ದರು. ಆದರೆ ಬಿಲ್ಡರ್ ರಶೀದ್ ಒಂದೇ ರೂಂನಲ್ಲಿ ಇರುವ ಇಂಗಿತ ವ್ಯಕ್ತಪಡಿಸಿದ್ದಾನೆ. ಇದಕ್ಕೆ ಒಪ್ಪದ ಮಹಿಳೆ ವಿರಾಜಪೇಟೆಯಲ್ಲಿನ ತನ್ನ ತಂಗಿಯ ಮನೆಯಲ್ಲಿ ಉಳಿದುಕೊಂಡಿದ್ದಾರೆ.

ಮರುದಿನ ಬಿಲ್ಡರ್ ರಶೀದ್ ಜೊತೆ ಮಹಿಳೆ ನಿವೇಶನ ನೋಡಲು ಹೋಗಿದ್ದಾರೆ. ಈ ವೇಳೆ ಬಿಲ್ಡರ್ ರಶೀದ್ ಅಸಭ್ಯವಾಗಿ ವರ್ತಿಸಿದ್ದಾನೆ. ಅಲ್ಲದೇ, ದಾರಿ ಮಧ್ಯೆ ಹಣದ ಆಮಿಷ ತೋರಿಸಿ ಅತ್ಯಾಚಾರಕ್ಕೆ ಯತ್ನಿಸಿದನು ಎಂದು ಮಹಿಳೆ ಆರೋಪಿಸಿದ್ದಾರೆ. ಅಲ್ಲದೇ, ಈ ವಿಚಾರ ಯಾರಿಗಾದರು ತಿಳಿಸಿದರೇ ಹಲ್ಲೆ ಮಾಡುವುದಾಗಿ ಬೆದರಿಕೆ ಸಹ ಹಾಕಿದ್ದಾನೆ ಎಂದು ಮಹಿಳೆ ಆರೋಪಿಸಿದ್ದಾರೆ. ಆರೋಪಿ ರಶೀದ್ ವಿರುದ್ಧ ಮಂಗಳೂರು ಮಹಿಳಾ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

## ಸ್ಪರ್ಧಾತ್ಮಕ ಪರೀಕ್ಷೆಗೆ ನಿಷೇಧಾಜ್ಞೆ

**ಚಾಮರಾಜನಗರ;** ಕಂದಾಯ ಇಲಾಖೆಯಲ್ಲಿ ವಿವಿಧ ಜಿಲ್ಲೆಗಳಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ (ಸ್ಥಳೀಯ) ವೃಂದದ ಒಟ್ಟು ಒಂದು ಸಾವಿರ ಗ್ರಾಮ ಆಡಳಿತಾಧಿಕಾರಿ ಹುದ್ದೆಯ ನೇರ ನೇಮಕಾತಿಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಅಕ್ಟೋಬರ್ 26ರಂದು ಚಾಮರಾಜನಗರ ಪಟ್ಟಣದ ಒಟ್ಟು 3 ಪರೀಕ್ಷಾ ಕೇಂದ್ರಗಳಲ್ಲಿ ನಡೆಯುತ್ತಿದ್ದು, ಪರೀಕ್ಷಾ ಕಾರ್ಯವನ್ನು ನ್ಯಾಯೋಚಿತವಾಗಿ ನಡೆಸುವ ಸದುದ್ದೇಶದಿಂದ ಹಾಗೂ ಪರೀಕ್ಷಾ ಅಕ್ರಮಗಳನ್ನು ತಡೆಗಟ್ಟಲು ಕಾನೂನು ಸುವ್ಯವಸ್ಥೆಗೆ ಭಂಗ ಉಂಟಾಗದಂತೆ ಕೇಂದ್ರದ ಸುತ್ತಲ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ಸಾರ್ವಜನಿಕ ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಆದೇಶ ಹೊರಡಿಸಿದ್ದಾರೆ. ಚಾಮರಾಜನಗರ ಸತ್ತಿ ರಸ್ತೆಯಲ್ಲಿರುವ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು, ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು, ಶಂಕರಪುರ ಚನ್ನಿಪುರಮೋಳೆ ರಸ್ತೆಯಲ್ಲಿರುವ ಸೇವಾಭಾರತಿ ಸಂಯುಕ್ತ ಪದವಿ ಪೂರ್ವ ಕಾಲೇಜುಗಳಲ್ಲಿ ಪರೀಕ್ಷೆ ನಡೆಯಲಿದೆ. ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಪರೀಕ್ಷಾ ದಿನದಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ನಿಷೇಧಾಜ್ಞೆ ವಿಧಿಸಲಾಗಿದ್ದು, ಪರೀಕ್ಷಾ ಕೇಂದ್ರಗಳ 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಜೆರಾಕ್ಸ್ ಮತ್ತು ಕಂಪ್ಯೂಟರ್ ಅಂಗಡಿ ಬೆಳಿಗ್ಗೆ 6 ರಿಂದ ಮಧ್ಯಾಹ್ನ 3 ಗಂಟೆವರೆಗೆ ಮುಚ್ಚಲು ಆದೇಶಿಸಲಾಗಿದೆ.

## ಮಾಧ್ಯಮ ಮಾನ್ಯತೆ ಹೊಂದಿದ ಪತ್ರಕರ್ತರಿಗೆ ಮೀಡಿಯಾ ಕಿಟ್

**ಚಾಮರಾಜನಗರ:** ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಸೇರಿರುವ ಪತ್ರಕರ್ತರನ್ನು ಪ್ರೋತ್ಸಾಹಿಸುವ ಸಲುವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2024-25ನೇ ಸಾಲಿಗೆ ಪರಿಶಿಷ್ಟ ಜಾತಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಮಾಧ್ಯಮ ಮಾನ್ಯತೆ ಹೊಂದಿರುವ ಪತ್ರಕರ್ತರಿಗೆ ''ಮೀಡಿಯಾ ಕಿಟ್'' ವಿತರಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮಾಧ್ಯಮ ಮಾನ್ಯತೆ ಪಡೆದ ಪತ್ರಕರ್ತರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ವಿಭಾಗದಿಂದ ಅಥವಾ ಆಯಾ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಗಳಿಂದ ಅರ್ಜಿ ನಮೂನೆಯನ್ನು ಪಡೆದುಕೊಂಡು, ಇಲಾಖೆಯ ಮಾನ್ಯತಾ ಕಾರ್ಡು, ಜನ್ಮ ದಿನಾಂಕ, ಖಾಯಂ ವಿಳಾಸ, ವಿದ್ಯಾರ್ಹತೆ, ಜಾತಿ (ಉಪಜಾತಿ), ಪತ್ರಿಕಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸೇವಾನುಭವ, ವೇತನ ವಿವರಗಳನ್ನೊಳಗೊಂಡ ಮಾಹಿತಿಯನ್ನು ಭರ್ತಿ ಮಾಡಿ ಸ್ವ-ವಿಳಾಸವಿರುವ ಲಕೋಟೆಯೊಂದಿಗೆ ಅರ್ಜಿಯನ್ನು ಸಲ್ಲಿಸಬೇಕು.

ಅರ್ಜಿ ಸಲ್ಲಿಸಬಯಸುವವರು ಅರ್ಜಿಯೊಂದಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ 2024-25ನೇ ಸಾಲಿನಲ್ಲಿ ವಿತರಿಸಲಾಗಿರುವ ಮಾಧ್ಯಮ ಮಾನ್ಯತಾ ಕಾರ್ಡು ಹೊಂದಿರುವ ಬಗ್ಗೆ ದೃಢೀಕೃತ ಜೆರಾಕ್ಸ್ ಪ್ರತಿ, ಜಾತಿ ದೃಢೀಕರಣಕ್ಕಾಗಿ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರದ ದೃಢೀಕೃತ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು ಹಾಗೂ ಅರ್ಜಿಯಲ್ಲಿ ನಮೂದಿಸಲಾಗಿರುವ ಎಲ್ಲಾ ಮಾಹಿತಿಗಳಿಗೆ ಅಧಿಕೃತ ಪೂರಕ ದಾಖಲೆಗಳ ದೃಢೀಕೃತ ಪ್ರತಿಗಳನ್ನು ಲಗತ್ತಿಸಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕದೊಳಗಾಗಿ ಸಲ್ಲಿಸಬೇಕು. ನಿಗದಿತ ದಿನಾಂಕದ ನಂತರ ಸಲ್ಲಿಸಲಾಗುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರ್ಕಾರದ ವ್ಯಾಪ್ತಿಗೆ ಒಳಪಡುವ ನಿಗಮ, ಮಂಡಳಿಗಳಿಂದ ಹಾಗೂ ಸರ್ಕಾರದ ಯಾವುದೇ ಇಲಾಖೆಗಳಿಂದ ಈ ಯೋಜನೆಯಡಿ ಮಾಧ್ಯಮ ಕಿಟ್‌ಗಳನ್ನು ಪಡೆದಿರುವುದಿಲ್ಲ ಎಂದು ರೂ. 100 ರ ಬಾಂಡ್ ನಲ್ಲಿ ಮುಚ್ಚಳಿಕೆ ಪತ್ರವನ್ನು ಸಲ್ಲಿಸಬೇಕು. ಮಾಧ್ಯಮ ಕಿಟ್ ಒದಗಿಸಲು ಪತ್ರಕರ್ತರ ಸೇವಾ ಹಿರಿತನ, ವಯೋಮಿತಿ ಹಾಗೂ ಸೇವಾನುಭವದ ಗರಿಷ್ಠತೆಯನ್ನು ಪರಿಗಣಿಸಲಾಗುವುದು. ಅರ್ಜಿಯೊಂದಿಗೆ ಕರ್ತವ್ಯ ನಿರ್ವಹಿಸುತ್ತಿರುವ ಮಾಧ್ಯಮ ಸಂಸ್ಥೆಯ ವಿವರ, ಪ್ರಸಾರ ಸಂಖ್ಯೆ, ಪತ್ರಿಕೆಯ ಮಾಧ್ಯಮ ಪಟ್ಟಿಯ ವಿವರ, ಜಾತಿ ಪ್ರಮಾಣ ಪತ್ರ, ವಿಳಾಸ ಹಾಗೂ ವಯಸ್ಸನ್ನು ದೃಢೀಕರಿಸುವ ದಾಖಲೆಗಳ ಪ್ರತಿಯನ್ನು ಲಗತ್ತಿಸಿ ದಿನಾಂಕ: 10-11-2024ರ ಸಂಜೆ 5 ಗಂಟೆಯೊಳಗೆ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿಗಳಿಗೆ ಸಲ್ಲಿಸಬೇಕು. ಲಕೋಟೆಯ ಮೇಲ್ಭಾಗದಲ್ಲಿ ''ಪ.ಜಾ ಹಾಗೂ ಪ.ಪಂ. ಮಾಧ್ಯಮ ಮಾನ್ಯತೆ ಪತ್ರಕರ್ತರಿಗೆ ಮೀಡಿಯಾ ಕಿಟ್ ಗಾಗಿ ಅರ್ಜಿ ಎಂದು ನಮೂದಿಸಿರಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲೆಗಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವಾರ್ತಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಇಲಾಖೆಯ ಆಯುಕ್ತರಾದ ಹೇಮಂತ್ ಎಂ. ನಿಂಬಾಳ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಗ್ಗಲೂರಲ್ಲಿ 200 ಹಾಸಿಗೆಗಳ ಇಎಸ್‌ಐ ಆಸ್ಪತ್ರೆ ಶಂಕುಸ್ಥಾಪನೆ

**ಬೆಂಗಳೂರು:** ನೌಕರರ ರಾಜ್ಯ ವಿಮಾ ನಿಗಮ (ಇಎಸ್ ಐಸಿ) ಭಾರತ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುವ ಶಾಸನಬದ್ಧ ಸಂಸ್ಥೆಯಾಗಿದ್ದು, ಆನೇಕಲ್ ತಾಲೂಕಿನ ಬೊಮ್ಮಸಂದ್ರದ ಇಗ್ಗಲೂರು ಗ್ರಾಮದ 200 ಹಾಸಿಗೆಗಳ ಇಎಸ್‌ಐ ಆಸ್ಪತ್ರೆಯ ಶಂಕುಸ್ಥಾಪನಾ ಸಮಾರಂಭವನ್ನು ಅಕ್ಟೋಬರ್ 29 ರಂದು ವರ್ಚುವಲ್ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನೆರವೇರಿಸಲಿದ್ದಾರೆ. ಸಮಾರಂಭದಲ್ಲಿ ಗೌರವಾನ್ವಿತ ಸಚಿವರು, ಸಂಸದರು ಮತ್ತು ಶಾಸಕರು ಮತ್ತು ಇತರ ಚುನಾಯಿತ ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಜೊತೆಗೆ ಹಲವಾರು ಇತರ ವಿಐಪಿಗಳು / ಗಣ್ಯರು ಮತ್ತು ವಿಮೆ ಮಾಡಿದ ವ್ಯಕ್ತಿಗಳು, ಇಎಸ್‌ಐ ಯೋಜನೆ ಮತ್ತು ಇತರ ಪಾಲುದಾರರು ಸುಮಾರು 400 ರಿಂದ 500 ಜನರು ಪಾಲ್ಗೊಳ್ಳಲಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮುತ್ತುರಾಜು ಸಿ, ಸಾಮಾಜಿಕ ಭದ್ರತಾ ಅಧಿಕಾರಿ, ಮೊಬೈಲ್ ಸಂಖ್ಯೆ 9844939685 ಗೆ ಸಂಪರ್ಕಿಸಬಹುದಾಗಿದೆ ಎಂದು ನೌಕರರ ರಾಜ್ಯ ವಿಮಾ ನಿಗಮದ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಆಹಾರ ನಿಗಮದ 51 ನೇ ವರ್ಷದ ದಿನಾಚರಣೆ

**ಬೆಂಗಳೂರು:** ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ 51 ನೇ ವರ್ಷದ ನಿಗಮದ ದಿನಾಚರಣೆ ಕಾರ್ಯಕ್ರಮವನ್ನು ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಹೆಚ್. ಮುನಿಯಪ್ಪನವರು ಉದ್ಘಾಟಿಸಿದರು.

ಮೌಲಾನ ಅಬ್ದುಲ್ ಕಾಲಂ ಅಜಾದ ಭವನದಲ್ಲಿ ನಡೆದ ಕಾರ್ಯಕ್ರಮ ನಂತರ ಮಾತನಾಡಿದ ಸಚಿವರು ಮುಖ್ಯಮಂತ್ರಿ ದಿವಂಗತ ದೇವರಾಜ್ ಅರಸ್ ರವರು ನಿರ್ಮಿಸಿದ ಈಆಹಾರ ನಿಗಮ ಇಂದಿಗೆ 51ನೇ ವರ್ಷದ ಸಂಭ್ರಮಾಚರಣೆಯ ಸಂದರ್ಭದಲ್ಲಿ ನಿಗಮದ ಎಲ್ಲಾ ಅಧಿಕಾರಿಗಳಿಗೆ ಶುಭಾಶಯಗಳನ್ನು ಕೋರಿದರು.

ಶೋಷಿತರ ಹಾಗೂ ಹಿಂದುಳಿದ ವರ್ಗಗಳ ಪರವಾಗಿ ದ್ವನಿಯಾಗಿ ಕೆಲಸ ಮಾಡಿದ ದೇವರಾಜ್ ಅರಸ್ ರವರನ್ನು ಸ್ಮರಿಸುತ್ತಾ ಈ ನಿಗಮದಿಂದ ಬಡವರಿಗಾಗಿ ಉತ್ತಮ ಕೆಲಸ ಮಾಡುತ್ತಿದ್ದೇವೆ . ರೈತರಿಂದ ರಾಗಿ ,ಜೋಳವನ್ನು ಖರೀದಿಸಿ ಅದನ್ನು ಸಮರ್ಪಕವಾಗಿ ಜನರಿಗೆ ತಲುಪಿಸುತ್ತಿದ್ದೇವೆ ಎಂದರು

ನಿಗಮದ ಎಲ್ಲಾ ಬೇಡಿಕೆಗಳನ್ನು ಅತಿ ಬೇಗನೆ ಈಡೇರಿಸಲು ನಾನು ಮತ್ತು ಅಧ್ಯಕ್ಷರ ನೇತೃತ್ವದಲ್ಲಿ ಒಂದು ಸಭೆಯನ್ನು ನಡೆಸಿ ತೀರ್ಮಾನವನ್ನು ತೆಗೆದುಕೊಳ್ಳುತ್ತೇವೆ ಎಂದರು. ನಂತರ ಸಗಟು ಮಳಿಗೆಯಲ್ಲಿ ಕಾರ್ಯ ನಿರ್ವಹಿಸುವ ಹಮಾಲಿಗಳನ್ನು ಸನ್ಮಾನಿಸಿದರು. ಅಧ್ಯಕ್ಷರಾದ ಬಿ.ಜಿ.ಗೋವಿಂದಪ್ಪ, ನಿಗಮ ನಿರ್ದೇಶಕ ಚಂದ್ರಕಾಂತ್,ಪ್ರಾಧಾನ ವ್ಯವಸ್ಥಾಪಕರಾದ ಮಂಜುನಾಥ್, ಸಚಿವರ ಆಪ್ತ ಕಾರ್ಯದರ್ಶಿ ಡಾ. ಹೆಚ್. ನಟರಾಜ್, ಹಾಗೂ ನಿಗಮದ ಅಧಿಕಾರಿಗಳು ಉಪಸ್ಥಿತರಿದ್ದರು.



ಸಣ್ಣ ನೀರಾವರಿ ಸಚಿವ ಎನ್.ಎಸ್.ಬೋಸ್ ರಾಜುರಿಂದ ಉದ್ಘಾಟನೆ

## ಸಹಿ ಫಸಲ್ ತರಬೇತಿ ಕಾರ್ಯಾಗಾರ

**ಕೋಲಾರ:** ದೇಶ ಮತ್ತು ರಾಜ್ಯದಲ್ಲಿ ಅಂತರ್ಜಲ ಮಟ್ಟವನ್ನು ಅಧ್ಯಯನ ಮಾಡಿ, ಅಂತರ್ಜಲ ಕುಸಿದ ರಾಜ್ಯಗಳಲ್ಲಿ ಅಂತರ್ಜಲವನ್ನು ಹೆಚ್ಚಿಸಲು ಅಟಲ್ ಭೂಜಲ್ ಯೋಜನೆ ಹಾಗೂ ಸಹಿ ಫಸಲ್-ಕೃಷಿಯಲ್ಲಿ ನೀರಿನ ಬಳಕೆಯ ದಕ್ಷತೆಯನ್ನು ಹೆಚ್ಚಿಸುವ ಯೋಜನೆಗಳನ್ನು 2020-2025 ವರ್ಷಗಳಲ್ಲಿ ಜಾರಿಗೊಳಿಸಬೇಕು ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸ್ ರಾಜು ರವರು ಹೇಳಿದರು.

ಇಂದು ಕೋಲಾರದ ತೋಟಗಾರಿಕಾ ಮಹಾವಿದ್ಯಾಲಯದಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ, ಜಲ ಶಕ್ತಿ ಸಚಿವಾಲಯ ಜಲಸಂಪನ್ಮೂಲ, ನದಿ ಅಭಿವೃದ್ಧಿ ಮತ್ತು ಗಂಗಾ ಪುನರುಜ್ಜೀವನ ಇಲಾಖೆ, ಭಾರತ ಸರ್ಕಾರ, ರಾಜ್ಯ ಕಾರ್ಯಕ್ರಮ ನಿರ್ವಹಣಾ ಘಟಕ, ಕರ್ನಾಟಕ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಬಾಗಲಕೋಟೆ, ಕೃಷಿ ವಿಜ್ಞಾನ ಕೇಂದ್ರ, ಕೋಲಾರ ಇವರ ಸಹಯೋಗದಲ್ಲಿ ಜಿಲ್ಲಾ ಮಟ್ಟದ ತರಬೇತಿ ಕಾರ್ಯಾಗಾರವನ್ನು ಉದ್ಘಾಟನೆ ಮಾಡಿ ಮಾತನಾಡಿದ ಅವರು ಕೋಲಾರ ಜಿಲ್ಲೆಯಲ್ಲಿ ಅಂತರ್ಜಲವನ್ನು ಹೆಚ್ಚಿಸಲು ಹಾಗೂ ಕಡಿಮೆ ನೀರನ್ನು ಬಳಸಿ ಹೆಚ್ಚು ಫಸಲನ್ನು ತೆಗೆಯುವ ಕುರಿತಾದ ''ಸಹಿ ಫಸಲ್'' ಕಾರ್ಯಾಗಾರವನ್ನು ರೈತರು ಸದುಪಯೋಗಪಡಿಸಿಕೊಳ್ಳಬೇಕು, ಅಂತರ್ಜಲ ಅತಿ ಬಳಕೆಯಾಗುವ ಪ್ರದೇಶಗಳಲ್ಲಿ ಸಮುದಾಯ ಸಹಭಾಗಿತ್ವದೊಂದಿಗೆ ಅಂತರ್ಜಲದ ಅತಿ ಬಳಕೆಯನ್ನು ಕಡಿಮೆ ಮಾಡುವುದು, ಅಂತರ್ಜಲದ ಸುಸ್ಥಿರ ನಿರ್ವಹಣೆ ಹಾಗೂ ಸುದಾರಣೆಗೆ ಪೂರಕ ಉಪಕ್ರಮಗಳನ್ನು ಉತ್ತೇಜಿಸುವ ಉದ್ದೇಶದೊಂದಿಗೆ ಕೇಂದ್ರ ಸರ್ಕಾರವು ಅಟಲ್ ಭೂಜಲ ಯೋಜನೆಯನ್ನು ಜಾರಿಗೆ ತಂದಿದೆ ಎಂದರು.

ದೇಶದಲ್ಲಿ ಸುಮಾರು ಏಳು ರಾಜ್ಯಗಳಲ್ಲಿ ಅಂತರ್ಜಲ ಮಟ್ಟ ಕುಸಿದಿದ್ದು, ಅದರಲ್ಲಿ ಕರ್ನಾಟಕ ಸಹ ಒಂದಾಗಿದೆ. ಕರ್ನಾಟಕದಲ್ಲಿ 14 ಜಿಲ್ಲೆ, 41 ತಾಲ್ಲೂಕು, 1199 ಗ್ರಾಮಗಳಲ್ಲಿ ಅಂತರ್ಜಲ ಮಟ್ಟವು ಕುಸಿದಿದೆ ಎಂದು ಅಧ್ಯಯನಗಳು ತಿಳಿಸುತ್ತಿವೆ ಎಂದರು.



ಪ್ರಸಕ್ತ ಸಾಲಿನಲ್ಲಿ ಸುಮಾರು 642 ಕೋಟಿಗಳಷ್ಟು ಅನುದಾನವನ್ನು ಅಂತರ್ಜಲ ಮಟ್ಟವನ್ನು ಹೆಚ್ಚಿಸಲು ಕೇಂದ್ರ ಸರ್ಕಾರವು ಬಿಡುಗಡೆ ಮಾಡಿದೆ. ಈಗಾಗಲೇ 1500 ಕೋಟಿ ಈ ಉದ್ದೇಶಕ್ಕಾಗಿ ಖರ್ಚು ಮಾಡಲಾಗಿದೆ ಹಾಗೂ ಮುಂದೆ ಬಿಡುಗಡೆ ಮಾಡಬೇಕಾದ 400 ಕೋಟಿಯನ್ನು ಸಹ ಸಂಪೂರ್ಣವಾಗಿ ಈ ಯೋಜನೆಗೆ ಸದ್ಬಳಕೆಯಾಗಬೇಕು ಎಂದರು.

ಬಿದ್ದ ಮಳೆ ನೀರನ್ನು ಬಿದ್ದಲ್ಲಿಯೇ ಇಂಗುವಂತೆ ಮಾಡುವುದು, ಸ್ಥಳದಲ್ಲೇ ಮಳೆನೀರು ಕೊಯ್ಲು ವಿಧಾನಗಳ ಮಾಡಿಸುವುದು. ಬದುಗಳ ನಿರ್ಮಾಣ, ಅಂತರ ಬದು ನಿರ್ವಹಣಾ ವಿಧಾನಗಳು ಇಂಗು ಗುಂಡಿಗಳನ್ನು ನಿರ್ಮಿಸುವ ಮೂಲಕ ಹಾಗೂ ಅಂತರ್ಜಲ ನಿರ್ವಹಣೆಯಲ್ಲಿ ಸಮುದಾಯದ ಪಾತ್ರ ಬಹುಮುಖ್ಯವಾದದ್ದು ಮತ್ತು ನೀರನ್ನು ಮಿತವಾಗಿ ಬಳಕೆ ಮಾಡಬೇಕು ಎಂದರು.

ನಗರ ಪ್ರದೇಶಗಳಲ್ಲಿ ಬಳಕೆಯಾದ ನೀರನ್ನು 3 ಹಂತಗಳಲ್ಲಿ ಸಂಸ್ಕರಿಸಿ ಪುನರ್ಬಳಕೆ ಮಾಡುವ ಯೋಜನೆಗಳಾದ ಕೆ.ಸಿ.ವ್ಯಾಲಿ, ಹೆಚ್ ಎನ್ ವ್ಯಾಲಿ ಮುಂತಾದ ಯೋಜನೆಗಳನ್ನು ಜಾರಿ ಮಾಡಲಾಗಿದೆ ಇದರಿಂದಾಗಿ ಕೋಲಾರ , ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು(ಗ್ರಾ)ಜಿಲ್ಲೆಗಳ ಕೃಷಿಕರಿಗೆ ನೀರಿನ ಕೊರತೆ ಉಂಟಾಗದು ಎಂದರು.

ಕೋಲಾರದಲ್ಲಿ ಹಾಲು ತರಕಾರಿ ಬೆಳೆಯುವ ರೈತರಿಗೆ ಹಾಗೂ ಕೃಷಿಕರಿಗೆ ಉತ್ತಮ ವಾತಾವರಣ ಇದೆ. ಅದೇರೀತಿ ಅಂತರ್ಜಲ ಮಟ್ಟ ಕುಸಿಯದಂತೆ ನೋಡಿಕೊಳ್ಳುವ ಹಾಗೂ ಪರಿಸ್ಥಿತಿಗಳನ್ನು ಸುಧಾರಿಸಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ತಿಳಿಸಿದರು.

ಉಪ ಕುಲಪತಿಗಳಾದ ಡಾ.ವಿಷ್ಣುವರ್ಧನ್ ಅವರು ಮಾತನಾಡಿ ಕೋಲಾರದಲ್ಲಿ ಅಂತರ್ಜಲ ಮಟ್ಟವು ಕುಸಿದಿದ್ದು, ಕೆ.ಸಿ ವ್ಯಾಲಿ ನೀರು ಬಂದಿರುವುದರಿಂದ ಸ್ವಲ್ಪ ಮಟ್ಟಿಗೆ ಸುಧಾರಣೆಯಾಗಿದೆ. ಹೆಚ್ಚುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ನೀರನ್ನು ಒದಗಿಸಬೇಕು ಹಾಗೂ ಕೃಷಿ ಬಳಕೆಗೆ ನೀರನ್ನು ಒದಗಿಸಬೇಕು. ಕೃಷಿಯಲ್ಲಿ ಹೆಚ್ಚು ನೀರನ್ನು ಬಳಸಿಕೊಂಡು ಬೆಳೆಯುವ ಭತ್ತ, ಕಬ್ಬು ನಂತಹ ಬೆಳೆಗಳನ್ನು ಕಡಿಮೆಮಾಡಿ, ಕಡಿಮೆ ನೀರನ್ನು ಬಳಸಿಕೊಂಡು ಹೆಚ್ಚು ಬೆಳೆಯುವ ಬೆಳೆಗಳ ಬಗ್ಗೆ ರೈತರು ಹೆಚ್ಚು ಗಮನ ನೀಡಬೇಕು. ಇಲ್ಲವಾದರೆ ಮುಂದಿನ ಪೀಳಿಗೆಗೆ ಜಲ ಸಂಪನ್ಮೂಲವನ್ನು ಒದಗಿಕೊಡುವುದರಲ್ಲಿ ತೊಂದರೆಯಾಗುತ್ತದೆ ಎಂದರು. ಇದೇ ಸಂದರ್ಭದಲ್ಲಿ ಸಹಿ ಫಸಲ್ ಕುರಿತ ತರಬೇತಿ ಕೈಪಿಡಿ ಯನ್ನು ಬಿಡುಗಡೆಮಾಡಲಾಯಿತು

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಅಕ್ರಂ ಪಾಷ, ರಾಷ್ಟ್ರೀಯ ಜಲ ಮಿಷನ್ ನಿರ್ದೇಶಕರಾದ ಆಶೋಕ್. ಕೆ.ಜೆ., ಉಪನಿರ್ದೇಶಕರಾದ ಸಂತೋಷ್, ಸರ್ಕಾರದ ಕಾರ್ಯದರ್ಶಿ ಹಾಗೂ ಅತಲ್ ಭೂಜಲ ಹಾಗೂ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿಇಲಾಖೆಯ ಯೋಜನಾ ಸಂಯೋಜಕರು ರಾಘವನ್, ಯೋಜನಾ ನಿರ್ದೇಶಕರಾದ ಕಿರಣ್ ಮಸೂತಿ ಡಾಶಿವಾಣಂದ ವಿ ಹೊಂಗಲ್, ಡಾ,ವೆಂಕಟೇಶಲು , ಜಂಟಿ ಕೃಷಿ ನಿರ್ದೇಶಕರಾದ ಸುಮಾ, ತೋಟಗಾರಿಕೆ ಉಪನಿರ್ದೇಶಕರಾದ ಕುಮಾರಸ್ವಾಮಿ ಹಾಜರಿದ್ದರು,

## ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಜಿಲ್ಲೆಯಲ್ಲಿ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ (ಒಂದು ವರ್ಷದ ಅವಧಿಗೆ) ನೇಮಕಾತಿ ಮಾಡಿಕೊಳ್ಳಲು ಆಸಕ್ತ ಹಾಗೂ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹುದ್ದೆಯು ತಾತ್ಕಾಲಿಕವಾಗಿದ್ದು, ಸರ್ಕಾರ ನಿಗಧಿಪಡಿಸಿರುವ ಅವಧಿಗೆ ಸೀಮಿತವಾಗಿರುತ್ತದೆ. ಆಸಕ್ತರು ಸ್ವಲಿಖಿತ ಅರ್ಜಿಗಳನ್ನು ಪೂರ್ಣ ವಿವರಗಳೊಂದಿಗೆ ನವೆಂಬರ್ 8 ಸಂಜೆ 5:30 ರ ಒಳಗಾಗಿ ವಿದ್ಯಾರ್ಹತೆ, ಅನುಭವ ಹಾಗೂ ಇತ್ಯಾದಿಗಳ ಬಗ್ಗೆ ಸಮರ್ಥನೀಯ ದಾಖಲೆಗಳೊಂದಿಗೆ ಮೊಹರು ಮಾಡಿದ ಲಕೋಟೆಗಳಲ್ಲಿ ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ರವರಿಗೆ ತಲುಪುವಂತೆ ಸಲ್ಲಿಸಬಹುದಾಗಿದೆ. ನಿಗಧಿತ ಕಾಲಾವಧಿಯ ನಂತರ ಸ್ವೀಕೃತವಾಗುವ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಭ್ಯರ್ಥಿಗಳು ಕರ್ನಾಟಕ ಲೀಗಲ್ ಆಫೀಸರ್ ಅಪಾಯಿಂಟ್ ಮೆಂಟ್ 1977 ರಲ್ಲಿ ನಿಗಧಿಪಡಿಸಿರುವ ಎಲ್ಲಾ ಅರ್ಹತೆಗಳು ಹಾಗೂ ಷರತ್ತುಗಳಿಗೆ ಬದ್ಧರಾಗಿರತಕ್ಕದ್ದು ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 17 ಅಭ್ಯರ್ಥಿಗಳಿಂದ 20 ನಾಮಪತ್ರ ಸಲ್ಲಿಕೆ

**ರಾಮನಗರ:** ಉಪ ಚುನಾವಣ ಘೋಷಣೆಯಾಗಿರುವ 185-ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ಅಭ್ಯರ್ಥಿಗಳು ನಾಮಪತ್ರಗಳನ್ನು ಸಲ್ಲಿಸುತ್ತಿದ್ದು,ಅ.24ರ ಗುರುವಾರ 17 ಅಭ್ಯರ್ಥಿಗಳು ಒಟ್ಟು20 ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಪಕ್ಷೇತರ ಅಭ್ಯರ್ಥಿಪ್ರದೀಪ್ ಟಿ.ವಿ. 2 ನಾಮಪತ್ರ, ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಪಕ್ಷದಅಭ್ಯರ್ಥಿ ಸಿ.ಪಿ.ಯೋಗೇಶ್ವರ್ 3 ನಾಮಪತ್ರಗಳನ್ನು ಸಲ್ಲಿಸಿದ್ದರೆ, ಕರ್ನಾಟಕಜನತಾ ಪಕ್ಷದಅಭ್ಯರ್ಥಿಎಸ್. ಶಿವಕುಮಾರ್, ಪೂರ್ವಾಚಲ್ ಮಹಾ ಪಂಚಾಯತ್ ಪಕ್ಷದಅಭ್ಯರ್ಥಿಎಚ್ .ಡಿ.ರೇವಣ್ಣ, ಕಂಟ್ರಿ ಸಿಟಿಜನ್ ಪಾರ್ಟಿ ಅಭ್ಯರ್ಥಿಜೆ.ಟಿ. ಪ್ರಕಾಶ್, ಪಕ್ಷೇತರ ಅಭ್ಯರ್ಥಿಗಳಾದ ಚಿಕ್ಕ ಸಿದ್ದಯ್ಯ, ರಮೇಶ್ಎಚ್.ಆರ್.,ಅರವಿಂದ್, ಯೋಗೇಶ್, ಎಂ.ಎಸ್. ಯೋಗೇಶ್, ಡಾ. ಚಂದ್ರೇಗೌಡಎಚ್.ಎಸ್, ಅನಿಲ್ ಕುಮಾರ್ ಎಂ., ಕುಮಾರ ಸ್ವಾಮಿ,ನಿಂಗರಾಜ್ ಜಿ., ಶ್ರೀನಿವಾಸ ಮೂರ್ತಿಎಚ್.ಕೆ., ಮಹದೇವ ಸ್ವಾಮಿ ಬಿ.ಎಂ. ಹಾಗೂ ಎಚ್.ಪಿ. ನಂಜೇಗೌಡತಲಾ ಒಂದು ನಾಮಪತ್ರ ಸಲ್ಲಿಸಿರುತ್ತಾರೆ ಎಂದು ಚನ್ನಪಟ್ಟಣ ವಿಧಾನಸಭಾಕ್ಷೇತ್ರದ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಹೊಯ್ಸಲಕಟ್ಟೆ ಪಿಡಿಓಗೆ 3 ವರ್ಷ ಶಿಕ್ಷೆ

**ಹುಳಿಯಾರು:** ಲಂಚ ತೆಗೆದುಕೊಳ್ಳುವಾಗ ಸಿಕ್ಕಿ ಬಿದ್ದಿದ್ದ ಚಿಕ್ಕನಾಯಕನಹಳ್ಳಿ ತಾಲ್ಲೂಕು ಹುಳಿಯಾರು ಹೋಬಳಿ ಹೊಯ್ಸಳಕಟ್ಟೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಸ್.ನಾಗರಾಜ್‌ಗೆ ಮೂರು ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ವಿಧಿಸಿ 7 ನೇ ಹೆಚ್ಚುವರಿ ಜಿಲ್ಲಾ ಹಾಗೂ ಸೆಷನ್ಸ್ ನ್ಯಾಯಾಲಯ ಗುರುವಾರ ಆದೇಶಿಸಿದೆ.



2021 ಸೆಪ್ಟೆಂಬರ್ 8 ರಂದು ಹೊಯ್ಸಳಕಟ್ಟೆ ಗ್ರಾಮದ ಎಚ್.ಇ.ಮಧು ಎಂಬುವರಿಂದ ಚಿಕ್ಕನಾಯಕನಹಳ್ಳಿ ತಾಲ್ಲೂಕು ಪಂಚಾಯಿತಿ ಕಚೇರಿ ಬಳಿ 2,150 ರೂ. ಲಂಚ ತೆಗೆದುಕೊಳ್ಳುವಾಗ ಎಸಿಬಿ ಪೊಲೀಸರು ನಾಗರಾಜ್‌ನನ್ನು ಬಂಧಿಸಿದ್ದರು. ತಮ್ಮ ತಾಯಿ ಮಲ್ಲಮ್ಮ ಹೆಸರಿನಲ್ಲಿದ್ದ ನಿವೇಶನಕ್ಕೆ ಇ-ಸ್ವತ್ತು ಮಾಡಿಕೊಡುವಂತೆ ಕೋರಿ ಗ್ರಾ.ಪಂಗೆ ಮಧು ಅರ್ಜಿ ಸಲ್ಲಿಸಿದರು. ಇ?ಸ್ವತ್ತು ಮಾಡಿಕೊಡಲು ಲಂಚಕ್ಕೆ ಒತ್ತಾಯಿಸಿದರು. ಲಂಚ ಕೊಡದೆ ಎಸಿಬಿಗೆ ದೂರು ನೀಡಿದ್ದರು. ಇನ್‌ಸ್ಪೆಕ್ಟರ್ ಎಸ್.ವಿಜಯಲಕ್ಷ್ಮಿ ನೇತೃತ್ವದ ತಂಡ ಲಂಚದ ಹಣ ತೆಗೆದುಕೊಳ್ಳುವ ಸಮಯದಲ್ಲಿ ನಾಗರಾಜ್‌ನನ್ನು ಬಂಧಿಸಿತ್ತು. ತನಿಖೆ ನಡೆಸಿದ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ನ್ಯಾಯಾಧೀಶ ಟಿ.ಪಿ.ರಾಮಲಿಂಗೇಗೌಡ ಅವರು ಆರೋಪ ಸಾಬೀತಾಗಿದ್ದರಿಂದ 3 ವರ್ಷ ಶಿಕ್ಷೆ, 10 ಸಾವಿರ ರೂ.ದಂಡ ವಿಧಿಸಿ ಆದೇಶಿಸಿದ್ದಾರೆ. ಲೋಕಾಯುಕ್ತರ ಪರವಾಗಿ ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಆರ್.ಪಿ.ಪ್ರಕಾಶ್ ವಾದ ಮಂಡಿಸಿದ್ದರು.

## ಸ್ಕಾಲರ್‌ಶಿಪ್ ಕುರಿತ ಸುಳ್ಳು ಸುದ್ದಿಗೆ ಕಿವಿಗೊಡಬೇಡಿ

**ಕೋಲಾರ:** ತಂದೆಯಿಲ್ಲದ ಮಕ್ಕಳ ಖಾತೆಗೆ ವರ್ಷಕ್ಕೆ ರೂ.24000ಗಳ ಸ್ಕಾಲರ್‌ಶೀಪ್ ಸೌಲಭ್ಯವಿದ್ದು, ಜನಸಮಾನ್ಯರಿಗೆ ಈ ವಿಚಾರ ತಿಳಿದೇ ಇಲ್ಲ ಆದ್ದರಿಂದ ತಮಗೆ ಗೊತ್ತಿರುವ ಯಾರಾದರು ತಂದೆಯಿಲ್ಲದ ಮಕ್ಕಳು ಇದ್ದಲ್ಲಿ ಅವರ ಪೋಷಕರಿಗೆ ಕೂಡಲೇ ಅರ್ಜಿ ಸಲ್ಲಿಸಲು ತಿಳಿಸಿ ಅಧಿಕೃತ ಸಹಿ ಇಲ್ಲದ ಅರ್ಜಿಯು ಸಾಮಾಜಿಕ ಜಾಲತಾಣಗಳ ಮುಖಾಂತರ ಹರಿದಾಡುತ್ತಿರುವ ಸುಳ್ಳು ಸುದ್ದಿ ಎಂದು ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಮೇಲಿನ ಸುದ್ದಿಯು ಸಾರ್ವಜನಿಕರನ್ನು ಗೊಂದಲಕ್ಕೀಡು ಮಾಡಿದ್ದು, ಸಾರ್ವಜನಿಕರು ವಿವಿಧ ಕಛೇರಿಗಳಿಗೆ ಅರ್ಜಿಗಾಗಿ ಅಲೆದಾಡುತ್ತಿರುವುದು ಕಂಡುಬಂದಿರುತ್ತದೆ. ಕೇಂದ್ರ ಪುರಸ್ಕೃತ ಪ್ರಾಯೋಜಕತ್ವ ಯೋಜನೆಯು ಎಲ್ಲಾ ತಂದೆಯಿಲ್ಲದ ಮಕ್ಕಳಿಗೆ ಅನ್ವಯವಾಗುವುದಿಲ್ಲ. ಈ ಯೋಜನೆಯ ಬಗ್ಗೆ ಸರಿಯಾಗಿ ಅರಿತುಕೊಳ್ಳಬೇಕು. ಯೋಜನೆಯಲ್ಲಿ ಫಲಾನುಭವಿಯಾಗಲು ನಿರ್ದಿಷ್ಟ ಮಾನದಂಡಗಳು ಅನ್ವಯವಾಗಲಿವೆ ಎಂದು ತಿಳಿಸಿದ್ದಾರೆ. ಪ್ರಾಯೋಜಕತ್ವ ಯೋಜನೆಯ ಮಾನದಂಡಗಳಾದ ತಾಯಿ ವಿಧವೆ, ವಿಚ್ಛೇದಿತೆ ಅಥವಾ ಕುಟುಂಬದಿಂದ ಪರಿತ್ಯಜಿಸಲ್ಪಟ್ಟಿದ್ದರೆ, ಮಕ್ಕಳು ಅನಾಥರಾಗಿದ್ದಾರೆ ಹಾಗೂ ವಿಸ್ತತ ಕುಟುಂಬದೊಡನೆ ಜೀವಿಸುತ್ತಿದ್ದರೆ, ಪೋಷಕರು ಜೀವಕ್ಕೆ ಬೆದರಿಕೆಯೊಡ್ಡುವ, ಗಂಭೀರ ಸ್ವರೂಪದ ಖಾಯಿಲೆಯ ಸಂತ್ರಸ್ಥರಾಗಿದ್ದರೆ, ಪೋಷಕರು ಆಸಕ್ತರಾಗಿದ್ದಾರೆ ಅಥವಾ ಮಕ್ಕಳನ್ನು ನೋಡಿಕೊಳ್ಳಲು ಆರ್ಥಿಕವಾಗಿ ಹಾಗೂ ದೈಹಿಕವಾಗಿ ಅಸಮರ್ಥವಾಗಿದ್ದರೆ, ಬಾಲನ್ಯಾಯ (ಮಕ್ಕಳ ಪೋಷಣೆ ಮತ್ತು ರಕ್ಷಣೆ) ಕಾಯ್ದೆ 2015ರ ಪ್ರಕಾರ ಮಕ್ಕಳು ಪೋಷಣೆ ಮತ್ತು ರಕ್ಷಣೆಯ ಅಗತ್ಯ ಹೊಂದಿದ್ದರೆ ಅಂದರೆ ವಸತಿರಹಿತರು, ಯಾವುದಾದರು ನೈಸರ್ಗಿಕ ವಿಕೋಪಗಳ ಸಂತ್ರಸ್ಥರು, ಮಾನವ ಕಳ್ಳ ಸಾಗಾಣೆ ಸಂತ್ರಸ್ಥರು, ಹೆಚ್.ಐ.ವಿ/ಏಡ್ಸ್ ಪರಿಣಾಮ ಪೀಡಿತ ಮಗು, ವಿಶೇಷ ಚೇತನ ಮಗು, ತಪ್ಪಿಸಿಕೊಂಡಿರುವ ಅಥವಾ ಓಡಿಬಂದಿರುವ ಮಗು, ಭಿಕ್ಷಾಟಣೆ ಅಥವಾ ಬೀದಿಯಲ್ಲಿ ವಾಸಿಸುತ್ತಿರುವ ಮಗು, ಬೆಂಬಲ ಹಾಗೂ ಪುನರ್ವಸತಿಯ ಅಗತ್ಯವಿರುವ ಹಿಂಸೆಗೊಳಪಟ್ಟ ಅಥವಾ ನಿಂದನೆ ಅಥವಾ ಶೋಷಿತ ಮಕ್ಕಳ ಅರ್ಜಿ ಸಲ್ಲಿಸಿ ಈ ಯೋಜನೆಯ ಸೌಲಭ್ಯ ಪಡೆದುಕೊಳ್ಳಬಹುದು ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 29ರಂದು 9 ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯ

**ಕೋಲಾರ:** 9 ನೇ ರಾಷ್ಟ್ರೀಯ ಆಯುರ್ವೇದ ದಿನಾಚರಣೆಯನ್ನು ಜಾಗತಿಕ ಆರೋಗ್ಯಕ್ಕಾಗಿ ಆಯುರ್ವೇದದ ಆವಿಷ್ಕಾರಗಳು ಯೊಂದಿಗೆ ಮಹಿಳಾ ಸಬಲೀಕರಣಕ್ಕಾಗಿ ಆಯುರ್ವೇದ ಎಂಬ ಘೋಷವಾಕ್ಯದೊಂದಿಗೆ ಅಕ್ಟೋಬರ್ 29 ರಂದು ಮಂಗಳವಾರ ಕೋಲಾರ ನಗರದಲ್ಲಿರುವ ಟಿ.ಚನ್ನಯ್ಯ ರಂಗಮಂದಿರದಲ್ಲಿ ಬೆಳಿಗ್ಗೆ 10.30 ಕ್ಕೆ ಆಚರಿಸಲಾಗುತ್ತದೆ. ಈ ಕಾರ್ಯಕ್ರಮದಲ್ಲಿ ಆಯುರ್ವೇದದ ಉಪಯುಕ್ತತೆ ಬಗ್ಗೆ ನುರಿತ ತಜ್ಞರುಗಳಿಂದ ಉಪನ್ಯಾಸ ಹಾಗೂ ಆಯುಷ್ ಔಷಧ ಸಸ್ಯಗಳ ಪ್ರದರ್ಶನವನ್ನು ಏರ್ಪಡಿಸಲಾಗಿದೆ. ಅದ್ದರಿಂದ ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಆಯುರ್ವೇದದ ಉಪಯುಕ್ತತೆಯ ಬಗ್ಗೆ ತಿಳಿದುಕೊಳ್ಳಲು ಕೋರಿದೆ. ಈ ಕಾರ್ಯಕ್ರಮದಲ್ಲಿ ಜನಪ್ರತಿನಿಧಿಗಳು, ವಿದ್ಯಾರ್ಥಿಗಳು, ಆಯುಷ್ ವೈದ್ಯರುಗಳು ಹಾಗೂ ಇನ್ನಿತರರು ಭಾಗವಹಿಸುವವರು ಎಂದು ಜಿಲ್ಲಾ ಆಯುಷ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುಳಿಯಾರಿನಲ್ಲಿ ನಾಳೆ ಪ್ರತಿಭಾ ಪುರಸ್ಕಾರ

**ಹುಳಿಯಾರು:** ಚಿಕ್ಕನಾಯಕನಹಳ್ಳಿ ತಾಲೂಕು ಭಗೀರಥ ನೌಕರರ ಸಂಘ, ಶ್ರೀ ಭಗೀರಥ ವಿದ್ಯಾನಿಧಿ ಸೇವಾ ಚಾರಿಟಬಲ್ ಟ್ರಸ್ಟ್ ಹಾಗೂ ತಾಲೂಕು ಭಗೀರಥ ಉಪ್ಪಾರ ಸಂಘದ ಸಹಯೋಗದೊಂದಿಗೆ ಅ.27 ರ ಭಾನುವಾರ ಬೆಳಗ್ಗೆ 10 ಗಂಟೆಗೆ ಹುಳಿಯಾರು ಕೋಡಿಪಾಳ್ಯದ ಸೇವಾಲಾಲ್ ಸಾಂಸ್ಕೃತಿಕ ಸದನದಲ್ಲಿ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರು ಮತ್ತು ನೂತನ ನೌಕರರು ಹಾಗೂ ಸಾಧಕರಿಗೆ ಸನ್ಮಾನ ಸಾಮಾರಂಭ ಏರ್ಪಡಿಸಲಾಗಿದೆ. ಹೊಸದುರ್ಗ ತಾಲೂಕು ಭಗೀರಥ ಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ದಿವ್ಯಸಾನಿಧ್ಯದಲ್ಲಿ ನಡೆಯುವ ಈ ಕಾರ್ಯಕ್ರಮವನ್ನು ಕೇಂದ್ರ ರೈಲ್ವೆ ಸಚಿವ ವಿ.ಸೋಮಣ್ಣ ಉದ್ಘಾಟಿಸುವರು. ದೆಹಲಿ ವಿಶೇಷಪ್ರತಿನಿಧಿ ಟಿ.ಬಿ.ಜಯಚಂದ್ರ ಭಗೀರಥ ಭಾವಚಿತ್ರ ಅನಾವರಣ ಮಾಡುವರು. ಶಾಸಕ ಸಿ.ಬಿ.ಸುರೇಶ್ ಬಾಬು ಪ್ರತಿಭಾ ಪುರಸ್ಕಾರ ಮಾಡುವರು. ಎಂಎಸ್‌ಐಎಲ್ ನಿಗಮ ಮಂಡಳಿ ಅಧ್ಯಕ್ಷ ಸಿ.ಪುಟ್ಟರಂಗಶೆಟ್ಟಿ ಸಾಧಕರಿಗೆ ಸನ್ಮಾನಿಸುವರು. ವಿಧಾನ ಪರಿಷತ್ ಸದಸ್ಯ ಡಿ.ಟಿ.ಶ್ರೀನಿವಾಸ್ ನಿವೃತ್ತ ನೌಕರರಿಗೆ ಸನ್ಮಾನಿಸುವರು. ಪಪಂ ಅಧ್ಯಕ್ಷೆ ನೂತನ ನೌಕರರಿಗೆ ಸನ್ಮಾನಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲೂಕು ಭಗೀರಥ ನೌಕರರ ಸಂಘದ ಅಧ್ಯಕ್ಷ ಟಿ.ನಾಗೇಂದ್ರಪ್ಪ ವಹಿಸುವರು. ಆಹಾರ ಮತ್ತು ನಾಗರೀಕ ಇಲಾಖೆಯ ಸಹಾಯಕ ನಿರ್ದೇಶಕರಾದ ಆರ್. ಲಕ್ಷ್ಮಿ ಉಪನ್ಯಾಸ ನೀಡುವರು. ಮಾಜಿ ಸಂಸದ ಮುದ್ದಹನುಮೇಗೌಡ ಮುಖ್ಯಅತಿಥಿಗಳಾಗಿ ಆಗಮಿಸಲಿದ್ದಾರೆ.

## 28ರಂದು ನಗರದಲ್ಲಿ ವಿವಿಧ ಹುದ್ದೆಗಳಿಗೆ ನೇರ ಸಂದರ್ಶನ

**ಚಾಮರಾಜನಗರ:** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗ್ರಾಮೀಣ ಕೂಟ ಹಾಗೂ ಎಲ್.ಐ.ಸಿ ಸಹಯೋಗದೊಂದಿಗೆ ಎಸ್.ಎಸ್.ಎಲ್.ಸಿ, ಪಿಯುಸಿ, ಐ.ಟಿ.ಐ ಡಿಪ್ಲೋಮಾ ಮತ್ತು ಯಾವುದೇ ಪದವಿ ಅಭ್ಯರ್ಥಿಗಳಿಗಾಗಿ ನೇರ ಸಂದರ್ಶನವನ್ನು ಅಕ್ಟೋಬರ್ 28ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 3.30 ಗಂಟೆಯವರೆಗೆ ನಗರದ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಆಯೋಜಿಸಲಾಗಿದೆ. ನಗರದ ಗ್ರಾಮೀಣ ಕೂಟ ಸಂಸ್ಥೆಯಲ್ಲಿ ಪಿಯುಸಿ, ಐ.ಟಿ.ಐ ಡಿಪ್ಲೋಮಾ ಮತ್ತು ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18 ರಿಂದ 30ರ ವಯೋಮಿತಿಯ ಪುರುಷ ಹಾಗೂ ಮಹಿಳೆಯರು ಮತ್ತು ಎಲ್.ಐ.ಸಿ ಸಂಸ್ಥೆಯಲ್ಲಿ ಎಸ್.ಎಸ್.ಎಲ್.ಸಿ, ಮೇಲ್ಪಟ್ಟ ವಿದ್ಯಾರ್ಹತೆ ಹೊಂದಿರುವ 18 ವರ್ಷ ಮೇಲ್ಪಟ್ಟ ಪುರುಷ ಹಾಗೂ ಮಹಿಳೆಯರು ಸಂದರ್ಶನದಲ್ಲಿ ಭಾಗವಹಿಸಬಹುದು. ಆಸಕ್ತ ಅಭ್ಯರ್ಥಿಗಳು ತಮ್ಮ ಸ್ವ-ವಿವರ (ಬಯೋಡೆಟಾ) ಮತ್ತು ಅಂಕಪಟ್ಟಿಗಳ ಮೂಲ ಹಾಗೂ ಜೆರಾಕ್ಸ್ ಪ್ರತಿಗಳೊಂದಿಗೆ ಸ್ವಂತ ಖರ್ಚಿನಲ್ಲಿ ಸಂದರ್ಶನಕ್ಕೆ ಹಾಜರಾಗಬೇಕು. 08226-224430 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಎ. ಮಹಮ್ಮದ್ ಅಕ್ಬರ್ ತಿಳಿಸಿದ್ದಾರೆ.

ವಿದ್ಯುತ್ ತಂತಿ ತಗುಲಿ ಮೃತಪಟ್ಟ ರೈತರ ಮನೆಗೆ ಶಾಸಕ ಪುಟ್ಟರಣಗಶೆಟ್ಟಿ ಭೇಟಿ

## ಸಾಂತ್ವನ, ವೈಯಕ್ತಿಕ ಪರಿಹಾರ ವಿತರಣೆ

**ಚಾಮರಾಜನಗರ:** ತಾಲೂಕಿನ ಮಲ್ಲೇದೇವನಹಳ್ಳಿ ಬಳಿ ಬುಧವಾರ ಮಧ್ಯರಾತ್ರಿ ಜಮೀನಿನಿಂದ ಸ್ವಗ್ರಾಮ ಅಯ್ಯನಪುರ ಗ್ರಾಮಕ್ಕೆ ಬೈಕ್‌ನಲ್ಲಿ ತೆರಳುತ್ತಿದ್ದ ರೈತರಾದ ನಾಗೇಂದ್ರ, ಮಲ್ಲೇಶ್ ವಿದ್ಯುತ್ ತಂತಿ ತಗುಲಿ ಮೃತಪಟ್ಟ ಹಿನ್ನೆಲೆಯಲ್ಲಿ ಅಯ್ಯನಪುರ ಗ್ರಾಮಕ್ಕೆ ಕ್ಷೇತ್ರದ ಶಾಸಕ ಸಿ.ಪುಟ್ಟರಂಗಶೆಟ್ಟಿ ಸೆಸ್ಕ್ ಎಂಜಿನಿಯರ್ ಗಳೊಂದಿಗೆ ಮೃತರಮನೆಗೆ ತೆರಳಿ, ಕುಟುಂಬವರ್ಗದವರಿಗೆ ಸಾಂತ್ವನ ಹೇಳಿ ವೈಯಕ್ತಿಕ ಪರಿಹಾರ ವಿತರಿಸಿದರು.

ಇದೇವೇಳೆ ಮೃತರ ಕುಟುಂಬದವರು ಶಾಸಕರ ಬಳಿ ತಮ್ಮ ಅಳಲನ್ನು ತೋಡಿಕೊಂಡರು. ಮೃತ ನಾಗೇಂದ್ರ ಅವರ ಪುತ್ರ ಡಿಪ್ಲೋಮಾಪದವೀಧರರಾಗಿದ್ದು, ಸೆಸ್ಕ್ ನಲ್ಲಿ ಸೂಕ್ತ ಉದ್ಯೋಗ ಒದಗಿಸಬೇಕು ಎಂದು ನಾಗೇಂದ್ರ ಕುಟುಂಬದವರು ಮನವಿ ಮಾಡಿದರು.

ಶಾಸಕ ಸಿ.ಪುಟ್ಟರಂಗ್ಗಶೆಟ್ಟಿ ಪ್ರತಿಕ್ರಿಯಿಸಿ ಸೆಸ್ಕ್ ಮೇಲಧಿಕಾರಿಗಳ ಜತೆಚರ್ಚಿಸಿ, ಉದ್ಯೋಗ ಕೊಡಿಸುವ ಭರವಸೆ ನೀಡಿದರು.

ಮಲ್ಲೇಶ್ ಅವರಿಗೆ ಚಿಕ್ಕಮಕ್ಕಳಿದ್ದು, ಅವರ ಕುಟುಂಬಕ್ಕೆ ಸೆಸ್ಕ್ ನಿಂದ ಹೆಚ್ಚಿನ ನೆರವು ಕೊಡಿಸಬೇಕು ಎಂದು ಮೃತ ಮಲ್ಲೇಶ್ ಕುಟುಂಬದವರು ಶಾಸಕರಿಗೆ ಮನವಿ ಮಾಡಿದರು.



ಶಾಸಕ ಸಿ.ಪುಟ್ಟರಂಗ್ಗಶೆಟ್ಟಿ ಪ್ರತಿಕ್ರಿಯಿಸಿ ಗುರುವಾರ ಸೆಸ್ಕ್ ವತಿಯಿಂದ ಮೃತರ ಕುಟುಂಬಗಳಿಗೆ ತಲಾ 5ಲಕ್ಷ ರೂಗಳ ಚೆಕ್ ವಿತರಿಸಲಾಗಿದೆ. ಸೆಸ್ಕ್ ಮೇಲಧಿಕಾರಿಗಳ ಜತೆ ಚರ್ಚಿಸಿ, ಉದ್ಯೋಗದೊರಕಿಸಿಕೊಡುವುದಾಗಿ ಭರವಸೆ ನೀಡಿದರು. ಮೃತರ ಕುಟುಂಬದವರು ಯಾವುದೇ ಸಮಯದಲ್ಲೂ ಧೈರ್ಯ ಕಳೆದುಕೊಳ್ಳಬಾರದು ಎಂದು ಸಾಂತ್ವನ ಹೇಳಿದರು.

ಇದೇ ಸಂದರ್ಭದಲ್ಲಿ ತಹಸೀಲ್ದಾರ್ ಗಿರಿಜಾ ಮೃತರ ಪತ್ನಿಯರಿಗೆ ವಿಧವಾವೇತನ ಮಂಜೂರಾತಿಪತ್ರ ವಿತರಿಸಿದರು.

ಸೆಸ್ಕ್ ಇಇ ಪ್ರದೀಪ್, ಸೆಸ್ಕ್ ಎಇಇ ಮುತ್ತುರಾಜ್, ಎಪಿಎಂಸಿ ಸದಸ್ಯ ಎ.ಎಸ್ .ಪ್ರದೀಪ್, ಮಾಜಿಅಧ್ಯಕ್ಷ ಬಿ.ಕೆ.ರವಿಕುಮಾರ್, ತಾಪಂ ಮಾಜಿಅಧ್ಯಕ್ಷ ಚಿಕ್ಕಮಹದೇವು, ಕಾಗಲವಾಡಿಚಂದ್ರು, ಹೆಬ್ಬಸೂರುಮರಿಸ್ವಾಮಿ, ಗ್ರಾಪಂ ಮಾಜಿ ಉಪಾಧ್ಯಕ್ಷ ಲಿಂಗಯ್ಯ, ವಿಜಯೇಂದ್ರ, ನಾಗವಳ್ಳಿನಾಗಯ್ಯ ಸೇರಿದಂತೆ ಸ್ಥಳೀಯರು ಹಾಜರಿದ್ದರು.


**ನಗರಸಭಾ ಕಾರ್ಯಾಲಯ, ಹೂಟಗಳ್ಳಿ**

**ಎಸ್.ಆರ್.ಎಸ್. ಸ್ಟೇಷನ್ ಎದುರು, ಹೈಟೆನ್ಷನ್ ಜೋಡಿ ರಸ್ತೆ, ಹೂಟಗಳ್ಳಿ, ಮೈಸೂರು ಜಿಲ್ಲೆ -570018**

**ಸಹಾಯವಾಣಿ ಸಂಖ್ಯೆ: 0821-2001737** **ka.hootagalli.cmc@gmail.com**

**ಸಂ:ನಸಹೂ/ತಾಂತ್ರಿಕ/ಟೆಂಡರ್ ಪ್ರಕಟಣೆ/ಸಿ.ಆರ್-12/2024-25** **ದಿನಾಂಕ: 25.10.2024**

**ಟೆಂಡರ್ ಪ್ರಕಟಣೆ**

ಹೂಟಗಳ್ಳಿ ನಗರಸಭೆ ವ್ಯಾಪ್ತಿಯಲ್ಲಿ 2024-25ನೇ ಸಾಲಿನ ನಗರಸಭೆ ಸಾಮಾನ್ಯ ನಿಧಿಯಡಿಯಲ್ಲಿ ಕೆ.ಟಿ.ಪಿ.ಪಿ. ಕಾಯ್ದೆ 2000ರ ಪ್ರಕಾರ ಕೆ.ಡಬ್ಲ್ಯೂ-01 ಮತ್ತು ಕೆ.ಡಬ್ಲ್ಯೂ-02 ನಿಯಮದಂತೆ KPP ಪೋರ್ಟಲ್ ಮೂಲಕ ಐಟಂವಾರು ಟೆಂಡರ್ ಕರೆಯಲಾಗಿದ್ದು. ಲೋಕೋಪಯೋಗಿ ಇಲಾಖೆಯಲ್ಲಿ ನೋಂದಾಯಿತ ಅರ್ಹ ಸಿವಿಲ್ ಗುತ್ತಿಗೆದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್‌ಗಳನ್ನು https://kppp.karnataka.gov.in ಪೋರ್ಟಲ್ ಮೂಲಕ ಸಲ್ಲಿಸಬಹುದಾಗಿದೆ. ಟೆಂಡರ್ ಸಲ್ಲಿಸುವ ಕೊನೆಯ ದಿ: 08.11.2024 ಸಂಜೆ 5:30 ಗಂಟೆಯವರೆಗೆ ಹಾಗೂ ಟೆಂಡರ್‌ನ ಬಿಡ್ ತೆರೆಯುವ ದಿ: 11.11.2024 ಬೆಳಗ್ಗೆ 11:00 ಗಂಟೆಗೆ ನಿಗಧಿಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ತಾಂತ್ರಿಕ ಶಾಖೆಯನ್ನು ಸಂಪರ್ಕಿಸಬಹುದಾಗಿದೆ. ಟೆಂಡರ್‌ನ್ನು ಅಂಗೀಕರಿಸುವ ಅಥವಾ ತಿರಸ್ಕರಿಸುವ ಹಕ್ಕನ್ನು ನಗರಸಭೆ ಕಾಯ್ದಿರಿಸಿಕೊಂಡಿದೆ, ಪೂರ್ಣಗೊಂಡ ಕಾಮಗಾರಿಗಳಿಗೆ ನಗರಸಭೆಯ ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಪಾವತಿಸಲಾಗುವುದು ಹಾಗೂ ಜಿ.ಎಸ್.ಟಿ.ಯನ್ನು ಪ್ರತ್ಯೇಕವಾಗಿ ಪಾವತಿಸಲಾಗುವುದು. ನಂತರದ ಬಿಡ್ ಗುತ್ತಿಗೆದಾದರಿಗೆ ಕೌನ್ಸಿಲ್ ಸಭೆಯ ಮಂಜೂರಾತಿಯ ನಂತರ ಇ.ಎಂ.ಡಿ. ಮೊತ್ತ ಹಿಂದಿರುಗಿಸಲಾಗುವುದು.

| ಕ್ರ. ಸಂ | ಕಾಮಗಾರಿಗಳ ಇಂಡೆಂಟ್ ವಿವರ | ಅಂದಾಜು ಮೊತ್ತ (ರೂ ಲಕ್ಷಗಳಲ್ಲಿ) | ಇ.ಎಂ.ಡಿ ಮೊತ್ತ (ರೂ. ಗಳಲ್ಲಿ) | ಮೀಸಲಾತಿ |
|---|---|---|---|---|
| 1 | DMA/2024-25/WS/WORK_INDENT28516 | 10.00 | 25,000/- | ಇತರೆ |
| 2 | DMA/2024-25/WS/WORK_INDENT28375 | 10.00 | 25,000/- | ಪ.ಪಂಗಡ |
| 3 | DMA/2024-25/WS/WORK_INDENT28508 | 10.00 | 25,000/- | ಇತರೆ |
| 4 | DMA/2024-25/OW/WORK_INDENT30934 | 46.10 | 46,100/- | ಪ.ಜಾತಿ |
| 5 | DMA/2024-25/BD/WORK_INDENT30917 | 36.55 | 73,100/- | ಇತರೆ |

**ಸಹಿ/- ಪೌರಾಯುಕ್ತರು, ನಗರಸಭೆ, ಹೂಟಗಳ್ಳಿ**

DIPR/DDMYS-728/KSMCA-495/2024-25

## ಸುವರ್ಣಾವತಿ ಜಲಾಶಯದಿಂದ ನೀರು ಬಿಡುಗಡೆ



**ಚಾಮರಾಜನಗರ:** ಸುವರ್ಣಾವತಿ ಜಲಾಶಯವು ಯಾವುದೇ ಸಮಯದಲ್ಲಿ ಭರ್ತಿಯಾಗಬಹುದಾಗಿದ್ದು ಜಲಾಶಯದ ನದಿ ಪಾತ್ರದಲ್ಲಿ ಬರುವ ರೈತಬಾಂಧವರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಮುನ್ನೆಚ್ಚರಿಕೆಯಾಗಿ ಸುರಕ್ಷಿತ ಸ್ಥಳಗಳಿಗೆ ತೆರಳಲು ಮನವಿ ಮಾಡಲಾಗಿದೆ. ಸುವರ್ಣಾವತಿ ಜಲಾಶಯದ ಜಲಾನಯನ ಪ್ರದೇಶದಲ್ಲಿ ಮಳೆಯಾಗುತ್ತಿದ್ದು ಜಲಾಶಯದ ನೀರಿನ ಸಾಮರ್ಥ್ಯ ಗರಿಷ್ಠ ಮಟ್ಟ ತಲುಪುವ ಹಂತದಲ್ಲಿದ್ದು ಯಾವುದೇ ಸಮಯದಲ್ಲಿ ಭರ್ತಿಯಾಗಬಹುದಾಗಿದೆ. ಇಂದು ಸಂಜೆ 6 ಗಂಟೆ ಸಮಯದಲ್ಲಿ ಜಲಾಶಯದಿಂದ 150 ಕ್ಯೂಸೆಕ್ ನೀರು ಬಿಡಲಾಗಿದೆ. ಈ ಹಿನ್ನಲೆಯಲ್ಲಿ ತಾಲೂಕಿನ ಹರದನಹಳ್ಳಿ ಹೋಬಳಿಯ ಅಟ್ಟಗೂಳಿಪುರದ ಹತ್ತಿರ ಬರುವ ಸುವರ್ಣಾವತಿ ಜಲಾಶಯ ಯೋಜನೆಯ ಅಚ್ಚುಕಟ್ಟು ಪ್ರದೇಶದಲ್ಲಿ ಹಾಗೂ ನದಿ ಪಾತ್ರದಲ್ಲಿ ಬರುವ ರೈತರು ಮತ್ತು ಸುತ್ತಮುತ್ತಲ ಗ್ರಾಮಸ್ಥರು ಮುನ್ನೆಚ್ಚರಿಕೆಯಾಗಿ ಸುರಕ್ಷಿತ ಸ್ಥಳಗಳಿಗೆ ತೆರಳಬೇಕು .ಆಸ್ತಿ-ಪಾಸ್ತಿ ಮತ್ತು ಜಾನುವಾರುಗಳ ಬಗ್ಗೆ ನಿಗಾ ವಹಿಸಬೇಕು ಎಂದು ಕಾವೇರಿ ನೀರಾವರಿ ನಿಗಮದ ಕಬಿನಿ ನಾಲೆಗಳ ವಿಭಾಗದ ಕಾರ್ಯಪಾಲಕ ಎಂಜಿನಿಯರ್ ಅವರು ಕೋರಿದ್ದಾರೆ.

## ಸಾರ್ವಜನಿಕರ ಅಹವಾಲು ಸ್ವೀಕಾರ ಹಾಗೂ ಜನಸಂಪರ್ಕ ಸಭೆ

ತಿಪಟೂರು: ನಗರದ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯದ ಸಭಾಂಗಣದಲ್ಲಿ 27 ಭಾನುವಾರದಂದು ಬೆಳಗ್ಗೆ 8 ರಿಂದ 11.30 ಗಂಟೆಯವರೆಗೆ ಕೇಂದ್ರ ಸರ್ಕಾರದ ಜಲ ಶಕ್ತಿ ಹಾಗೂ ರೈಲ್ವೆ ಖಾತೆಯ ರಾಜ್ಯ ಸಚಿವ ವಿ.ಸೋಮಣ್ಣ ನೇತೃತ್ವದಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರ ಹಾಗೂ ಜನಸಂಪರ್ಕ ಸಭೆಯನ್ನು ಆಯೋಜನೆ ಮಾಡಲಾಗಿದೆ ಎಂದು ತಾಲ್ಲೂಕು ತಹಶೀಲ್ದಾರ್ ಪವನ್‌ಕುಮಾರ್ ತಿಳಿಸಿದ್ದಾರೆ. ಸಾರ್ವಜನಿಕರು ಬಹು ಮುಖ್ಯವಾಗಿ ರೈಲ್ವೆ, ರಾಷ್ಟ್ರೀಯ ಹೆದ್ದಾರಿಗೆ ಸಂಬಂಧಿಸಿದಂತೆ ಅಹವಾಲುಗಳನ್ನು ಸ್ವೀಕರಿಸಲಾಗುತ್ತಿದ್ದು, ಸಭೆಯಲ್ಲಿ ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳು ಖುದ್ದು ಕಡ್ಡಾಯವಾಗಿ ಹಾಜರಿಬೇಕಾಗಿದೆ ಎಂದು ತಿಳಿಸಿದರು.

## ನ್ಯಾಯಬೆಲೆ ಅಂಗಡಿಯಲ್ಲಿನ ಸರ್ವರ್ ಸಮಸ್ಯೆ

**ಬೆಂಗಳೂರು:** ನಂಜುಂಡೇಶ್ವರ ನಗರದ ಮಾರಪ್ಪನಪಾಳ್ಯ ವಾರ್ಡ್ ನಲ್ಲಿನ ನ್ಯಾಯಬೆಲೆ ಅಂಗಡಿಯಲ್ಲಿ ಸರಿಯಾದ ತೂಕ ವಿಲ್ಲದೆ ಪಡಿತರ ನೀಡಲಾಗುತ್ತಿತ್ತು ಹಾಗೂ ಸಾರ್ವಜನಿಕರು ಪಡಿತರ ಪಡೆಯಲು ಹೋದಾಗ ಸರ್ವರ್ ಸಮಸ್ಯೆ ಇದೆ ಎಂದು ಹೇಳುತ್ತಿದ್ದರು. ವಿಷಯ ತಿಳಿದ ಶಾಸಕ ಕೆ. ಗೋಪಾಲಯ್ಯ ಅವರು ಸ್ಥಳಕ್ಕೆ ಆಗಮಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮೊಬೈಲ್ ಒ.ಟಿ.ಪಿ. ಮೂಲಕ ಪಡಿತರ ವಿತರಿಸುವಂತೆ ಹಾಗೂ ನಿಖರವಾದ ತೂಕದ ಪಡಿತರ ವಿತರಿಸಲು ಕೂಡಲೆ ಕಟ್ಟುನಿಟ್ಟಿನ ಅಗತ್ಯ ಕ್ರಮ ತೆಗೆದುಕೊಳ್ಳುವಂತೆ ಸೂಚನೆ ನೀಡಿದರು. ಇಡೀ ರಾಜ್ಯದ ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ವರ್ ಸಮಸ್ಯೆಯಿದ್ದು, ದಿನಗೂಲಿ ನೌಕರರು, ಬೀದಿಬದಿ ವ್ಯಾಪಾರಿಗಳು, ಕಟ್ಟಡ ಕಾರ್ಮಿಕರುಗಳಿಗೆ ಇದರಿಂದ ತೊಂದರೆಯಾಗುತ್ತಿದೆ. ಆದುದರಿಂದ ಎಲ್ಲಾ ನ್ಯಾಯಬೆಲೆ ಅಂಗಡಿಗಳಲ್ಲಿ ಒ.ಟಿ.ಪಿ. ಮೂಲಕ ಪಡಿತರ ವಿತರಣೆ ಮಾಡುವಂತೆ ಕೂಡಲೇ ನ್ಯಾಯಬೆಲೆ ಅಂಗಡಿಗಳಿಗೆ ಸೂಚಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು. ಅಲ್ಲದೆ ನಿಗದಿತ ಸಮಯದಲ್ಲಿ ಅಂಗಡಿ ತೆರೆಯಬೇಕು ಹಾಗೂ ಸರ್ವರ್ ಸಮಸ್ಯೆಯನ್ನು 2 ದಿನದ ಒಳಗಾಗಿ ಸರಿಪಡಿಸಬೇಕು ಎಂದು ಇಲಾಖೆಯ ಸಚಿವರಾದ ಕೆ.ಹೆಚ್.ಮುನಿಯಪ್ಪರವರಿಗೆ ಮನವಿ ಮಾಡಿದರು. ಇದೆ ವೇಳೆ ಆಹಾರ ಇಲಾಖೆಯ ಆಯುಕ್ತರು ಹಾಗೂ ಜಂಟಿ ನಿರ್ದೇಶಕರಿಗೆ ದೂರವಾಣಿ ಮೂಲಕ ಮಾತನಾಡಿ ಒ.ಟಿ.ಪಿ. ಮೂಲಕ ಪಡಿತರ ವಿತರಿಸುವಂತೆ ಕ್ರಮ ಕೈಗೊಳ್ಳಲು ತಿಳಿಸಿದರು.



# ಕಾಲುಬಾಯಿ ಜ್ವರಕ್ಕೆ ಲಸಿಕೆ ಹಾಕಿಸಿ

**ಕೋಲಾರ:** ಜಾನುವಾರುಗಳಿಗೆ ಕಾಲುಬಾಯಿ ಜ್ವರ ಶುರುವಾಗುತ್ತಿದ್ದು ಈಗಾಗಲೇ ಪಶುಸಂಗೋಪನಾ ಇಲಾಖೆಯಿಂದ ಜಾನುವಾರುಗಳಿಗೆ ಕಾಲು ಬಾಯಿ ಜ್ವರಕ್ಕೆ ಲಸಿಕೆ ಹಾಕಲಾಗುತ್ತಿದೆ ಜಿಲ್ಲೆಯ ಪ್ರತಿ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಕಡ್ಡಾಯವಾಗಿ ಮಾಡಿಸಿಕೊಳ್ಳಿ ಎಂದು ಪಶುಸಂಗೋಪನಾ ಇಲಾಖೆಯ ಕೋಲಾರ ಜಿಲ್ಲಾ ಉಪನಿರ್ದೇಶಕ ಗಂಗಾ ತುಳಸಿ ರಾಮಯ್ಯ ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ನಿರಂತರ ಮಳೆಯಾಗುತ್ತಿದ್ದು ಹವಾಮಾನದಲ್ಲಿ ಏರಿಳಿತವಾಗುತ್ತಿದೆ. ರಾಸುಗಳನ್ನು ಈ ಸಮಯದಲ್ಲಿ ಜಾಗೃತೆಯಿಂದ ನೋಡಿಕೊಳ್ಳಬೇಕು ಕಾಲುಬಾಯಿ ಜ್ವರ ವೈರಾಣು ಆಗಿದ್ದು ಹಸುಗಳಿಂದ ಹಸುಗಳಿಗೆ ಶೀಘ್ರವಾಗಿ ಹರಡುತ್ತದೆ, ಕಾಲು ಬಾಯಿ ಜ್ವರ ವೈರಾಣು ಹರಡಿದರೆ ಅದನ್ನು ನಿಯಂತ್ರಣ ಮಾಡುವುದು ಬಹಳ ಕಷ್ಟ ಅದಕ್ಕಾಗಿ ವೈರಾಣು ಹರಡುವ ಮೊದಲೇ ಎಲ್ಲಾ ರೈತರು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿಕೊಳ್ಳಬೇಕು ತಿಳಿಸಿದ್ದಾರೆ.

ಅರಾಭಿಕೊತ್ತನೂರಿನ ಪಶುಚಿಕಿತ್ಸಾ ಕೇಂದ್ರದ ಡಾ. ನಿತೀನ್ ಬಿ.ಎಸ್ ರಾಸುಗಳಿಗೆ ಲಿಸಿಕೆ ಹಾಕಿ ಮಾತನಾಡಿ ಕಾಲುಬಾಯಿ ಜ್ವರ ಹರಡಿದರೆ ಹಸುಗಳು ವಿಪರೀತ ಜೊಲ್ಲು ಸುರಿಸುವುದು, ಬಾಯಿ ಹುಣ್ಣಾಗುವುದು ಹಾಗು ಹೆಚ್ಚಿನ ಜ್ವರ ಬಂದು ಹಾಲು ಕೊಡುವ ಹಸುಗಳಲ್ಲಿ ಹಾಲು ಕಡಿಮೆಯಾಗಿ ನಿತ್ರಾಣವಾಗುತ್ತವೆ ಅದಕ್ಕಾಗಿ 3 ತಿಂಗಳ ಮೇಲ್ಪಟ್ಟ ಕರುಗಳಿಂದ ಎಲ್ಲಾ ಹಸುಗಳಿಗೆ ಈ ಲಸಿಕೆ ಹಾಕಿಸಿಕೊಳ್ಳಬೇಕು, 9 ತಿಂಗಳ



ಗರ್ಭಿಣಿ ಹಸುಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕಿಸಿಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಆ.21 ರಿಂದು ಕಾಲು ಬಾರಿ ರೋಗಕ್ಕೆ ಲಿಸಿಕಾ ಅಭಿಯಾವನ್ನು ಪಶುಸಂಗೋಪನಾ ಇಲಾಖೆಯಿಂದ ಪ್ರಾರಂಭಿಸಲಾಗಿದ್ದು ಎಲ್ಲಾ ಪಶುವೈದ್ಯರು ಉಚಿತವಾಗಿ ಲಸಿಕೆ ಹಾಕುತ್ತಿದ್ದು ಲಸಿಕೆ ಹಾಕಿಸಿಕೊಳ್ಳದ ರೈತರು ತಮ್ಮ ಜಾನುವಾರುಗಳನ್ನು ಹತ್ತಿರದ ಪಶುಸಂಗೋಪನಾ ಆಸ್ಪತ್ರೆಯ ಬಳಿ ವೈದ್ಯರನ್ನು ಸಂಪರ್ಕಿಸಿ ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿಕೊಳ್ಳಬೇಕು ಮನವಿ ಮಾಡಿದರು.

# ಮಲೆಮಹದೇಶ್ವರದಲ್ಲಿ 2 ಕೋಟಿ

**ಚಾಮರಾಜನಗರ:** ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಗುರುವಾರ ಬೆಳಗ್ಗೆಯಿಂದ ಹುಂಡಿಯಲ್ಲಿನ ಕಾಣಿಕೆ ಎಣಿಕೆ ಆರಂಭವಾಗಿ ಸಂಜೆ ತನಕ ನಡೆಯಿತು.

ಶ್ರೀ ಮಲೈ ಮಹದೇಶ್ವರ ಸ್ವಾಮಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದಲ್ಲಿ , ಶ್ರೀ ಸಾಲೂರು ಬೃಹನ್ಮಠಾಧ್ಯಕ್ಷ ಶ್ರೀ ಶಾಂತಮಲ್ಲಿಕಾರ್ಜುನಸ್ವಾಮಿಗಳ ದಿವ್ಯಸಾನಿದ್ಯದಲ್ಲಿ, ಪ್ರಾಧಿಕಾರ ಕಾರ್ಯದರ್ಶಿ ರಘು, ಎ. ಈ, ನೇತೃತ್ವದಲ್ಲಿ ಹುಂಡಿ ಎಣಿಕೆ ಕಾರ್ಯ ನಡೆಯಿತು. 28 ದಿನಗಳಲ್ಲಿ ಒಟ್ಟು ಮೊತ್ತ ರೂ.2,00,80,844 ( ಎರಡು ಕೋಟಿ ಎಂಟು ಸಾವಿರದ ಎಂಟನೂರು ನಲವತ್ತ ನಾಲ್ಕು ರೂ ) (ಹುಂಡಿ ಮತ್ತು ಇ-ಹುಂಡಿ ಸೇರಿ) ಹಾಗೂ ಚಿನ್ನ 30 ಗ್ರಾಂ, ಬೆಳ್ಳಿ 1 ಕೆ.ಜಿ 865 ಗ್ರಾಂ ಹುಂಡಿಯಲ್ಲಿ ದೊರೆತಿದೆ. ಎಣಿಕೆ ಕಾರ್ಯದಲ್ಲಿ ಪ್ರಾಧಿಕಾರದ ಉಪ ಕಾರ್ಯದರ್ಶಿ ಚಂದ್ರಶೇಖರ.ಜಿ.ಎಲ್, ಚಾಮರಾಜನಗರ ಜಿಲ್ಲಾಡಳಿತ ಕಛೇರಿಯ ಕು. ಶ್ವೇತಾ ಹಾಗೂ ಪ್ರಾಧಿಕಾರದ ಸಿಬ್ಬಂದಿಗಳು, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗೂ ಕೊಳ್ಳೇಗಾಲದ ಬ್ಯಾಂಕ್ ಆಫ್ ಬರೋಡ ಮುಖ್ಯ ವ್ಯವಸ್ಥಾಪಕರು, ಸಿಬ್ಬಂದಿಗಳು ಹಾಜರಿದ್ದರು.



### ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿಕೆ | 30 ವರ್ಷದಿಂದ ಡಯಾಬಿಟಿಸ್ ಇದೆ

# ವ್ಯಾಯಾಮ, ಶಿಸ್ತಿನ ಜೀವನಶೈಲಿಯಿಂದ ಡಯಾಬಿಟಿಕ್ ನಿಯಂತ್ರಣ

**ಕೋಲಾರ**: ನಾನು 30 ವರ್ಷಗಳಿಂದ ಸಕ್ಕರೆ ಕಾಯಿಲೆಯನ್ನು ನಿರ್ವಹಿಸುತ್ತಿದ್ದೇನೆ: ವ್ಯಾಯಾಮ, ಶಿಸ್ತಿನ ಜೀವನಶೈಲಿಯಿಂದ ಡಯಾಬಿಟಿಕ್ ನಿಯಂತ್ರಿಸಬಹುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭರವಸೆಯ ಮಾತುಗಳನ್ನಾಡಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾದ ಗೃಹ ಆರೋಗ್ಯ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ವಿಧಾನಸೌಧ ಬ್ಯಾಂಕ್ವೆಟ್ ಹಾಲ್ನಲ್ಲಿ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು.

ಕೋಲಾರ ಜಿಲ್ಲೆಯಲ್ಲಿ ಈ ಕಾರ್ಯಕ್ರಮ ಅನುಷ್ಠಾನ ಪ್ರಾಯೋಗಿಕವಾಗಿ ವರ್ಚಯುವಲ್ ವೇದಿಕೆಯಿಂದ ಚಾಲನೆ ನೀಡಲಾಯಿತು.

ಸ್ಟಂಟ್ ಹಾಕಿಸಿಕೊಂಡು 24 ವರ್ಷ ಆಯ್ತು. ಪಕ್ಷದ ಕೆಲಸನೂ ಮಾಡ್ತಿದ್ದೀನಿ, ಸರ್ಕಾರದ ಕೆಲಸನೂ ಮಾಡ್ತಿದ್ದೀನಿ, ವ್ಯಾಯಾಮನೂ ಮಾಡ್ತಿದ್ದೀನಿ. ಅರಾಮಾಗಿ ಎಲ್ಲಾ ಕೆಲಸ, ಕಾರ್ಯಗಳಲ್ಲೂ ಭಾಗವಹಿಸುತ್ತಿದ್ದೇನೆ. ಆದರೆ ವೈದ್ಯರು ಹೇಳಿದಂತೆ ಕೇಳುತ್ತೇನೆ. ಹೀಗಾಗಿ ಎಲ್ಲವನ್ನೂ ಅಚ್ಚುಕಟ್ಟಾಗಿ ನಿರ್ವಹಿಸುತ್ತಿದ್ದೇನೆ ಎನ್ನುವ ತಮ್ಮದೇ ಅನುಭವಗಳ ಆರೋಗ್ಯ ಸಂದೇಶ ನೀಡಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿಸಿದ್ದ ಗೃಹ ಆರೋಗ್ಯ: ಆರೋಗ್ಯ ಸೇವೆ ಮನೆ ಬಾಗಿಲಿಗೆ ನೂತನ ಮಹತ್ವದ ಜನಾರೋಗ್ಯ ಕಾರ್ಯಕ್ರಮವನ್ನು ಉದ್ಘಾಟಿಸಿ, ರೋಗಿಗಳೊಂದಿಗೆ ವರ್ಚವಲ್ ವಿಡಿಯೋ ಮಾತುಕತೆ ನಡೆಸಿದ ಬಳಿಕ ಮಾತನಾಡಿದರು.

ಕಾಯಿಲೆಗಳನ್ನು, ಆರೋಗ್ಯ ಸಮಸ್ಯೆಗಳನ್ನು ಗುಟ್ಟಾಗಿ ಇಟ್ಟು ಅನಾಹುತ ತಂದುಕೊಳ್ಳಬಾರದು. ಆಸ್ಪತ್ರೆಗೆ ಹೋಗಲು ಸಾಧ್ಯವಾಗದ ಬಡವರಿಗೂ ತಪಾಸಣೆ ಮತ್ತು ಚಿಕಿತ್ಸೆ ಒದಗಿಸಲು ಸಾಧ್ಯ ಆಗಲಿ ಎನ್ನುವ ಕಾರಣದಿಂದಲೇ ಮನೆಬಾಗಿಲಿಗೆ ಆರೋಗ್ಯ ಕಾರ್ಯಕ್ರಮ ಆರಂಭಿಸಿದ್ದೇವೆ ಎಂದರು.

ಬಹಳ ಜನರಿಗೆ ವೈದ್ಯರಿಗೆ ತಪಾಸಣೆ ವೆಚ್ಚ ಕೊಡುವುದಕ್ಕೂ ಸಾಧ್ಯವಾಗುವುದಿಲ್ಲ. ಆದರೆ ಇಂಥವರಿಗೂ ಆರೋಗ್ಯದ ಹಕ್ಕು ಇದೆ. ತಪಾಸಣೆಯಿಂದ ಸಾಂಕ್ರಾಮಿಕ ರೋಗಗಳು, ಸಾಂಕ್ರಾಮಿಕವಲ್ಲದ ರೋಗಗಳೂ ಪತ್ತೆಯಾಗುತ್ತವೆ ಎಂದರು.

ಬಹಳ ಜನ ಆರೋಗ್ಯ ತಪಾಸಣೆಯನ್ನೇ ಮಾಡಿಸಿಕೊಂಡಿರುವುದಿಲ್ಲ. ಹೀಗಾಗಿ ಮನೆ ಮನೆಗೆ ತೆರಳಿ ಪ್ರತಿಯೊಬ್ಬರ ಆರೋಗ್ಯ ತಪಾಸಣೆ ನಡೆಸಿ ಉಚಿತ ಚಿಕಿತ್ಸೆ ನೀಡುವ ಮಹತ್ವದ ಕಾರ್ಯಕ್ರಮ ಆರಂಭಿಸಿದ್ದೇವೆ. ಮನೆ



ಬಾಗಿಲಿಗೆ ಆರೋಗ್ಯ ಸವಲತ್ತು ಒದಗಿಸುವ ಗುರಿ ನಮ್ಮದಾಗಿದೆ ಎಂದರು.

ಕ್ಯಾನ್ಸರ್ ರೋಗ ಆರಂಭದಲ್ಲೇ ಪತ್ತೆಯಾದರೆ ಗುಣಪಡಿಸಲು ಸಾಧ್ಯವಿದೆ. ಸಕ್ಕರೆ ಕಾಯಿಲೆ, ರಕ್ತದೊತ್ತಡವನ್ನು ಯಶಸ್ವಿಯಾಗಿ ನಿಯಂತ್ರಿಸಬಹುದು. ಶಿಸ್ತಿನ ವ್ಯಾಯಾಮಯುಕ್ತ ಜೀವನಶೈಲಿ ಮುಖ್ಯ ಎಂದರು.

ಒತ್ತಡದ ಜೀವನದಿಂದಲೂ ಕಾಯಿಲೆಗಳು ಬರುತ್ತವೆ. ಈಗ ರಸಾಯನಿಕ ಬಳಸಿದ ಆಹಾರದ ಸೇವನೆ ಹೆಚ್ಚಾಗಿರುವುದರಿಂದಲೂ ಆರೋಗ್ಯ ಸಮಸ್ಯೆ ಹೆಚ್ಚುತ್ತಿದೆ ಎಂದರು.

ಮೊಟ್ಟೆ, ಮೀನು, ಮಾಂಸ ತಿಂದರೆ ಡಾಯಾಬಿಟಿಕ್ ಬರುತ್ತದೆ, ಹೆಚ್ಚುತ್ತದೆ ಎನ್ನುವ ತಪ್ಪುಕಲ್ಪನೆ ಇದೆ. ಹಾಗೇನೂ ಇಲ್ಲ. ಮೊಟ್ಟೆ ಮಾಂಸ ಬಿಟ್ಟು ಬರೀ ಅನ್ನ ತಿಂದರೆ ಹೇಗೆ ? ಬ್ಯಾಲೆನ್ಸ್ ಆಹಾರ ಸೇವನೆ ಮುಖ್ಯ ಎಂದರು.

ಪ್ರಾಸ್ತವಿಕವಾಗಿ ಮಾತನಾಡಿದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವರಾದ ದಿನೇಶ್ ಗುಂಡೂರಾವ್ ಅವರು ಇದು ಗ್ರಾಮೀಣ ಪ್ರದೇಶದ ಜನರ ಆರೋಗ್ಯ ರಕ್ಷಣೆ ವಿಚಾರದಲ್ಲಿ ಒಂದು ದೂರದೃಷ್ಟಿಯ ಯೋಜನೆಯಾಗಿದೆ. ಕೋಲಾರ ಜಿಲ್ಲೆಯಿಂದ ಯೋಜನೆ ಆರಂಭವಾಗಿ, ಜನವರಿ ತಿಂಗಳಿನಲ್ಲಿ ರಾಜ್ಯಾದ್ಯಂತ ಯೋಜನೆ ಜಾರಿಗೆ ಬರಲಿದೆ. ಅಸಾಂಕ್ರಾಮಿಕ ರೋಗಗಳನ್ನು ಹತೋಟಿಗೆ ತರುವುದು ಗೃಹ ಆರೋಗ್ಯ ಯೋಜನೆಯ ಮುಖ್ಯಗುರಿಯಾಗಿದೆ. ದೇಶದಲ್ಲಿ ಅಸಾಂಕ್ರಾಮಿಕ ರೋಗಗಳು (ಎನ್ಸಿಡಿ) ಹೆಚ್ಚುತ್ತಿವೆ. ವಿಶೇಷವಾಗಿ ಕರ್ನಾಟಕದಲ್ಲಿ ಶೇ.26.9ರಷ್ಟು ರಕ್ತದೊತ್ತಡ, ಶೇ.15.6ರಷ್ಟು ಮಧುಮೇಹ ರೋಗಗಳಿಂದ ಜನರು ಬಳಲು ತ್ತಿದ್ದು, ಇದರಿಂದ ಉಂಟಾಗುತ್ತಿ ರುವ ಮರಣ ಹಾಗೂ ಅನಾರೋಗ್ಯವನ್ನು ತಡೆಗಟ್ಟಲು ಗೃಹ ಆರೋಗ್ಯ ಯೋಜನೆಯನ್ನು ಜಾರಿಗೆ ತರಲಾಗಿದೆ ಎಂದರು

ಅಲ್ಲದೇ ರಾಜ್ಯದಲ್ಲಿ ಶೇ.11.5ರಷ್ಟು ಬಾಯಿ ಕ್ಯಾನ್ಸರ್, ಶೇ.26ರಷ್ಟು ಸ್ತನ ಕ್ಯಾನರ್ಹಾಗೂ ಶೇ.18.3 ರಷ್ಟು ಗರ್ಭಕಂಠದ ಕ್ಯಾನ್ಸರ್ ರೋಗಗಳಿಂದ ಜನರು ತತ್ತರಿಸುತ್ತಿದ್ದು, ಈ ರೋಗಗಳಿಗೂ ಪರಿಹಾರ ಒದಗಿಸಲು ಗೃಹ ಆರೋಗ್ಯ ಯೋಜನೆಯಲ್ಲಿ ರೂಪರೇಷೆಗಳನ್ನು ಸಿದ್ದಪಡಿಸಲಾಗಿದೆ. ಹಳ್ಳಿಗಾಡಿನ ಜನರು ರಕ್ತದೊತ್ತಡ, ಮಧು ಮೇಹ ರೋಗಗಳ ತಪಾಸಣೆ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಹೀಗಾಗಿ, ಇದೀಗ ಆರೋಗ್ಯ ಇಲಾಖೆಯನ್ನೇ ಜನರ ಮನೆ ಬಳಿಗೆ ಕಳಿಸುತ್ತಿದ್ದೇವೆ ಎಂದು ತಿಳಿಸಿದರು.

ಆರೋಗ್ಯ ಅಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತರು ಮನೆ ಮನೆಗೆ ತೆರಳಿ ಜನರ ರಕ್ತದೊತ್ತಡ, ಮಧುಮೇಹ ತಪಾಸಣೆ ನಡೆಸಲಿದ್ದಾರೆ. ರೋಗಕ್ಕೆ ತುತ್ತಾದವರಿಗೆ ಸೂಕ್ತ ಔಷಧಿಗಳನ್ನು ತಲುಪಿಸಲಾಗುತ್ತದೆ. ನಮ್ಮ ಜನರು ಈ ಯೋಜನೆಯ ಸದುಪಯೋಗ ಪಡಿಸಿಕೊಳ್ಳಬೇಕು. ಆರಂಭಿಕ ಹಂತದಲ್ಲಿ ರಕ್ತದೊತ್ತಡ, ಮಧುಮೇಹವನ್ನು ಜನರು ನಿರ್ಲಕ್ಷಿಸುತ್ತಾರೆ. ಆದರೆ ದೀರ್ಘಾವಧಿಯಲ್ಲಿ ಈ ರೋಗಗಳೇ ಕಿಡ್ನಿ ವೈಫಲ್ಯ, ಹೃದಯಾಘಾತಗಳಿಗೆ ಕಾರಣವಾಗುತ್ತದೆ. ಗೃಹ ಆರೋಗ್ಯದ ಮುಖಾಂತರ ನಾವು ಈಗಲೇ ತಪಾಸಣೆ ನಡೆಸಿ ಔಷಧಿ ಕೊಟ್ಟರೆ ಮುಂದೆ ಆಗುವ ಜೀವಪಾಯಗಳನ್ನು ತಡೆಗಟ್ಟಬಹುದು. ವಿಶೇಷವಾಗಿ ಗ್ರಾಮೀಣ ಭಾಗದ ಜನರ ಆರೋಗ್ಯ ರಕ್ಷಣೆಯಲ್ಲಿ ಈ ಯೋಜನೆ ಮಹತ್ವದ ಪಾತ್ರ ತ್ರ ವಹಿಸಲಿದೆ ಎಂದರು.

ಕಾರ್ಯಕ್ರಮದಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಮುಖ್ಯ ಸಚೇತಕರಾದ ಅಶೋಕ್ ಪಟ್ಟಣ್, ವಿಧಾನ ಪರಿಷತ್ ಸದಸ್ಯರಾದ ಸುಧಾಮ ದಾಸ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಸೇರಿ ಇಲಾಖಾ ಅಧಿಕಾರಿಗಳು ಉಪಸ್ಥಿತರಿದ್ದರು

ಕೋಲಾರದ ವರ್ಚವಲ್ ವೇದಿಕೆಯಲ್ಲಿ ಜಿಲ್ಲಾಧಿಕಾರಿ ಅಕ್ರಂ ಪಾಷ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ. ನಿಖಿಲ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಶ್ರೀನಿವಾಸ್, ಜಿಲ್ಲಾಶಸ್ತ್ರಚಿಕಿತ್ಸಕರು ಸೇರಿದಂತೆ ವಿವಿಧ ಅಧಿಕಾರಿಗಳು ಉಪಸಸ್ಥಿತರಿದ್ದರು.

## ನಗರಸಭೆ ವ್ಯಾಪ್ತಿಯ ಅಂಗಡಿ, ವಾಣಿಜ್ಯ ಮಳಿಗೆ, ಸಂಕೀರ್ಣಗಳ ನಾಮಫಲಕಗಳಲ್ಲಿ ಶೇ. 60 ಕನ್ನಡ ಪದ ಬಳಕೆಗೆ ಸೂಚನೆ

**ಚಾಮರಾಜನಗರ:** ಚಾಮರಾಜನಗರ ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ, ವಾಣಿಜ್ಯ ಮಳಿಗೆಗಳು, ಸಂಕೀರ್ಣಗಳ ನಾಮಫಲಕಗಳಲ್ಲಿ ಕನ್ನಡವನ್ನು ಪ್ರಧಾನವಾಗಿ ಅಂದರೆ ಶೇ.60 ಭಾಗ ಕನ್ನಡ ಪದವನ್ನು ಬಳಸುವಂತೆ ನಗರಸಭೆ ಸೂಚನೆ ನೀಡಿದೆ. ಕರ್ನಾಟಕದಲ್ಲಿ ಕನ್ನಡವೆ ಆಡಳಿತ ಭಾಷೆ, ಆಡಳಿತದ ಎಲ್ಲಾ ಹಂತದಲ್ಲೂ ಕನ್ನಡ ಬಳಕೆ ಆಗಬೇಕೆನ್ನುವುದು ಸರ್ಕಾರದ ದಿಟ್ಟ ನಿಲವು. ಜನರಾಡುವ ಭಾಷೆಯಲ್ಲಿ ಆಡಳಿತ ನಡೆಸಿದಾಗ ಜನರ ನೋವು-ನಲಿವುಗಳಿಗೆ ಸ್ಪಂದಿಸಲು ಸಾಧ್ಯವೆನ್ನುವುದನ್ನು ಮನಗಂಡ ಸರ್ಕಾರ ಸಾಕಷ್ಟು ಆದೇಶ ಮತ್ತು ಸುತ್ತೋಲೆಗಳನ್ನು ಹೊರಡಿಸಿದೆ. ಗ್ರಾಮಾಂತರ ಪ್ರದೇಶಗಳಿಂದ ಹಿಡಿದು ಸಚಿವಾಲಯದವರೆಗೆ ರಾಜ್ಯ ಸರ್ಕಾರ ಎಲ್ಲಾ ಕಚೇರಿಗಳಲ್ಲೂ ಕನ್ನಡ ಭಾಷೆಯನ್ನು ಕಟ್ಟುನಿಟ್ಟಾಗಿ ಮತ್ತು ಔಚಿತ್ಯಪೂರ್ಣವಾಗಿ ಜಾರಿಗೆ ತರಬೇಕೆಂಬುದು ಸರ್ಕಾರದ ಆಶಯವಾಗಿರುತ್ತದೆ. ಅದರಂತೆ ನಗರಸಭಾ ವ್ಯಾಪ್ತಿಯಲ್ಲಿ ಕನ್ನಡವನ್ನು ಎಲ್ಲಾ ಕ್ಷೇತ್ರಗಳಲ್ಲಿ ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಉದ್ದೇಶವಾಗಿದ್ದು, ಜಿಲ್ಲಾಧಿಕಾರಿಗಳು ಸಹ ಸರ್ಕಾರದ ಆದೇಶದಂತೆ ಕನ್ನಡವನ್ನು ಸಂಪೂರ್ಣವಾಗಿ ಅನು?ಾನ ಮಾಡಲು ಕ್ರಮವಹಿಸುವಂತೆ ಆದೇಶಿಸಿದ್ದಾರೆ. ನಗರಸಭೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಗಡಿ, ವಾಣಿಜ್ಯ ಮಳಿಗೆ, ಸಂಕೀರ್ಣಗಳ ನಾಮಫಲಕಗಳಲ್ಲಿ ಕನ್ನಡವನ್ನು ಪ್ರಧಾನವಾಗಿ ಅಂದರೆ ಶೇ.60 ಭಾಗ ಕನ್ನಡ ಪದವನ್ನು ಬಳಸಬೇಕು. ಏಳು ದಿನಗಳ ಒಳಗೆ ಎಲ್ಲಾ ಅಂಗಡಿ, ವಾಣಿಜ್ಯ ಮಳಿಗೆಗಳು, ಸಂಕೀರ್ಣಗಳಲ್ಲಿ ಸಂಪೂರ್ಣವಾಗಿ ಇಂಗ್ಲೀಷ್ ಅಕ್ಷರಗಳಿಂದ ಕೂಡಿರುವ ನಾಮಫಲಕ ಮತ್ತು ಶೇ.60 ಕಡಿಮೆಯಿರುವ ನಾಮಫಲಕಗಳನ್ನು ತೆರವುಗೊಳಿಸಬೇಕು. ತಪ್ಪಿದಲ್ಲಿ ನಗರಸಭೆಯಿಂದ ನೀಡಿರುವ ಉದ್ದಿಮೆ ಪರವಾನಿಗೆಯನ್ನು ರದ್ದುಪಡಿಸಿ, ಸದರಿ ನಾಮಫಲಕಗಳನ್ನು ತೆರವುಗೊಳಿಸಲಾಗುವುದು.

# ಬಡವರ ಬಿಪಿಎಲ್ ಕಾರ್ಡ್ ರದ್ದುಪಡಿಸದಂತೆ ಆಗ್ರಹ

**ಚಾಮರಾಜನಗರ:** ಸರ್ಕಾರಿ ನೌಕರರು, ತೆರಿಗೆ ಪಾವತಿಸುವವರನ್ನು ಹೊರತು ಪಡಿಸಿ ಉಳಿದ ಕುಟುಂಬಗಳ ಬಿಪಿಎಲ್ ಕಾರ್ಡ್ಗಳನ್ನು ರದ್ದು ಪಡಿಸದಂತೆ ಆಗ್ರಹಿಸಿ ಕರ್ನಾಟಕ ಸೇನಾಪಡೆ ವತಿಯಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ಭುವನೇಶ್ವರಿ ವೃತ್ತದ ಬಳಿ ಜಮಾಯಿಸಿದ ಪ್ರತಿಭಟನಾಕಾರರು ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಕರ್ನಾಟಕ ಸೇನಾಪಡೆಯ ಅಧ್ಯಕ್ಷ ಚಾ.ರಂ.ಶ್ರೀನಿವಾಸಗೌಡ ಮಾತನಾಡಿ, ರಾಜ್ಯ ಸರ್ಕಾರ ಒಂದು ಕಡೆ 5 ಗ್ಯಾರಂಟಿಗಳನ್ನು ನೀಡಿ ಜನರಿಗೆ ಸಹಾಯ ಮಾಡುತ್ತಿದ್ದೇವೆ ಎಂದು ಹೇಳುತ್ತಿದೆ. ಆದರೆ, ಮತ್ತೊಂದು ಕಡೆ ಜನರಿಗೆ ಅಗತ್ಯವಿರುವ ಬಿಪಿಎಲ್ ಕಾರ್ಡ್ಗಳನ್ನು ವ್ಯವಸ್ಥಿತವಾಗಿ ಹತ್ತಿಕ್ಕುವ ಕೆಲಸ ಮಾಡುತ್ತಿದೆ ಎಂದು ದೂರಿದರು.

ಸರ್ಕಾರಿ ನೌಕರರು ಹಾಗೂ ತೆರಿಗೆ ಪಾವತಿಸುವವರನ್ನು ಹೊರತುಪಡಿಸಿ ಉಳಿದ ಕುಟುಂಬಗಳಿಗೆ ಬಿಪಿಎಲ್ ಕಾರ್ಡ್ಗಳನ್ನು



ವಿತರಣೆ ಮಾಡಬೇಕು. ಇಲ್ಲದಿದ್ದರೆ ಹೋರಾಟ ಮಾಡುವುದಾಗಿ ಎಚ್ಚರಿಸಿದ ಅವರು ಕಳೆದ ನಾಲ್ಕೈದು ದಿನಗಳಿಂದಲೂ ಸರ್ವರ್ ಸಮಸ್ಯೆಯಿಂದಾಗಿ ನ್ಯಾಯ ಬೆಲೆ ಅಂಗಡಿಗಳ ಮುಂದೆ ಜನರು ಕ್ಯೂನಲ್ಲಿ ನಿಂತಿದ್ದಾರೆ. ಕೂಲಿ ಕೆಲಸ ಬಿಟ್ಟು ನಿಲ್ಲುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೂಡಲೇ ಸರ್ವರ್ ಸಮಸ್ಯೆ ಬಗೆಹರಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಶಾ.ಮುರುಳಿ, ಚಾ.ವೆಂ. ರಾಜಗೋಪಾಲ್, ಚಾ.ಸಿ. ಸೋಮನಾಯಕ, ನಿಜಧ್ವನಿ ಸಿ.ಎನ್. ಗೋವಿಂದರಾಜು, ಚಾ.ರಾ. ಕುಮಾರ್, ಮಹೇಶ್ಗೌಡ, ಪಣ್ಯದಹುಂಡಿ ರಾಜು, ಆಟೋ ಲಿಂಗರಾಜು, ಸಿದ್ದರಾಜು, ನಂಜುಂಡಶೆಟ್ಟಿ, ವೀರಭದ್ರ, ತಾಂಡವಮೂರ್ತಿ ಸೇರಿದಂತೆ ಇತರರು ಭಾಗವಹಿಸಿದ್ದರು.

# ಕಂದಾಯ ಸುಧಾರಣೆಗಳ ಅಧ್ಯಯನಕ್ಕೆ ಉತ್ಸುಕತೆ

**ಕೋಲಾರ:** ಕರ್ನಾಟಕ ರಾಜ್ಯದ ಕಂದಾಯ ಸುಧಾರಣೆಗಳನ್ನು ಅಭ್ಯಸಿಸಲು ಇಂದು ಕೋಲಾರ ಜಿಲ್ಲೆಗೆ ಆಗಮಿಸಿದ ಮಿಜೋರಾಂ ರಾಜ್ಯದ ಭೂ ಕಂದಾಯ ಹಾಗೂ ವಸಾಹತು ಇಲಾಖೆಯ ಸಚಿವರಾದ ಶ್ರೀ ಬಿ.ಲಾಲ್‌ಚಿಂಸೋವ ಹಾಗೂ ಮಿಜೋರಾಂ ಸರ್ಕಾರದ ಕಾರ್ಯದರ್ಶಿ ವನ್‌ಲಾಲ್ ಮಾವಿಯಾ ರವರುಗಳನ್ನು ಮಾನ್ಯ ಜಿಲ್ಲಾಧಿಕಾರಿಗಳಾದ ಅಕ್ರಂ ಪಾಷ ಅವರು ಸ್ವಾಗತಿಸಿ ಕಂದಾಯ ಇಲಾಖೆಯ ವಿವಿಧ ವಿವರಗಳನ್ನು ಅವರಿಗೆ ನೀಡಿದರು.

ಉತ್ಸುಕತೆಯಿಂದ ಪ್ರತಿಯೊಂದು ವಿವರಗಳನ್ನು ಮಾನ್ಯ ಜಿಲ್ಲಾಧಿಕಾರಿಗಳಿಂದ ಕೇಳಿದ ಅಧ್ಯಯನ ತಂಡ ಕೋಲಾರ ಜಿಲ್ಲೆಯ ಆಡಳಿತ ವೈಖರಿಯನ್ನು ಶ್ಲಾಘಿಸಿತು. ಸಾರ್ವಜನಿಕರಿಗೆ ವಿವಿಧ ಕಂದಾಯ ಸೇವೆಗಳನ್ನು ತ್ವರಿತಗತಿಯಲ್ಲಿ ವಿತರಿಸುತ್ತಿರುವ ಜಿಲ್ಲಾಡಳಿತವನ್ನು ಹಾಗೂ ಕಂದಾಯ ಇಲಾಖೆ ಸಿಬ್ಬಂದಿಗಳ ವೃತ್ತಿಪರ ಕಾಳಜಿಯನ್ನು ಹೊಗಳಿದರು.

ಮಾನ್ಯ ಜಿಲ್ಲಾಧಿಕಾರಿಗಳು ಕಂದಾಯ ಇಲಾಖೆಯ ಅಟಲ್‌ಜಿ ಜನಸ್ನೇಹಿ ಕೇಂದ್ರದಲ್ಲಿ ಜಿಲ್ಲೆಯ ಸಾರ್ವಜನಿಕರಿಗೆ ವಿತರಿಸಲಾಗುವ ವಿವಿಧ ಪ್ರಮಾಣ ಪತ್ರಗಳನ್ನು ಯಾವುದೇ ವಿಳಂಭವಿಲ್ಲದೆ, ಶೇ.100 ರಷ್ಟು ವಿತರಿಸಿ ರಾಜ್ಯದಲ್ಲೇ ಪ್ರಥಮ ರ್‍ಯಾಂಕಿಂಗ್ ಪಡೆಯುವ ಸಾಧನೆ ಮಾಡಿದೆ. ಈ ಸೇವೆಯಲ್ಲಿ ನಾಗರಿಕರಿಗೆ ವಿವಿಧ ಸೇವೆಗಳನ್ನು ನಾಡಕಛೇರಿ ಮೂಲಕ ಸುಲಭವಾಗಿ ತಲುಪಿಸುವ ಗುರಿಯನ್ನು ಹೊಂದಿದೆ. ಜಾತಿ ಮತ್ತು ಆದಾಯ, ಭೂಮಿ ಮತ್ತು ಕೃಷಿಕರಿಗೆ ಸಂಬಂಧಿಸಿದ ಮತ್ತು ಸಮಾಜಿಕ ಭದ್ರತಾ ಪಿಂಚಣಿಗಳು, ಜಾತಿ ಆದಾಯ ಪ್ರಮಾಣ ಪತ್ರ, ಪಡಿತರ ತಿದ್ದುಪಡಿ, ಪಹಣಿ, ಮ್ಯುಟೇಶನ್, ಆಧಾರ್ ಅರ್ಜಿ, ತಿದ್ದುಪಡಿ ಸೇರಿದಂತೆ 25ಕ್ಕೂ ಹೆಚ್ಚಿನ ಸೇವೆಗಳನ್ನು ಆನ್‌ಲೈನ್‌ನಲ್ಲಿಯೇ ಒದಗಿಸಲಾಗುತ್ತಿದೆ. ಈ ವಿತರಣೆಗಳಲ್ಲಿ ಹಿಂದೆ 31 ಜಿಲ್ಲೆಗಳ ಪೈಕಿ 28ನೇ ಸ್ಥಾನದಲ್ಲಿದ್ದ,



ಕೋಲಾರ ಜಿಲ್ಲೆಯು ಪ್ರಸ್ತುತ ಶೇ.100ರಷ್ಟು ವಿಳಂಬ ರಹಿತ ಸೇವೆಯನ್ನು ನೀಡುವ ಖಾತರಿ ಪಡಿಸಿಕೊಳ್ಳಲಾಗುತ್ತಿದೆ. ಕಳೆದ ಏಳು ತಿಂಗಳುಗಳಿಂದ ಸದರಿ ಸೇವೆಯನ್ನು ಒದಗಿಸುವಲ್ಲಿ ರಾಜ್ಯಕ್ಕೆ ಕೋಲಾರ ಜಿಲ್ಲೆಯು ಮಾದರಿಯಾಗಿದೆ ಎಂದು ತಿಳಿಸಿದರು. ಪ್ರತಿ ಮಾಹೆ ಸಕಾಲ ಯೋಜನೆಯಡಿ ಸುಮಾರು 31 ಇಲಾಖೆಗಳ ವಿವಿಧ 75000 ಅರ್ಜಿಗಳನ್ನು ನಿಗಧಿತ ಅವಧಿಯೊಳಗೆ ಕ್ರಮಬದ್ಧವಾಗಿ ವಿಲೆಮಾಡಲಾಗುತ್ತಿದೆ. ಸದರಿ ಯೋಜನೆಯಡಿ ವಿಳಂಬ ಮಾಡುವ ನೌಕರರಿಗೆ ದಂಡ ವಿಧಿಸುವ ಪ್ರಕ್ರಿಯೆ ಇರುವುದರಿಂದ 21 ದಿನಗಳಲ್ಲಿ ವಿಲೆಮಾಡಲು ನಿಗಧಿಪಡಿಸಿರುವ ಅರ್ಜಿಗಳನ್ನು ಕೇವಲ 7 ದಿನಗಳೊಳಗೆ ವಿಲೆಮಾಡಲಾಗುತ್ತಿದೆ. ಈ ಹಿಂದೆ ಅರ್ಜಿ ವಿಲೆವಾರಿಯಲ್ಲಿ 31 ಜಿಲ್ಲೆಗಳ ಪೈಕಿ 29 ಸ್ಥಾನದಲ್ಲಿದ್ದ, ಕೋಲಾರ ಜಿಲ್ಲೆಯು ಪ್ರಸ್ತುತ ಪ್ರಥಮ ಸ್ಥಾನಕ್ಕೇರಿದೆ ಎಂದರು.

ಕಂದಾಯ ದಾಖಲೆಗಳಿಗೆ ಆಧಾರ್ ಸೀಡಿಂಗ್ ಕಾರ್ಯಪ್ರಗತಿಯಲ್ಲಿದ್ದು, ಕಂದಾಯ ದಾಖಲೆಗಳನ್ನು ತಿರುಚುವ ಪ್ರಕ್ರಿಯೆಗೆ ಕಡಿವಾಣ ಹಾಕಲಾಗಿದೆ. ಜಿಲ್ಲೆಯ ಶೇ.90ರಷ್ಟು ಖಾಸಗಿ ಸ್ವತ್ತುಗಳ ಕಂದಾಯ ದಾಖಲೆಗಳನ್ನು ಆಧಾರ್ ಸೀಡಿಂಗ್ ಮಾಡಲಾಗಿದೆ. ಅಂತಯೇ ಸರ್ಕಾರಿ ಆಸ್ತಿಗಳ ಕಾವಲಿಗಾಗಿ ಲ್ಯಾಂಡ್‌ಬೀಟ್ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಇದರಲ್ಲಿ ಸರ್ಕಾರಿ ಆಸ್ತಿಗಳ ಒತ್ತುವರಿಗೆ ಅವಕಾಶ ಇಲ್ಲದಂತೆ ಈ ತಂತ್ರಾಂಶದಲ್ಲಿ ಸರ್ಕಾರಿ ಜಮೀನುಗಳ ದಾಖಲೆಗಳನ್ನು ರಕ್ಷಿಸುವ ಜೊತೆಗೆ ಜಿಯೋಫೆನ್ಸ್ ಮೂಲಕ ನಿಗಾವಹಿಸಲಾಗುವುದು. ಈ ಪ್ರಕ್ರಿಯೆಯಲ್ಲಿ ಕೋಲಾರ ಜಿಲ್ಲೆಯು ರಾಜ್ಯಕ್ಕೆ ಆದರ್ಶಪ್ರಾಯವಾಗಿ ಪ್ರಥಮ ಸ್ಥಾನ ಪಡೆದಿದೆ ಎಂದು ವಿವರಿಸಿದರು.

ಭೂ ಸುರಕ್ಷ ಯೋಜನೆಯಡಿ ಜಿಲ್ಲೆಯ ಎಲ್ಲಾ ರೆಕಾರ್ಡ್ ರೂಂಗಳಲ್ಲಿರುವ ಎಲ್ಲಾ ದಾಖಲೆಗಳನ್ನು ಡಿಜಿಟಲಿಕರಣಗೊಳಿಸಿ ಗಣಕೀಕರಣಗೊಳಿಸಲಾಗಿದೆ. ಇದರಿಂದಾಗಿ ಕಡತಗಳು ಕಳದು ಹೋಗುವ ಸಂಭವ ಕಡಿಮೆಯಿದ್ದು, ತಕ್ಷಣಕ್ಕೆ ದಾಖಲೆಗಳು ಲಭ್ಯವಾಗುವ ಸಾಧ್ಯತೆ ಇರುತ್ತದೆ ಎಂದರು.

ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ನಿಯತವಾಗಿ ನಡೆಸಲಾಗುವ ಕಂದಾಯ ನ್ಯಾಯಾಲಯಗಳಲ್ಲಿ ದಾಖಲಾಗುವ ಪ್ರಕರಣಗಳನ್ನು ಕನಿಷ್ಠ 3 ತಿಂಗಳೊಳಗಾಗಿ ವಿಲೆಮಾಡಲಾಗುತ್ತಿದೆ. ಇದರಿಂದಾಗಿ ಸಾರ್ವಜನಿಕರಿಗೆ ತ್ವರಿತ ನ್ಯಾಯ ಒದಗಿಸಲು ಸಾಧ್ಯವಾಗುತ್ತಿದೆ ಎಂದರು.

ಜಿಲ್ಲೆಯ ಕಂದಾಯ ಇಲಾಖೆಯಲ್ಲಿ ತೀವ್ರ ಸಿಬ್ಬಂದಿ ಕೊರತೆಯಿದ್ದು, ಆದಾಗ್ಯೂ ಅಧಿಕಾರಿ ಮತ್ತು ಸಿಬ್ಬಂದಿಗಳು ಕ್ಷಮತೆಯಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಪ್ರಸ್ತುತ 1000 ಗ್ರಾಮ ಆಡಳಿತಾಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ. ಇದರಿಂದಾಗಿ ಸಿಬ್ಬಂದಿ ಕೊರತೆಯನ್ನು ಸ್ವಲ್ಪ ಮಟ್ಟಿಗೆ ನೀಗಿಸಿಕೊಳ್ಳಬಹುದಾಗಿದೆ ಎಂದರು. ಕಂದಾಯ ಇಲಾಖೆಯ ಎಲ್ಲ ಕಡತಗಳನ್ನು ಇ-ಆಫೀಸ್ ತಂತ್ರಾಂಶದ ಮುಖಾಂತರ ವಿಲೆಮಾಡುತ್ತಿರುವುದರಿಂದ ವಿಳಂಬಕ್ಕೆ ಆಸ್ಪದವಿಲ್ಲದೆ, ತ್ವರಿತಗತಿಯಲ್ಲಿ ಕಡತಗಳ ವಿಲೆಯನ್ನು ನಿರೀಕ್ಷಸಬಹುದಾಗಿದೆ ಎಂದು ವಿವರಿಸಿದರು.

ಇವೆಲ್ಲವುಗಳಿಂದ ಉತ್ಪಾದಕತೆ ಹೆಚ್ಚಿದ್ದು, ಕರ್ನಾಟಕ ರಾಜ್ಯ ಸರ್ಕಾರವು ಕೋಲಾರ ಜಿಲ್ಲೆಯ ಆಡಳಿತ ಕಾರ್ಯ ವೈಖರಿಯನ್ನು ಮೆಚ್ಚಿ ಶ್ಲಾಘಿಸಿದೆ ಎಂದು ಅವರು ತಿಳಿಸಿದರು.

ಅವರೊಂದಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಬಿ.ನಿಖಿಲ್, ಅಪರ ಜಿಲ್ಲಾಧಿಕಾರಿಗಳಾದ ಮಂಗಳ, ಕಂದಾಯ ಇಲಾಖೆಯ ವಿವಿಧ ಅಧಿಕಾರಿಗಳು, ಎಲ್ಲಾ ತಹಶೀಲ್ದಾರ್‌ಗಳು, ವಿವಿಧ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದರು.

## ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಆನೆ ಕಾವಾಡಿಗ ಗೋಪಾಲ್ ಸಾವು

**ಬೆಂಗಳೂರು:** ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ, ಆನೆ ಕಾವಾಡಿಗ ಗೋಪಾಲ್ ಇವರು ಆನೆ ಪಾಲನಾ ಕೇಂದ್ರ, ಪ್ರದೇಶದ ಸೀಗೆಕಟ್ಟೆ ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿರುತ್ತಾರೆ ಎಂದು ತಿಳಿಸಲು ವಿಷಾಧಿಸುತ್ತೇವೆ.

ಗೋಪಾಲ ಇವರು ಎಂದಿನಂತೆ ತಮಗೆ ವಹಿಸಿರುವ 10 ವರ್ಷದ ಸಂಪತ್ ಎಂಬ ಆನೆಯನ್ನು ಎಲೆಫೆಂಟ್ ಕ್ಯಾರ್ ಸೆಂಟರ್‌ನಲ್ಲಿರುವ



ಸಿಗೇಕಟ್ಟೆ ಕೆರೆಯಲ್ಲಿ ಸ್ವಚ್ಚಗೊಳಿಸುವ ಕರ್ತವ್ಯ ನಿರ್ವಹಿಸುತ್ತಿರುವ ಸಮಯದಲ್ಲಿ, ಆಕಸ್ಮಿಕವಾಗಿ ಆನೆಯು ಗಾಬರಿಗೊಂಡು ಕೆರೆಯ ಆಳಕ್ಕೆ ಓಡಿಹೋಗಿರುವ ಪರಿಣಾಮವಾಗಿ ಸದರಿಯವರು ಕೆರೆಯ ಆಳದಲ್ಲಿ ಮುಳುಗಿರುತ್ತಾರೆ. ಸ್ಥಳದಲ್ಲಿಯೇ ಇದ್ದ ಇತರೆ ಸಿಬ್ಬಂದಿಗಳು ಅವರನ್ನು ರಕ್ಷಿಸಿಸಲು ಪ್ರಯತ್ನಿಸಿದ್ದು, ಫಲಕಾರಿಯಾಗಿರುವುದಿಲ್ಲ. ತಕ್ಷಣಕ್ಕೆ ಸ್ಥಳೀಯ ಪೊಲೀಸರು ಮತ್ತು ರಕ್ಷಣಾ ಸೇವೆಗಳಿಗೆ ಮಾಹಿತಿಯನ್ನು ನೀಡಿ ರಕ್ಷಣಾ ಕಾರ್ಯವನ್ನು ಕೈಗೊಳ್ಳಲಾಗಿರುತ್ತದೆ. 2 ಗಂಟೆಗಳ ಹುಡುಕಾಟದ ನಂತರ ತುರ್ತು ಸೇವೆಗಳ ಸಹಾಯದಿಂದ ಮೃತದೇಹವನ್ನು ಹೊರತೆಗೆಯಲಾಯಿತು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ವಿಕ್ಟೋರಿಯ ಆಸ್ಪತ್ರೆ, ಬೆಂಗಳೂರು ಇಲ್ಲಿಗೆ ಕಳುಹಿಸಲಾಗಿದೆ.

ಈ ಕಷ್ಟದ ಸಮಯದಲ್ಲಿ ಬನ್ನೇರುಘಟ್ಟ ಜೈವಿಕ ಉದ್ಯಾನವನವು ಶ್ರೀ ೯.ಗೋಪಾಲ್ ಅವರ ಕುಟುಂಬದೊಂದಿಗೆ ಇದೆ. ಸರ್ಕಾರದಿಂದ ಮೃತರ ಕುಟುಂಬಕ್ಕೆ ಲಭಿಸಬೇಕಾದ ಪರಿಹಾರ ಧನವನ್ನು ಸಂಸ್ಥೆಯ ವತಿಯಿಂದ ಪಾವತಿಸಲು ಕ್ರಮಕೈಗೊಳ್ಳಲಾಗುವುದು.

### ಜಲಮಂಡಳಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ಹೇಳಿಕೆ

# ನೀರು ಪೂರೈಸಲು ಸೇನಾನಿಗಳಂತೆ ಕೆಲಸ ಮಾಡುತ್ತಾರೆ ಸಿಬ್ಬಂದಿ

**ಬೆಂಗಳೂರು:** ಜಲಮಂಡಳಿ ಸಿಬ್ಬಂದಿ ನಗರದ ಜನರಿಗೆ ನೀರು ಪೂರೈಸಲು ಹಗಲಿರುಳು ಸೇನಾನಿಗಳಂತೆ ಕೆಲಸ ಮಾಡುತ್ತಿದ್ದು, ಅವರ ಹಿತರಕ್ಷಣೆಗೆ ಒತ್ತು ನೀಡಲಾಗಿದೆ. ನೌಕರರಷೇ ಅಲ್ಲದೇ ಇಡೀ ಕುಟುಂಬಕ್ಕೆ ಭದ್ರತೆ ಒದಗಿಸಲಾಗುವುದು. ಜಲ ಮಂಡಳಿ ಹಿತ ಎತ್ತಿ ಹಿಡಿಯುವ ನೌಕರರ ರಕ್ಷಣೆ ತಮ್ಮದಾಗಿದೆ ಎಂದು ಬೆಂಗಳೂರು ಜಲಮಂಡಳಿ ಅಧ್ಯಕ್ಷರಾದ ಡಾ ರಾಮ್ ಪ್ರಸಾತ್ ಮನೋಹರ್ ತಿಳಿಸಿದರು.

ಬೆಂಗಳೂರು ಜಲಮಂಡಳಿ ಸಭಾಂಗಣದಲ್ಲಿ ದಿ ಬೆಂಗಳೂರು ವಾಟರ್ ಸಪ್ಲೈ ಮತ್ತು ಸುಯರೇಜ್ ಬೋರ್ಡ್ ಸ್ಯಾನಿಟರಿ ವರ್ಕರ್ಸ್ ಯೂನಿಯನ್ ನಿಂದ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 133 ಮತ್ತು ಡಾ. ಬಾಬು ಜಗಜೀವನ್ ರಾಂ ಅವರ 116 ನೇ ಜಯಂತೋತ್ಸವವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಬೆಂಗಳೂರು ನಗರಲ್ಲಿ ಎದುರಾಗಿದ್ದ ನೀರಿನ ಸಮಸ್ಯೆಯನ್ನು ಸಮರ್ಪಕವಾಗಿ ನಿಭಾಯಿಸುವ ನಿಟ್ಟಿನಲ್ಲಿ ಬೆಂಗಳೂರು ಜಲಮಂಡಳಿಯ ಎಲ್ಲಾ ಹಂತದ ಸಿಬ್ಬಂದಿಗಳು ಹಗಲಿರುಳು ಕಾರ್ಯನಿರ್ವಹಿಸಿದ್ದಾರೆ. ಅದರಲ್ಲೂ ನಗರದ ಸ್ವಚ್ಚತೆಯನ್ನು ಕಾಪಾಡಿ, ಸೌಂದರ್ಯವನ್ನು ಹೆಚ್ಚಿಸುವಲ್ಲಿ ಸ್ಯಾನಿಟರಿ ಸಿಬ್ಬಂದಿಗಳ ಕಾರ್ಯ ಪ್ರಮುಖವಾಗಿದೆ. ತಮ್ಮ ಆರೋಗ್ಯವನ್ನು ಪಣಕ್ಕಿಟ್ಟು ನಗರದ ಸ್ವಚ್ಚತೆಯನ್ನು ಕಾಪಾಡುತ್ತಿದ್ದಾರೆ. ಇವರ ಹಿತರಕ್ಷಣೆಗೆ ಒತ್ತು ನೀಡಲಾಗಿದೆ. ನೌಕರರ್ಗೆೀ ಅಲ್ಲದೇ ಇಡೀ ಕುಟುಂಬಕ್ಕೆ ಅಗತ್ಯ ಸೌಲಭ್ಯಗಳನ್ನು ನೀಡುವ ಮೂಲಕ ಜಲಮಂಡಳಿಯ ಹಿತ ಎತ್ತಿ ಹಿಡಿಯುತ್ತಿರುವ ನೌಕರರ ರಕ್ಷಣೆ ಮಾಡುವುದು ನಮ್ಮ ಜವಾಬ್ದಾರಿಯಾಗಿದೆ ಎಂದರು.

ಯಾವುದೇ ವೃತ್ತಿಯಲ್ಲಿದ್ದರೂ, ಆ ಕಾರ್ಮಿಕರಿಗೆ ವೃತ್ತಿಯ ಘನತೆ ಮತ್ತು ಗೌರವ ಅತ್ಯಂತ ಅಗತ್ಯವಾಗಿದೆ. ಯಾವುದೇ ಜಾತಿ ಬೇಧ ಇಲ್ಲದೇ ಕೆಲಸ ಮಾಡುವ ವಾತಾವರಣ ನಿರ್ಮಾಣವಾಗಬೇಕು. ಎಲ್ಲಕ್ಕಿಂತ ಮುಖ್ಯವಾಗಿ ಶಿಕ್ಷಣ ಅತ್ಯಂತ ಅಗತ್ಯವಾಗಿದ್ದು, ಆಸ್ತಿ ಮಾಡುವುದಕ್ಕಿಂತ ಶಿಕ್ಷಣವಂತರನ್ನಾಗಿ ಮಾಡಬೇಕು ಎಂದು ಕರೆ ನೀಡಿದರು.

ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದ ಅಧ್ಯಕ್ಷ ಆರ್. ಸಂಪತ್ ರಾಜ್ ಮಾತನಾಡಿ, ನೀರಿಗಾಗಿ ಕೊಳಗೇರಿ ಜನ ಪರಿತಪಿಸುತ್ತಿದ್ದು, ಕಲುಷಿತ ನೀರಿನ ಸಮಸ್ಯೆಗಳು ತೀವ್ರಗೊಂಡಿವೆ. ಮುಂಬೈನ ಧಾರಾವಿ ಕೊಳಗೇರಿಯಂತೆ ಸಗಾಯ್ ಪುರಂ, ಡಿ.ಜೆ. ಹಳ್ಳಿ ಮತ್ತಿತರೆ ಭಾಗಗಳಲ್ಲಿ ಜನರ ಸಮಸ್ಯೆಗಳನ್ನು ಬಗೆಹರಿಸಬೇಕಾಗಿದೆ. ಪ್ರತ್ಯೇಕ ಘಟಕ ತೆರೆದರೆ ತಕ್ಷಣವೇ ಪರಿಹಾರ ಕಂಡುಕೊಳ್ಳಲು ಸಾಧ್ಯ ಎಂದರು.

ತಾವು ಪಾಲಿಕೆ ಸದಸ್ಯರಾಗಿದ್ದಾಗ ಡಿ.ಜೆ.ಹಳ್ಳಿಯಲ್ಲಿ ಒಂದೇ ಒಂದು ಕೊಳವೆ ಬಾವಿ ಮಾತ್ರ ಇತ್ತು. ಅದನ್ನು ಬಸವಲಿಂಗಪ್ಪ ಶಾಸಕರಾಗಿದ್ದಾಗ ಕೊರೆಸಿದ್ದರು. ತಾವು ಪಾಲಿಕೆ ಸದಸ್ಯರಾದ ತರುವಾಯ ನೂರಾರು ಕೊಳವೆ ಬಾವಿಗಳನ್ನು ಕೊರೆಸಿದ ಜೊತೆಗೆ ಜಲಮಂಡಳಿಯಿಂದ ಸಾಕಷ್ಟು ಕೆಲಸ ಮಾಡಿಸಿದ್ದೇ. ಇದೀಗ ದಿನ ಬಿಟ್ಟು ಬಿಟ್ಟು ನೀರು ಪೂರೈಕೆಯಾಗುತ್ತಿದೆ. ಜಲ ಮಂಡಳಿಯಲ್ಲಿ ಸಾಕಷ್ಟು ಸುಧಾರಣೆಯಾಗಿದ್ದು, ಉತ್ತಮ ಕೆಲಸಗಳಿಗೆ ಸದಾ ಬೆಂಬಲ ಇರುತ್ತದೆ ಎಂದರು.

ಜಲಮಂಡಳಿಯ ಪ್ರಧಾನ ಮುಖ್ಯ ಅಭಿಯಂತರ ಬಿ. ಸುರೇಶ್, ಮುಖ್ಯ ಆಡಳಿತಾಧಿಕಾರಿ ಸಿ. ಮದನ ಮೋಹನ, ಆರ್ಥಿಕ ಸಲಹೆಗಾರ ಜಿ.ಎಸ್. ಸುಬ್ಬರಾಮಯ್ಯ, ಬೆಂಗಳೂರು ಜಲಮಂಡಳಿ ನೌಕರರ ಸಂಘದ ಅಧ್ಯಕ್ಷರಾದ ಬಿ.ಕೆ ಮರಿಯಪ್ಪ, ಪರಿಶಿಷ್ಟ ಜಾತಿ/ಪಂಗಡ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಸದಾಶಿವ ಕಾಂಬಳೆ, ದಿ ಬೆಂಗಳೂರು ವಾಟರ್ ಸಪ್ಲೈ ಮತ್ತು ಸುಯರೇಜ್ ಬೋರ್ಡ್ ಸ್ಯಾನಿಟರಿ ವರ್ಕರ್ಸ್ ಯೂನಿಯನ್ ಅಧ್ಯಕ್ಷರಾದ ಸಿದ್ದಪ್ಪ, ಉಪಾಧ್ಯಕ್ಷರಾದ ಓಬಳೇಶ್, ಪ್ರಧಾನ ಕಾರ್ಯದರ್ಶಿ ನರಸಿಂಹಮೂರ್ತಿ, ಸ್ಯಾನಿಟರಿ ಯೂನಿಯನ್ ವರ್ಕರ್ಸ್ ಪದಾಧಿಕಾರಿಗಳು ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಮಾಲ್‌ಗಳಲ್ಲಿ 'ಆಹಾರ ಪದಾರ್ಥಗಳ ಕಲಬೆರಕೆ' ಪತ್ತೆಗೆ ಪರೀಕ್ಷಾ ಕೇಂದ್ರ ಸ್ಥಾಪನೆ

**ಬೆಂಗಳೂರು:** ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ವತಿಯಿಂದ ಭಾರತ ಸರ್ಕಾರದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ ನಿಯಮ ಮತ್ತು ನಿಬಂಧನೆಗಳನ್ನು ಅನುಷ್ಠಾನಗೊಳಿಸಲು ಕ್ರಮವಹಿಸಲಾಗಿರುತ್ತದೆ.

ಆಹಾರ ಪದಾರ್ಥಗಳ ಕಚ್ಚಾ ಸಾಮಾಗ್ರಿಗಳು/ ತಯಾರಾದ ಆಹಾರ ಪದಾರ್ಥಗಳು ಸೇವಿಸಲು ಸುರಕ್ಷಿತವಾಗಿದೆಯೇ ಎಂಬುದನ್ನು ಅವುಗಳನ್ನು ಸ್ಥಳದಲ್ಲಿಯೇ ಖಾತ್ರಿ ಪಡಿಸಲು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯು ಎಫ್‌ಎಸ್‌ಎಸ್‌ಎಐ ರವರು ಅನುಮೋದಿಸಿರುವ ಮ್ಯಾಜಿಕ್ ಬಾಕ್ಸ್ ಮತ್ತು ರ್‍ಯಾಪಿಡ್ ಟೆಸ್ಟ್ ಕಿಟ್‌ಗಳನ್ನು ಬಳಸಿ ಕೆಲವು ಸುಲಭ ತ್ವರಿತ ಪರೀಕ್ಷೆಗಳನ್ನು ಪ್ರಾಯೋಗಿಕವಾಗಿ ಬೆಂಗಳೂರಿನ ಕೆಲವು ಪ್ರತಿಷ್ಠಿತ ಮಾಲ್‌ಗಳಲ್ಲಿ ಅಕ್ಟೋಬರ್ 25 ರಿಂದ ಪ್ರಾರಂಭಿಸಲು ತೀರ್ಮಾನಿಸಿದೆ.

ಬೆಂಗಳೂರಿನ ಮಾಲ್‌ಗಳಾದ ವೈಷ್ಣವಿ ಸಫೈರ್ ಸೆಂಟರ್ ತುಮಕೂರು ರಸ್ತೆ, ಎಲಿಮೆಂಟ್ಸ್ ಮಾಲ್ ಥಣಿಸಂದ್ರ, ಫೀನಿಕ್ಸ್ ಮಾಲ್ ಆಫ್ ಏಷ್ಯಾ ಬಳ್ಳಾರಿ ರಸ್ತೆ, ಮೀನಾಕ್ಷಿ ಮಾಲ್ ಬನ್ನೇರುಘಟ್ಟ ರಸ್ತೆ, ಶೋಭಾ ಮಾಲ್ ಚರ್ಚ್ ಸ್ಟ್ರೀಟ್, ಸೆಂಟ್ರಲ್ ಮಾಲ್ ಬೆಳ್ಳಂದೂರು, ಗೋಪಾಲನ್ ಸಿಗ್ನೇಚರ್ ಮಾಲ್ ಬೆನ್ನಿಗಾನಹಳ್ಳಿ, ನೆಕ್ಸಸ್ ಫೋರಂ ಮಾಲ್ ಕೋರಮಂಗಲ, ಭಾರತೀಯ ಮಾಲ್ ಆಫ್ ಬೆಂಗಳೂರು ಥಣಿಸಂದ್ರ, ಹಾಗೂ ಜಿಟಿ ವರ್ಲ್ಡ್ ಮಾಲ್ ಮಾಗಡಿ ರಸ್ತೆ ಇಲ್ಲಿ ಪ್ರಾಯೋಗಿಕವಾಗಿ ಕಾರ್ಯಕ್ರಮ ಪ್ರಾರಂಭಿಸಲಾಗುತ್ತಿದೆ.

ಸಾರ್ವಜನಿಕರು ಈ ಮಾಲ್‌ಗಳಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಸ್ಥಾಪಿಸಲಾಗುತ್ತಿರುವ ಆಹಾರ ಪದಾರ್ಥಗಳ ಕಲಬೆರಕೆ' ಪತ್ತೆಗೆ ಪರೀಕ್ಷಾ ಕೇಂದ್ರಗಳಲ್ಲಿ ಪ್ರತಿ ದಿನ ಬಳಸುವ ಆಹಾರ ಪದಾರ್ಥಗಳಾದ ಬೇಳೆ ಕಾಳುಗಳು, ಸಕ್ಕರೆ, ಅಡುಗೆ ಎಣ್ಣೆ ಟೀ-ಪುಡಿ, ಉಪ್ಪು, ಹಾಲು ಮತ್ತು ಹಾಲಿನ ಉತ್ಪನ್ನಗಳಾದ ತುಪ್ಪ, ಪನೀರ್, ಬೆಣ್ಣೆ, ತರಕಾರಿಗಳು, ಧನಿಯಾಪುಡಿ, ಕುಡಿಯುವ ನೀರು ಇತ್ಯಾದಿ ಆಹಾರ ಸಾಮಗ್ರಿಗಳ ಗುಣಮಟ್ಟವನ್ನು ತ್ವರಿತ ಪರೀಕ್ಷೆಗಳಿಂದ ಖಚಿತಪಡಿಸಿಕೊಳ್ಳಬಹುದಾಗಿರುತ್ತದೆ.

ಇತ್ತೀಚಿನ ದಿನಗಳಲ್ಲಿ ಆಹಾರ ಕಲಬೆರಕೆ ಪ್ರಕರಣಗಳು ಹೆಚ್ಚು ಹೆಚ್ಚಾಗಿ ಬೆಳಕಿಗೆ ಬರುತ್ತಿದ್ದು, ಈ ಕುರಿತಂತೆ ಜನಸಾಮಾನ್ಯರಲ್ಲಿ ಜಾಗೃತಿಯೂ ಸಹ ದಿನದಿಂದ ದಿನಕ್ಕೆ, ಹೆಚ್ಚಾಗುತ್ತಾ ಹೋಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಜನಸಾಮಾನ್ಯರು ಸಮಯ ಮತ್ತು ಹಣದ ಉಳಿತಾಯದ ಕಡೆ ಗಮನಕೊಟ್ಟು ಆಹಾರ ತಯಾರಿಕೆಗೆ ದಿನ ನಿತ್ಯ ಬೇಕಾಗುವ ಕಚ್ಚಾ ವಸ್ತುಗಳು ಒಂದೇ ಕಡೆ ಸಿಗುವಂತಹ ದೊಡ್ಡ ದೊಡ್ಡ ಆಹಾರ ಮಳಿಗೆಗಳಿಗೆ ಭೇಟಿ ನೀಡುವುದು ಸರ್ವೇ ಸಾಮಾನ್ಯವಾಗಿದೆ. ಶುದ್ಧವಾದ ಆಹಾರ ಪಡೆಯುವುದು ಪ್ರತಿ ಗ್ರಾಹಕರ ಹಕ್ಕಾಗಿದ್ದರೂ ಸಹ ನಾವು ಸೇವಿಸುವ ಆಹಾರದ ಸುರಕ್ಷತೆಯ ಬಗ್ಗೆ, ಮಾಹಿತಿ ಇಲ್ಲದೆ ದಿನ ನಿತ್ಯ ಸೇವಿಸುತ್ತಿದ್ದೇವೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ವತಿಯಿಂದ ಜನಸಾಮಾನ್ಯರಲ್ಲಿ ಜಾಗೃತಿ, ಅರಿವು ಮತ್ತು ಆತ್ಮವಿಶ್ವಾಸ ತುಂಬಲು ದೇಶದಲ್ಲೇ ಪ್ರಪ್ರಥಮ ಬಾರಿಗೆ ವಿನೂತನವಾಗಿ ಕಾರ್ಯಕ್ರಮವನ್ನು ಪ್ರಾರಂಭಿಸಲಾಗುತ್ತಿದ್ದು, ಸಾರ್ವಜನಿಕರು ತಮ್ಮ ಸಹಕಾರ, ಪ್ರೋತ್ಸಾಹದೊಂದಿಗೆ ಉತ್ತಮ ಆರೋಗ್ಯವನ್ನು ತಮ್ಮದಾಗಿಸಿಕೊಂಡು, ಆಹಾರ ಕಲಬೆರಕೆಯ ನಿರ್ಮೂಲನೆಗಾಗಿ ಕೈ ಜೋಡಿಸುವಂತೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಆಯುಕ್ತ ಕೆ.ಶ್ರೀನಿವಾಸ್ ಅವರು ತಿಳಿಸಿದ್ದಾರೆ.

### ಜಿಲ್ಲಾಧಿಕಾರಿ ಡಾ ಹೆಚ್ ಎಲ್ ನಾಗರಾಜು ಹೇಳಿಕೆ

# ನೇಮಕಾತಿ ಪರೀಕ್ಷೆ ವ್ಯವಸ್ಥಿತವಾಗಿರಲಿ

**ಮಂಡ್ಯ:** ಜಿಲ್ಲೆಯಲ್ಲಿ ಅಕ್ಟೋಬರ್ 26, 27 ರಂದು ಗ್ರಾಮ ಆಡಳಿತಾಧಿಕಾರಿ ನೇಮಕಾತಿ ಪರೀಕ್ಷೆಯು ನಡೆಯಲಿದೆ. ಪರೀಕ್ಷೆಯನ್ನು ಯಾವುದೇ ಲೋಪದೋಷವಿಲ್ಲದಂತೆ ವ್ಯವಸ್ಥಿತವಾಗಿ ನಡೆಸಿ ಎಂದು ಅಪರ ಜಿಲ್ಲಾಧಿಕಾರಿ ಡಾ ಹೆಚ್ ಎಲ್ ನಾಗರಾಜು ಅವರು ತಿಳಿಸಿದರು.



ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ಗ್ರಾಮ ಆಡಳಿತ ಅಧಿಕಾರಿ ಹುದ್ದೆಯ ನೇರ ನೇಮಕಾತಿ ಪರೀಕ್ಷೆಯ ಪೂರ್ವಭಾವಿ ಸಭೆ ನಡೆಸಿ ಮಾತನಾಡಿದರು.

ಅಕ್ಟೋಬರ್ 26 ರಂದು ಮಧ್ಯಾಹ್ನ 2.30 ರಿಂದ 4.30 ಗಂಟೆಯವರೆಗೆ ಗ್ರಾಮ ಆಡಳಿತಾಧಿಕಾರಿ ಹುದ್ದೆಯ ಪರೀಕ್ಷೆಯ ಕಡ್ಡಾಯ ಕನ್ನಡ ಪರೀಕ್ಷೆಯು ಮಂಡ್ಯ ನಗರದ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಕಲ್ಲುಕಟ್ಟಡ, ಸರ್ಕಾರಿ ಪದವಿ ಪೂರ್ವ ಕಾಲೇಜು (ಮಾಜಿಪುರ ಸಭೆ) ಹಾಗೂ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಅರ್ಕೇಶ್ವರ ನಗರದಲ್ಲಿ ಒಟ್ಟು 3 ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಒಟ್ಟು 1142 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದರು.

ಅಕ್ಟೋಬರ್ 27 ರಂದು ಬೆಳಿಗ್ಗೆ 10.30 ರಿಂದ 12.30 ಹಾಗೂ ಮಧ್ಯಾಹ್ನ 2.30 ರಿಂದ 4.30 ಗಂಟೆಯವರೆಗೆ ಎರಡು ಅಧಿವೇಶನಗಳಲ್ಲಿ ನಡೆಯಲಿರುವ ಪರೀಕ್ಷೆಯಲ್ಲಿ 10,301 ಅಭ್ಯರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ, ಮಂಡ್ಯ -12, ಕೃಷ್ಣರಾಜಪೇಟೆ-2, ಮದ್ದೂರು-3 ಮಳವಳ್ಳಿ -2, ನಾಗಮಂಗಲ-2, ಪಾಂಡವಪುರ-1, ಶ್ರೀರಂಗಪಟ್ಟಣ - 1ರಂತೆ ಮಂಡ್ಯ ಜಿಲ್ಲಾದ್ಯಂತ ಒಟ್ಟು 23 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ ಎಂದರು.

ಪರೀಕ್ಷೆ ನಡೆಯುವ ದಿನಗಳಂದು ಪರೀಕ್ಷಾ ಕೇಂದ್ರದಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿಗಳನ್ನು ಹೊರತುಪಡಿಸಿ ಅನಧಿಕೃತ ವ್ಯಕ್ತಿಗಳು ಸಂಚರಿಸಬಾರದು ಮತ್ತು ಯಾರೂ ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು.ಪರೀಕ್ಷಾ ಕೇಂದ್ರಗಳ 200 ಮೀಟರ್ ವ್ಯಾಪ್ತಿಯಲ್ಲಿ ಸುತ್ತಮುತ್ತಲಿರುವ ಜೆರಾಕ್ಸ್ ಮತ್ತು ಸೈಬರ್ ಕೇಂದ್ರಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಆದೇಶ ಹೊರಡಿಸಲಾಗುವುದು ಎಂದರು.

ಪರೀಕ್ಷೆಗೆ ತಡವಾಗಿ ಬಂದ ಅಭ್ಯರ್ಥಿಗಳನ್ನು ಪರೀಕ್ಷೆಗೆ ಕೂರಿಸುವಂತಿಲ್ಲ ಹಾಗೂ ಪರೀಕ್ಷೆ ನಡೆಯುವಾಗ ಅರ್ಧಕ್ಕೆ ಅಭ್ಯರ್ಥಿಗಳನ್ನು ಕೊಠಡಿಯಿಂದ ಹೊರಗೆ ಕಳುಹಿಸುವಂತಿಲ್ಲ ಎಂದು ತಿಳಿಸಿದರು. ಪರೀಕ್ಷಾ ಪರಿವೀಕ್ಷಕರು ಎಚ್ಚರಿಕೆಯಿಂದ ಪ್ರಶ್ನೆಪತ್ರಿಕೆಯನ್ನು ನೋಡಿಕೊಳ್ಳಬೇಕು, ಪರೀಕ್ಷೆ ಪ್ರಾರಂಭವಾಗುವುದಕ್ಕು ಒಂದು ಗಂಟೆ ಮುಂಚಿತವಾಗಿ ಪ್ರಶ್ನೆ ಪತ್ರಿಕೆ ಕ್ರಮವಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು, ಪ್ರಶ್ನೆ ಪತ್ರಿಕೆಯ ಕವರ್ ತೆರೆದಿರುವುದಿಲ್ಲ ಎಂದು ಖಾತ್ರಿಪಡಿಸಿಕೊಳ್ಳಬೇಕು. ಪರೀಕ್ಷೆಯ ಸಂಪೂರ್ಣ ಜವಾಬ್ದಾರಿ ಪರೀಕ್ಷಾ ಮೇಲ್ವಿಚಾರಕರುಗಳ ಮೇಲೆ ಇದೆ ಎಂದು ತಿಳಿಸಿದರು. ಪರೀಕ್ಷಾ ದಿನದಂದು ಪರೀಕ್ಷೆಗೆ ಹಾಜರಾಗುವ ಮತ್ತು ಗೈರುಹಾಜರಾಗುವ ಅಭ್ಯರ್ಥಿಗಳ ವಿವರಗಳನ್ನು ಆನ್ಲೈನ್ ಮೂಲಕ ದಾಖಲಿಸುವಂತೆ ಪರೀಕ್ಷಾ ಕೇಂದ್ರಗಳ ಉಪಮುಖ್ಯ ಅಧೀಕ್ಷಕರುಗಳು/ ಪ್ರಾಂಶುಪಾಲರುಗಳಿಗೆ ಸೂಚಿಸಿದರು.

ಅಭ್ಯರ್ಥಿಗಳು ಯಾವುದೇ ಆಧುನಿಕ ಎಲೆಕ್ಟ್ರಾನಿಕ್ ಉಪಕರಣಗಳು, ಮೊಬೈಲ್ ಫೋನ್, ಬ್ಲೂಟೂತ್, ಕ್ಯಾಲ್ಕುಲೇಟರ್, ಪೆನ್ ಡ್ರೈವ್ಗಳು, ಇಯರ್ ಫೋನ್ ಗಳು, ಮೈಕ್ರೋ ಫೋನ್ ಗಳು ಮತ್ತು ಕೈಗಡಿಯಾರಗಳನ್ನು ಪರೀಕ್ಷಾ ಕೊಠಡಿ ಒಳಗೆ ತರುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದರು.

ಅಭ್ಯರ್ಥಿಗಳು ಬ್ಲೂಟೂತ್ ಸಾಧನಗಳನ್ನು ಪರೀಕ್ಷಾ ಕೊಠಡಿಯಲ್ಲಿ ಬಳಸುವುದನ್ನು ತಡೆಯುವ ಸಲುವಾಗಿ ಫುಲ್ ಶರ್ಟ್, ಶೂ, ಟೋಪಿ ಧರಿಸುವುದನ್ನು ಬಾಯಿ, ಕಿವಿ ಹಾಗೂ ತಲೆಮುಚ್ಚುವ ವಸ್ತ್ರವನ್ನು/ ಸಾಧನವನ್ನು ಧರಿಸುವುದನ್ನು ನಿಷೇಧಿಸಿದ್ದು, ಯಾವುದೇ ರೀತಿಯ ಮಾಸ್ಕನ್ನು ಧರಿಸಿ ಪರೀಕ್ಷಾ ಕೇಂದ್ರದ ಒಳಗೆ ಬರುವಂತಿಲ್ಲ, ಮಹಿಳಾ ಅಭ್ಯರ್ಥಿಗಳು ಮಾಂಗಲ್ಯ ಸರ ಹಾಗೂ ಮೂಗುತಿಯನ್ನು ಹೊರತುಪಡಿಸಿ ಇನ್ನಾವುದೇ ಆಭರಣಗಳನ್ನು ಧರಿಸುವಂತಿಲ್ಲ ಎಂದರು. ಕೆಇಎ ವತಿಯಿಂದ ನಡೆಸಲಾಗುವ ಸದರಿ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಯಾವುದೇ ಲೋಪ ದೋಷಗಳು ಉಂಟಾಗದ ರೀತಿಯಲ್ಲಿ ಬಹಳ ಎಚ್ಚರಿಕೆಯಿಂದ ಹಾಗೂ ಜಾಗೃತವಾಗಿ ಕರ್ತವ್ಯ ನಿರ್ವಹಿಸುವಂತೆ ಎಲ್ಲಾ ಅಧಿಕಾರಿಗಳಿಗೂ ಅಗತ್ಯ ಕ್ರಮ ವಹಿಸಿ ಎಂದು ಸೂಚಿಸಿದರು. ಸಭೆಯಲ್ಲಿ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸಿ.ಚೆಲುವಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ ಬಿ ವಿ ನಂದೀಶ್, ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ರವಿಶಂಕರ್, ಪೊಲೀಸ್ ಸಬ್ ಇನ್ಸ್ ಪೆಕ್ಟರ್ ಕೇಶವಮೂರ್ತಿ ಸೇರಿದಂತೆ ವಿವಿಧ ಕಾಲೇಜುಗಳ ಅಧ್ಯಾಪಕರುಗಳು ಉಪಸ್ಥಿತರಿದ್ದರು.

## 29ರಂದು ನಗರದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮ

**ಚಾಮರಾಜನಗರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಸ್ಥಳೀಯ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮವನ್ನು ಅಕ್ಟೋಬರ್ 29ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಜೆ.ಹೆಚ್ ಪಟೇಲ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಅಧ್ಯಕ್ಷರು ಹಾಗೂ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಅಧ್ಯಕ್ಷತೆ ವಹಿಸುವರು. ಲೋಕಸಭಾ ಸದಸ್ಯರಾದ ಸುನೀಲ್ ಬೋಸ್ ಅವರು ಘನ ಉಪಸ್ಥಿತಿ ವಹಿಸುವರು. ಶಾಸಕರಾದ ಎ.ಆರ್. ಕೃಷ್ಣಮೂರ್ತಿ, ಎಚ್.ಎಂ. ಗಣೇಶ್ ಪ್ರಸಾದ್, ಎಂ.ಆರ್. ಮಂಜುನಾಥ್, ಡಾ. ಡಿ. ತಿಮ್ಮಯ್ಯ, ಸಿ.ಎನ್. ಮಂಜೇಗೌಡ, ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷರಾದ ಎಸ್. ಜಯಣ್ಣ, ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್, ಕಾವೇರಿ ಜಲಾನಯನ ಯೋಜನೆ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ, ಚಾಮರಾಜನಗರ ಮತ್ತು ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ (ಮುನ್ನ), ನಗರಸಭೆ ಅಧ್ಯಕ್ಷರಾದ ಎಸ್. ಸುರೇಶ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್. ವಿ ಚಂದ್ರು, ನಗರಸಭಾ ಉಪಾಧ್ಯಕ್ಷರಾದ ಹೆಚ್.ಎಸ್. ಮಮತ ಅವರು ಮುಖ್ಯ ಅತಿಥಿಗಳಾಗಿ ಕಾರ್ಯಕ್ರಮದಲ್ಲಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಚೆಕ್ ಡ್ಯಾಮ್ ಅಭಿವೃದಿಗೆ ಲಂಚಕ್ಕೆ ಬೇಡಿಕೆಯಿಟ್ಟ ಆರ್‌ಎಫ್‌ಒ ಲೋಕಾಯುಕ್ತ ಬಲೆಗೆ

**ಚಾಮರಾಜನಗರ :** ಜಿಲ್ಲೆಯ ಹನೂರು ತಾಲೂಕು ಮಾರ್ಟಳ್ಳಿ ಗ್ರಾ.ಪಂ ವ್ಯಾಪ್ತಿಯ ನಾಲ್ ರೋಡ್ ಅರಣ್ಯ ವ್ಯಾಪ್ತಿಯಲ್ಲಿ ಚೆಕ್ ಡ್ಯಾಮ್ ಅಭಿವೃದ್ಧಿ ಮಾಡಲು ಗ್ರಾಮ ಪಂಚಾಯಿತಿ ಸದಸ್ಯನಿಂದ ಲಂಚಕ್ಕೆ ಬೇಡಿಕೆ ಇಟ್ಟಿದ್ದ ವಲಯ ಅರಣ್ಯಾಧಿಕಾರಿ ಕಾಂತ ರಾಜ್ ಚೌಹಾಣ್ ಲೋಕಾ ಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ. ಹನೂರು ತಾಲೂಕಿನ ಮಾರ್ಟಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಲ್ ರೋಡ್ ಅರಣ್ಯ ಪ್ರದೇಶ ವ್ಯಾಪ್ತಿಯ ಮೊರನೂರು ಹುಣಸೆ ಮರ ಬಾವಿಯ ಹತ್ತಿರ 10 ಲಕ್ಷ ವೆಚ್ಚದಲ್ಲಿ ಚೆಕ್ ನಿರ್ಮಾಣ ಮಾಡಲು ಕ್ರೀಯಾ ಯೋಜನೆ ಸಲ್ಲಿಸಿ ಅನುಮೋದನೆ ಪಡೆದುಕೊಳ್ಳಲಾಗಿತ್ತು. ಆದರೆ ವಲಯ ಅರಣ್ಯಾಧಿಕಾರಿ ಚೆಕ್ ಡ್ಯಾಮ್ ನಿರ್ಮಾಣ ಮಾಡಬೇಕಾದರೆ ನನಗೆ 80 ಸಾವಿರ ಹಣ ನೀಡಬೇಕು. ಇಲ್ಲದಿದ್ದರೆ ಕಾಮಗಾರಿ ನಡೆಸಲು ಅವಕಾಶ ಮಾಡಿಕೊಡುವುದಿಲ್ಲ ಎಂದು ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಇದರಿಂದ ಬೇಸತ್ತ ಗ್ರಾಮ ಪಂಚಾಯಿತಿ ಸದಸ್ಯ ಜೋಸೆಫ್ ಆಲ್ಬಗನ್ ಚಾಮರಾಜನಗರ ಲೋಕಾಯುಕ್ತ ಕಚೇರಿಗೆ ದೂರು ನೀಡಿದ್ದರು. ದೂರು ನೀಡುವ ವೇಳೆ ಈಗಾಗಲೇ ವಲಯ ಅರಣ್ಯಾಧಿಕಾರಿಗೆ ಮುಂಗಡ ಹಣವಾಗಿ 20 ಸಾವಿರ ನೀಡಿರುವುದಾಗಿ ಮಾಹಿತಿ ನೀಡಿದ್ದರು. ಪ್ರಕರಣ ದಾಖಲಿಸಿ ಕಂಡ' ಲೋಕಾಯುಕ್ತ ಪೊಲೀಸರು ಉಳಿಕೆ 60 ಸಾವಿರ ನಗದು ಹಣ ಕೊಡುವಾಗ ದಾಳಿ ನಡೆಸಿ ವಶಕ್ಕೆ ಪಡೆದಿದ್ದಾರೆ ಎಂದು ಹೇಳಲಾಗುತ್ತಿದೆ.

## ಜಿಲಾ ಮಟದ ಪ.ಜಾತಿ, ಪ.ಪಂಗಡದ ಮುಖಂಡರ ಕುಂದು ಕೊರತೆ ಸಭೆ

**ಚಾಮರಾಜನಗರ:** ಪೊಲೀಸ್ ಇಲಾಖೆಯಿಂದ ಜಿಲ್ಲಾ ಮಟ್ಟದ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮುಖಂಡರ ಕುಂದು ಕೊರತೆ ಸಭೆಯನ್ನು ಅಕ್ಟೋಬರ್ 27 ರಂದು ಬೇಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪೊಲೀಸ್ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ಜಿಲ್ಲೆಯ ಎಲ್ಲಾ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜನಾಂಗದವರು ಸಭೆಯ ಪ್ರಯೋಜನವನ್ನು ಪಡೆದುಕೊಳ್ಳಬೇಕೆಂದು ಎಸ್‌ಪಿ ಡಾ. ಬಿ. ಟಿ ಕವಿತಾ ಕೋರಿದ್ದಾರೆ.

## ಪ್ರಾಥಮಿಕ, ಪ್ರೌಢಶಾಲಾ ವಿಭಾಗದ ಕ್ರೀಡಾಕೂಟ

**ಚಾಮರಾಜನಗರ:** ಶಾಲಾ ಶಿಕ್ಷಣ ಇಲಾಖೆಯಿಂದ ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಭಾಗದ ಕ್ರೀಡಾಕೂಟವನ್ನು ನವೆಂಬರ್ 4 ಹಾಗೂ 5 ರಂದು ನಗರದ ಡಾ. ಬಿ. ಆರ್ ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. ಕ್ರೀಡಾಕೂಟದಲ್ಲಿ ಸುಮಾರು 400 ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಾಗೃತಿ ಅರಿವು ಸಪ್ತಾಹ-2024

**ಬೆಂಗಳೂರು:** ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಜಾಗೃತಿ ಅರಿವಿನ ಸಪ್ತಾಹಕ್ಕೆ ಅಕ್ಟೋಬರ್ 28 ರಂದು ಬೆಳಿಗ್ಗೆ 11 ಗಂಟೆಗೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಲ್ಲಾ ಇಲಾಖೆಗಳ ಅಧಿಕಾರಿ ಮತ್ತು ನೌಕರರಿಗೆ ಜಾಗೃತಿ ಸಪ್ತಾಹದ ಪ್ರತಿಜ್ಞಾ ವಚನವನ್ನು ಬೋಧಿಸಲಿದ್ದಾರೆ. ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸಲು ಅಕ್ಟೋಬರ್ 28 ರಿಂದ ನವೆಂಬರ್ 3 ರವರೆಗೆ ಜಾಗೃತಿ ಅರಿವು ಸಪ್ತಾಹ -2024 ನ್ನು ಆಚರಿಸುವಂತೆ ಕೇಂದ್ರ ವಿಚಕ್ಷಣಾ ಆಯೋಗವು ಎಲ್ಲಾ ರಾಜ್ಯಗಳಿಗೆ ಸೂಚನೆ ನೀಡಿದೆ. ಈ ವರ್ಷದ ಜಾಗೃತಿ ಅರಿವು ಸಪ್ತಾಹದ ಆಚರಣೆಯ ವಿಷಯವು "Culture of Integrity for Nation's Prosperity" ಆಗಿರುತ್ತದೆ. ಈ ಜಾಗೃತಿ ಅರಿವಿನ ಸಪ್ತಾಹವು ಪರಿಣಾಕಾರಿಯಾಗಿ ಆಚರಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಿಗೆ ತಿಳಿಸಲಾಗಿದೆ.

## ಸ್ಪರ್ಧಾತ್ಮಕ ಪರೀಕ್ಷೆ ವ್ಯವಸ್ಥಿತವಾಗಿ ನಡೆಸಲು ಕ್ರಮ ವಹಿಸಿ

**ಕೋಲಾರ:** ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ( ಸ್ಥಳೀಯ) ವೃಂದದ ವಿವಿಧ ಹುದ್ದೆಗಳಿಗೆ ನೇಮಕಾತಿಗೆ ಸಂಬಂಧಿಸಿದಂತೆ ಅಕ್ಟೋಬರ್ 27 ರಂದು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ವ್ಯವಸ್ಥಿತವಾಗಿ ಯಾವುದೇ ಲೋಪ ದೋಷಗಳಿಲ್ಲದಂತೆ ನಡೆಸಬೇಕೆಂದು ಅಪರ ಜಿಲ್ಲಾಧಿಕಾರಿ ಮಂಗಳ ತಿಳಿಸಿದರು.



ನಗರದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಇಂದು ಜರುಗಿದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಅಕ್ಟೋಬರ್ 27 ರಂದು ಜರುಗುವ ಸ್ಪರ್ಧಾತ್ಮಕ ಪರೀಕ್ಷೆಯ ದಿನದಂದು ಬೆ 8.30 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ಜಿಲ್ಲೆಯ ಎಲ್ಲಾ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ ಎಂದು ತಿಳಿಸಿದರು.

ಪರೀಕ್ಷೆಯಲ್ಲಿ ಸಮಯ ಪರಿಪಾಲನೆ ಅತ್ಯವಶ್ಯಕವಾಗಿದ್ದು ಪರೀಕ್ಷಾ ಕೊಠಡಿಗಳಲ್ಲಿ ತಪ್ಪದೇ ಗೋಡೆ ಗಡಿಯಾರ ಅಳವಡಿಸಬೇಕು. ಪರೀಕ್ಷೆಯಲ್ಲಿ ಯಾವುದೇ ಲೋಪ ದೋಷಗಳಿಗೆ ಆಸ್ಪದ ನೀಡದೇ ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಲು ಕ್ರಮ ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಪರೀಕ್ಷೆಗಳು ಸುಗಮವಾಗಿ ಹಾಗೂ ಶಾಂತಿಯುತವಾಗಿ ಜರುಗಲು ವೀಕ್ಷಕರು, ಜಿಲ್ಲಾ ಮಟ್ಟದ ತ್ರಿ ಸದಸ್ಯ ಸಮಿತಿ ಹಾಗೂ ಮಾರ್ಗಾಧಿಕಾರಿಗಳನ್ನು ನೇಮಿಸಲಾಗಿದ್ದು ನಿಗದಿಪಡಿಸಿದ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು ಎಂದು ಅಪರ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಅಲ್ಪಸಂಖ್ಯಾತ ಇಲಾಖೆ ಉಪನಿರ್ದೇಶಕ ಮುರಳಿ, ಎಲ್ಲಾ ತಹಸೀಲ್ದಾರ್ ಗಳು, ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಕಮಲನಗರದಲ್ಲಿ ಮೂರು ಅಂತಸ್ತಿನ ಬಿಲಿಂಗ್ ಕುಸಿತ : ಶಾಸಕ ಗೋಪಾಲಯ್ಯ ಭೇಟಿ ಪರಿಶೀಲನೆ

**ಬೆಂಗಳೂರು:** ಶಕ್ತಿಗಣಪತಿ ನಗರ ವಾರ್ಡಿನ ಕಮಲನಗರದಲ್ಲಿ ಮೂರು ಅಂತಸ್ತಿನ ಬಿಲ್ಡಿಂಗ್ ಕುಸಿದಿದ್ದು, ವಿಷಯ ತಿಳಿದು ಶಾಸಕ ಕೆ ಗೋಪಾಲಯ್ಯ ಭೇಟಿ ನೀಡಿ ಪರಿಶೀಲನೆ ನಡೆಸಿದರು.



ಬಳಿಕ ಸ್ಥಳೀಯರಿಂದ ಮಾಹಿತಿ ಪಡೆದು ಅಲ್ಲಿನ ನಿವಾಸಿಗಳನ್ನು ಹಾಗೂ ಮನೆಯಲ್ಲಿದ್ದ ಸಾಮಾನುಗಳನ್ನು ಬೇರೆ ಕಡೆಗೆ ಸ್ಥಳಾಂತರ ಮಾಡಿಸಿದರು. ಬಿಬಿಎಂಪಿ ಹಾಗೂ ಸರ್ಕಾರದಿಂದ ಪರಿಹಾರ ಕೊಡಿಸುವುದಾಗಿ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಮನೆಯ ಮಾಲೀಕ ತಿಮ್ಮಪ್ಪ ಮಾತನಾಡಿ, ಬಹಳ ಕಷ್ಟಪಟ್ಟು ಮನೆಯನ್ನು ನಿರ್ಮಾಣ ಮಾಡಿದ್ದೆ. ಮೋರಿ ನೀರು ಟ್ಯಾಂಕ್ ಗೆ ಟಚ್ ಆಗಿ ಈ ಅನಾಹುತ ಆಗಿದೆ. ಮನೆಯನ್ನು ಡೆಮಾಲಿಶ್ ಮಾಡುವುದಾಗಿ ತಿಳಿಸಿದ್ದಾರೆ. ಸಾಲ ಮಾಡಿ ಕಟ್ಟಿರುವ ಮನೆಗೆ ಇಂತಹ ಪರಿಸ್ಥಿತಿ ಬಂದಿರುವುದು ಬಹಳ ದುಃಖ ತಂದಿದೆ ಎಂದು ತಮ್ಮ ನೋವನ್ನು ವ್ಯಕ್ತಪಡಿಸಿದರು. ಬಿಬಿಎಂಪಿ ಅಧಿಕಾರಿಗಳು ಪೊಲೀಸ್ ಅಧಿಕಾರಿಗಳು ಹಾಜರಿದ್ದರು.

### ಜೋತು ಬಿದ್ದ ವಿದ್ಯುತ್ ತಂತಿಗೆ ಸಿಕ್ಕಿ ಇಬ್ಬರ ದುರ್ಮರಣ

# ಮೃತರ ಕುಟುಂಬ ತಲಾ 5 ಲಕ್ಷ ವಿತರಣೆ

**ಚಾಮರಾಜನಗರ:** ಜಮೀನಿಗೆ ಬೈಕ್ನಲ್ಲಿ ತೆರಳುತ್ತಿದ್ದ ವೇಳೆ ರಸ್ತೆ ಬದಿಯಲ್ಲಿ ಜೋತುಕೊಂಡಿದ್ದ ವಿದ್ಯುತ್ ತಂತಿ ತಗುಲಿ ಇಬ್ಬರು ಸ್ಥಳದಲ್ಲಿಯೇ

ಮೃತಪಟ್ಟಿರುವ ಘಟನೆ ಚಾಮರಾಜನಗರ ತಾಲೂಕಿನ ಮಲ್ಲದೇವನಹಳ್ಳಿ ಬಳಿ ನಡೆದಿದ್ದು, ಮೃತ ವ್ಯಕ್ತಿಗಳ ಕುಟುಂಬಕ್ಕೆ ತಲಾ 5 ಲಕ್ಷ ರೂ ಚಕ್ ವಿತರಣೆ ಮಾಡಲಾಯಿತು.

ಚಾಮರಾಜನಗರ ತಾಲೂಕಿನ ಅಯ್ಯನಪುರ ಗ್ರಾಮದ ನಿವಾಸಿಗಳಾದ ನಾಗೇಂದ್ರ(48), ಮಲ್ಲೇಶ್ (40) ಮೃತರು. ಇವರು ಬುಧವಾರ ಮಧ್ಯರಾತ್ರಿ ಬೈಕ್ನಲ್ಲಿ ಅಯ್ಯನಪುರ-ಹಿತ್ತಲಗುಡ್ಡ ರಸ್ತೆಯಲ್ಲಿ ಜಮೀನಿನಿಂದ ಮನೆಗೆ ಬರುತ್ತಿದ್ದ ವೇಳೆ ವಿದ್ಯುತ್ ಕಂಬದ ಕೆಳಭಾಗದಲ್ಲಿ ಜೋತುಕೊಂಡಿದ್ದ ವಿದ್ಯುತ್ ತಂತಿ ತಗುಲಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಗುರುವಾರ ಬೆಳಗ್ಗೆ ಜಮೀನಿನ ಕಡೆ ತೆರಳಿದ ರೈತರಿಂದ ಮಾಹಿತಿ ದೊರೆತಿದೆ. ವಿಷಯ ತಿಳಿದು ಸ್ಥಳಕ್ಕೆ ಪೂರ್ವ ಠಾಣೆಯ ಪೊಲೀಸರು ತೆರಳಿ ಪರಿಶೀಲಿಸಿದರು.

ಜಿಲ್ಲಾಧಿಕಾರಿ, ಎಸ್ಪಿ ಭೇಟಿ : ಘಟನಾ ಸ್ಥಳಕ್ಕೆ ಜಿಲ್ಲಾಧಿಕಾರಿ ಶಿಲ್ಪಾನಾಗ್, ಎಸ್ಪಿ ಡಾ.ಬಿ.ಟಿ.ಕವಿತಾ, ಸೆಸ್ಕ್ ಸೂಪರಿಡೆಂಟ್ ಇಂಜಿನಿಯರ್ ಭೇಟಿ ನೀಡಿ ಪರಿಶೀಲಿಸಿದರು.

ಎರಡು ಕುಟುಂಬಗಳನ್ನು ಭೇಟಿ ಮಾಡಿದ ಅಧಿಕಾರಿಗಳು ಸಾಂತ್ವನ ಹೇಳಿದರು. ಈ ವೇಳೆ ರೈತ ಮುಖಂಡರು ಹಾಗೂ ಗ್ರಾಮಸ್ಥರು ಮೃತಪಟ್ಟಿರುವ ರೈತರ ಕುಟುಂಬಗಳ ಒಬ್ಬರಿಗೆ ಸರ್ಕಾರಿ ನೌಕರಿ ನೀಡಬೇಕು. ಸೂಕ್ತ ಪರಿಹಾರ ಕೊಡಿಸಬೇಕು. ಘಟನೆಗೆ ಕಾರಣರಾಗಿರುವ ಸೆಸ್ಕ್ ಜೆಇ ಅಮಾನತುಪಡಿಸಬೇಕು ಎಂದು ಆಗ್ರಹಿಸಿದರು.

ಎರಡು ಕುಟುಂಬಗಳ ತಲಾ ಒಬ್ಬರಿಗೆ ಸೆಸ್ಕ್ ಇಲಾಖೆಯಲ್ಲಿ ನೌಕರಿ, ನಿರ್ಲಕ್ಷ್ಯದಡಿ ಜೆಇ ಅಮಾನತುಪಡಿಸಲಾಗುವುದು. ಅಲ್ಲದೇ ಎರಡು ಕುಟುಂಬಗಳಿಗೂ ಸೂಕ್ತ ಪರಿಹಾರ ಕೊಡಿಸಲಾಗುವುದು ಎಂದು ಅಧಿಕಾರಿಗಳು ಭರವಸೆ ನೀಡಿದರು.

ಇದೇ ವೇಳೆ ಎರಡು ಕುಟುಂಬಗಳಿಗೆ ಸೆಸ್ಕ್ ಇಲಾಖೆ ವತಿಯಿಂದ ತಲಾ 5 ಲಕ್ಷ ರೂ.ಗಳ ಚೆಕ್ ಅನ್ನು ಅಧಿಕಾರಿಗಳು ವಿತರಣೆ ಮಾಡಿದರು. ಅಲ್ಲದೇ ಪ್ರಕೃತಿ ವಿಕೋಪದಡಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಮುಖ್ಯಮಂತ್ರಿ, ಇಂಧನ ಸಚಿವರನ್ನು ಭೇಟಿ ಮಾಡಿ ಹೆಚ್ಚಿನ ಪರಿಹಾರ ಕೊಡಿಸಲು ರೈತ ಮುಖಂಡರು ಹಾಗೂ ಗ್ರಾಮಸ್ಥರು ಆಗ್ರಹಿಸಿದರು. ಇದಕ್ಕೆ ಅಧಿಕಾರಿಗಳು ಒಪ್ಪಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಮಹೇಶ್, ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್, ರೈತ ಮುಖಂಡರಾದ ಹೊನ್ನೂರು ಪ್ರಕಾಶ್, ಹೆಬ್ಬಸೂರು ಬಸವಣ್ಣ ಸೇರಿದಂತೆ ಇತರರಿದ್ದರು.

# ಆಯುರ್ವೇದ ಪದ್ಧತಿ ಅಳವಡಿಸಿಕೊಂಡರೆ ಉತ್ತಮ ಆರೋಗ್ಯ

**ತಿಪಟೂರು :** ಋತುವಿಗೆ ಅನುಗುಣವಾಗಿ ಅಹಾರ ಪದ್ದತಿಯನ್ನು ಅಳವಡಿಸಿಕೊಂಡರೆ ಮನುಷ್ಯನ ಜೀವನವು ಆರೋಗ್ಯಕರವಾಗಿದ್ದು, ಜೊತೆಯಲ್ಲಿ ಯೋಗ, ಪ್ರಾಣಾಯಾಮ, ಧ್ಯಾನ, ಪಠಣ ಅತಿ ಅವಶ್ಯಕ ಎಂದು ಆಯುಷ್ ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿ ಡಾ.ಸುಮನಾ ತಿಳಿಸಿದರು.

ತಾಲ್ಲೂಕಿನ ಬಿದರೆಗುಡಿಯ ಕೃಷಿ ವಿಜ್ಞಾನ ಕೇಂದ್ರದಲ್ಲಿ ಕೊನೇಹಳ್ಳಿ ಆಯುಷ್ ಆಸ್ಪತ್ರೆಯ ಸಹಯೋಗದಲ್ಲಿ 9ನೇ ರಾಷ್ಟ್ರೀಯ ಆರ್ಯುವೇದ ದಿನಾಚರಣೆಯ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮನುಷ್ಯನಿಗೆ ಆಗಲೀ ಜೀವ ಇರುವ ಪ್ರಾಣಿ ಸಂಕಲುಗಳಿಗೆ ರೋಗ ಬರದಂತೆ ಆಯಾಸಗೊಳ್ಳದಂತೆ ಸದಾ ಲವಲವಿಕೆಯಿಂದ ಇರುವುದೇ ಆರೋಗ್ಯವೆಂದು ಧನ್ವಂತರಿಯಲ್ಲಿ ತಿಳಿಸಿದ್ದು, ಇತ್ತೀಚಿನ ದಿನಗಳಲ್ಲಿ ಹದಿಹರಯದ ಹೆಣ್ಣು ಮಕ್ಕಳು ಜಂಕ್‌ಫುಡ್ ಗೆ ಮಾರುಹೋಗಿ ರಾಸಾಯನಿಕ ಆಹಾರಗಳನ್ನು ಹಾಗೂ ಅತಿಯಾದ ಎಣ್ಣೆ ಪದಾರ್ಥಗಳನ್ನು, ಬೀದಿ ಬದಿಯಲ್ಲಿನ ಆಹಾರಗಳನ್ನು ಸೇವಿಸುತ್ತಿರುವುದರಿಂದ ಋತು ಸಂಬಂಧಿ ಕಾಯಿಲೆಗಳು ಸಹ ಹೆಚ್ಚಾಗುತ್ತಿದ್ದು ಅದರಿಂದ ಮುಟ್ಟಿನ ದಿನಗಳಲ್ಲಿ ಹೊಟ್ಟೆ ನೋವು, ಅನಿಮಯತ ರಕ್ತಸ್ರಾವ ಅಥವಾ ಸ್ರಾವ ಆಗದೇ ಇರುವುದು ಇಂತಹ ತೊಂದರೆಗಳು, ಪಿಸಿಓಡಿಯಂತಹ ಗರ್ಭಕೋಶದ ವೈಪರಿತ್ಯಗಳು ಕಂಡುಬರುತ್ತವೆ. ಇವುಗಳಿಗೆ ಆಯುರ್ವೇದದಲ್ಲಿ ತಿಳಿಸಿರುವ ಜೀವನ ಶೈಲಿ ಆಹಾರ ಪದ್ಧತಿ ಮತ್ತು ದಿನನಿತ್ಯ ಯೋಗ ಆಚರಣೆ ಪ್ರಾಣಾಯಾಮ ಧ್ಯಾನವೇ ಪರಿಹಾರವಾಗಿದೆ ಎಂದು ತಿಳಿಸಿದರು.



ಮಹಿಳೆಯರಲ್ಲದೆ ಎಲ್ಲ ಜನಸಾಮಾನ್ಯರು ತಮ್ಮ ಜೀವನ ಶೈಲಿಯಲ್ಲಿ ಆಹಾರ ಮತ್ತು ವಿಹಾರದಲ್ಲಿ ಬದಲಾವಣೆ ಮಾಡಿಕೊಂಡು ಆಯುರ್ವೇದ ಪದ್ಧತಿಯನ್ನು ಅಳವಡಿಸಿಕೊಂಡರೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು. ಪ್ರಕೃತಿಯಲ್ಲಿ ಸಿಗುವ ಪ್ರತಿಯೊಂದು ಸಸ್ಯಗಳು ಆರ್ಯುವೇದ ಅಂಶಗಳನ್ನು ಒಳಗೊಂಡಿದ್ದು ಅದರ ಉಪಯೋಗವನ್ನು ಪಡೆದುಕೊಂಡರೆ ಉತ್ತಮ ಆರೋಗ್ಯವನ್ನು ವೃದ್ದಿಸಿಕೊಳ್ಳಬಹುದು. ನಮ್ಮಲ್ಲಿಯೇ ಸಿಗುವ ಅಮೃತಬಳ್ಳಿ, ಶುಂಠಿ, ಬೇವು, ತುಂಬೆ, ಅರಿಸಿನ, ಹಾಗಲ, ನೆಲ್ಲಿ, ಪಪ್ಪಾಯಿ ಹೀಗೆ ಮುಂತಾದ ಸಸ್ಯಗಳು ಸಹ ಪ್ರತಿನಿತ್ಯದ ರೋಗನಿರೋಧಕ ಶಕ್ತಿಗಳಲ್ಲಿ ಒಂದಾಗಿದೆ ಎಂದರು.

ಸಾಧ್ಯವಾದಷ್ಟು ಸ್ಥಳೀಯವಾಗಿ ಋತುವಿಗನುಗಣವಾಗಿ ಸಿಗುವ ಆಹಾರಗಳನ್ನು ಹಣ್ಣುಗಳನ್ನು ಬಳಸಿ ದೇಶಿಯ ಆಹಾರ ಪದ್ಧತಿಯನ್ನು ಅಳವಡಿಸಿಕೊಂಡು ಎಳ್ಳೆಣ್ಣೆ, ಸಾಸಿವೆ, ಎಣ್ಣೆ ಕೊಬ್ಬರಿ ಎಣ್ಣೆ ಇಂತವುಗಳನ್ನು ಬಳಸಿ ಆರೋಗ್ಯವನ್ನು ವೃದ್ದಿಸಿಕೊಳ್ಳಿ ಎಂದು ಸಲಹೆ ನೀಡಿದರು.

ಜೊತೆ ಜೊತೆಗೆ ಸ್ಥಳೀಯವಾಗಿ ಸಿಗುವ ಗಿಡಮೂಲಿಕೆಗಳನ್ನು ಪ್ರಾತ್ಯಕ್ಷಿತವಾಗಿ ಪರಿಚಯಿಸುತ್ತಾ ಅವುಗಳನ್ನು ಬಳಸಿ ತಯಾರಿಸುವ ಔಷಧಗಳಲ್ಲಿ ಸರ್ಕಾರಿ ಆಯುರ್ವೇದ ಆಸ್ಪತ್ರೆಗಳಲ್ಲಿ ದೊರಕಬಹುದಾದ ಆಯುರ್ವೇದ ಔಷಧಗಳನ್ನು ಪ್ರದರ್ಶಿಸಿ ಅವುಗಳ ಬಳಕೆಯಿಂದಾಗುವ ಉಪಯೋಗದ ಮಾಹಿತಿ ನೀಡಿ ಈ ಎಲ್ಲಾ ಮಾಹಿತಿಗಳ್ಳ ಕರಪತ್ರಗಳೊಂದಿಗೆ ಕೆಲವೊಂದು ಮಹಿಳೆಯರಿಗೆ ಅವಶ್ಯಕವಾದ ಔಷಧಿಗಳನ್ನು ವಿತರಿಸಲಾಯಿತು.

ಆಯುರ್ವೇದದಲ್ಲಿ ತಿಳಿಸಿಕೊಟ್ಟ ಅಭ್ಯಂಗ ಎಣ್ಣೆಸ್ನಾನದಿಂದ ಸಂಧಿಗಳಲ್ಲಿ ನೋವು,ಬಿಗಿತನ ಕಡಿಮೆಯಾಗಿ ಪುಷ್ಠಿಯಾಗುತ್ತದೆ ಕೆಲವೊಂದು ಚರ್ಮರೋಗಗಳು ನಿವಾರಣೆಯಾಗುತ್ತದೆ ಎಂದು ಅದರಿಂದಾಗುವ ಲಾಭಗಳ ಬಗ್ಗೆ ವಿವರವಾಗಿ ತಿಳಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕೃಷಿ ವಿಜ್ಞಾನ ಕೇಂದ್ರದ ಡಾ.ಗೋವಿಂದೇಗೌಡ ಕೃಷಿ ವಿಜ್ಞಾನ ಕೇಂದ್ರದಲ್ಲಿ ತರಬೇತಿಗೆ ಹಾಜರಾಗಿರುವ ಕೃಷಿ ಸಖಿಯರು ಹಾಗೂ ಇತರ ರೈತರು ಅಂಗನವಾಡಿ ಕಾರ್ಯಕರ್ತೆಯರು ಕಾರ್ಯಕ್ರಮದ ಲಾಭ ಪಡೆದುಕೊಂಡು ಆರೋಗ್ಯ ತಪಾಸಣೆಯನ್ನು ಮಾಡಿಸಿಕೊಳ್ಳಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕಿರಿಯ ಸಮಾಲೋಚಕಿ ಕುಸುಮ ಯೋಗ ಪ್ರದರ್ಶನ ನಡೆಸಿ, ಗಿಡ ಮೂಲಿಕೆಗಳನ್ನು ಪ್ರಾತ್ಯಕ್ಷತೆಯಾಗಿ ಪ್ರದರ್ಶನ ಮಾಡಲಾಯಿತು. ಉಚಿತ ಆರೋಗ್ಯ ತಪಾಸಣೆಯನ್ನು ನೆಡಸಲಾಯಿತು. ಪ್ರಗತಿಪರ ರೈತ ಯೋಗನಂದಸ್ವಾಮಿ, ಮಂಜುನಾಥ್, ನೇತ್ರಾ, ಸ್ತ್ರೀಶಕ್ತಿ ಸಂಘದವರು, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಕೃಷಿಕರು ಹಾಗೂ ಇನ್ನಿತರ ಸಂಘ ಸಂಸ್ಥೆಯವರು ಸೇರಿದಂತೆ ನೂರಾರು ಜನರು ಭಾಗವಹಿಸಿದ್ದರು.

# ಸಂಜೆ ಟಿಪ್ಸ್



## ಕೃತಕ ಬುದ್ಧಿಮತ್ತೆಗಾಗಿ ಒಪ್ಪಂದಕ್ಕೆ ಸಹಿ ಹಾಕಿದ ರಿಲಯನ್ಸ್- ಎನ್‌ವಿಡಿಯಾ

ಭಾರತಕ್ಕೆ ಕೃತಕ ಬುದ್ಧಿಮತ್ತೆಯನ್ನು ತರಲು ಎರಡೂ ಕಂಪನಿಗಳು ಒಪ್ಪಂದಕ್ಕೆ ಸಹಿ ಹಾಕಿವೆ ಎಂದು ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಕ್ಷೇತ್ರದಲ್ಲಿ ಜಾಗತಿಕ ಕಂಪನಿಯಾದ ಎನ್ ವಿಡಿಯಾದ ಮುಖ್ಯಸ್ಥ ಜೆನ್ ಶೆಂಗ್ ಹುವಾಂಗ್ ಹಾಗೂ ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಕೇಶ್ ಅಂಬಾನಿ ಅವರು ಘೋಷಣೆ ಮಾಡಿದ್ದಾರೆ. ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಇಬ್ಬರೂ ಈ ಘೋಷಣೆ ಮಾಡಿದ್ದು, ಅಲ್ಲಿ 'ಎನ್ ವಿಡಿಯಾ ಸಮ್ಮಿಟ್ ಇಂಡಿಯಾ' ಕಾರ್ಯಕ್ರಮ ನಡೆಯುತ್ತಿದೆ (ಅಕ್ಟೋಬರ್ 23 ರಿಂದ 25 ರವರೆಗೆ). ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ (ಆರ್‌ಐಎಲ್) ಅಧ್ಯಕ್ಷ ಮುಕೇಶ್ ಅಂಬಾನಿ ಮಾತನಾಡಿ, ಜಿಯೋ ಈಗ ವಿಶ್ವದ ಅತಿದೊಡ್ಡ ಡೇಟಾ ಕಂಪನಿಯಾಗಿದೆ ಎಂದರು. ಎನ್ ವಿಡಿಯಾ (ಓತಜಚಿ) ಸಂಸ್ಥಾಪಕ ಮತ್ತು ಸಿಇಒ ಜೆನ್ ಶೆಂಗ್ ಹುವಾಂಗ್ ರಿಲಯನ್ಸ್ ಮತ್ತು ಎನ್ ವಿಡಿಯಾ ಒಟ್ಟಾಗಿ ಭಾರತದಲ್ಲಿ ಕೃತಕ ಬುದ್ಧಿಮತ್ತೆ (ಂಖ) ಮೂಲಸೌಕರ್ಯವನ್ನು ಸೃಷ್ಟಿಸುತ್ತವೆ ಎಂದು ಘೋಷಿಸಿದರು. ಈ ಪಾಲುದಾರಿಕೆಯು ಭಾರತವನ್ನು ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಅಗ್ರಗಣ್ಯ ರಾಷ್ಟ್ರವನ್ನಾಗಿ ಮಾಡುವ ನಿಟ್ಟಿನಲ್ಲಿ ಪ್ರಮುಖ ಹೆಜ್ಜೆಯಾಗಲಿದೆ.ಜೆನ್ ಶೆಂಗ್ ಹುವಾಂಗ್ ಅವರನ್ನು ಭಾರತಕ್ಕೆ ಸ್ವಾಗತಿಸಿದ ಮುಕೇಶ್ ಅಂಬಾನಿ, ಭಾರತದ ದೊಡ್ಡ ಕನಸುಗಳು ಮತ್ತು ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯಿಂದಾಗಿ ದೇಶವು ಇಂದು ಡಿಜಿಟಲ್ ಕ್ರಾಂತಿಯ ಹೊಸ ಯುಗವನ್ನು ಪ್ರವೇಶಿಸುತ್ತಿದೆ ಎಂದು ಹೇಳಿದರು. ಎನ್ ವಿಡಿಯಾ ಸಂಸ್ಥಾಪಕ ಮತ್ತು ಸಿಇಒ ಜೆನ್ ಶೆಂಗ್ ಹುವಾಂಗ್ ಅವರು ಭಾರತವನ್ನು ಗಟ್ಟಿಯಾದ ತಂತ್ರಜ್ಞಾನದ ಕೇಂದ್ರವನ್ನಾಗಿ ಮಾಡುವಲ್ಲಿ ಮುಕೇಶ್ ಅಂಬಾನಿಯವರ ಪ್ರಯತ್ನಗಳನ್ನು ಶ್ಲಾಘಿಸಿದರು. ಹುವಾಂಗ್ ಅವರು ಭಾರತದ ಐಟಿ ಕ್ಷೇತ್ರದ ಸಾಮರ್ಥ್ಯವನ್ನು ಮೆಚ್ಚಿದರು,ಕಂಪ್ಯೂಟರ್ ಸೈನ್ಸ್ ಮತ್ತು ಐಟಿ ಕ್ಷೇತ್ರದಲ್ಲಿ ತರಬೇತಿ ಪಡೆದ ಹಲವಾರು ಜನರಿರುವ ವಿಶ್ವದ ಕೆಲವೇ ದೇಶಗಳಿವೆ,'' ಎಂದು ಹೇಳಿದರು. ಜೆನ್ ಶೆಂಗ್ ಹುವಾಂಗ್ ಮಾತನಾಡಿ,ಇದು ಅಸಾಧಾರಣ ಸಮಯ, ಅಲ್ಲಿ ಭಾರತವು ಹೆಚ್ಚಿನ ಸಂಖ್ಯೆಯ ಕಂಪ್ಯೂಟರ್ ಎಂಜಿನಿಯರ್‌ಗಳು ಮತ್ತು ಅಪಾರ ಜನಸಂಖ್ಯೆಯನ್ನು ಹೊಂದಿದೆ. ಈ ಪಾಲುದಾರಿಕೆಯಲ್ಲಿ ಮುಕೇಶ್ ಅಂಬಾನಿ ಅವರೊಂದಿಗೆ ಕೆಲಸ ಮಾಡಲು ನನಗೆ ಹೆಮ್ಮೆ ಎನಿಸುತ್ತದೆ, ಎಂದು ಹೇಳಿದರು.

## ಬಾಂಬೆ ಹಲ್ವಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಅರ್ಧ ಕಪ್ ಕಾರ್ನ್ ಫ್ಲೋರ್, ಒಂದೂವರೆ ಕಪ್ ನೀರು, ಒಂದೂಕಾಲು ಕಪ್ ಸಕ್ಕರೆ, ಒಂದು ಕಪ್ ನೀರು, 1 ಚಮಚ ನಿಂಬೆ ರಸ, 4-5 ಚಮಚ ತುಪ್ಪ, 10 ಹೆಚ್ಚಿದ ಗೋಡಂಬಿ, ಕಾಲು ಚಮಚ ಏಲಕ್ಕಿ ಪುಡಿ, ಆರೇಂಜ್ ಫುಡ್ ಕಲರ್, ಹೆಚ್ಚಿದ 5 ಬಾದಾಮಿ.

### ಮಾಡುವ ವಿಧಾನ

ದೊಡ್ಡ ಬೌಲ್ ತೆಗೆದುಕೊಂಡು ಅದರಲ್ಲಿ ಕಾರ್ನ್ ಫ್ಲೋರ್ ಮತ್ತು ನೀರು ಹಾಕಿ ಚೆನ್ನಾಗಿ ಮಿಕ್ಸ್ ಮಾಡಿ. ನಂತರ ಇನ್ನು ಅರ್ಧ ಕಪ್ ನಷ್ಟು ನೀರು ಬೆರೆಸಿ ಮಿಕ್ಸ್ ಮಾಡಿ ಪಕ್ಕಕ್ಕೆ ಇಡಿ. ದೊಡ್ಡದೊಂದು ಬಾಣಲೆ ತೆಗೆದುಕೊಂಡು ನೀರು ಮತ್ತು ಸಕ್ಕರೆ ಬೆರೆಸಿ ಕುದಿಸಿ. ಕುದಿಯುತ್ತಿರುವ ಸಕ್ಕರೆ ಪಾಕದಲ್ಲಿ ಕಾರ್ನ್ ಫ್ಲೋರ್ ಮಿಶ್ರಣವನ್ನು ಹಾಕಿ. ಮಧ್ಯಮ ಉರಿಯಲ್ಲಿ ಅದನ್ನು ಕೈಯಾಡಿಸುತ್ತಾ ಬನ್ನಿ. ಕಾರ್ನ್ ಫ್ಲೋರ್ ಮಿಶ್ರಣ ಕುದಿಯಲು ಆರಂಭಿಸಿ ಗಟ್ಟಿಯಾಗುತ್ತದೆ. ಕೂಡಲೇ ನಿಂಬೆರಸ ಬೆರೆಸಿ. ಮಿಶ್ರಣ ಸಂಪೂರ್ಣ ಗಟ್ಟಿಯಾಗುವವರೆಗೆ ತಿರುವುತ್ತಿರಿ. ನಂತರ ಒಂದು ಚಮಚದಷ್ಟು ತುಪ್ಪ ಹಾಕಿ. ಮಿಶ್ರಣ ತುಪ್ಪವನ್ನು ಹೀರಿಕೊಳ್ಳುವವರೆಗೂ ತಿರುವುತ್ತಲೇ ಇರಿ. ನಂತರ ಇನ್ನೊಂದು ಚಮಚ ತುಪ್ಪ ಹಾಕಿ ಮಿಶ್ರಣಕ್ಕೆ ಹೊಳಪು ಬರುವವರೆಗೂ ತಿರುವಿರಿ. ಮಿಶ್ರಣ ಪಾರದರ್ಶಕವಾಗಿ ಬದಲಾಗುತ್ತದೆ. ತುಪ್ಪ ಮೇಲೆ ಬರಲಾರಂಭಿಸುತ್ತದೆ. ಆಗ ಫುಡ್ ಕಲರ್, ಏಲಕ್ಕಿ ಪುಡಿ ಹಾಗೂ ಹೆಚ್ಚಿದ ಗೋಡಂಬಿ ಬೆರೆಸಿ. ಮಿಶ್ರಣ ಉಂಡೆಯಾಗುವವರೆಗೆ ತಿರುವಿರಿ. ನಂತರ ಮಿಶ್ರಣವನ್ನು ಟ್ರೇನಲ್ಲಿ ಹಾಕಿ ಲೆವೆಲ್ ಮಾಡಿ. ಹೆಚ್ಚಿದ ಗೋಡಂಬಿ ಹಾಕಿ ಅಲಂಕರಿಸಿ. ಒಂದು ಗಂಟೆ ಬಿಟ್ಟು ಬೇಕಾದ ಆಕಾರದಲ್ಲಿ ಕತ್ತರಿಸಿದರೆ ಬಾಂಬೆ ಹಲ್ವಾ ಸವಿಯಲು ಸಿದ್ಧ.

## ಬಾಲಿಯಲ್ಲಿ ಅಮಲಾ ಪೌಲ್



ಅಮಲಾ ಪೌಲ್ ಮತ್ತೆ ಬೋಲ್ಡ್ ಅವತಾರದಲ್ಲಿ ಕಾಣಿಸಿಕೊಂಡಿದ್ದಾರೆ. ಎರಡನೆ ಮದುವೆಯಾಗಿರುವ ಅಮಲಾ ತಾಯಿಯಾಗಿರು ಖುಷಿಯಲ್ಲಿದ್ದಾರೆ. ಸೋಷಿಯಲ್ ಮೀಡಿಯಾದಲ್ಲಿ ಸಖತ್ ಆಯಕ್ಟಿವ್ ಆಗಿರುವ ನಟಿ, ಆಗಾಗ ಫೋಟೋ ಹಾಗೂ ವಿಡಿಯೋ ಶೇರ್ ಮಾಡ್ತಾ ಕ್ರೇಜ್ ಕ್ರಿಯೇಟ್ ಮಾಡ್ತಾರೆ. ಇದೀಗ ನಟಿ ಶೇರ್ ಮಾಡಿದ ಫೋಟೋಗೆ ಬ್ಯಾಡ್ ಕಮೆಂಟ್ ಗಳು ಬರ್ತಿವೆ. ಸೌತ್ ನಲ್ಲಿ ಸ್ಟಾರ್ ಹೀರೋಗಳ ಜೊತೆ ನಟಿಸಿದ್ದ ಅಮಲಾ ಪೌಲ್, ಜಗತ್ ದೇಸಾಯಿ ಎಂಬ ಉದ್ಯಮಿಯನ್ನು 2ನೇ ಮದುವೆ ಆಗಿದ್ದಾರ. ಮದುವೆಯಾಗಿ ಮಗುವಾದ ಮೇಲೆ ನಟಿ ಸಿಕ್ಕಾಪಟ್ಟೆ ಬೋಲ್ಡ್ ಆಗಿದ್ದಾರೆ. ಮದುವೆಗೂ ಮುನ್ನ ಪತಿಗೆ ಚುಂಬಿಸುತ್ತಿರುವ ಫೋಟೋಗಳನ್ನು ಹಂಚಿಕೊಂಡಿದ್ರು. ಇದೀಗ ಸ್ಕರ್ಟ್ ಹಾಗೂ ಒಳ ಉಡುಪು ತೊಟ್ಟಿರುವ ಫೋಟೋಗಳನ್ನು ಹಂಚಿಕೊಂಡು ಪಡ್ಡೆ ಹುಡುಗರ ನಿದ್ದೆಗೆಡಿಸಿದ್ದಾರೆ. ಓಣಂ ಹಬ್ಬದ ದಿನ ಸಾಂಪ್ರದಾಯಿಕ ಉಡುಗೆಯಲ್ಲಿ ಪತಿ ಮತ್ತು ಮಗನ ಜೊತೆ ಫೋಟೋಗೆ ಪೋಸ್ ಕೊಟ್ಟ ಅಮಲಾಪಾಲ್ ಇದೀಗ ಬೋಲ್ಡ್ ಆಗಿ ಪೋಸ್ ನೀಡಿದ್ದಾರೆ. ನಟಿ ತೊಟ್ಟ ಬಟ್ಟೆ ಬಗ್ಗೆ ನಾನಾ ಕಮೆಂಟ್ ಬರ್ತಿದೆ ಮದುವೆಯಾಗಿ ಮಗುವಾದ ಮೇಲೆ ಅಮಲಾ ಪೌಲ್ ಸಿಕ್ಕಾಪಟ್ಟೆ ದಪ್ಪ ಆಗಿದ್ದಾರೆ ಎಂದು ಕೆಲವರು ಕಮೆಂಟ್ ಮಾಡ್ತಿದ್ದಾರೆ. ಇದೀಗ ಪತಿಯೊಂದಿಗೆ ಬಾಲಿಗೆ ವೆಕೇಷನ್ಗೆ ತೆರಳಿದ ಅಮಲಾ ಪೌಲ್, ಪ್ರಕೃತಿಯ ಮಡಿಲಲ್ಲಿ ಎಂಜಾಯ್ ಮಾಡುತ್ತಿದ್ದಾರೆ. ಪತಿ ಹಾಗೂ ಮಗುವಿನೊಂದಿಗೆ ಅರೆಬೆತ್ತಲೆಯಾಗಿ ಫೋಟೋಗಳಿಗೆ ಪೋಸ್ ಕೊಟ್ಟಿದ್ದಾರೆ. ಕೆಲ ಗಂಟೆಗಳ ಹಿಂದೆ ಶೇರ್ ಆಗಿರುವ ಈ ಫೋಟೋಗಳಿಗೆ ಭಾರಿ ಲೈಕ್, ಕಮೆಂಟ್ ಗಳು ಕೂಡ ಹರಿದು ಬರ್ತಿದೆ. ಹುಡುಗರು ವ್ಯಂಗ್ಯ ಮಾಡಿದ್ರೆ, ಕೆಲವರು ಬ್ಯಾಡ್ ಕಮೆಂಟ್ ಗಳನ್ನು ಮಾಡುತ್ತಿದ್ದಾರೆ. ಅಮಲಾ ಪೌಲ್ ಫೋಟೋಗಳನ್ನು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗ್ತಿದೆ. ಬಾಲಿಯಲ್ಲಿರುವ ಅನಂತರಾ ಉಲುವಾಟ್ಟು ರೆಸಾರ್ಟ್ ನಲ್ಲಿ ಅಮಲಾ ಪೌಲ್ ಪತಿ ಜೊತೆ ಎಂಜಾಯ್ ಮಾಡ್ತಿದ್ದಾರೆ. ನಟಿ ಫೋಟೋ ಶೇರ್ ಮಾಡಿದ 4 ಗಂಟೆಯೊಳಗೆ ಈ ಫೋಟೋಗಳಿಗೆ 1 ಲಕ್ಷ 85 ಸಾವಿರ ಲೈಕ್ಗಳು ಬಂದಿವೆ. ಬ್ಯೂಟಿ, ಲವ್ಲಿ, ಸೋ ಸ್ವೀಟ್, ಹಾಟಿ ಎಂದು ಫ್ಯಾನ್ಸ್ ಕಮೆಂಟ್ಮಾಡ್ತಿದ್ದಾರೆ. ಜೂನ್ 11 ರಂದು ಅಮಲಾ ಪೌಲ್ ಗಂಡು ಮಗುವಿಗೆ ಜನ್ಮ ನೀಡಿದ್ರು, ಮಗನ ಜೊತೆಗಿನ ವಿಡಿಯೋ ಶೇರ್ ಮಾಡುವುದರ ಜೊತೆಗೆ ಮಗುವಿನ ಹೆಸರನ್ನು ಕೂಡ ನಟಿ ರಿವೀಲ್ ಮಾಡಿದ್ದರು. ಇಲೈ ಎಂದು ಅಮಲಾ ತನ್ನ ಮಗುವಿಗೆ ಹೆಸರಿಟ್ಟಿದ್ದಾರೆ. ಅಭಿಮಾನಿಗಳು ಕೂಡ ಅಮಲಾ ಪೌಲ್ಗೆ ಶುಭಾಶಯಗಳ ಸುರಿಮಳೆಗೈದಿದ್ದರು. ಅಮಲಾ ಪೌಲ್ ಕನ್ನಡದಲ್ಲಿ ನಟ ಸುದೀಪ್ ಜೊತೆ ಹೆಬ್ಬುಲಿ ಸಿನಿಮಾದಲ್ಲಿ ನಟಿಸಿದ್ದಾರೆ. ತೆಲುಗಿನಲ್ಲಿ ಕೆಲವು ಚಿತ್ರಗಳನ್ನು ಮಾಡಿದ್ದರೂ, ಹೆಚ್ಚು ಕ್ಲಿಕ್ ಆಗಿದ್ದು ತೆಲುಗಿನಲ್ಲಿ. ಮೆಗಾ ಹೀರೋಗಳ ಜೊತೆ ನಟಿ ಸ್ಟಾರ್ ಹೀರೋಯಿನ್ ಆದ್ರು. ಈ ಹಿಂದೆ ನಟಿ ಅಮಲಾ ಪೌಲ್ ನಿರ್ದೇಶಕ ಎಎಲ್ ವಿಜಯ್ ಅವರನ್ನು 12 ಜೂನ್ 2014 ರಂದು ವಿವಾಹವಾದ್ರು. ಆದರೆ ಅವರ ಮದುವೆ ಕೇವಲ ಮೂರು ವರ್ಷಗಳ ಕಾಲ ಉಳಿಯಿತು.

## ಸ್ಪ್ರಿಂಗ್ ಆನಿಯನ್ ಆರೋಗ್ಯಕ್ಕೆ ಎಷ್ಟು ಒಳ್ಳೆಯದು ಗೊತ್ತಾ...?



### ಹೆಲ್ತ್ ಟಿಪ್ಸ್

ಈರುಳ್ಳಿ ಇಲ್ಲದೆ ಹೋದರೆ ಅಡುಗೆ ಸಂಪೂರ್ಣವಾಗುವುದಿಲ್ಲ. ಹಾಗೇ ಈರುಳ್ಳಿ ಹೂವನ್ನು ಫ್ರೈಡ್ ರೈಸ್, ಸಲಾಡ್ ಗಳಲ್ಲಿ ಹೆಚ್ಚು ಉಪಯೋಗಿಸುವುದನ್ನು ನೋಡಿದ್ದೇವೆ.

ಅಲಂಕಾರಕ್ಕೆ ಬಳಸುವ ಈ ಸ್ಪ್ರಿಂಗ್ ಆನಿಯನ್ ಪ್ರಯೋಜನ ತಿಳಿದರೆ ನಿತ್ಯವೂ ಇದನ್ನು ಸೇವಿಸುತ್ತೇವೆ.

- ಈರುಳ್ಳಿಗೆ ಹೋಲಿಸಿದರೆ ಕಾಂಡಗಳಲ್ಲಿ ಸಲ್ಫರ್ ಹೆಚ್ಚಾಗಿರುತ್ತದೆ. ಆದ್ದರಿಂದ ಸ್ಪ್ರಿಂಗ್ ಆನಿಯನ್ ಸೇವಿಸುವುದರಿಂದ ಕೆಟ್ಟ ಕೊಲೆಸ್ಟ್ರಾಲ್ ಕಡಿಮೆಯಾಗಿ ರಕ್ತಹೀನತೆ ನಿಯಂತ್ರಣಕ್ಕೆ ಬರುತ್ತದೆ.
- ಶೀತ, ಕೆಮ್ಮಿನಿಂದ ಬಳಲುವವರು ಸೂಪ್ ನಲ್ಲಿ ಈ ಕಾಂಡಗಳನ್ನು ಸಣ್ಣದಾಗಿ ಕಟ್ ಮಾಡಿ ಹಾಕಿಕೊಂಡರೆ ಸಮಸ್ಯೆಗೆ ಪರಿಹಾರ ಸಿಗುತ್ತದೆ.
- ಹಸಿ ಕಾಂಡಗಳ ರಸವನ್ನು ತೆಗೆದು ಅಷ್ಟೇ ಪ್ರಮಾಣದಲ್ಲಿ ಜೇನುತುಪ್ಪದಲ್ಲಿ ಕಲಸಿ ಕುಡಿದರೆ ರೋಗ ನಿರೋಧಕ ಶಕ್ತಿ ಹೆಚ್ಚಾಗುತ್ತದೆ.
- ಸ್ಪ್ರಿಂಗ್ ಆನಿಯನ್ ನಲ್ಲಿರುವ ಪೆಕ್ಟಿನ್ ಅನ್ನುವ ಪದಾರ್ಥ ಕ್ಯಾನ್ಸರ್ ಬರದಂತೆ ತಡೆಯಲು ನೆರವಾಗುತ್ತದೆ.
- ಪೈಲ್ಸ್ ಸಮಸ್ಯೆಯಿಂದ ಬಳಲುವವರು ಮೊಸರಿನಲ್ಲಿ ಸ್ಪ್ರಿಂಗ್ ಈರುಳ್ಳಿಯನ್ನು ಹಾಕಿ ಹಸಿಯಾಗಿ ತಿಂದರೆ ಒಳ್ಳೆಯದು. ಇದರಿಂದ ಪೈಲ್ಸ್ ನಿಂದ ಬರುವ ನೋವು, ಊತ ಕಡಿಮೆಯಾಗುತ್ತದೆ.
- ಇದನ್ನು ಬೇಯಿಸುವಾಗ ಕೆಟ್ಟ ವಾಸನೆ ಬರುತ್ತದೆ ಎನ್ನುವವರು ಸ್ಪ್ರಿಂಗ್ ಆನಿಯನ್ ನನ್ನು ಸೀಫುಡ್ ಗಳಲ್ಲಿ ಬಳಸಿ ಸೇವಿಸಬಹುದು.

## ಕೂದಲಿಗೂ ವರದಾನ ಮೊಸರು

### ಬ್ಯೂಟಿ ಟಿಪ್ಸ್



ಮೊಸರು ಆರೋಗ್ಯಕ್ಕೆ ಉತ್ತಮವಾದದ್ದು ಎಂಬುದು ಗೊತ್ತಿರುವ ವಿಚಾರವೇ. ಅದರಲ್ಲೂ ನಮ್ಮ ಭಾರತೀಯ ಆಹಾರ ಪದ್ಧತಿಯಲ್ಲಿ ಮೊಸರು ಕೂಡ ಒಂದು. ಅನೇಕ ಮನೆಗಳಲ್ಲಿ ಊಟದ ಜೊತೆ ಮೊಸರಿಲ್ಲದೆ ಊಟ ಪರಿಪೂರ್ಣ ಆಗುವುದಿಲ್ಲ. ಮೊಸರು ಆರೋಗ್ಯಕ್ಕೆ ಉತ್ತಮವಾದ ಅಂಶಗಳನ್ನೊಳಗೊಂಡತೆ ತ್ವಚೆಗೂ ಔಷಧಿಯ ಗುಣಗಳನ್ನು ನೀಡಬಲ್ಲದು. ಹಾಗೆಯೇ ಮೊಸರು ಮುಖಕ್ಕೆ ಹೆಚ್ಚಿನ ಕಾಂತಿ ನೀಡುತ್ತದೆ. ಜೇನು ಹಾಗೂ ಮೊಸರನ್ನು ಮಿಶ್ರಣ ಮಾಡಿ ಹಚ್ಚುವುದರಿಂದ ಕಾಂತಿಯುತ ತ್ವಚೆಯನ್ನು ನಿಮ್ಮದಾಗಿಸಿಕೊಳ್ಳಬಹುದು. ಮೊದಲು ಕ್ಲೆನ್ಸರ್‌ನಿಂದ ಮುಖ ತೊಳೆದು ಈ ಮಿಶ್ರಣವನ್ನು ಮುಖಕ್ಕೆ ಹಚ್ಚಿಕೊಳ್ಳಿ. ನಂತರ 20 ನಿಮಿಷ ಹಾಗೆ ಬಿಟ್ಟು ತಣ್ಣೀರಿನಿಂದ ತೊಳೆಯಬೇಕು. ಹೀಗೆ ಮಾಡಿದ್ದಲ್ಲಿ ಮುಖದ ಮೇಲಿನ ಟ್ಯಾನ್ ನಿವಾರಣೆಯಾಗುವುದರ ಜೊತೆಗೆ ಉತ್ತಮವಾದ ಕಾಂತಿಯುತ ತ್ವಚೆ ನಿಮ್ಮದಾಗುತ್ತದೆ. ಮುಖದ ಮೇಲೆ ಮೊಡವೆಗಳ ಸಮಸ್ಯೆ ಎನ್ನುವವರಿಗೆ ಅರಿಶಿನ ಕೂಡ ಉತ್ತಮ ಔಷಧ. ಮೊಸರು ಹಾಗೂ ಅರಿಶಿಣವನ್ನು ಮಿಶ್ರಣ ಮಾಡಿಕೊಂಡು ಮುಖಕ್ಕೆ ಹಾಗೂ ಕುತ್ತಿಗೆ ಭಾಗಕ್ಕೆ ಲೇಪನ ಮಾಡಿಕೊಳ್ಳಬೇಕು. 15 ನಿಮಿಷದ ನಂತರ ತಣ್ಣೀರಿನಿಂದ ಮುಖ ತೊಳೆಯುವುದರಿಂದ ಮೊಡವೆ ಸಮಸ್ಯೆ ಕಡಿಮೆ ಮಾಡಬಹುದು. ಜೊತೆಗೆ ಕಪ್ಪು ಕಲೆಗಳು ಕೂಡ ನಿವಾರಣೆಯಾಗುವ ಸಾಧ್ಯತೆ ಇದೆ. ಇನ್ನು ಒಂದು ಚಮಚ ನಿಂಬೆ ರಸದ ಜೊತೆಗೆ 2 ಚಮಚ ಮೊಸರನ್ನು ಸೇರಿಸಿ ಮಿಶ್ರಣ ಮಾಡಿಕೊಳ್ಳಿ. ನಂತರ ಮುಖಕ್ಕೆ ಹಚ್ಚುತ್ತಾ ಬನ್ನಿ. 15 ರಿಂದ 20 ನಿಮಿಷದ ನಂತರ ಮುಖವನ್ನು ತಣ್ಣೀರಿನಿಂದ ತೊಳೆಯಿರಿ. ಹೀಗೆ ವಾರಕ್ಕೊಮ್ಮೆ ಮಾಡುವುದರಿಂದ ಮುಖದ ಕಾಂತಿ ಹೆಚ್ಚಾಗುತ್ತದೆ. ಇನ್ನು ಒಂದು ಚಮಚ ಮೊಸರಿನ ಜೊತೆ ಒಂದು ಅಥವಾ ಒಂದುವರೆ ಚಮಚ ಟಮೋಟ ರಸ ಸೇರಿಸಿ ಮಿಶ್ರಣ ಮಾಡಿಕೊಳ್ಳಿ ನಂತರ ಸ್ವಚ್ಛ ಮುಖಕ್ಕೆ ಇದನ್ನು ಲೇಪನ ಮಾಡಿ ಹೀಗೆ 20 ನಿಮಿಷ ಒಣಗಲು ಬಿಟ್ಟು ನಂತರ ತಣ್ಣೀರಿನಿಂದ ತೊಳೆಯಬೇಕು . ಹೀಗೆ ಮಾಡುತ್ತಾ ಬಂದರೆ ಕಪ್ಪು ಕಲೆ ಹಾಗೂ ಮೊಡವೆ ಸಮಸ್ಯೆ ಬಗೆ ಹರಿಯುತ್ತದೆ.

## ಡೋಝೀಯಿಂದ ಮಹತ್ವದ ಅಧ್ಯಯನ ವರದಿ ಅನಾವರಣ



ರೋಗಿಯ ಆರೋಗ್ಯ ಪರಿಸ್ಥಿತಿ ಹದಗೆಡುವ ಕುರಿತು 16 ಗಂಟೆ ಮೊದಲೇ ಮುನ್ಸೂಚನೆ ನೀಡಲಿದೆ ಡೋಝೀಯ ಎಐ ಆಧರಿತ ಅರ್ಲಿ ವಾರ್ನಿಂಗ್ ಸಿಸ್ಟಮ್

ಭಾರತದ ಹೆಲ್ತ್ ಎಐ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಡೋಝೀ ಸಂಸ್ಥೆಯು ಪ್ರಸಿದ್ಧ ಅಂತಾರಾಷ್ಟ್ರೀಯ ಜರ್ನಲ್ ಫ್ರಂಟಿಯರ್ಸ್ ಇನ್ ಮೆಡಿಕಲ್ ಟೆಕ್ನಾಲಜಿ ಯಲ್ಲಿ ಪ್ರಕಟವಾದ ತನ್ನ ಮಹತ್ವದ ಸಂಶೋಧನಾತ್ಮಕ ಅಧ್ಯಯನ ವರದಿಯನ್ನು ಅನಾವರಣಗೊಳಿಸಿದೆ. ಈ ಜರ್ನಲ್ ಅನ್ನು ಪ್ರತಿಷ್ಠಿತ ಫ್ರಂಟಿಯರ್ಸ್ ಗ್ರೂಪ್ ಪ್ರಕಟ ಮಾಡುತ್ತದೆ. ಈ ಸಂಶೋಧನಾತ್ಮಕ ಅಧ್ಯಯನವನ್ನು ಕಿಂಗ್ ಜಾರ್ಜ್ ಮೆಡಿಕಲ್ ಯುನಿವರ್ಸಿಟಿ (ಕೆಜಿಎಂಯು) ಸಹೋಯಗದಲ್ಲಿ ನಡೆಸಲಾಗಿದ್ದು, ಭಾರತೀಯ ಟೆರ್ಷರಿ ಕೇರ್ (ಸಂಕೀರ್ಣ ವೈದ್ಯಕೀಯ ಪರಿಸ್ಥಿತಿಗಳಿಗೆ ಸಂಕೀರ್ಣ, ಅತ್ಯಾಧುನಿಕ ಉಪಕರಣವನ್ನು ಬಳಸಿಕೊಂಡು ನೀಡುವ ಚಿಕಿತ್ಸೆ) ವಿಭಾಗದಲ್ಲಿಲ್ಲಿ ಅತ್ಯಂತ ಮಹತ್ವದ, ಅತಿ ದೊಡ್ಡ ಅಧ್ಯಯನಗಳಲ್ಲಿ ಒಂದಾಗಿದೆ. ಈ ಅಧ್ಯಯನವು ಡೋಝೀಯ ಎಐ ಆಧರಿತ ಅರ್ಲಿ ವಾರ್ನಿಂಗ್ ಸಿಸ್ಟಮ್ (ಇಡಬ್ಲ್ಯೂಎಸ್)ನ ಅದ್ಭುತ ಪರಿಣಾಮವನ್ನು ತೋರಿಸಿಕೊಟ್ಟಿದ್ದು, ರೋಗಿಯ ಆರೋಗ್ಯ ಸ್ಥಿತಿ ಹದಗೆಡುವುದನ್ನು 16 ಗಂಟೆಗಳ ಮುಂಚಿತವಾಗಿ ಊಹಿಸುವ ಅರ್ಲಿ ವಾರ್ನಿಂಗ್ ಸಿಸ್ಟಮ್ ನ ಸಾಮರ್ಥ್ಯವನ್ನು ತಿಳಿಸಿಕೊಟ್ಟಿದೆ. ಇದರಿಂದಾಗಿ ಆರೋಗ್ಯ ಸೇವಾ ಸಿಬ್ಬಂದಿಗಳು ತಕ್ಷಣವೇ ಸೂಕ್ತ ಚಿಕಿತ್ಸೆ ನೀಡಲು ಮತ್ತು ಆ ಮೂಲಕ ಜೀವಗಳನ್ನು ಉಳಿಸಲು ಅನುವು ಮಾಡಿಕೊಡುತ್ತದೆ.

ಆಸ್ಪತ್ರೆಗಳಲ್ಲಿ 2 ಮಿಲಿಯನ್ ನಷ್ಟು ಹಾಸಿಗೆ ಸೌಲಭ್ಯವನ್ನು ಹೊಂದಿರುವ ಈ ದೇಶದಲ್ಲಿ ಸುಮಾರು 1.9 ಮಿಲಿಯನ್ ನಷ್ಟು ರೋಗಿಗಳು ಜನರಲ್ ವಾರ್ಡ್ ಗಳನ್ನು ಅವಲಂಬಿಸಿರುತ್ತಾರೆ. ಅಲ್ಲಿ ಯಾರಾದರೂ ವೇದ್ಯಕೀಯ ಸೇವಾ ಸಿಬ್ಬಂದಿಗಳು ಭೇಟಿ ಕೊಟ್ಟು ರೋಗಿಗಳ ನಿಗಾವಹಿಸುವ ಅವಶ್ಯಕತೆ ಇರುತ್ತದೆ. ಡೋಝೀಯ ಎಐ ಆಧರಿತ ರಿಮೋಟ್ ಪೇಷೆಂಟ್ ಮಾನಿಟರಿಂಗ್ ಮತ್ತು ಅರ್ಲಿ ವಾರ್ನಿಂಗ್ ಸಿಸ್ಟಮ್ (ಇಡಬ್ಲ್ಯೂಎಸ್) ಈ ಸಮಸ್ಯೆಗೆ ಅತ್ಯುತ್ತಮ ಪರಿಹಾರವನ್ನು ಒದಗಿಸುತ್ತದೆ. ಈ ತಂತ್ರಜ್ಞಾನವು ಆಸ್ಪತ್ರೆಯ ಸಾಮರ್ಥ್ಯದ ಶೇ.95ರಷ್ಟು ಆರೋಗ್ಯ ಸೇವಾ ವ್ಯವಸ್ಥೆಯನ್ನು ಬದಲಿಸುವ ಶಕ್ತಿಯನ್ನು ಹೊಂದಿದೆ. ಜೊತೆಗೆ ಐಸಿಯು ವೆಚ್ಚದ ಕೇವಲ ಒಂದು ಭಾಗದಲ್ಲಿ ವಿಶ್ವ ದರ್ಜೆಯ ಆರೋಗ್ಯ ಸೇವೆ ಒದಗಿಸುವ ಶಕ್ತಿ ಹೊಂದಿದ್ದು, ಜೀವಗಳನ್ನು ಉಳಿಸುವ ನಿಟ್ಟಿನಲ್ಲಿ ನಿರಂತರವಾಗಿ ರೋಗಿಗಳ ಆರೋಗ್ಯವನ್ನು ನಿಗಾವಹಿಸುತ್ತದೆ.ಪ್ರಸ್ತುತ ನಡೆಸಿರುವ ಅಧ್ಯಯನದ ಭಾಗವಾಗಿ ಡೋಝೀ 85,000ಗಂಟೆಗಳ ಕಾಲ 700 ರೋಗಿಗಳನ್ನು ನಿಗಾ ವಹಿಸಿದೆ ಮತ್ತು ಡೋಝೀಯ ಕಂಟಿನ್ಯೂಯಸ್ ಕಾಂಟಾಕ್ಟ್ ಲೆಸ್ ಪೇಷೆಂಟ್ ಮಾನಿಟರಿಂಗ್ ಮತ್ತು ಅರ್ಲಿ ವಾರ್ನಿಂಗ್ ಸಿಸ್ಟಮ್ (ಇಡಬ್ಲ್ಯೂಎಸ್) ಹೇಗೆ ಸಾಂಪ್ರದಾಯಿಕ ಪದ್ಧತಿಗಳನ್ನು ಹೇಗೆ ಕ್ರಾಂತಿಕಾರಕಗೊಳಿಸಬಹುದು ಎಂಬುದನ್ನು ತೋರಿಸಿಕೊಟ್ಟಿದೆ. ರೋಗಿಯ ಪರಿಸ್ಥಿತಿ ಹದಗೆಡುವ 16 ಗಂಟೆಗಳ ಮೊದಲೇ ಎಚ್ಚರಿಕೆಯನ್ನು ನೀಡುವ ಮೂಲಕ ಡೋಝೀಯ ಅತ್ಯಾಧುನಿಕ ವ್ಯವಸ್ಥೆಯು ಆರೋಗ್ಯ ಸೇವಾ ಸಿಬ್ಬಂದಿಗಳಿಗೆ ಸೂಕ್ತವಾದ ಚಿಕಿತ್ಸೆ ನೀಡಲು ಸೂಚನೆ ನೀಡುತ್ತದೆ. ಇದು ಆರೋಗ್ಯ ಉತ್ತಮಗೊಳಿಸಿ ಜೀವ ಉಳಿಸುವುದರ ಜೊತೆಗೆ ಪ್ರತೀ ಸಿಬ್ಬಂದಿಯ ದಿನದಲ್ಲಿ 2.4 ಗಂಟೆಗಳ ಸಮಯವನ್ನು ಉಳಿಸುತ್ತದೆ. ಈ ಸಂಶೋಧನೆಯಲ್ಲಿ ಎಚ್ಚರಿಕೆಯ ತೀವ್ರತೆ, ನಿರ್ದಿಷ್ಟತೆ, ಮೊದಲ ಸೂಚನೆಯಿಂದ ಆರೋಗ್ಯ ಹದಗೆಡುವವರೆಗಿನ ಸರಾಸರಿ ಸಮಯ ಮತ್ತು ಆರೋಗ್ಯ ಸೇವಾ ಸಿಬ್ಬಂದಿಗಳ ಚಟುವಟಿಕೆ ಸೇರಿದಂತೆ ಪ್ರಮುಖ ವಿಚಾರಗಳನ್ನು ವಿಶ್ಲೇಷಣೆ ನಡೆಸಿದ್ದು, ಡೋಝೀಯ ಜೀವ ಉಳಿಸುವ ಸಾಮರ್ಥ್ಯಕ್ಕೆ ಪೂರಕ ಪುರಾವೆಗಳನ್ನು ಒದಗಿಸಿದೆ.ಭಾರತದ ಅನೇಕ ಆಸ್ಪತ್ರೆಗಳಲ್ಲಿ ನಿರಂತರ ನಿಗಾವಹಿಸುವ ವ್ಯವಸ್ಥೆ ಐಸಿಯುಗಳಿಗೆ ಮಾತ್ರ ಸೀಮಿತವಾಗಿದೆ. ಜನರಲ್ ವಾರ್ಡ್ ಗಳಲ್ಲಿ ಈ ಸೇವೆ ಲಭ್ಯ ಇರುವುದಿಲ್ಲ. ಅಲ್ಲಿ ಬಹಳಷ್ಟು ರೋಗಿಗಳಿದ್ದು, ಅಲ್ಲಿರುವ ಬಹುತೇಕ ರೋಗಿಗಳ ಆರೋಗ್ಯ ಹದಗೆಡುವಿಕೆ ಕುರಿತು ತಿಳಿಯುವುದಿಲ್ಲ. ಹೃದಯ ಬಡಿತ, ಉಸಿರಾಟದ ಬಡಿತ ಮತ್ತು ರಕ್ತದೊತ್ತಡದಂತಹ ಪ್ರಮುಖ ಅಂಶಗಳನ್ನು ನಿರಂತರವಾಗಿ ನಿಗಾವಹಿಸುವ ಮೂಲಕ ಡೋಝೀಯ ಇಡಬ್ಲ್ಯೂಎಸ್ ಈ ಸಮಸ್ಯೆಯನ್ನು ಗಣನೀಯವಾಗಿ ಕಡಿಮೆ ಮಾಡುತ್ತದೆ ಎಂಬುದನ್ನು ಈ ಅಧ್ಯಯನವು ತೋರಿಸಿ ಕೊಟ್ಟಿದೆ. ಅಧ್ಯಯನವು ಡೋಝೀಯ ಇಡಬ್ಲ್ಯೂಎಸ್ ಶೇ.67 ರಿಂದ ಶೇ.94ರವರೆಗಿನ ಪ್ರಕರಣಗಳಲ್ಲಿ ರೋಗಿಯ ಆರೋಗ್ಯ ಕ್ಷೀಣವಾಗುವ ಕುರಿತು ಮೊದಲೇ ಸೂಚನೆ ನೀಡಿದೆ ಮತ್ತು ಪರಿಸ್ಥಿತಿ ಗಂಭೀರ ಆಗುವುದಕ್ಕೆ ಮೊದಲೇ ಆರೋಗ್ಯ ಸೇವಾ ಸಿಬ್ಬಂದಿಗಳು ಚಿಕಿತ್ಸೆ ಒದಗಿಸುವಂತೆ ಮಾಡಿದೆ ಎಂಬುದನ್ನು ತೋರಿಸಿಕೊಟ್ಟಿದೆ. ಆರೋಗ್ಯ ಹದಗೆಡುವುದನ್ನು ಆರಂಭದಲ್ಲಿಯೇ ಪತ್ತೆ ಹಚ್ಚುವ ಈ ವ್ಯವಸ್ಥೆಯು ವಾರ್ಷಿಕವಾಗಿ 21 ಲಕ್ಷ ಜೀವಗಳನ್ನು ಉಳಿಸುವ ಸಾಮರ್ಥ್ಯವನ್ನು ಹೊಂದಿದೆ ಮತ್ತು ಆರೋಗ್ಯ ಸೇವಾ ವೆಚ್ಚವನ್ನು ? 6400 ಕೋಟಿಗಳಷ್ಟು ಕಡಿಮೆ ಮಾಡುವ ತಾಕತ್ತು ಹೊಂದಿದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ವೃಷಭ:** ಆಧ್ಯಾತ್ಮಿಕ ಕ್ಷೇತ್ರದವವರಿಗೆ ಅನುಕೂಲ, ಮನೆಯ ವಾತಾವರಣದಲ್ಲಿ ಕಿರಿಕಿರಿ, ಮಾನಸಿಕ ನೆಮ್ಮದಿ ಭಂಗ

**ಮಿಥುನ:** ವ್ಯವಹಾರ ಕ್ಷೇತ್ರದಲ್ಲಿ ಲಾಭ, ಉದ್ಯೋಗ ಸ್ಥಳದಲ್ಲಿ ಕಿರಿಕಿರಿ, ಬಂಧುಮಿತ್ರರ ಆಗಮನ, ಕುಟುಂಬದಲ್ಲಿ ಆತಂಕ

**ಕಟಕ:** ಕೆಲಸ ಕಾರ್ಯಗಳಲ್ಲಿ ಜಯ, ಕುಟುಂಬದಲ್ಲಿ ಕಿರಿ ಕಿರಿ, ಆರ್ಥಿಕ ನೆರವು ಸಿಗುವುದು

**ಸಿಂಹ:** ಒಳ್ಳೆತನದಿಂದ ಸಂಕಷ್ಟ, ಮಾನಸಿಕ ಚಿಂತೆ, ಉದ್ಯೋಗ ಕಳೆದುಕೊಳ್ಳುವ ಸಂದರ್ಭ, ಕುಟುಂಬದಲ್ಲಿ ಆತಂಕ

**ಕನ್ಯಾ:** ಮಿತ್ರರಿಂದ ನಷ್ಟ, ಪಾಲುದಾರಿಕೆ ವ್ಯವಹಾರದಲ್ಲಿ ಸಂಕಷ್ಟ, ದಾಂಪತ್ಯ ಕಿರಿಕಿರಿ, ನಿದ್ರಾಭಂಗ

**ತುಲಾ:** ಉದ್ಯೋಗ ಲಾಭ, ಆರ್ಥಿಕ ಸಮಸ್ಯೆಯಿಂದ ಮುಕ್ತಿ, ಆರೋಗ್ಯದಲ್ಲಿ ವ್ಯತ್ಯಾಸ

**ವೃಶ್ಚಿಕ:** ಉದ್ಯೋಗನಿಮಿತ್ತ ಪ್ರಯಾಣ, ಗುರು ನಿಂದನೆ ಮತ್ತು ದೈವನಿಂದನೆ, ಅನಾರೋಗ್ಯ ಸಮಸ್ಯೆ, ಮಾನಸಿಕ ಚಿಂತೆ

**ಧನಸ್ಸು:** ಧರ್ಮ ಗುರುಗಳ ದರ್ಶನ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ, ಅಧಿಕ ಖರ್ಚು, ಅನ್ಯ ವ್ಯಕ್ತಿಗಳಿಂದ ಕಿರಿಕಿರಿ

**ಮಕರ:** ಬಂಧುಗಳೊಂದಿಗೆ ವಿರಸ, ಪಾಲುದಾರಿಕೆ ವ್ಯವಹಾರದಲ್ಲಿ ಅನಾನುಕೂಲ, ಪ್ರಯಾಣದಿಂದ ಸಂಕಷ್ಟ

**ಕುಂಭ:** ಉದ್ಯೋಗ ಸ್ಥಳದಲ್ಲಿ ಶತ್ರು ಕಾಟ, ಶುಭಕಾರ್ಯಗಳಿಗೆ ಸಕಾಲ, ಆರ್ಥಿಕ ದುಸ್ಥಿತಿಗಳು

**ಮೀನ:** ದೈಹಿಕ ಮತ್ತು ಮಾನಸಿಕ ತೊಂದರೆ, ಕೆಲಸ ಕಾರ್ಯಗಳಿಗೆ ಅಡೆತಡೆ, ಅನಾರೋಗ್ಯ ಸಮಸ್ಯೆಗಳು

## ಕುಂಬಳಕಾಯಿ ದಿನ



ಕುಂಬಳಕಾಯಿಗಳು ಸೋರೆಕಾಯಿ ಕುಟುಂಬದ ಸದಸ್ಯರಾಗಿದ್ದಾರೆ, ಇದರಲ್ಲಿ ಸೌತೆಕಾಯಿಗಳು, ಜೇನುತುಪ್ಪದ ಕಲ್ಲಂಗಡಿಗಳು, ಕಲ್ಲಂಗಡಿಗಳು, ಕಲ್ಲಂಗಡಿಗಳು ಮತ್ತು ಕುಂಬಳಕಾಯಿಯನ್ನು ಹೋಲುವ ಚೀನೀಕಾಯಿ ಸೇರಿವೆ. ಹೆಚ್ಚಿನ ಜನರು ಹಣ್ಣುಗಳು - ತರಕಾರಿಗಳಲ್ಲ ಎಂದು ತಿಳಿದಿರುವುದಿಲ್ಲ. ಈ ಸಸ್ಯಗಳು ಮಧ್ಯ ಅಮೇರಿಕಾ ಮತ್ತು ಮೆಕ್ಸಿಕೊಕ್ಕೆ ಸ್ಥಳೀಯವಾಗಿವೆ, ಆದರೆ ಈಗ ಆರು ಖಂಡಗಳಲ್ಲಿ ಬೆಳೆಯುತ್ತವೆ. ಉತ್ತರ ಅಮೆರಿಕಾದಲ್ಲಿ ಅವರ ಇತಿಹಾಸವು 5,000 ವರ್ಷಗಳ ಹಿಂದೆ ಹೋಗುತ್ತದೆ.

ಕುಂಬಳಕಾಯಿಗಳು ಪಶ್ಚಿಮ ಗೋಳಾರ್ಧದಲ್ಲಿ ಸ್ಥಳೀಯವಾಗಿವೆ. ಫ್ರೆಂಚ್ನ ಜಾಕ್ವೆಸ್ ಕಾರ್ಟಿಯರ್ 1500 ರ ದಶಕದಲ್ಲಿ ಉತ್ತರ ಅಮೆರಿಕಾದ ಸೇಂಟ್ ಲಾರೆನ್ಸ್ ಪ್ರದೇಶವನ್ನು ಪರಿಶೋಧಿಸಿದಂತೆ, ಫ್ರೆಂಚ್ ಗ್ರಾಸ್ ಕಲ್ಲಂಗಡಿಗಳು ಎಂದು ಕರೆಯುವದನ್ನು ಕಂಡುಹಿಡಿದನು. ಈ ಹೆಸರನ್ನು ಇಂಗ್ಲಿಷ್ಗೆ ರಿಂಟರಿಂಟಿ ಎಂದು ಅನುವಾದಿಸಲಾಗಿದೆ, ಇದು ಆಧುನಿಕ ಕುಂಬಳಕಾಯಿ ಆಗಿ ವಿಕಸನಗೊಂಡಿದೆ.

ನಾವು ಆಹಾರ ಮತ್ತು ಮನರಂಜನೆ ಎರಡಕ್ಕೂ ಕುಂಬಳಕಾಯಿಗಳನ್ನು ಬಳಸುತ್ತೇವೆ - ವಿಶೇಷವಾಗಿ ಹ್ಯಾಲೋವೀನ್ ಮತ್ತು ಥ್ಯಾಂಕ್ಸ್ಗಿವಿಂಗ್ ಸಮಯದಲ್ಲಿ.. ಕುಂಬಳಕಾಯಿ ಪೈ ಯು.ಎಸ್ ಮತ್ತು ಕೆನಡಾ ಎರಡರಲ್ಲೂ ಥ್ಯಾಂಕ್ಸ್ಗಿವಿಂಗ್ನ ಸಾಂಪ್ರದಾಯಿಕ ಭಾಗವಾಗಿದೆ. ನಾವು ಹ್ಯಾಲೋವೀನ್ನ ಸುತ್ತಲೂ ಜಾಕ್-ಒ'-ಲ್ಯಾಂಟರ್ನ್ಗಳನ್ನು ಕೆತ್ತುತ್ತೇವೆ, ಆದರೂ ನಾವು ತಿನ್ನುವ ಕುಂಬಳಕಾಯಿಗಳು ಮತ್ತು ನಾವು ಕೆತ್ತುವವುಗಳು ಸಾಮಾನ್ಯವಾಗಿ ಎರಡು ವಿಭಿನ್ನ ರೀತಿಯ ಚಳಿಗಾಲದ ಸ್ಕ್ವ್ಯಾಷ್ನಿಂದ ಬರುತ್ತವೆ.

ಹ್ಯಾಲೋವೀನ್ ಸಂಪರ್ಕವು 1800 ರ ದಶಕದ ಹಿಂದಿನದು. ಜಾಕ್ -ಒ'-ಲ್ಯಾಂಟರ್ನ್ ಎಂಬ ಪದವು ಮೊದಲು 1837 ರಲ್ಲಿ ಕಾಣಿಸಿಕೊಂಡಿತು, ಆದರೆ ಕೆತ್ತಿದ ಕುಂಬಳಕಾಯಿಯ ಕಲ್ಪನೆಯು ನಿರ್ದಿಷ್ಟವಾಗಿ 1866 ರಲ್ಲಿ ಹುಟ್ಟಿಕೊಂಡಿತು.

ರೈತರು ಸಾಮಾನ್ಯವಾಗಿ ಜುಲೈ ಆರಂಭದಲ್ಲಿ ಕುಂಬಳಕಾಯಿಗಳನ್ನು ನೆಡುತ್ತಾರೆ. ಹಣ್ಣಿಗೆ (ಹೌದು, ಹಣ್ಣು) ನೀರನ್ನು ಚೆನ್ನಾಗಿ ಹಿಡಿದಿಟ್ಟುಕೊಳ್ಳುವ ಮಣ್ಣಿನ ಅಗತ್ಯವಿರುತ್ತದೆ. ನೀರಿನ ಕೊರತೆ ಅಥವಾ ಅಸಾಧಾರಣವಾಗಿ ಚಳಿಯ ಉಷ್ಣತೆ ಇದ್ದರೆ ಬೆಳೆಗಳು ಬಳಲುತ್ತವೆ. ಇನ್ನೂ, ಕುಂಬಳಕಾಯಿಗಳು ಸಾಕಷ್ಟು ಬಾಳಿಕೆ ಬರುವವು ಮತ್ತು ಅಗತ್ಯವಿದ್ದರೆ ಹಾನಿಗೊಳಗಾದ ಬಳ್ಳಿಗಳನ್ನು ಮತ್ತೆ ಬೆಳೆಯಬಹುದು.ಕುಂಬಳಕಾಯಿ ಬೀಜಗಳು ಸಹ ಜನಪ್ರಿಯ ತಿಂಡಿಗಳಾಗಿವೆ. ಕಿರಾಣಿ ಅಂಗಡಿಗಳು ಸಾಮಾನ್ಯವಾಗಿ ಅವುಗಳನ್ನು ಹಲ್ ಮತ್ತು ಅರೆ-ಹಲ್ ಎರಡನ್ನೂ ಮಾರಾಟ ಮಾಡುತ್ತವೆ. ಅವು ಪ್ರೋಟೀನ್, ಮೆಗ್ನೀಸಿಯಮ್, ತಾಮ್ರ ಮತ್ತು ಸತುವುಗಳ ಉತ್ತಮ ಮೂಲವಾಗಿದೆ.

# ಕೆನಡಾದಲ್ಲಿ ದುರಂತ: ನಾಲ್ವರು ಭಾರತೀಯರು ಸಾವು



**ವಡೋದರಾ:** ಕೆನಡಾದಲ್ಲಿ ಡಿವೈಡರ್ ಪಿಲ್ಲರ್‌ಗೆ ಡಿಕ್ಕಿ ಹೊಡೆದು ಎಲೆಕ್ಟ್ರಿಕ್ ಕಾರ್ ಬೆಂಕಿಗೆ ಆಹುತಿಯಾಗಿದ್ದು, ಅಪಘಾತದಲ್ಲಿ ನಾಲ್ವರು ಭಾರತೀಯರು ಸಾವನ್ನಪ್ಪಿದ್ದಾರೆ. ನಾಲ್ವರಲ್ಲಿ ಕೆನಡಾದಲ್ಲಿ ನೆಲೆಸಿರುವ ಗುಜರಾತ್‌ನ ಮೂವರು ಯುವಕರು ಸೇರಿದ್ದಾರೆ.

ಗುರುವಾರ ರಾತ್ರಿ (ಭಾರತೀಯ ಕಾಲಮಾನ) ಬ್ರಾಂಪ್ಟನ್‌ನಲ್ಲಿ ಒಟ್ಟಿಗೆ ವಾಸಿಸುತ್ತಿದ್ದ ಗುಂಪು ರಾತ್ರಿ, ಊಟ ಮುಗಿಸಿ ಮನೆಗೆ ಮರಳುತ್ತಿದ್ದಾಗ ಈ ಘಟನೆ ನಡೆದಿದೆ.

ಅವರು ಪ್ರಯಾಣಿಸುತ್ತಿದ್ದ ಟೆಸ್ಲಾ ಎಲೆಕ್ಟ್ರಿಕ್ ಕಾರು ಪಿಲ್ಲರ್‌ಗೆ ಡಿಕ್ಕಿ ಹೊಡೆದು ಬೆಂಕಿ ಹೊತ್ತಿಕೊಂಡಿದೆ.

ಟೆಸ್ಲಾ ಕಾರು ಚಾಲಕನು ಹೆಚ್ಚಿನ ವೇಗದಲ್ಲಿ ಚಲಿಸುವಾಗ ವಾಹನದ ನಿಯಂತ್ರಣವನ್ನು ಕಳೆದುಕೊಂಡು ಗಾರ್ಡ್ ರೈಲಿಗೆ ಡಿಕ್ಕಿ ಹೊಡೆದಿದ್ದಾನೆ. ನಂತರ ಬೆಂಕಿ ಹೊತ್ತಿಕೊಂಡು ಸಿಡಿಯುವ ಮೊದಲು ಕಾಂಕ್ರೀಟ್ ಪಿಲ್ಲರ್‌ಗೆ ಕಾರ್ ಡಿಕ್ಕಿ ಹೊಡೆದಿದೆ.

ಮೃತರಲ್ಲಿ ಗೋಧ್ರಾ ನಿವಾಸಿಗಳಾದ ಕೇತಾಬಾ ಗೋಹಿಲ್ (29) ಮತ್ತು ಆಕೆಯ ಸಹೋದರ ನೀಲರಾಜ್ ಗೋಹಿಲ್ (25), ಆನಂದ್ ಜಿಲ್ಲೆಯ ಬೋರ್ಸಾದ್‌ಗೆ ಸೇರಿದ ಜಯರಾಜ್‌ಸಿಂಗ್ ಸಿಸೋಡಿಯಾ ಸೇರಿದ್ದಾರೆ. ಕಾರ್ ನಲ್ಲಿದ್ದ ಇನ್ನಿಬ್ಬರಲ್ಲಿ ಝುಲಕ್ ಪಟೇಲ್ ಪಾರಾಟಗಿದ್ದು, ಓರ್ವ ಪುರುಷ ಸಹ ಸಾವನ್ನಪ್ಪಿದ್ದಾರೆ. ಕಾರ್ ಗೆ ಬೆಂಕಿ ಹೊತ್ತಿಕೊಂಡಿದೆ.
ಸ್ಫೋಟ ಸಂಭವಿಸಿದೆ. ಇದರಿಂದ ಅವರೆಲ್ಲರೂ ಒಳಗೆ ಸಿಲುಕಿಕೊಂಡಿದ್ದರು ಎಂದು ಹೇಳಲಾಗಿದೆ.

# ಟರ್ಕಿಯ ವೈಮಾನಿಕ ದಾಳಿಯಲ್ಲಿ 5 ಮಂದಿ ಮೃತ್ಯು

**ಬಗ್ದಾದ್:** ನಿಷೇಧಿತ ಕುರ್ದಿಸ್ತಾನ್ ವರ್ಕರ್ಸ್ ಪಾರ್ಟಿ (ಪಿಕೆಕೆ)ಯೊಂದಿಗೆ ಸಂಯೋಜಿತವಾಗಿರುವ ಸಿಂಜಾರ್ ಪ್ರತಿರೋಧ ಗುಂಪನ್ನು ಗುರಿಯಾಗಿಟ್ಟುಕೊಂಡು ಉತ್ತರ ಇರಾಕ್‌ನಲ್ಲಿ ಟರ್ಕಿ ಶುಕ್ರವಾರ ನಡೆಸಿದ ವೈಮಾನಿಕ ದಾಳಿಯಲ್ಲಿ ಐದು ಮಂದಿ ಮೃತಪಟ್ಟಿರುವುದಾಗಿ ಸ್ಥಳೀಯ ಮೂಲಗಳು ಹೇಳಿವೆ.



ನಿನೆವೆಹ್ ಪ್ರಾಂತದಲ್ಲಿ ಸಿಂಜಾರ್ ಪ್ರತಿರೋಧ ಘಟಕಗಳನ್ನು ಗುರಿಯಾಗಿಸಿ ಟರ್ಕಿ ಸರಣಿ ವೈಮಾನಿಕ ದಾಳಿ ನಡೆಸಿದ್ದು ಐದು ಮಂದಿ ಸಾವನ್ನಪ್ಪಿದ್ದಾರೆ ಎಂದು ಮೂಲಗಳನ್ನು ಉಲ್ಲೇಖಿಸಿ ಎಎಫ್ಪಿ ಸುದ್ದಿಸಂಸ್ಥೆ ವರದಿ ಮಾಡಿದೆ. ಅಂಕಾರಾ ಬಳಿ ಟರ್ಕಿಯ ಉನ್ನತ ರಕ್ಷಣಾ ಸಂಸ್ಥೆ ಟರ್ಕಿಶ್ ಏರೋಸ್ಪೇಸ್ ಇಂಡಸ್ಟ್ರೀಸ್ ಮೇಲೆ ಬುಧವಾರ ನಡೆದ ದಾಳಿಗೆ ಪ್ರತೀಕಾರವಾಗಿ ಇರಾಕ್ ಮತ್ತು ಸಿರಿಯಾದಲ್ಲಿ 30 ನೆಲೆಗಳನ್ನು ಗುರಿಯಾಗಿಸಿ ಗುರುವಾರ ಟರ್ಕಿ ಸರಣಿ ವೈಮಾನಿಕ ದಾಳಿ ನಡೆಸಿತ್ತು. ಸಿರಿಯಾದಲ್ಲಿ ನಡೆದ ಡ್ರೋನ್ ದಾಳಿಯಲ್ಲಿ 27 ನಾಗರಿಕರು ಹತರಾಗಿರುವುದಾಗಿ ಸಿರಿಯಾದ ಅಧಿಕಾರಿಗಳು ಹೇಳಿದ್ದಾರೆ.

# ವಿಶ್ವಸಂಸ್ಥೆಯಲ್ಲಿ ಪಾಕಿಸ್ತಾನದಿಂದ ಪದೇ ಪದೇ ಸುಳ್ಳು ಆರೋಪ: ಭಾರತ ತಿರುಗೇಟು

**ನವದೆಹಲಿ:** ವಿಶ್ವಸಂಸ್ಥೆಯಲ್ಲಿ ಕಾಶ್ಮೀರದ ವಿಷಯ ಪ್ರಸ್ತಾಪಿಸಿ ಪಾಕಿಸ್ತಾನ ಟೀಕೆ, ಆರೋಪ ಮಾಡಿರುವುದಕ್ಕೆ ಭಾರತ ತಕ್ಕ ಪ್ರತ್ಯುತ್ತರ ನೀಡಿದೆ. ಕಾಶ್ಮೀರದ ವಿಚಾರದಲ್ಲಿ ಪಾಕಿಸ್ತಾನ ಪದೇ ಪದೇ ಟೀಕೆ ಮಾಡುತ್ತಿದೆ. ಪ್ರಚೋದನಕಾರಿ ಮತ್ತು ಸುಳ್ಳು ಹೇಳಿಕೆಗಳನ್ನು ನೀಡುತ್ತಿದೆ ಎಂದು ಭಾರತ ತಿರುಗೇಟು ನೀಡಿದೆ. ಪಾಕಿಸ್ತಾನದ ನಡೆಯನ್ನು ನಾವು ತೀವ್ರವಾಗಿ ಖಂಡಿಸುತ್ತೇವೆ. ಪಾಕಿಸ್ತಾನದಲ್ಲಿ ಅಲ್ಪಸಂಖ್ಯಾತರ ಮೇಲೆ ದಾಳಿಗಳು ನಡೆಯುತ್ತಿವೆ. ಅಲ್ಪಸಂಖ್ಯಾತ ಯುವತಿಯರಿಗೆ ಬಲವಂತವಾಗಿ ಮದುವೆ ಮಾಡಲಾಗುತ್ತಿದೆ. ಮತಾಂತರ ಮಾಡುವ ಮೂಲಕ ಯುವತಿಯರನ್ನು ಬಲವಂತವಾಗಿ ಮದುವೆ ಮಾಡಿಸುತ್ತಿದ್ದಾರೆ. ಪಾಕಿಸ್ತಾನದಲ್ಲಿ ಅಲ್ಪಸಂಖ್ಯಾತ ಮಹಿಳೆಯರಿಗೆ ಯಾವುದೇ ರಕ್ಷಣೆ ಇಲ್ಲವಾಗಿದೆ ಎಂದು ಭಾರತ ಟೀಕಿಸಿದೆ. ಅಲ್ಪಸಂಖ್ಯಾತರಿಗೆ ರಕ್ಷಣೆ ನೀಡುವ ಕೆಲಸವನ್ನು ಪಾಕಿಸ್ತಾನ ಮಾಡಲಿ. ಭಾರತದಲ್ಲಿ ಅಲ್ಪಸಂಖ್ಯಾತ ಮಹಿಳೆಯರು ಸುರಕ್ಷಿತವಾಗಿದ್ದಾರೆ ಎಂದು ವಿಶ್ವಸಂಸ್ಥೆಯಲ್ಲಿ ಭಾರತದ ಶಾಶ್ವತ ಪ್ರತಿನಿಧಿ ಪಿ. ಹರೀಶ್ ಹೇಳಿದ್ದಾರೆ.




# ರತನ್ ಟಾಟಾ ವಿಲ್ ಬಹಿರಂಗ 10,000 ಕೋಟಿ ಆಸ್ತಿಯಲ್ಲಿ ಮುದ್ದಿನ ನಾಯಿಗೂ ಪಾಲು!



**ಮುಂಬೈ:** ಈ ದೇಶ ಕಂಡ ಉದ್ಯಮಿ ರತನ್ ಟಾಟಾ ಅವರು ಇದೇ ಅಕ್ಟೋಬರ್ 9ರಂದು 86ನೇ ವಯಸ್ಸಿನಲ್ಲಿ ಇಹಲೋಕ ತ್ಯಜಿಸಿದ್ದಾರೆ. ರತನ್ ಟಾಟಾ ನಿಧನದ ಬಳಿಕ ಅವರ 10,000 ಕೋಟಿ ರೂ. ಮೌಲ್ಯದ ಸಂಪತ್ತಿನ ಬಗ್ಗೆ ಪ್ರಶ್ನೆಗಳು ಬರುತ್ತಲೇ ಇದ್ದವು. ಅಷ್ಟೊಂದು ಆಸ್ತಿ ಯಾರ ಪಾಲಾಗಲಿದೆ ಎಂಬ ಬಗ್ಗೆ ಚರ್ಚೆಗಳು ಕೂಡ ನಡೆಯುತ್ತಿದ್ದವು. ಇದಕ್ಕೆಲ್ಲಾ ಈಗ ಉತ್ತರ ಸಿಕ್ಕಿದೆ. ರತನ್ ಟಾಟಾ ಅವರ ವಿಲ್ ಬಹಿರಂಗವಾಗಿದೆ ಎಂದು ವರದಿಗಳು ತಿಳಿಸಿವೆ.

ರತನ್ ಟಾಟಾ ತಮ್ಮ ವಿಲ್ ಪತ್ರದಲ್ಲಿ ಯಾವುದೇ ಗೊಂದಲವಿಲ್ಲದಂತೆ ಸ್ಪಷ್ಟ ನಿರ್ದೇಶನ ನೀಡಿದ್ದಾರೆ. ವಿಶೇಷ ಅಂದರೆ ರತನ್ ಟಾಟಾ 10,000 ಕೋಟಿ ರೂ. ಆಸ್ತಿಯಲ್ಲಿ ಅವರ ಮುದ್ದಿನ ಶ್ವಾನಕ್ಕೆ ಅತೀ ದೊಡ್ಡ ಪಾಲನ್ನು ಮೀಸಲಿಟ್ಟಿದ್ದಾರೆ ಎಂಬುದು ಪತ್ರದಲ್ಲಿ ಬಹಿರಂಗವಾಗಿದೆ. ಈ ಮೂಲಕ ತಮ್ಮನ್ನು ನಂಬಿದ ಎಲ್ಲರಿಗೂ ನ್ಯಾಯ ಒದಗಿಸುವ ಪ್ರಯತ್ನವನ್ನು ರತನ್ ಟಾಟಾ ಮಾಡಿದ್ದಾರೆ. ಬಹುತೇಕ ಭಾಗವನ್ನು ಸಮಾಜಸೇವೆಗೆ ಮೀಸಲಿಟ್ಟಿರುವ ರತನ್ ಟಾಟಾ, ತಮ್ಮ ನಾಯಿಗೂ ದೊಡ್ಡ ಪಾಲನ್ನೇ ನೀಡಿದ್ದಾರೆ.

ತಮ್ಮ ಆಸ್ತಿಯನ್ನು ರತನ್ ಟಾಟಾ ತಮ್ಮ ಸಹೋದರಿಯರಾದ ಶಿರೀನ್ ಮತ್ತು ಡೀನಾ ಜೆಜೀಭೋಯ್‌ಗೆ ಹಂಚಿದ್ದಾರೆ. ಇವರಿಬ್ಬರು ರತನ್ ಟಾಟಾ ಅವರ ಮಲತಾಯಿಯ ಮಕ್ಕಳು. ಜೊತೆಗೆ ತಮ್ಮ ಸಹೋದರ ಜಿಮ್ಮಿ ಟಾಟಾ ಹಾಗೂ ಅಚ್ಚುಮೆಚ್ಚಿನ ಸಹಾಯಕ ಶಂತನು ನಾಯ್ಡುಗೂ ಆಸ್ತಿಯಲ್ಲಿ ಪಾಲು ನೀಡಿದ್ದಾರೆ. ವಿಶೇಷ ಏನಂದ್ರೇ ತಮ್ಮ ಅಚ್ಚು ಮೆಚ್ಚಿನ ನಾಯಿ ಟಿಟೋಗೂ ಕೂಡ ತಮ್ಮ ಸಂಪತ್ತಿನ ಒಂದು ಭಾಗವನ್ನು ಮೀಸಲಿಟ್ಟಿದ್ದಾರೆ. ಅದಲ್ಲದೇ ಚಾರಿಟಿ ಟ್ರಸ್ಟ್‌ಗಳಿಗೆ ಷೇರುಗಳನ್ನು ನೀಡುವ ಟಾಟಾ ಗ್ರೂಫ್‌ನ ಪದ್ಧತಿಗೆ ಅನುಗುಣವಾಗಿ ರತನ್ ಟಾಟಾ ಎಂಡೋಮೆಂಟ್ ಫೌಂಡೇಶನ್ ರತನ್ ಟಾಟಾ ಅವರ ಷೇರುಗಳ ದೊಡ್ಡ ಭಾಗವನ್ನು ಪಡೆದಿದೆ. ವರದಿಗಳ ಪ್ರಕಾರ, ರತನ್ ಅವರು ತಮ್ಮ ಜರ್ಮನ್ ಶೆಫರ್ಡ್ ನಾಯಿ ಟಿಟೊಗೆ ಲೈಫ್‌ಟೈಮ್ ಆರೈಕೆಯನ್ನು ತಮ್ಮ ಮರಣ ಇಚ್ಛಾ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಸಾಮಾನ್ಯವಾಗಿ ಪಾಶ್ಚಿಮಾತ್ಯ ದೇಶಗಳಲ್ಲಿ ಸಾಕುಪ್ರಾಣಿಗಳನ್ನು ವಿಲ್‌ನಲ್ಲಿ ಸೇರಿಸುವುದು ಸಾಮಾನ್ಯ. ಆದರೆ, ಭಾರತದಲ್ಲಿ ಇದು ಅಪರೂಪದ ಘಟನೆ. ಟಿಟೋ ಎಂಬ ಹೆಸರಿನ ನಾಯಿ ಸತ್ತ ಬಳಿಕ ಅದೇ ಹೆಸರಿನ ಜರ್ಮನ್ ಶೆಫರ್ಡ್ ನಾಯಿಯನ್ನು ಐದರಿಂದ 6 ವರ್ಷಗಳ ಹಿಂದೆ ರತನ್ ಟಾಟಾ ದತ್ತು ಪಡೆದಿದ್ದರು. ಟಿಟೋವನ್ನು ರತನ್ ಟಾಟಾ ಮನೆಯ ಅಡುಗೆ ಮಾಡುವ ರಾಜನ್ ಶಾ ನೋಡಿಕೊಳ್ಳುತ್ತಿದ್ದಾರೆ.

# ಭಾರತ-ಚೀನಾ ಗಡಿ ಉದ್ವಿಗ್ನತೆ ಶಮನಕ್ಕೆ ಮೊದಲ ಹೆಜ್ಜೆ; ಸೇನಾಪಡೆಗಳ ವಾಪಸ್ ಪ್ರಕ್ರಿಯೆ ಶುರು

**ನವದೆಹಲಿ:** ಪೂರ್ವ ಲಡಾಖ್ ಗಡಿ ಬಿಕ್ಕಟ್ಟು ಶಮನಗೊಳಿಸಲು ಭಾರತ ಚೀನಾ ಒಪ್ಪಂದಕ್ಕೆ ಬಂದ ಬೆನ್ನಲ್ಲೇ ಉಭಯ ದೇಶಗಳಿಂದ ಸೇನಾ ವಾಪಸಾತಿ ಪ್ರಕ್ರಿಯೆ ಶುರುವಾಗಿದೆ. ಹೌದು. ಕಳೆದ 4 ವರ್ಷಗಳಿಂದ ಇದ್ದ ಗಡಿ ಉದ್ವಿಗ್ನತೆಗೆ ಕೊನೆ ಹಾಡುವ ಪ್ರಕ್ರಿಯೆಗೆ ಚಾಲನೆ ಸಿಕ್ಕಿದೆ. ಒಪ್ಪಂದದ ಭಾಗವಾಗಿ ಪೂರ್ವ ಲಡಾಖ್ ಪ್ರಾಂತ್ಯದ ಗಡಿಗಳಿಂದ ಭಾರತ, ಚೀನಾ ಪಡೆಗಳ ವಾಪಸಾತಿ ಪ್ರಕ್ರಿಯೆ ಶುರುವಾಗಿದೆ. ಪೂರ್ವ ಲಡಾಖ್‌ನ ಎರಡು ಪ್ರಮುಖ ಪ್ರದೇಶಗಳಾದ ಡೆಮ್‌ಚಾಕ್- ಡೆಪ್‌ಸಾಂಗ್‌ನಿಂದ ಎರಡೂ ದೇಶಗಳ ಸೈನಿಕರು ವಾಪಸ್ ಆಗ್ತಿದ್ದಾರೆ. ಇಲ್ಲಿ ಏರ್ಪಾಟು ಮಾಡಿದ್ದ ತಾತ್ಕಾಲಿಕ ನಿರ್ಮಾಣ, ಟೆಂಟ್‌ಗಳನ್ನು ಉಭಯ ದೇಶಗಳ ಸೇನೆಗಳು ತೆರವು ಮಾಡ್ತಿವೆ. ಮುಂದಿನ ಒಂದು ವಾರದಲ್ಲಿ ಗಡಿ ಗಸ್ತು ಶುರುವಾಗುವ ಸಂಭವ ಇದೆ. ಲಡಾಕ್‌ನ ವಾಸ್ತವಿಕ ನಿಯಂತ್ರಣ ರೇಖೆಯಲ್ಲಿನ ಪರಿಸ್ಥಿತಿಯು 2020ರ ಏಪ್ರಿಲ್‌ನಲ್ಲಿ ಇದ್ದ ಪೂರ್ವಸ್ಥಿತಿಗೆ ಮರಳಿದ ಬಳಿಕವಷ್ಟೇ ಅಲ್ಲಿಂದ ಭಾರತೀಯ ಪಡೆಗಳನ್ನು ವಾಪಸ್ ಕರೆಸಿಕೊಳ್ಳಲಾಗುವುದು ಎಂದು ಕೆಲ ದಿನಗಳ ಹಿಂದಷ್ಟೇ ಭೂಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಹೇಳಿದ್ದರು. ಶುಕ್ರವಾರ ಇದಕ್ಕೆ ಚಾಲನೆ ದೊರೆತಿದೆ. ಮ್ಯಾಕ್ ಪ್ರದೇಶದಲ್ಲಿ ಭಾರತ ಚೀನಾ ಸೇನೆಯ ತಲಾ ಐದು ಟೆಂಟ್‌ಗಳನ್ನು ಹಾಗೂ ದೆಸ್ಪಾಂಗ್ ಪಾಯಿಂಟ್‌ನಲ್ಲಿ ನಿರ್ಮಿಸಲಾಗಿದ್ದ 10 12 ತಾತ್ಕಾಲಿಕ ಶಿಬಿರಗಳನ್ನು ಹಿಂಪಡೆಯಲಾಗುತ್ತಿದೆ. ಎರಡೂ ಕಡೆ ಪೂರ್ಣ ಪ್ರಮಾಣದಲ್ಲಿ ವಾಪಸಾತಿ ಪ್ರಕ್ರಿಯೆ ಕೈಗೊಳ್ಳಲಾಗಿದೆಯೇ ಎಂಬುದನ್ನು ಜಂಟಿ ವೈಮಾನಿಕ ಸಮೀಕ್ಷೆ ಮೂಲಕ ಖಾತ್ರಿಪಡಿಸಿಕೊಳ್ಳಲಾಗುತ್ತದೆ. ಇದಾದ ಮುಂದಿನ 4-5 ದಿನಗಳಲ್ಲಿ ಗಸ್ತು ಶುರುವಾಗಲಿದೆ ಎಂದು ಮೂಲಗಳು ಹೇಳಿವೆ.



**5 ವರ್ಷಗಳ ಬಳಿಕ ಮೋದಿ-ಜಿನ್‌ಪಿಂಗ್ ಮುಖಾಮುಖಿ:** 2020ರಲ್ಲಿ ನಡೆದ ಗಲ್ವಾನ್ ಘರ್ಷಣೆಯ ಬಳಿಕ ಭಾರತ ಹಾಗೂ ಚೀನಾ ಮಧ್ಯೆ ಉದ್ವಿಘ್ನ ಪರಿಸ್ಥಿತಿ ನಿರ್ಮಾಣವಾಗಿತ್ತು. ಸತತ 4 ವರ್ಷಗಳಿಂದ ಭಾರತ ಮತ್ತು ಚೀನಾ ಜೊತೆಗಿನ ಮಾತುಕತೆ ಯಶಸ್ವಿಯಾಗಿದೆ. ಶಾಂತಿ ನೆಲೆಸದಿದ್ದರೆ ಚೀನಾ ಜೊತೆಗೆ ಶಾಂತಿ ಮಾತುಕತೆ ಸಾಧ್ಯವಿಲ್ಲ ಎಂದು ಭಾರತ ಹೇಳಿತ್ತು. ಅಕ್ಟೋಬರ್ 2019 ರಲ್ಲಿ ತಮಿಳುನಾಡಿನ ಮಹಾಬಲಿಪುರಂನಲ್ಲಿ ಪ್ರಧಾನಿ ಮೋದಿ ಮತ್ತು ಕ್ಷಿ ಜಿನ್‌ಪಿಂಗ್ ನಡುವೆ ಕೊನೆಯ ಬಾರಿ ಔಪಚಾರಿಕ ಸಭೆ ನಡೆದಿತ್ತು. ಚೆನ್ನೈ ವಿಮಾನ ನಿಲ್ದಾಣಕ್ಕೆ ಬಂದಿಳಿದಿದ್ದ ಜಿನ್‌ಪಿಂಗ್ ಅವರನ್ನು ತಮಿಳುನಾಡಿನ ಸರ್ಕಾರವು ಅದ್ದೂರಿಯಾಗಿ ಸ್ವಾಗತಿಸಿತ್ತು. ತಮಿಳುನಾಡಿನ ಸಾಂಪ್ರದಾಯಿಕ ಧಿರಿಸು ಬಿಳಿ ಪಂಚೆ, ಬಿಳಿ ಅಂಗಿ, ಶಲ್ಯ ಧರಿಸಿದ್ದ ಮೋದಿ, ಜಿನ್‌ಪಿಂಗ್ ಅವರಿಗೆ ಆತ್ಮೀಯ ಸ್ವಾಗತ ಕೋರಿದ್ದರು. ಆರಾಮಾಗಿ ಸುತ್ತಾಡುತ್ತಾ ಪಲ್ಲವರ ಕಾಲದ ದೇಗುಲಗಳ ಪರಿಚಯ ಮಾಡಿಕೊಟ್ಟಿದ್ದರು. ಮಹಾಭಾರತದ ಅರ್ಜುನ ತಪಸ್ಸು ಮಾಡಿದ್ದ ಸ್ಥಳ, ಒಂದೆಕಲ್ಲಿನಲ್ಲಿ ಕೆತ್ತಿದ ಪಂಚ ರಥ, ಹೀಗೆ ಹಲವು ಸ್ಥಳಗಳ ಮಹಿಮೆಯನ್ನು ವಿವರಿಸಿದ್ದರು.

ಮೋದಿ ಮತ್ತು ಜಿನ್‌ಪಿಂಗ್ ಸಮುದ್ರ ತೀರದಲ್ಲಿ ವಿಹರಿಸಿದ್ದರು. ಕೋವಲಂನ ಕೋವ್ ಹೋಟೆಲ್ ನಲ್ಲಿ ಇರಿಸಲಾಗಿದ್ದ ಕಲಾಕೃತಿಗಳು ಮತ್ತು ಕೈಮಗ್ಗ ಪ್ರದರ್ಶನವನ್ನು ವೀಕ್ಷಿಸಿದ್ದರು.

# ರಾಜೀನಾಮೆ ಆಗ್ರಹಕ್ಕೆ ಕೆನಡಾ ಪ್ರಧಾನಿ ಟ್ರೂಡೊ ತಿರಸ್ಕಾರ

**ಒಟ್ಟಾವ:** ರಾಜೀನಾಮೆ ನೀಡಬೇಕೆಂದು ಪಕ್ಷದ ಕೆಲ ಸದಸ್ಯರು ಆಗ್ರಹವನ್ನು ತಿರಸ್ಕರಿಸಿರುವ ಕೆನಡಾ ಪ್ರಧಾನಿ ಜಸ್ಟಿನ್ ಟ್ರೂಡೊ, ಮುಂಬರುವ ಚುನಾವಣೆಯಲ್ಲೂ ಲಿಬರಲ್ ಪಕ್ಷದ ನೇತೃತ್ವವನ್ನು ವಹಿಸುವುದಾಗಿ ಪ್ರತಿಜ್ಞೆ ಮಾಡಿದ್ದಾರೆ. ನಾಲ್ಕನೇ ಅವಧಿಗೆ ಪ್ರಧಾನಿಯಾಗಲು ಜಸ್ಟಿನ್ ಟ್ರೂಡೊ ಬಯಸಿದ್ದು ಕೆನಡಾದಲ್ಲಿ ಕಳೆದ ಸುಮಾರು 100 ವರ್ಷಗಳಲ್ಲಿ ಯಾವುದೇ ಪ್ರಧಾನಿ ಸತತ 4 ಬಾರಿ ಗೆಲುವು ಸಾಧಿಸಿಲ್ಲ. ಬುಧವಾರ ಟ್ರೂಡೊ ನೇತೃತ್ವದಲ್ಲಿ ನಡೆದ ಲಿಬರಲ್ ಪಕ್ಷದ ಸಭೆಯಲ್ಲಿ ಮುಂದಿನ ಚುನಾವಣೆಗೂ ಮುನ್ನ ಪದತ್ಯಾಗ ಮಾಡುವಂತೆ 20 ಲಿಬರಲ್ ಸಂಸದರು ಆಗ್ರಹಿಸಿ ಸಹಿ ಹಾಕಿದ ಪತ್ರವನ್ನು ಸಲ್ಲಿಸಿದ್ದರು. ಸಭೆಯ ಬಳಿಕ ಮಾಧ್ಯಮದವರ ಜತೆ ಮಾತನಾಡಿದ ಟ್ರೂಡೊ 'ಸುದೀರ್ಘ ಮಾತುಕತೆಗಳ ಬಳಿಕ ಸಾರ್ವತ್ರಿಕ ಚುನಾವಣೆಯಲ್ಲಿ ಪಕ್ಷವನ್ನು ಮುನ್ನಡೆಸಲು ನನ್ನನ್ನೇ ಆಯ್ಕೆ ಮಾಡಲಾಗಿದೆ' ಎಂದರು. ಸಂಸತ್ ನ ಕೆಳಮನೆ ಹೌಸ್ ಆಫ್ ಕಾಮನ್ಸ್ ನಲ್ಲಿ ಟ್ರೂಡೊಗೆ ಲಿಬರಲ್ ಪಕ್ಷದ 153 ಸದಸ್ಯರ ಭರ್ಜರಿ ಬೆಂಬಲವಿದೆ.



# ಉಕ್ರೇನ್ ಗೆ 50 ಬಿಲಿಯನ್ ಡಾಲರ್ ಸಾಲ ನೀಡಲು G-7 ನಾಯಕರ ಒಪ್ಪಿಗೆ

**ವಾಷಿಂಗ್ಟನ್:** ಉಕ್ರೇನ್ ಗೆ ಸುಮಾರು 50 ಬಿಲಿಯನ್ ಡಾಲರ್ ಸಾಲವನ್ನು ತಲುಪಿಸುವ ಬಗ್ಗೆ ಏಳು ಶ್ರೀಮಂತ ಪ್ರಜಾಪ್ರಭುತ್ವಗಳ ಗುಂಪಿನ ನಾಯಕರು ಶುಕ್ರವಾರ ಒಮ್ಮತಕ್ಕೆ ಬಂದಿದ್ದಾರೆ.

ರಷ್ಯಾದ ಸಾರ್ವಭೌಮ ಸ್ವತ್ತುಗಳ ನಿಶ್ಚಲೀಕರಣದಿಂದ ಉಂಟಾಗುವ ಅಸಾಧಾರಣ ಆದಾಯದ ಭವಿಷ್ಯದ ಹರಿವಿನಿಂದ ಈ ಸಾಲಗಳನ್ನು ಪೂರೈಸಲಾಗುವುದು ಮತ್ತು ಮರುಪಾವತಿಸಲಾಗುವುದು ಎಂದು ಜಿ 7 ಹೇಳಿಕೆ ತಿಳಿಸಿದೆ. ಈ ವರ್ಷದ ಅಂತ್ಯದ ವೇಳೆಗೆ ಹಣವನ್ನು ವಿತರಿಸಲು ಪ್ರಾರಂಭಿಸುವುದು ನಮ್ಮ ಗುರಿಯಾಗಿದೆ ಎಂದು ಅಂತರರಾಷ್ಟ್ರೀಯ ಹಣಕಾಸು ನಿಧಿ ಮತ್ತು ವಿಶ್ವ ಬ್ಯಾಂಕ್ ವಾರ್ಷಿಕ ಸಭೆಗಳಿಗಾಗಿ ಜಾಗತಿಕ ಹಣಕಾಸು ಮುಖ್ಯಸ್ಥರು ವಾಷಿಂಗ್ಟನ್‌ನಲ್ಲಿ ಸಭೆ ಸೇರುತ್ತಿರುವಾಗ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ತಿಳಿಸಲಾಗಿದೆ. ಡಿಸೆಂಬರ್ 1 ರಿಂದ ಪ್ರಾರಂಭವಾಗಿ 2027 ರ ಅಂತ್ಯದವರೆಗೆ ಉಕ್ರೇನ್ನ ತುರ್ತು ಹಣಕಾಸು ಅಗತ್ಯಗಳನ್ನು ಪ್ರತಿಬಿಂಬಿಸುವ ಕಂತುಗಳಲ್ಲಿ ದ್ವಿಪಕ್ಷೀಯ ಸಾಲಗಳ ಸರಣಿಯ ಮೂಲಕ ಸಾಲಗಳನ್ನು ವಿತರಿಸಲಾಗುವುದು ಎಂದು ಜಿ 7 ಹಣಕಾಸು ಸಚಿವರ ಹೇಳಿಕೆ ತಿಳಿಸಿದೆ.

ಪ್ರತಿ ದ್ವಿಪಕ್ಷೀಯ ಸಾಲವು ಜೂನ್ 30, 2025 ರ ನಂತರ ಜಾರಿಗೆ ಬರಲಿದೆ, ಇದು ಜಿ 7 ಸದಸ್ಯರಿಗೆ ವಿವರಗಳನ್ನು ವ್ಯವಸ್ಥೆ ಮಾಡಲು ಸ್ವಲ್ಪ ಸಮಯದ ನಮ್ಯತೆಯನ್ನು ಒದಗಿಸುತ್ತದೆ.

ತತ್ವಗಳು ಮತ್ತು ಕೆಲವು ತಾಂತ್ರಿಕ ವಿವರಗಳನ್ನು ಘೋಷಿಸುವ ಹೇಳಿಕೆಯು ದ್ವಿಪಕ್ಷೀಯ ಸಾಲಗಳಿಗೆ ನಿರ್ದಿಷ್ಟ ಮೊತ್ತವನ್ನು ಒದಗಿಸಿಲ್ಲ ಆದರೆ ಹೆಚ್ಚುವರಿ ವಿವರಗಳನ್ನು ಟರ್ಮ್ ಶೀಟ್ ನಲ್ಲಿ ನೀಡಲಾಗುವುದು ಎಂದು ಹೇಳಿದರು.

# ವಿಶ್ವಸಂಸ್ಥೆ ಮುಖ್ಯಸ್ಥರ ಉಕ್ರೇನ್ ಭೇಟಿ ತಿರಸ್ಕರಿಸಿದ ಝೆಲೆನ್ಸ್ಕಿ

**ಕೀವ್:** ರಶ್ಯದಲ್ಲಿ ನಡೆದ 'ಬ್ರಿಕ್ಸ್' ಶೃಂಗಸಭೆಯಲ್ಲಿ ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಅಂಟೋನಿಯೊ ಗುಟೆರಸ್ ಪಾಲ್ಗೊಂಡಿದ್ದಕ್ಕೆ ಅಸಮಾಧಾನಗೊಂಡಿರುವ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ, ಗುಟೆರಸ್ ಉಕ್ರೇನ್ಗೆ ಭೇಟಿ ನೀಡುವುದನ್ನು ತಿರಸ್ಕರಿಸಿದ್ದಾರೆ ಎಂದು ಉಕ್ರೇನ್ ಅಧ್ಯಕ್ಷರ ಕಚೇರಿಯ ಮೂಲಗಳನ್ನು ಉಲ್ಲೇಖಿಸಿ ಎಎಫ್ಪಿ ವರದಿ ಮಾಡಿದೆ. ರಶ್ಯದ ಕಝಾನ್ನ ಬಳಿಕ ಗುಟೆರಸ್ ಉಕ್ರೇನ್ಗೆ ಬರಲು ಇಚ್ಛಿಸಿದ್ದರು. ಆದರೆ ಅವರ ಭೇಟಿಯನ್ನು ಅಧ್ಯಕ್ಷರು ದೃಢಪಡಿಸಿಲ್ಲ. ಆದ್ದರಿಂದ ಗುಟೆರಸ್ ಇಲ್ಲಿಗೆ ಬರುವುದಿಲ್ಲ ಎಂದು ವರದಿ ಹೇಳಿದೆ. ಕಝಾನ್ನಲ್ಲಿ ಬ್ರಿಕ್ಸ್ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ್ದ ಗುಟೆರಸ್ 'ಉಕ್ರೇನ್ ಮೇಲಿನ ರಶ್ಯದ ಆಕ್ರಮಣ ವಿಶ್ವಸಂಸ್ಥೆಯ ಸನದು (ಚಾರ್ಟರ್) ಮತ್ತು ಅಂತರಾಷ್ಟ್ರೀಯ ಕಾನೂನಿನ ಉಲ್ಲಂಘನೆಯಾಗಿದೆ' ಎಂದು ಪುನರುಚ್ಚರಿಸಿರುವುದಾಗಿ ವಿಶ್ವಸಂಸ್ಥೆಯ ಹೇಳಿಕೆ ತಿಳಿಸಿದೆ.



# ಮಹಾವಿಕಾಸ್ ಅಘಾಡಿಯಲ್ಲಿ ಸೀಟು ಹಂಚಿಕೆ ಕುರಿತು ಹಗ್ಗ ಜಗ್ಗಾಟ

**ಮುಂಬಯಿ:** ಮಹಾರಾಷ್ಟ್ರದ ಮಹಾ ವಿಕಾಸ್ ಅಘಾಡಿಯಲ್ಲಿ ಬಹಿರಂಗ ಬಂಡಾಯ ಕಾಣಿಸಿಕೊಂಡಿದ್ದು, ಸಮಾಜವಾದಿ ಪಕ್ಷವು ಇತರ ಮೈತ್ರಿ ಪಾಲುದಾರರಿಗೆ ಬಹಿರಂಗ ಸವಾಲು ಹಾಕಿದೆ ಐದು ಸ್ಥಾನಗಳನ್ನು ನೀಡದಿದ್ದರೆ 25 ಸ್ಥಾನಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸುವುದಾಗಿ ಹೇಳಿದೆ.



ಕಾಂಗ್ರೆಸ್ ಅನ್ನು ಗುರಿಯಾಗಿಟ್ಟುಕೊಂಡು ಮಾತನಾಡಿದ ಸಮಾಜವಾದಿ ಪಕ್ಷದ ನಾಯಕ ಅಬು ಅಜ್ಮಿ ಕಾಂಗ್ರೆಸ್ ಇಲ್ಲಿ ನಿರ್ಧಾರಗಳನ್ನು ತೆಗೆದುಕೊಳ್ಳುವುದಿಲ್ಲ. ನಾವು ಘೋಷಿಸಿರುವ 5 ಅಭ್ಯರ್ಥಿಗಳು ಗೆಲ್ಲಲಿದ್ದಾರೆ. ಮಹಾ ವಿಕಾಸ್ ಅಘಾಡಿ ಜನರು ಕಾಯುತ್ತಿರುವಷ್ಟು ನಾವು ಕಾಯಲು ಸಾಧ್ಯವಿಲ್ಲ'' ಎಂದಿದ್ದಾರೆ. ಮಹಾ ವಿಕಾಸ ಅಘಾಡಿ ಕಾರ್ಯಶೈಲಿಯನ್ನು ಪ್ರಶ್ನಿಸಿ 'ಇನ್ನು ಕೇವಲ 2 ದಿನಗಳು ಮಾತ್ರ ಉಳಿದಿವೆ. ಸರಕಾರ ರಚನೆ ಬಗ್ಗೆ ಮಾತನಾಡುತ್ತಿರುವವರು ಟಿಕೆಟ್ ಹಂಚಿಕೆ ಮಾಡದಿರುವುದು ಬೇಸರ ತಂದಿದೆ. ಇಷ್ಟು ವಿಳಂಬ ಮಾಡಿದ್ದು ಮಹಾ ವಿಕಾಸ್ ಅಘಾಡಿಯವರ ದೊಡ್ಡ ತಪ್ಪು. ನಾನು ನನ್ನ ದುಃಖವನ್ನು ಶರದ್ ಪವಾರ್ ಅವರ ಬಳಿ ಹೇಳಿಕೊಂಡೆ. 5 ಅಭ್ಯರ್ಥಿಗಳನ್ನು ಘೋಷಿಸಿದ್ದೇವೆ ಎಂದು ಹೇಳಿದ್ದೇನೆ. ನನಗೆ ಉತ್ತರವನ್ನು ನೀಡಿದರೆ ಸರಿ, ಇಲ್ಲದಿದ್ದರೆ ನನ್ನ ಬಳಿ 25 ಅಭ್ಯರ್ಥಿಗಳು ಸಿದ್ಧರಿದ್ದಾರೆ. ಕಾಂಗ್ರೆಸ್ ಎರಡು ಬಾರಿ ದ್ರೋಹ ಬಗೆದಿದೆ' ಎಂದು ಹೇಳಿರುವುದಾಗಿ ತಿಳಿಸಿ, ನಾಳೆಯವರೆಗೆ ಕಾಯುವಂತೆ ಪವಾರ್ ಅವರು ನನ್ನನ್ನು ಕೇಳಿದ್ದಾರೆ ಎಂದರು. ಮಹಾವಿಕಾಸ್ ಅಘಾಡಿಯಲ್ಲಿ ಸೀಟು ಹಂಚಿಕೆ ಕುರಿತು ಹಗ್ಗ ಜಗ್ಗಾಟ ಇನ್ನೂ ಮುಂದುವರಿದಿದ್ದು ಮೂರು ಪ್ರಮುಖ ಪಕ್ಷಗಳಾದ ಶಿವಸೇನೆ (ಉದ್ಧವ್ ಠಾಕ್ರೆ), ಕಾಂಗ್ರೆಸ್ ಮತ್ತು ಎನ್ ಸಿಪಿ ಬಣಕ್ಕೆ ತಲಾ 85 ಸೀಟುಗಳ ಸೂತ್ರ (255 ಸ್ಥಾನ) ನಿಗದಿಯಾಗಿದೆ. 288 ಸ್ಥಾನಗಳಲ್ಲಿ ಉಳಿದ ಸೀಟುಗಳಿಗೆ ಇಂಡಿಯಾ ಮೈತ್ರಿಕೂಟದ ಮಿತ್ರ ಪಕ್ಷಗಳಾದ ಸಮಾಜವಾದಿ ಪಕ್ಷ ಮತ್ತು ಆಮ್ ಆದ್ಮಿ ಪಕ್ಷದ ನಡುವೆ ಹಗ್ಗಜಗ್ಗಾಟ ಮುಂದುವರಿದಿದೆ.

# ಅಮಿತ್ ಶಾಗೆ ಬಹಿರಂಗ ಬೆದರಿಕೆ!

**ನವದೆಹಲಿ:** ಕೇಂದ್ರ ಗೃಹ ಸಚಿವ ಅಮಿತ್ ಶಾ ವಿದೇಶಿ ಪ್ರವಾಸದ ಕುರಿತು ಮಾಹಿತಿ ನೀಡಿದವರಿಗೆ 10 ಲಕ್ಷ ಬಹುಮಾನ ನೀಡುವುದಾಗಿ ನಿಷೇಧಿತ ಸಂಘಟನೆ ಸಿಖ್ಸ್ ಫಾರ್ ಜಸ್ಟಿಸ್ ಮುಖ್ಯಸ್ಥ ಗುರುಪತ್ವಂತ್ ಸಿಂಗ್ ಪನ್ನುನ್ ಘೋಷಣೆ ಮಾಡಿದ್ದಾನೆ.



ಸಿಖ್ ಸಮುದಾಯದ ಮುಖಂಡರ ನಿಗೂಢ ಹತ್ಯೆಗಳಿಗೆ ಭಾರತದ ಸಿಆರ್‌ಪಿಎಫ್ ಅಧಿಕಾರಿಗಳು ಸೇರಿದಂತೆ ಕೆಪಿಎಸ್ ಗಿಲ್ನಿಂದ, ವಿಕಾಶ್ ಯಾದವ್ ಕಾರಣ ಎಂದು ಆರೋಪಿಸಿದ್ದಾನೆ.ಈ ರೀತಿಯ ಘಟನೆಗಳು ಮೊದಲು ಪಂಜಾಬ್ನಲ್ಲಿ ನಡೆಯುತ್ತಿತ್ತು, ಆದ್ರೆ ಈಗ ವಿದೇಶಗಳಲ್ಲೂ ನಡೆಯುತ್ತಿದೆ ಎಂದು ಹೇಳಿದ್ದಾನೆ.

ಇದೇ ಅ.20 ರಂದು ರಾಷ್ಟ್ರ ರಾಜಧಾನಿ ದೆಹಲಿಯ ರೋಹಿಣಿ ಪ್ರದೇಶದಲ್ಲಿ CRPF ಶಾಲೆಯ ಬಳಿ ನಿಗೂಢ ಸ್ಫೋಟ ಸಂಭವಿಸಿದ ನಂತರ ಪನ್ನುನ್ ಕೇಂದ್ರ ಗೃಹ ಸಚಿವ ಅಮಿತ್ ಷಾ ಕುರಿತು ನೀಡಿರುವ ಈ ಹೇಳಿಕೆ ನೀಡಿರುವುದು ಭದ್ರತಾ ಎಚ್ಚರಿಕೆಯನ್ನು ಹುಟ್ಟುಹಾಕಿದೆ.

# ಫಿಲಿಪ್ಪೀನ್ಸ್ ಚಂಡಮಾರುತ: ಮೃತರ ಸಂಖ್ಯೆ 40ಕ್ಕೆ ಏರಿಕೆ



**ಮನಿಲಾ:** ಫಿಲಿಪ್ಪೀನ್ಸ್ ನಲ್ಲಿ ಚಂಡಮಾರುತದ ಅಬ್ಬರಕ್ಕೆ ಸಿಲುಕಿ ಮೃತಪಟ್ಟವರ ಸಂಖ್ಯೆ 40ಕ್ಕೆ ಏರಿಕೆಯಾಗಿದ್ದು ಸಾವಿರಾರು ಮಂದಿಯನ್ನು ತಾತ್ಕಾಲಿಕ ಶಿಬಿರಕ್ಕೆ ಸ್ಥಳಾಂತರಿಸಿರುವುದಾಗಿ ವರದಿಯಾಗಿದೆ.

ಕೆಲವು ಪ್ರದೇಶಗಳಲ್ಲಿ ಎರಡು ದಿನಗಳಲ್ಲೇ ಎರಡು ತಿಂಗಳಿನಷ್ಟು ಪ್ರಮಾಣದ ಮಳೆ ಸುರಿದಿದೆ.

ಬಿಕೊಲ್ ಪ್ರದೇಶದಲ್ಲಿ ಅತ್ಯಧಿಕ ನಾಶ-ನಷ್ಟ, ಸಾವು-ನೋವು ಸಂಭವಿಸಿದ್ದು ಇಲ್ಲಿ ನಿರಂತರ ಭೂಕುಸಿತ ಮುಂದುವರಿದಿರುವುದರಿಂದ ರಕ್ಷಣಾ ಕಾರ್ಯಾಚರಣೆಗೆ ತೊಡಕಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ನಬುವ ಪುರಸಭೆ ಪ್ರದೇಶದಲ್ಲಿ ಜಲಾವೃತಗೊಂಡಿರುವ ಮನೆಯ ಛಾವಣಿಯಲ್ಲಿ ಸಿಕ್ಕಿಬಿದ್ದವರನ್ನು ದೋಣಿಗಳನ್ನು ಬಳಸಿ ರಕ್ಷಿಸಲಾಗಿದೆ. ಬಟಾಂಗಸ್ ನಗರದಲ್ಲಿ ಆಸ್ಪತ್ರೆಯೊಂದರ ತುರ್ತು ಚಿಕಿತ್ಸಾ ಕೊಠಡಿ ಮತ್ತು ವಾರ್ಡ್ಗೆ ನೀರು ತುಂಬಿದ ಕಾರಣ ಆಸ್ಪತ್ರೆಯ ರೋಗಿಗಳನ್ನು ಸ್ಥಳಾಂತರಿಸಲಾಗಿದೆ. ಬುಲಾಕಾನ್ ಪ್ರಾಂತದಲ್ಲಿನ ನದಿಯಲ್ಲಿ ಮೀನುಗಾರಿಕೆಯ ದೋಣಿ ಮುಳುಗಿದ್ದು ಓರ್ವ ನಾಪತ್ತೆಯಾಗಿರುವುದಾಗಿ ವರದಿಯಾಗಿದೆ.



# ಆಸ್ಟ್ರೇಲಿಯಾ ಕಡಲಿನಲ್ಲಿ ಸಿಕ್ಕಿಬಿದ್ದ ಬೃಹತ್ ಗಾತ್ರದ ವಿಚಿತ್ರ ಮೀನು!

**ಆಸ್ಟ್ರೇಲಿಯಾ:** ಆಸ್ಟ್ರೇಲಿಯಾದ ಮೀನುಗಾರ ಜೋಡಿಯೊಂದು ಭಯಾನಕ ವೈಶಿಷ್ಟ್ಯ ಮತ್ತು ವಿಲಕ್ಷಣ ತಲೆಯ ರಚನೆ ಹೊಂದಿರುವ 'ಡೂಮ್ಸ್ ಡೇ ಫಿಶ್' ಅನ್ನು ಹಿಡಿದಿದ್ದಾರೆ. ಕರ್ಟಿಸ್ ಪೀಟರ್ಸನ್ ತಾವು ಹಿಡಿದ ಮೀನಿನ ಫೋಟೋವನ್ನು ಫಿಶಿಂಗ್ ಆಸ್ಟ್ರೇಲಿಯಾದ ಸಾಮಾಜಿಕ ಮಾಧ್ಯಮ ಪುಟದಲ್ಲಿ ಹಂಚಿಕೊಂಡ ನಂತರ ಫುಲ್ ವೈರಲ್ ಆಗಿದೆ.

ದೈತ್ಯಾಕಾರದ ಮೀನನ್ನು ಮೆಲ್ವಿಲ್ಲೆ ದ್ವೀಪದ ಕರಾವಳಿಯಲ್ಲಿ ಹಿಡಿಯಲಾಗಿದೆ. ಇದು ಇತ್ತೀಚಿನ ಮೂನ್ಲೈಟ್ ಫಿಶಿಂಗ್ ಸೆಷನ್‌ಗಳಲ್ಲಿ ಸಿಕ್ಕಿಬಿದ್ದಿದೆ. ಎನ್ಟಿ ನ್ಯೂಸ್ನ ಅಂಕಣಕಾರ ಅಲೆಕ್ಸ್ ಜೂಲಿಯಸ್, ಇದನ್ನು ಉಲ್ಲೇಖಿಸುತ್ತಾ, ''ಇಲ್ಲಿ ಯಾರಾದರೂ ಅಂತಹ ಮೀನು ಹಿಡಿದಿರುವುದನ್ನು ನಾನು ಮೊದಲ ಬಾರಿಗೆ ಕೇಳಿದ್ದೇನೆ. ಹೆಚ್ಚಿನವು ಈಗಾಗಲೇ ಕಣ್ಮರೆಯಾಗಿವೆ'' ಎಂದಿದ್ದಾರೆ.

ಸಾಮಾಜಿಕ ಮಾಧ್ಯಮ ಬಳಕೆದಾರರೂ ಇದಕ್ಕೆ ಪ್ರತಿಕ್ರಿಯಿಸಿದ್ದು, ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಫ಼ಿ ನಲ್ಲಿ ಒಬ್ಬ ಬಳಕೆದಾರರು ಪ್ರತಿಕ್ರಿಯಿಸಿ ''ಇದು ಕುದುರೆಯಂತಹ ತಲೆಯನ್ನು ಏಕೆ ಹೊಂದಿದೆ'' ಎಂದು ಕೇಳಿದ್ದಾರೆ.

ಇವುಗಳನ್ನು ಡೂಮ್ಸ್ ಡೇ ಫಿಶ್ ಎಂದು ಕರೆಯಲು ಕಾರಣವೆಂದರೆ ಅವು ಆಳವಿಲ್ಲದ ನೀರಿನಲ್ಲಿ ಕಂಡುಬಂದಾಗ, ನೀರಿನ ಅಡಿಯಲ್ಲಿ ಭೂಕಂಪ ಸಂಭವಿಸಿದೆ ಮತ್ತು ಶೀಘ್ರದಲ್ಲೇ ಮುಖ್ಯ ಭೂಮಿಗೆ ಬರಬಹುದು'' ಎಂದರ್ಥ ಎಂದು ಎಕ್ಸ್ ನಲ್ಲಿ ಮೂರನೇ ಬಳಕೆದಾರರು ಹೇಳಿದ್ದಾರೆ. ಮೂಲತಃ ಓರ್ಫಿಶ್ ಎಂದು ಕರೆಯಲ್ಪಡುವ ಈ ಜೀವಿಗಳು ತಮ್ಮ ಬೇಟೆಯನ್ನು ಬೇಟೆಯಾಡಲು 1000 ಮೀಟರ್‌ಗಳವರೆಗೆ ಲಂಬವಾಗಿ ಈಜುತ್ತವೆ.

ಈ ಅಡ್ಡಹೆಸರು ಪ್ರಾಚೀನ ಜಾನಪದದಿಂದ ಬಂದಿದೆ, ವಿಶೇಷವಾಗಿ ಜಪಾನ್ನಂತಹ ದೇಶಗಳಲ್ಲಿ ಓರ್ಫಿಶ್ ಅನ್ನು ಗುರುತಿಸುವುದು ಅಶುಭವೆಂದು ಪರಿಗಣಿಸಲಾಗಿದೆ. ಏಕೆಂದರೆ, ಈ ಜೀವಿಗಳು ಸುನಾಮಿ ಮತ್ತು ಭೂಕಂಪಗಳಂತಹ ಮುಂಬರುವ ನೈಸರ್ಗಿಕ ವಿಪತ್ತುಗಳೊಂದಿಗೆ ಸಂಬಂಧ ಹೊಂದಿವೆ. ಮುಂಬರುವ ಯಾವುದೇ ವಿಪತ್ತುಗಳಿಗೆ ಸಿದ್ಧರಾಗಲು ಜನರನ್ನು ಎಚ್ಚರಿಸಲು 'ಎಚ್ಚರಿಕೆ' ಸಂಕೇತವಾಗಿ ಇವುಗಳು ಬರುತ್ತವೆ ಎನ್ನಲಾಗಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಹೊಸ ರಿಲೀಸ್ ಡೇಟ್ ಅನೌನ್ಸ್ ಮಾಡಿದ 'ಪುಷ್ಪ 2' ಟೀಮ್

ಅಲ್ಲು ಅರ್ಜುನ್, ರಶ್ಮಿಕಾ ಮಂದಣ್ಣ ನಟನೆಯ 'ಪುಷ್ಪ 2' ಚಿತ್ರದ ಕುರಿತು ಫ್ಯಾನ್ಸ್ ಖುಷಿಪಡುವಂತಹ ಸಿಹಿಸುದ್ದಿ ಸಿಕ್ಕಿದೆ. ಚಿತ್ರದ ಮತ್ತೆ ರಿಲೀಸ್ ಡೇಟ್ ಬದಲಾಯಿಸಿ ಒಂದು ದಿನ ಮುಂಚಿತವಾಗಿಯೇ ಚಿತ್ರಮಂದಿರಕ್ಕೆ ಲಗ್ಗೆ ಇಡುತ್ತಿದೆ.

ಆ.15ರಂದು 'ಪುಷ್ಪ 2' ಸಿನಿಮಾ ರಿಲೀಸ್ ಆಗಬೇಕಿತ್ತು. ಆದರೆ ಕಾರಣಾಂತರಗಳಿಂದ ಆಗಿರಲಿಲ್ಲ. ಆ ನಂತರ ಡಿ.6ರಂದು ಸಿನಿಮಾ ಬರೋದಾಗಿ ಚಿತ್ರತಂಡ ಅನೌನ್ಸ್ ಮಾಡಿತ್ತು. ಈ ಆ ಡೇಟ್‌ಗೂ ಸಿನಿಮಾ ರಿಲೀಸ್ ಆಗ್ತಿಲ್ಲ. ಬದಲಾಗಿ ಈ ವರ್ಷದ ಅಂತ್ಯ ಡಿಸೆಂಬರ್ 5ರಂದು ಸಿನಿಮಾ ಚಿತ್ರಮಂದಿರಗಳಲ್ಲಿ ಅಬ್ಬರಿಸಲಿದೆ. ಒಂದು ದಿನ ಮುಂಚಿತವಾಗಿ ಪುಷ್ಪರಾಜ್, ಶ್ರೀವಲ್ಲಿ ದರ್ಶನ ನೀಡಲಿದ್ದಾರೆ. ಈ ಕುರಿತು ಪ್ರೆಸ್ ಮೀಟ್‌ನಲ್ಲಿ ಚಿತ್ರತಂಡ ಅಧಿಕೃತ ಘೋಷಣೆ ಮಾಡಿದೆ.

ಸಿನಿಮಾ ಮುಂದಕ್ಕೆ ಹಾಕದೆ ಒಂದು ದಿನ ಮುಂಚಿತವಾಗಿ 'ಪುಷ್ಪ 2' ಬರುತ್ತಿರುವ ಸುದ್ದಿ ಕೇಳಿಯೇ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. ಅಲ್ಲು ಅರ್ಜುನ್ ಅಬ್ಬರ ನೋಡಲು ಅಭಿಮಾನಿಗಳು ಕಾಯುತ್ತಿದ್ದಾರೆ.



# ರಶ್ಮಿಕಾ ಮಂದಣ್ಣ ಸಿನಿಮಾದಲ್ಲಿ ನವಾಜುದ್ದೀನ್ ಸಿದ್ಧಿಕಿ ವಿಲನ್?



'ಅನಿಮಲ್' ಸಿನಿಮಾದ ಸಕ್ಸಸ್ ಬಳಿಕ ರಶ್ಮಿಕಾ ಮಂದಣ್ಣಗೆ ಬಾಲಿವುಡ್‌ನಲ್ಲಿ ಬೇಡಿಕೆ ಹೆಚ್ಚಾಗಿದೆ. ಆಯುಷ್ಮಾನ್ ಖುರಾನಾ ಮತ್ತು ರಶ್ಮಿಕಾ ಜೋಡಿಯಾಗಿ ನಟಿಸುತ್ತಿರುವ ಹೊಸ ಚಿತ್ರಕ್ಕೆ ನವಾಜುದ್ದೀನ್ ಸಿದ್ಧಿಕಿ ವಿಲನ್ ಆಗಿ ಅಬ್ಬರಿಸಲಿದ್ದಾರೆ ಎನ್ನಲಾದ ಸುದ್ದಿಯೊಂದು ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದೆ.



ಮೊದಲ ಬಾರಿಗೆ ಆಯುಷ್ಮಾನ್ ಮತ್ತು ರಶ್ಮಿಕಾ ಜೊತೆಯಾಗಿ ನಟಿಸುತ್ತಿದ್ದಾರೆ. 14ನೇ ಶತಮಾನದ ವಿಜಯನಗರ ಸಾಮ್ರಾಜ್ಯದ ಇತಿಹಾಸದ ಬಗ್ಗೆ ಚಿತ್ರದ ಕಥೆ ಒಳಗೊಂಡಿದೆ. ಈ ಚಿತ್ರಕ್ಕೆ ಸದ್ಯ ತಂಬಾ ಎಂದು ಟೈಟಲ್ ಇಡಲಾಗಿದ್ದು, ಸಿನಿಮಾದಲ್ಲಿ ಆಯುಷ್ಮಾನ್ ಮತ್ತು ರಶ್ಮಿಕಾಗೆ ನವಾಜುದ್ದೀನ್ ಸಿದ್ಧಿಕಿ ಅವರು ವಿಲನ್ ಆಗಿ ಅಬ್ಬರಿಸಲಿದ್ದಾರೆ ಎನ್ನಲಾಗಿದೆ.

ಈಗಾಗಲೇ ಬದ್ಲಾಪುರ, ಕಿಕ್ ಸಿನಿಮಾಗಳಲ್ಲಿ ವಿಲನ್ ಆಗಿ ನಟಿಸಿ ಸೈ ಎನಿಸಿಕೊಂಡಿರುವ ನವಾಜುದ್ದೀನ್ ಈ ಚಿತ್ರದಲ್ಲೂ ಖಳನಟನಾಗಿ ನಟಿಸಿದ್ರೆ ಸೂಕ್ತ ಎಂದು ಚಿತ್ರತಂಡ ನಿರ್ಧರಿಸಿದೆ ಎನ್ನಲಾಗಿದೆ. ನಟನ ಜೊತೆ ಕೂಡ ಒಂದು ಮಾತುಕತೆ ಕೂಡ ಮಾಡಿದೆಯಂತೆ. ಇದು ಅದೆಷ್ಟರ ಮಟ್ಟಿಗೆ ನಿಜ ಎಂಬುದನ್ನು ಚಿತ್ರತಂಡ ಅಧಿಕೃತವಾಗ ಅನೌನ್ಸ್ ಮಾಡುವವರೆಗೂ ಕಾದುನೋಡಬೇಕಿದೆ.

# ಮಾಸ್ಕ್‌ಮ್ಯಾನ್ ಬಘೀರನ ಹಿಂದಿದ್ಯಾ ಸೀಕ್ರೆಟ್



ರೋರಿಂಗ್ ಸ್ಟಾರ್ ಶ್ರೀಮುರಳಿ ನಟನೆಯ ಬಘೀರ ಸಿನಿಮಾ ಇನ್ನೇನು ದೀಪಾವಳಿಗೆ ತೆರೆಗೆ ಬರ್ತಾ ಇದೆ. ಬಘೀರನ ಟ್ರೈಲರ್ ನೋಡಿದವರು ಈ ಸಿನಿಮಾದ ಕಹಾನಿ ಏನಿರಬಹುದು ಅನ್ನೋದನ್ನ ಗೆಸ್ ಮಾಡಿದ್ದಾರೆ. ಅಷ್ಟೇ ಅಲ್ಲ ಈ ಸಿನಿಮಾಗೆ ಬಿಗ್ ಬಿ ಅಮಿತಾಭ್ ನಟನೆಯ ಸಿನಿಮಾ ಸ್ಪೂರ್ತಿ ಇರಬಹುದಾ ಅಂತ ಊಹೆ ಕೂಡ ಮಾಡ್ತಾ ಇದ್ದಾರೆ.

ಬಘೀರನಿಗೆ ಸ್ಪೂರ್ತಿನಾ ಬಿಗ್ ಬಿ ನಟನೆಯ ಆ ಸಿನಿಮಾ..? ಹೀಗೊಂದು ಪ್ರಶ್ನೆ ಎದ್ದಿದೆ. ಟ್ರೇಲರ್ ನೋಡಿದವರ ತಲೆಯಲ್ಲಿ ಬಂದಿರೋ ಪ್ರಶ್ನೆಯಿದು. ಹೌದು, ಇದೇ ದೀಪಾವಳಿಗೆ ರೋರಿಂಗ್ ಸ್ಟಾರ್ ಶ್ರೀಮರುಳಿ ನಟನೆಯ ಬಘೀರ ಸಿನಿಮಾ ತೆರೆಗೆ ಬರ್ತಾ ಇದೆ.



ಹೊಂಬಾಳೆ ಫಿಲಂಸ್ ನಿರ್ಮಿಸಿರೋ ಈ ಬಿಗ್ ಬಜೆಟ್ ಆಕ್ಷನ್ ಡ್ರಾಮಾ ಕನ್ನಡ ಮತ್ತು ತೆಲುಗಿನಲ್ಲಿ ಏಕಕಾಲದಲ್ಲಿ ರಿಲೀಸ್ ಆಗ್ತಾ ಇದೆ.

ಬಘೀರ ಸಿನಿಮಾದ ಸ್ಪೆಷಾಲಿಟಿ ಅಂದ್ರೆ, ಇದಕ್ಕೆ ಕೆಜಿಎಫ್ ಮಾಂತ್ರಿಕ ಪ್ರಶಾಂತ್ ನೀಲ್ ಕಥೆಯನ್ನ ಬರೆದಿದ್ದಾರೆ. ಉಗ್ರಂ ಬಳಿಕ ಶ್ರೀಮುರಳಿ ಇಮೇಜ್‌ಗೆ ಸೂಟ್ ಆಗುವಂಥಾ ಮಾಸ್ ಕಹಾನಿಯನ್ನ ರೆಡಿ ಮಾಡಿಕೊಟ್ಟಿದ್ದಾರೆ. ಡಾ.ಸೂರಿ ಈ ಸಿನಿಮಾಗೆ ಆಕ್ಷನ್ ಕಟ್ ಹೇಳಿದ್ದಾರೆ.

## ಬಘೀರನಿಗೆ ಸ್ಫೂರ್ತಿನಾ ಬಾಲಿವುಡ್ ಬಿಗ್ ಬಿ?

ಇನ್ನೂ ಈ ಸಿನಿಮಾ ಟ್ರೈಲರ್ ನೋಡಿದವರಿಗೆ ಇದ್ರಲ್ಲಿ ಶ್ರೀಮುರಳಿ ರಕ್ಷಕನೂ ಹೌದು ರಾಕ್ಷಸನೂ ಹೌದು ಅನ್ನೋದು ಗೊತ್ತಾಗಿದೆ. ಒಂದು ಕಡೆ ಖಾಕಿಧಾರಿ ರಕ್ಷಕನಾಗಿ ಮಿಂಚಿದ್ರೆ, ಮತ್ತೊಂದೆಡೆ ಮಾಸ್ಕ್ ಧಾರಿ ಬಘೀರನಾಗಿ ರಕ್ಕಸನ ಅವತಾರದಲ್ಲಿ ಮಿಂಚಿದ್ದಾರೆ.

ಇದನ್ನ ನೋಡ್ತಾ ಇದ್ರೆ, ಬಿಗ್ ಬಿ ಅಮಿತಾಭ್ ನಟನೆಯ ಹಳೆಯ ಸಿನಿಮಾವೊಂದು ನೆನಪಾಗ್ತಾ ಇದೆ. 1990ರಲ್ಲಿ ಬಂದ 'ಅಜೂಬಾ' ಸಿನಿಮಾದಲ್ಲಿ ಅಮಿತಾಭ್ ಇದೇ ರೀತಿ ಮಾಸ್ಕ್ ಮ್ಯಾನ್ ಸೂಪರ್ ಹೀರೋ ಆಗಿ ಬಂದು ದುಷ್ಟರನ್ನ ಶಿಕ್ಷಿಸ್ತಾ ಇರ್ತಾರೆ.

ಇದೂ ಸೇರಿದಂತೆ ಅನೇಕ ಸೂಪರ್ ಹೀರೋ ಸಿನಿಮಾಗಳ ಜೊತೆಗೆ ಬಘೀರನನ್ನ ಹೋಲಿಕೆ ಮಾಡಲಾಗ್ತಾ ಇದೆ. ಸೋ ಬಘೀರ ಬಗ್ಗೆ ಫ್ಯಾನ್ಸ್ ನಡುವೆ ಇದೇ ಕಾರಣಕ್ಕೆ ದೊಡ್ಡ ಕುತೂಹಲವೂ ಸೃಷ್ಟಿಯಾಗ್ತಾ ಇದೆ. ಅಕ್ಟೋಬರ್ 31ಕ್ಕೆ ಬಘೀರ ತೆರೆಗೆ ಬರಲಿದ್ದು, ಈ ಕುರಿತ ಕುತೂಹಲಗಳಿಗೆಲ್ಲಾ ಉತ್ತರ ಸಿಗಲಿದೆ. ಒಟ್ಟಿನಲ್ಲಿ, ಪ್ರಶಾಂತ್ ನೀಲ್ ಹಾಗೂ ಶ್ರೀ ಮುರಳಿ ಮ್ಯಾಜಿಕ್ ಮತ್ತೊಮ್ಮೆ ಕೆಲಸ ಮಾಡುತ್ತಾ ಎಂಬ ಕುತೂಹಲಕ್ಕೆ ಇನ್ನೇನು ಕೆಲವೇ ದಿನಗಳಲ್ಲಿ ಉತ್ತರ ಸಿಗಲಿದೆ.

## ಭಾರತದ ವಿರುದ್ಧ ಕಿವೀಸ್‌ಗೆ 301 ರನ್‌ಗಳ ಭರ್ಜರಿ ಮುನ್ನಡೆ

# ಒಂದೇ ದಿನ 14 ವಿಕೆಟ್ ಉಡೀಸ್

**ಪುಣೆ:** ಇಲ್ಲಿನ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ನ್ಯೂಜಿಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದ 2ನೇ ದಿನದಾಟದಲ್ಲಿ ಸ್ಪಿನ್ನರ್‌ಗಳ ಆರ್ಭಟವೇ ಮುಂದುವರಿದಿದ್ದು, ಉಭಯ ತಂಡಗಳ ಒಟ್ಟು 14 ವಿಕೆಟ್ ಪತನಗೊಂಡಿದೆ. ಭಾರತದ ವಿರುದ್ಧ ತನ್ನ 2ನೇ ಇನ್ನಿಂಗ್ಸ್ ಆರಂಭಿಸಿರುವ ನ್ಯೂಜಿಲೆಂಡ್ ತಂಡ 2ನೇ ದಿನದ ಅಂತ್ಯಕ್ಕೆ 5 ವಿಕೆಟ್ ನಷ್ಟಕ್ಕೆ 198 ರನ್ ಗಳಿಸಿದ್ದು, 301 ರನ್‌ಗಳ ಭರ್ಜರಿ ಮುನ್ನಡೆ ಕಾಯ್ದುಕೊಂಡಿದೆ.

243 ರನ್‌ಗಳ ಹಿನ್ನಡೆಯೊಂದಿಗೆ ಕ್ರೀಸ್ ಆರಂಭಿಸಿದ ಟೀಂ ಇಂಡಿಯಾ ಬ್ಯಾಟರ್‌ಗಳ ವೈಫಲ್ಯದಿಂದಾಗಿ ಕೇವಲ 156 ರನ್‌ಗಳಿಗೆ ಆಲೌಟ್ ಆಯಿತು. ಬಳಿಕ ಇನ್ನಿಂಗ್ಸ್ ಆರಂಭಿಸಿದ ನ್ಯೂಜಿಲೆಂಡ್ ಆರಂಭದಲ್ಲೇ ಪ್ರಮುಖ ವಿಕೆಟ್‌ಗಳನ್ನು ಕಳೆದುಕೊಂಡಿತು. ಇದರ ಹೊರತಾಗಿಯೂ ನಾಯಕ ಟಾಮ್ ಲಾಥಮ್ ಅವರ ಅಮೋಘ ಅರ್ಧಶತಕದೊಂದಿಗೆ 200 ರನ್‌ಗಳ ಗಡಿ ಸಮೀಪಿಸುವಲ್ಲಿ ಯಶಸ್ವಿಯಾಯಿತು.

ದ್ವಿತೀಯ ಇನ್ನಿಂಗ್ಸ್‌ನಲ್ಲಿ ಲಾಥಮ್ 86 ರನ್ (133 ಎಸೆತ, 10 ಬೌಂಡರಿ) ಗಳಿಸಿದ್ರೆ, ವಿಲ್ ಯಂಗ್ 23 ರನ್, ಡೆವೋನ್ ಕಾನ್ವೆ 17 ರನ್, ಡೇರಿಲ್ ಮಿಚೆಲ್ 18 ರನ್ ಹಾಗೂ ರಚಿನ್ ರವೀಂದ್ರ 9 ರನ್ ಗಳಿಸಿ ಪೆವಿಲಿಯನ್ ಸೇರಿದರು. ಇನ್ನೂ ಟಾಮ್ ಬ್ಲಂಡೆಲ್ 30 ರನ್ (70 ಎಸೆತ, 2 ಬೌಂಡರಿ), ಗ್ಲೆನ್ ಫಿಲಿಪ್ಸ್ 9 ರನ್ ಗಳಿಸಿ ಅಜೇಯರಾಗುಳಿದಿದ್ದಾರೆ. ಶನಿವಾರ 3ನೇ ದಿನದಾಟ ಆರಂಭಿಸಲಿದ್ದಾರೆ.



### ಸೂಪರ್ ಸುಂದರ್

**ಮೊದಲ ಇನ್ನಿಂಗ್ಸ್‌ನಲ್ಲಿ 7 ವಿಕೆಟ್ ಕಬಳಿಸಿ ಟೀಂ ಇಂಡಿಯಾಕ್ಕೆ ಆಧಾರವಾಗಿದ್ದ ಆಫ್ ಸ್ಪಿನ್ನರ್ ವಾಷಿಂಗ್ಟನ್ ಸುಂದರ್ 2ನೇ ದಿನದಾಟದಲ್ಲೂ 4 ವಿಕೆಟ್ ಪಡೆಯುವ ಮೂಲಕ ಭರ್ಜರಿ ಕಮಾಲ್ ಮಾಡಿದ್ದಾರೆ. ಇದರೊಂದಿಗೆ ಸಾಥ್ ನೀಡಿರುವ ರವಿಚಂದ್ರನ್ ಅಶ್ವಿನ್ 1 ವಿಕೆಟ್ ಪಡೆದಿದ್ದಾರೆ.**

**ಫ್ಲಾಪ್ ಆದ ಬ್ಯಾಟರ್ಸ್:** ಮೊದಲ ಇನ್ನಿಂಗ್ಸ್‌ನಲ್ಲಿ ಕಿವೀಸ್ ಸ್ಪಿನ್ನರ್ ಮಿಚೆಲ್ ಸ್ಯಾಂಟ್ನರ್ ದಾಳಿಗೆ ತತ್ತರಿಸಿದ ಭಾರತದ ಬ್ಯಾಟರ್‌ಗಳು ರನ್ ಕದಿಯಲು ತಿಣುಕಾಡಿದರು. ಯಶಸ್ವಿ ಜೈಸ್ವಾಲ್, ಶುಭಮನ್ ಗಿಲ್ ತಲಾ 30 ರನ್ ಗಳಿಸಿದ್ರೆ, ರವೀಂದ್ರ ಜಡೇಜಾ 38 ರನ್ ಗಳಿಸಿದ್ರು. ಇನ್ನುಳಿದಂತೆ ರಿಷಭ್ ಪಂತ್ 18 ರನ್, ಸರ್ಫರಾಜ್ ಖಾನ್ 11 ರನ್, ರವಿಚಂದ್ರನ್ ಅಶ್ವಿನ್ 4 ರನ್, ಆಕಾಶ್ ದೀಪ್ 6 ರನ್ ಗಳಿಸಿದ್ರೆ, ವಾಷಿಂಗ್ಟನ್ ಸುಂದರ್ 18 ರನ್ ಗಳಿಸಿ ಅಜೇಯರಾಗುಳಿದರು. ನಾಯಕ ರೋಹಿತ್ ಶರ್ಮಾ, ಜಸ್ಪ್ರೀತ್ ಬುಮ್ರಾ ಶೂನ್ಯ ಸುತ್ತಿದರು.

**ಸ್ಯಾಂಟ್ನರ್ ಸ್ಪಿನ್ ಮಿಂಚು:** ಕಿವೀಸ್ ಪರ ಮೊದಲ ಇನ್ನಿಂಗ್ಸ್‌ನಲ್ಲಿ ಮಿಚೆಲ್ ಸ್ಯಾಂಟ್ನರ್ 19.3 ಓವರ್‌ಗಳಲ್ಲಿ 53 ರನ್ ಬಿಟ್ಟುಕೊಟ್ಟು 7 ವಿಕೆಟ್ ಕಿತ್ತರೆ, ಗ್ಲೆನ್ ಫಿಲಿಪ್ಸ್ 2 ವಿಕೆಟ್ ಹಾಗೂ ಟಿಮ್ ಸೌಥಿ 1 ವಿಕೆಟ್ ಕಿತ್ತರು.

## ಶಿಗ್ಗಾಂವಿ ಉಪಚುನಾವಣೆ– ಕಾಂಗ್ರೆಸ್ ಅಭ್ಯರ್ಥಿಯಾಗಿ

# ಯಾಸೀರ್ ಖಾನ್ ನಾಮಪತ್ರ ಸಲ್ಲಿಕೆ

**ಹಾವೇರಿ:** ಶಿಗ್ಗಾಂವಿ ಉಪಚುನಾವಣೆ ಹಿನ್ನೆಲೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಯಾಸೀರ್ ಖಾನ್ ಪಠಾಣ್ ನಾಮಪತ್ರ ಸಲ್ಲಿಕೆ ಮಾಡಿದ್ದಾರೆ.

ನಾಮಪತ್ರ ಸಲ್ಲಿಸಿದ ಬಳಿಕ ಮಾಧ್ಯಗಳೊಂದಿಗೆ ಮಾತನಾಡಿದ ಅವರು, ನಮ್ಮ ಪಕ್ಷದಲ್ಲಿ ಯಾವುದೇ ರೀತಿಯ ಭಿನ್ನಾಪ್ರಾಯ ಇಲ್ಲ. ನಾವು ಎಲ್ಲರೂ ಈ ಮೊದಲೇ ಜನತಾ ನ್ಯಾಯಾಲಯದಲ್ಲಿ ಪ್ರಮಾಣ ಮಾಡಿದ್ದೇವೆ. ಯಾರಿಗೇ ಟಿಕೆಟ್ ಸಿಕ್ಕರೂ ಒಗ್ಗಟ್ಟಾಗಿ ಕೆಲಸ ಮಾಡುವುದಾಗಿದೆ ಹೇಳಿದ್ದ. ಕಾಂಗ್ರೆಸ್ ಬಗ್ಗೆ ಕ್ಷೇತ್ರದಲ್ಲಿ ಉತ್ತಮ ಒಲವು ಇದೆ. ಕಳೆದ ನಾಲ್ಕು ತಿಂಗಳಿಂದ ನಿರಂತರವಾಗಿ ಕ್ಷೇತ್ರ ಸುತ್ತಾಡಿದ್ದೇನೆ ಎಂದರು.

ಹಾವೇರಿ ಜಿಲ್ಲೆಯಲ್ಲಿ ಕಾಂಗ್ರೆಸ್‌ಗೆ ಸಾಮಾಜಿಕ ನ್ಯಾಯದ ಅಡಿಯಲ್ಲಿ ಟಿಕೆಟ್ ನೀಡಲಾಗಿದೆ. ಅಲ್ಪಸಂಖ್ಯಾತರ ಸಮಾಜಕ್ಕೆ ಟಿಕೆಟ್ ಸಿಕ್ಕಿದೆ. ನಮ್ಮ ಮೇಲೆ ಯಾವುದೇ ಕೇಸ್ ಇಲ್ಲ. ಅಜ್ಜಂಪೀರ್ ಖಾದ್ರಿ ಅವರು ಹಿರಿಯರು, ಅವರು ಯಾವ ವಿಚಾರದಲ್ಲಿ ನನ್ನ ಮೇಲೆ ಕೇಸ್ ಇದೆ ಎಂದು ಹೇಳಿದ್ದಾರೆ ನನಗೆ ಗೊತ್ತಿಲ್ಲ. ನಮ್ಮ ರಾಜ್ಯ ನಾಯಕರು ಅವರು ಜೊತೆಗೆ ಮಾತನಾಡುತ್ತಾರೆ. ಅವರ ಆರೋಪದಲ್ಲಿ ಹುರುಳು ಇಲ್ಲ. ತಮ್ಮ ಪಕ್ಷದ ಹಿರಿಯ ಮತ್ತು ಕ್ಷೇತ್ರದ ಜನರಿಗೆ ಅವಕಾಶ ಕೊಟ್ಟಿದ್ದಕ್ಕೆ ಧನ್ಯವಾದ ತಿಳಿಸಿದರು.




# ವಿಜಯಪುರ ರೈತರ ಭೂಮಿ ವಕ್ಫ್‌ಗೆ?

## ಸಿದ್ದರಾಮಯ್ಯನವರೇ ರಾಜ್ಯವನ್ನು ಪಾಕಿಸ್ತಾನ ಮಾಡಲು ಹೊರಟಿದ್ದೀರಾ?

**ಬೆಂಗಳೂರು:** ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಜಮೀರ್ ಅಹ್ಮದ್ ಖಾನ್ ಹೇಳಿದರು ಅಂತ ವಿಜಯಪುರ ಜಿಲ್ಲೆಯ ಅಧಿಕಾರಿಗಳು ರೈತರ ಜಮೀನನ್ನು ವಕ್ಫ್ ಬೋರ್ಡ್‌ಗೆ ಸೇರಿಸಲು ಹೊರಟಿದ್ದಾರೆ. ಆದರೆ ಒಂದೇ ಒಂದು ದಾಖಲೆಗಳಲ್ಲಿ ಜಮೀನು ಯಾವ ರೀತಿ ವಕ್ಫ್ ಬೋರ್ಡ್‌ಗೆ ಸೇರುತ್ತದೆ ಎಂಬುವುದಕ್ಕೆ ಮಾಹಿತಿ ಇಲ್ಲ. ಸಚಿವ ಜಮೀರ್ ಅಹಮದ್ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯನವರೇ ಕರ್ನಾಟಕವನ್ನು ಪಾಕಿಸ್ತಾನ ಮಾಡಲು ಹೊರಟಿದ್ದೀರಾ? ಎಂದು ಸಂಸದ ತೇಜಸ್ವಿ ಸೂರ್ಯ ವಾಗ್ದಾಳಿ ಮಾಡಿದರು.

ವಿಜಯಪುರ ಜಿಲ್ಲೆಯಲ್ಲಿ ವಕ್ಫ್ ನೋಂದಣಿ ಕುರಿತಾಗಿ ಎದ್ದಿರುವ ಗೊಂದಲಗಳ ಕುರಿತಾಗಿ ಅಲ್ಲಿನ ರೈತರು ಮತ್ತು ನೋಟಿಸ್ ಪಡೆದಿರುವ ಸಾರ್ವಜನಿಕರು ನಿಯೋಗದೊಂದಿಗೆ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಅವರನ್ನು ಭೇಟಿ ಮಾಡಿ, ಚರ್ಚೆ ನಡೆಸಿದರು.

ಬಳಿಕ ಸಂಸದ ತೇಜಸ್ವಿ ಸೂರ್ಯ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು. ಬಹಳಷ್ಟು ಜನರಿಗೆ ಕೇಂದ್ರ ಸರ್ಕಾರ ಯಾಕೆ ವಕ್ಫ್ ಕಾಯ್ದೆಗೆ ತಿದ್ದುಪಡಿ ತರುತ್ತಿದೆ ಅಂತ ಗೊತ್ತಿಲ್ಲ. ಸಚಿವ ಜಮೀರ್ ಅಹಮದ್ ಕೆಲವು ದಿನಗಳ ಹಿಂದೆ ಕೆಲವು ಜಿಲ್ಲೆಗಳಿಗೆ ಭೇಟಿ ನೀಡಿ, ವಕ್ಫ್ ಬೋರ್ಡ್ ಯಾವ ಆಸ್ತಿಗಳು ತನ್ನದು ಅಂತ ಹೇಳುತ್ತದೆ ಅದನ್ನು 15 ದಿನಗಳಲ್ಲಿ ನೋಂದಣಿ ಮಾಡಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿ ಬಂದಿದ್ದಾರೆ. ಸಚಿವರು ಹೇಳಿದರು ಅಂತ ಜಿಲ್ಲಾಧಿಕಾರಿಗಳಯ ರಾತ್ರೋ ರಾತ್ರಿ ಪಹಣಿಯಲ್ಲಿ ಹೆಸರು ಬದಲಿಸಲು ಹೊರಟಿದ್ದಾರೆ. ವಿಜಯಪುರ ಜಿಲ್ಲೆಯಲ್ಲಿ ಸುಮಾರು 15 ಸಾವಿರ ಎಕರೆಯನ್ನು ವಕ್ಫ್ ಬೋರ್ಡ್ ತನ್ನದು ಅಂತ ಹೇಳುತ್ತಿದೆ ಎಂದು ತಿಳಿಸಿದರು.



ಹಿಂದೂಗಳಿಗೆ ಅಪಮಾನ ಮಾಡಿ ಮುಸ್ಲಮರಿಗಷ್ಟೇ ಜಮೀನು ಕೊಡಲು ಹೊರಟಿದ್ದೀರಾ? ಪಹಣಿಯಲ್ಲಿ ಯಾಕೆ ವಕ್ಫ್ ಬೋರ್ಡ್ ಕರ್ನಾಟಕ ಸರ್ಕಾರ ಅಂತ ಹಾಕುತ್ತಿದ್ದೀರಿ? ತಹಸೀಲ್ದಾರ್‌ಗಳು, ಜಿಲ್ಲಾಧಿಕಾರಿಗಳು ಸರ್ಕಾರ ನಡೆಸಬೇಕಾಗಿರುವುದು ಸಂವಿಧಾನದ ಮೇಲೆ ಹೊರತು ಷರಿಯಾ ಕಾನೂನಿನ ಮೇಲೆ ಅಲ್ಲ. ಜಮೀರ್ ಅಹಮದ್ ಹೇಳಿದರು, ಮಸೀದಿಯ ಮುಲ್ಲಾ ಹೇಳಿದರು ಅಂತ ಕೆಲಸ ಮಾಡುವುದು ಅಲ್ಲ. ಇದು ಮುಂದುವರಿದರೆ ಹೈಕೋರ್ಟ್ ಮತ್ತು ಲೋಕಾಯುಕ್ತಕ್ಕೆ ಹೋಗಿ ನಿಮ್ಮನ್ನು ಅಮಾನತು ಮಾಡಲು ಆದೇಶ ತರುವಲ್ಲಿ ನಾನು ಹಿಂಜರಿಯುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ವಕ್ಫ್ ಕಾನೂನು ಬರುವ ಮುನ್ನ ಎಷ್ಟು ಸಾಧ್ಯವಾಗುತ್ತೋ ಅಷ್ಟು ಜಮೀನು ಕಬಳಿಸಿಕೊಳ್ಳಬೇಕು ಅಂತ ಹುನ್ನಾರ ಮಾಡುತ್ತಿದ್ದಾರೆ. ರಾಜ್ಯದ ಯಾವುದೇ ಭಾಗದಲ್ಲಿ ವಕ್ಫ್ ಸಮಸ್ಯೆ ಇದ್ದರೂ ನನ್ನ ಕಚೇರಿಗೆ ಬನ್ನಿ. ಹೈಕೋರ್ಟ್‌ಗೆ ಹೋಗಿ ನಿಮಗೆ ನ್ಯಾಯ ಕೊಡಿಸುತ್ತೇನೆ. ಇದು ಭಾರತ, ಇದು ಪಾಕಿಸ್ತಾನದ ಕಾನೂನಿನಂತೆ ನಡೆಯುವ ರಾಜ್ಯ ಅಲ್ಲ. ವಕ್ಫ್ ಹೆಸರಿನಲ್ಲಿ ಕಾಂಗ್ರೆಸ್ ಮುಸಲ್ಮಾನರಿಗೆ ಕೂಡ ಮೋಸ ಮಾಡಿದೆ. ವಕ್ಫ್ ಎಂದರೆ ಅಲ್ಲಾ ಅವರಿಗೆ ಕೊಟ್ಟ ಆಸ್ತಿ. ವಕ್ಫ್ ಬೋರ್ಡ್ ಜಮೀನು ಅತಿಕ್ರಮಣ ಮಾಡಿಕೊಂಡಿದ್ದರೇ, ತನಿಖೆ ಮಾಡಿ ನೋಟೀಸ್ ಕೊಡಬಹುದು. ಬಳಿ, ನಮ್ಮದು ಜಮೀನು ಅಂತ ಸೆಕ್ಷನ್ 40 ಅಡಿಯಲ್ಲಿ ಕ್ಲೈಮ್ ಮಾಡಿಕೊಳ್ಳಬಹುದು. ಈ ತಿದ್ದುಪಡಿಯನ್ನು ಕಾಂಗ್ರೆಸ್ 1995 ರಲ್ಲಿ ತಂದಿತು ಎಂದು ತಿಳಿಸಿದ್ದಾರೆ.

ಕಾಂಗ್ರೆಸ್ ಮುಸ್ಲಿಂ ವೋಟ್ ಬ್ಯಾಂಕ್‌ಗೋಸ್ಕರ ವಕ್ಫ್ ಟ್ರಿಬ್ಯೂನಲ್ ತಂದಿತು. ಕಾನೂನು ಮೂಲಕ ಭೂಮಿ ಅತಿಕ್ರಮಣ ಮಾಡಲು ಕಾಂಗ್ರೆಸ್ ವಕ್ಫ್ ಬೋರ್ಡ್‌ಗೆ ಅವಕಾಶ ಮಾಡಿಕೊಟ್ಟಿದೆ. ಇದನ್ನು ಬದಲಾವಣೆ ಮಾಡಲು ಕೇಂದ್ರ ಸರ್ಕಾರ ಕಾನೂನು ತಿದ್ದುಪಡಿ ಮಾಡಲು ಮುಂದಾಗಿದೆ. ಈ ವರ್ಷದ ಡಿಸೆಂಬರ್‌ನಲ್ಲಿ ನಡೆಯುವ ಅಧಿವೇಶನದಲ್ಲಿ ವಕ್ಫ್ ಕಾನೂನು ಅಂಗೀಕಾರ ಮೂಲಕ ಈ ಎಲ್ಲ ಆಟಾಟೋಪಕ್ಕೆ ಮೋದಿ ಸರ್ಕಾರ ಬ್ರೇಕ್ ಹಾಕಲಿದೆ ಎಂದರು.

# ಭಾರತಕ್ಕೆ ಸೋಲುಣಿಸಿದ ಅಫ್ಘಾನಿಸ್ತಾನ್

ಒಮಾನ್‌ನ ಅಲ್ ಎಮಿರಾತ್ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆದ ಎಮರ್ಜಿಂಗ್ ಏಷ್ಯಾಕಪ್ ಟೂರ್ನಿಯ 2ನೇ ಸೆಮಿಫೈನಲ್ ಪಂದ್ಯದಲ್ಲಿ ಭಾರತ ಎ ತಂಡಕ್ಕೆ ಅಫ್ಘಾನಿಸ್ತಾನ್ ಸೋಲುಣಿಸಿದೆ. ಈ ಗೆಲುವಿನೊಂದಿಗೆ ಅಫ್ಘಾನಿಸ್ತಾನ್ ಎ ತಂಡ ಫೈನಲ್‌ಗೆ ಪ್ರವೇಶಿಸಿದರೆ, ಟೀಮ್ ಇಂಡಿಯಾ ಟೂರ್ನಿಯಿಂದ ಹೊರಬಿದ್ದಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದ ಅಫ್ಘಾನಿಸ್ತಾನ್ ಎ ತಂಡವು ಮೊದಲು ಬ್ಯಾಟಿಂಗ್ ಮಾಡಿತು.

ಆರಂಭಿಕರಾಗಿ ಕಣಕ್ಕಿಳಿದ ಝುಬೈದ್ ಅಕ್ಬರಿ (64) ಹಾಗೂ ಸೆದಿಖುಲ್ಲಾ ಅಟಲ್ (83) ಮೊದಲ ವಿಕೆಟ್‌ಗೆ 137 ರನ್‌ಗಳ ಜೊತೆಯಾಟವಾಡಿದರು. ಇನ್ನು ಕರೀಮ್ ಜನ್ನತ್ 20 ಎಸೆತಗಳಲ್ಲಿ 41 ರನ್ ಬಾರಿಸಿದರು. ಈ ಮೂಲಕ ಅಫ್ಘಾನಿಸ್ತಾನ್ ತಂಡವು 20 ಓವರ್‌ಗಳಲ್ಲಿ 4 ವಿಕೆಟ್ ಕಳೆದುಕೊಂಡು 206 ರನ್ ಕಲೆಹಾಕಿತು. 207 ರನ್‌ಗಳ ಕಠಿಣ ಗುರಿ ಪಡೆದ ಭಾರತ ಎ ತಂಡವು ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕರಾದ ಪ್ರಭ್ ಸಿಮ್ರಾನ್ ಸಿಂಗ್ (19) ಹಾಗೂ ಅಭಿಷೇಕ್ ಶರ್ಮಾ (7) ಬೇಗನೆ ವಿಕೆಟ್ ಒಪ್ಪಿಸಿದರೆ, ಆ ಬಳಿಕ ಬಂದ ತಿಲಕ್ ವರ್ಮಾ 16 ರನ್‌ಗಳಿಸಿ ಔಟಾದರು.



ಈ ಹಂತದಲ್ಲಿ ಕಣಕ್ಕಿಳಿದ ಆಯುಷ್ ಬದೋನಿ 31 ರನ್ ಬಾರಿಸಿದರೆ, ನೆಹಾಲ್ ವಧೇರಾ 20 ರನ್‌ಗಳ ಕೊಡುಗೆ ನೀಡಿದರು. ಇನ್ನು 6ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ರಮಣ್‌ದೀಪ್ ಸಿಂಗ್ ಸ್ಫೋಟಕ ಇನ್ನಿಂಗ್ಸ್ ಆಡಿದರು.

ಕೇವಲ 34 ಎಸೆತಗಳನ್ನು ಎದುರಿಸಿದ ರಮಣ್‌ದೀಪ್ 2 ಸಿಕ್ಸ್ ಹಾಗೂ 8 ಫೋರ್‌ಗಳೊಂದಿಗೆ 64 ರನ್ ಚಚ್ಚಿದರು. ಇದಾಗ್ಯೂ ಅವರಿಗೆ ತಂಡವನ್ನು ಗೆಲುವಿನ ದಡ ಸೇರಿಸಲು ಸಾಧ್ಯವಾಗಲಿಲ್ಲ. ಅಂತಿಮವಾಗಿ ಭಾರತ ಎ ತಂಡವು 20 ಓವರ್‌ಗಳಲ್ಲಿ 7 ವಿಕೆಟ್ ನಷ್ಟದೊಂದಿಗೆ 186 ರನ್ ಬಾರಿಸಿ 20 ರನ್‌ಗಳಿಂದ ಸೋಲೊಪ್ಪಿಕೊಂಡಿತು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com